ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಸಂಪುಟ: 21, ಸಂಚಿಕೆ: 120, ಪುಟಗಳು: 8, ಶುಕ್ರವಾರ, 9 ಫೆಬ್ರವರಿ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ



ವೇಣು ಸಾರಥ್ಯದಲ್ಲಿ...

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ; ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

## ಪಂಚಾಂಗ

(ಶುಕ್ರವಾರ 9, ಫೆಬ್ರವರಿ -2024)

- ಶ್ರೀ ಶೋಭಕೃತನಾಮ ಸಂವತ್ಸರ,
- ಉತ್ತರಾಯಣ, ಹಿಮಂತ ಋತು,
- ಪುಷ್ಯ ಮಾಸ, ಕೃಷ್ಣ ಪಕ್ಷ,
- ಚತುರ್ದಶಿ / ಅಮಾವಾಸ್ಯೆ,
- ಶುಕ್ರವಾರ, ಶ್ರವಣ ನಕ್ಷತ್ರ
- ರಾಹುಕಾಲ - 11:10 ರಿಂದ 12:37
- ಗುಳಿಕಕಾಲ - 08:14 ರಿಂದ 09:42
- ಯಮಗಂಡಕಾಲ - 03:33 ರಿಂದ 05:01



## 10ನೇ ಕ್ಲಾಸ್ ಫೇಲ್, ಆನ್‌ಲೈನ್ ವಂಚನೆಯಲ್ಲಿ ಮಾಸ್ಟರ್
# ಬಿಬಿಎಂಪಿ ಟೆಂಡರ್ ಹೆಸರಲ್ಲಿ ವಂಚನೆ

**ಬೆಂಗಳೂರು:** ಬಿಬಿಎಂಪಿಯಲ್ಲಿ ಟೆಂಡರ್ ಕೊಡಿಸುವುದಾಗಿ ನಂಬಿಸಿ ಆನ್‌ಲೈನ್ ಮೂಲಕ ಹಣ ಟ್ರಾನ್ಸ್‌ಫರ್ ಮಾಡಿಸಿಕೊಂಡು ವಂಚಿಸುತ್ತಿದ್ದ ಜಿ ನವೀನ್(25) ಎಂಬವನನ್ನು ಹೆಬ್ಬಾಳ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಬಂತ ನವೀನ್‌ನ ವಿಚಾರಣೆ ನಡೆಸಿದಾಗ ಈತನ ಸಾಲು ಸಾಲು ವಂಚನೆಗಳು ಬಯಲಾಗಿವೆ. ಎಸ್‌ಎಸ್ ಎಲ್‌ಸಿ ಅನುತ್ತೀರ್ಣನಾಗಿರುವ ನವೀನ್, ಅಮಾಯಕರಿಗೆ ಮಾತಿನಲ್ಲೇ ಮೋಡಿ ಮಾಡಿ ಲಕ್ಷಾಂತರ ರೂ ಪಡೆಯುತ್ತಿದ್ದ ಶೈಲಿ ಕಂಡು ಪೊಲೀಸರೇ ದಂಗಾಗಿದ್ದಾರೆ.



## ನಾಳೆ ಬೆಂಗಳೂರಿಗೆ ಬಿಜೆಪಿ ಚಾಣಕ್ಯ: ಎಚ್‌ಡಿಕೆ ನಿವಾಸಕ್ಕೆ ಭೇಟಿ?
# ಗರಿಗೆದರಿದ ರಾಜಕೀಯ



**ಬೆಂಗಳೂರು:** ಇತ್ತೀಚೆಗಷ್ಟೇ, ಲೋಕಸಭೆ ಚುನಾವಣೆಗೆ ಕರ್ನಾಟಕದಲ್ಲಿ ಎನ್‌ಡಿಎ ಮೈತ್ರಿಕೂಟದ ನೇತೃತ್ವ ವಹಿಸುವಂತೆ ಜೆಡಿಎಸ್ ನಾಯಕ ಹೆಚ್‌ಡಿ ಕುಮಾರಸ್ವಾಮಿಗೆ ಕೇಂದ್ರ ಗೃಹಸಚಿವ ಅಮಿತ್ ಶಾ ಆಹ್ವಾನಿಸಿದ್ದರು. ಅದರಂತೆ ಉಭಯ ನಾಯಕರು ದೆಹಲಿಯಲ್ಲಿ ಭೇಟಿಯಾಗಿ ಮಾತುಕತೆ ನಡೆಸಿದ್ದರು. ಈ ವೇಳೆ, ಅಮಿತ್ ಶಾ ಅವರನ್ನು ಕುಮಾರಸ್ವಾಮಿ ತಮ್ಮ ನಿವಾಸಕ್ಕೆ ಆಹ್ವಾನಿಸಿದ್ದರು. ನಾಳೆ ಬೆಂಗಳೂರಿಗೆ ಬಿಜೆಪಿ ಚಾಣಕ್ಯ ಅಮಿತ್ ಶಾ ಆಗಮಿಸಲಿದ್ದು, ತಮ್ಮ ನಿವಾಸಕ್ಕೆ ಕುಮಾರಸ್ವಾಮಿ ಆಹ್ವಾನಿಸುವ ಸಾಧ್ಯತೆ ಇದೆ. ಈ ವೇಳೆ ರಾಜ್ಯ ರಾಜಕೀಯದ ಬಗ್ಗೆಯೂ ಚರ್ಚೆ ನಡೆಯಲಿದೆ. ಈ ಭೇಟಿ ಮೂಲಕ ರಾಜಕೀಯವಾಗಿಯೂ ಸ್ಪಷ್ಟ ಸಂದೇಶ ರವಾನೆಯಾಗಲಿದೆ. ಅಲ್ಲದೆ, ಹಳೇ ಮೈಸೂರು ಭಾಗದ ಕಾರ್ಯಕರ್ತರ ಮನೋಬಲಕ್ಕೆ ಪುಷ್ಠಿ ಸಿಗುವ ನಿರೀಕ್ಷೆ ಇದೆ. ಅಲ್ಲದೆ, ಬಿಜೆಪಿ ಹಾಗೂ ಜೆಡಿಎಸ್ ಸ್ಥಳಿಯ ಕಾರ್ಯಕರ್ತರಿಗೆ ಹೊಂದಾಣಿಕೆ ನಾಯಕರ ಭೇಟಿ ಸಹಕಾರಿಯಾಗುವ ನಿರೀಕ್ಷೆ ಇದೆ.

ಪುಟ 2

## ಅಡ್ಡಾದಿಡ್ಡಿ ಓಡಿದ ಕಾರ್
# 8 ಬೈಕ್ ಜಖಂ

**ಬೆಂಗಳೂರು:** ಕಂಠಪೂರ್ತಿ ಕುಡಿದು ಮದ್ಯದ ನಶೆಯಲ್ಲಿ ಕಾರು ಚಲಾಯಿಸಿ ಎಂಟು ಬೈಕ್‌ಗಳು ಸಂಪೂರ್ಣ ಜಖಂಗೊಂಡಿರುವ ಘಟನೆ ಉಲ್ಲಾಳು ಬಳಿಯ ಕೆಎಲ್‌ಇ ಲಾ ಕಾಲೇಜು ಬಳಿ ನಡೆದಿದೆ. ಭರತ್ ಎಂಬ ಯುವಕ ತನ್ನ ಕಾರಿನಲ್ಲಿ ನಾಲ್ವರು ಸ್ನೇಹಿತರನ್ನ ಕರೆದುಕೊಂಡು ಹೋಗಿ ಪಾರ್ಟಿ ಮಾಡಿದ್ದಾನೆ. ಸ್ನೇಹಿತ ಗುರುದೀಪ್‌ಗೆ ಕಾರು ಚಲಾಯಿಸಲು ಕೊಟ್ಟು ಡ್ರೈವ್ ಹೋಗಿದ್ದಾರೆ. ಪೋಷಕರು ತಮ್ಮ ಮಕ್ಕಳು ಚೆನ್ನಾಗಿ ಇರಲಿ ಎಂದು ಓಡಾಡಲು ಕಾರು ಕೊಡಿಸಿದ್ದರು. ಪಾಕೆಟ್ ಮನಿ ಅದೂ ಇದು ಅಂತಾ ಉಳಿಸಿದ್ದರಲ್ಲಿ ಕಂಠಪೂರ್ತಿ ಕುಡಿದು ಕಾರಿನಲ್ಲಿ ಮೋಜಿನ ರೈಡ್ ಹೋಗಿ ಈ ಅಪಘಾತವೆಸಗಿದ್ದಾರೆ. ಮದ್ಯದ ನಶೆಯಲ್ಲಿ ಕೆಎಲ್‌ಇ ಲಾ ಕಾಲೇಜಿನ ಬಳಿ ವೇಗವಾಗಿ ಕಾರು ಚಲಾಯಿಸಿಕೊಂಡು ಗುರುದೀಪ್ ಬಂದಿದ್ದಾನೆ. ಬಳಿಕ ಕಾರು ನಿಯಂತ್ರಣ ತಪ್ಪಿ ಬೇಕರಿ ಬಳಿ ನಿಂತಿದ್ದ ಬೈಕ್‌ಗಳ ಮೇಲೆ ಹರಿದಿದೆ. ಕಾರು ಗುದ್ದಿದ ರಭಸಕ್ಕೆ ಎಂಟು ಬೈಕುಗಳು ಸಂಪೂರ್ಣವಾಗಿ ಜಖಂಗೊಂಡಿವೆ. ಅದೃಷ್ಟವಶಾತ್ ಘಟನೆಯಲ್ಲಿ ಯಾವುದೇ ಪ್ರಾಣಪಾಯ ಸಂಭವಿಸಿಲ್ಲ. ಜ್ಞಾನಭಾರತಿ ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಭರತ್ ಹಾಗೂ ಗುರುದೀಪ್‌ನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.





# ಕೆರಗೋಡು ಬಂದ್‌ಗೆ ಉತ್ತಮ ಪ್ರತಿಕ್ರಿಯೆ

**ಮಂಡ್ಯ:** ಹನುಮ ಧ್ವಜವನ್ನು ತೆರವುಗೊಳಿಸಿದ್ದನ್ನು ಖಂಡಿಸಿ ಹಿಂದೂ ಸಂಘಟನೆಗಳು ಕರೆ ನೀಡಿದ ಕೆರಗೋಡು ಬಂದ್‌ಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಬಂದ್‌ಗೆ ವರ್ತಕರು, ಹೊಟೇಲ್ ಮಾಲೀಕರು ಬೆಂಬಲ ವ್ಯಕ್ತಪಡಿಸಿದ ಪರಿಣಾಮ ಅಂಗಡಿ, ಹೋಟೆಲ್‌ಗಳು ಮುಚ್ಚಿವೆ. ಕೆರಗೋಡಿನಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ. ಗ್ರಾಮಕ್ಕೆ ಎಎಸ್ಪಿ ತಿಮ್ಮಯ್ಯ ಭೇಟಿ ನೀಡಿ ಭದ್ರತೆ ಪರಿಶೀಲಿಸಿ ಸಿಬ್ಬಂದಿಗೆ ಕೆಲ ಸೂಚನೆ ನೀಡಿದ್ದಾರೆ. ಧ್ವಜಸ್ತಂಭದ ಬಳಿ ಪೊಲೀಸ್ ಭದ್ರತೆ ಹೆಚ್ಚಾಗಿದೆ. 9 ಗಂಟೆಗೆ ಕೆರಗೋಡಿನಿಂದ ಮಂಡ್ಯದ ಜಿಲ್ಲಾಧಿಕಾರಿ ಕಚೇರಿಯವರೆಗೆ ರ್‍ಯಾಲಿ ನಡೆಯಲಿದೆ. ಆಂಜನೇಯ ದೇಗುಲದಲ್ಲಿ ಪೂಜೆ ಸಲ್ಲಿಸಿದ ಬಳಿಕ ಪ್ರತಿಭಟನಾ ರ್‍ಯಾಲಿ ನಡೆಯಲಿದೆ.

ಪುಟ 2

## ಸಂಕ್ಷಿಪ್ತ ಸುದ್ದಿ

### ಕಿಮ್ಸ್‌ನ ಹೆಚ್‌ಒಡಿಗೆ ಲೈಂಗಿಕ ಕಿರುಕುಳ

**ಬೆಂಗಳೂರು:** ಕಿಮ್ಸ್ ಆಸ್ಪತ್ರೆಯಲ್ಲಿ ಮಹಿಳಾ ವೈದ್ಯೆಯೊಬ್ಬರಿಗೆ ಜೂನಿಯರ್ ವೈದ್ಯ ಲೈಂಗಿಕ ಕಿರುಕುಳ ನೀಡಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ. ಜೂನಿಯರ್ ವೈದ್ಯ ಡಾ.ರಾಜು ಎಂಬವರ ವಿರುದ್ಧ ನನ್ನನ್ನು ಹಿಂಬಾಲಿಸುತ್ತಾರೆ, ಮೈ ಕೈ ಮುಟ್ಟುತ್ತಾರೆ. ಕಾಲೇಜಿನಲ್ಲಿ ನನ್ನ ಬಗ್ಗೆ ಕೆಟ್ಟದಾಗಿ ಹೇಳಿಕೊಂಡು ಬರುತ್ತಿದ್ದಾರೆ. ಅಲ್ಲದೇ ಎದೆಯ ಮೇಲಿನ ಬಟ್ಟೆ ಎಳೆದಿದ್ದಾರೆ ಎಂದು ವೈದ್ಯೆ ಆರೋಪಿಸಿದ್ದಾರೆ. ಈ ಸಂಬಂಧ ಬನಶಂಕರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಈ ಬಗ್ಗೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.



### ಅಪ್ರಾಪ್ತೆ ನೇಣಿಗೆ ಶರಣು

**ರಾಯಚೂರು:** ಪ್ರೀತಿಗೆ ಪೋಷಕರು ವಿರೋಧ ವ್ಯಕ್ತಪಡಿಸಿದರೆಂದು ಮನನೊಂದು ಅಪ್ರಾಪ್ತೆಯೊಬ್ಬಳು ಆತ್ಮಹತ್ಯೆಗೆ ಶರಣಾದ ಘಟನೆ ರಾಯಚೂರಿನಲ್ಲಿ ನಡೆದಿದೆ. ಸಂಗೀತಾ (17) ಆತ್ಮಹತ್ಯೆ ಮಾಡಿಕೊಂಡ ಅಪ್ರಾಪ್ತೆ. ರಾಯಚೂರು ಜಿಲ್ಲೆ ಮಾನ್ವಿ ಪಟ್ಟಣದಲ್ಲಿ ಈ ಘಟನೆ ನಡೆದಿದೆ. ಸಂಗೀತಾಗೆ ಕಾರ್ ಡ್ರೈವರ್ ಕೃಷ್ಣ ಎಂಬಾತನ ಜೊತೆಗೆ ಪ್ರೇಮಾಂಕುರವಾಗಿತ್ತು. ಈ ಹಿಂದೆ 2 ಬಾರಿ ಕೃ?ನ ಜೊತೆಗೆ ಈಕೆ ಮನೆಬಿಟ್ಟು ಹೋಗಿದ್ದಳು. ಆಗ ಹೆತ್ತವರು ಬುದ್ದಿವಾದ ಹೇಳಿ ಮನೆಗೆ ಕರೆತಂದಿದ್ದರು. ಕೊನೆಗೆ ಮನನೊಂದು ಮನೆಯಲ್ಲಿಯೇ ಸಂಗೀತಾ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಮನೆಯಲ್ಲಿದ್ದ ಸೀರೆಯಿಂದ ನೇಣುಬಿಗಿದುಕೊಂಡು ಸಂಗೀತಾ ಸಾವಿಗೆ ಶರಣಾಗಿದ್ದಾಳೆ. ಈಕೆಯ ಮೃತದೇಹವನ್ನು ಮಾನ್ವಿ ಆಸ್ಪತ್ರೆಗೆ ರವಾನೆ ಮಾಡಲಾಗಿದೆ. ಅಪ್ರಾಪ್ತೆಯ ಅತ್ಯಾಚಾರ ಆರೋಪದ ಪ್ರಕರಣದಲ್ಲಿ ಆರೋಪಿ ಕೃಷ್ಣನನ್ನು ಪೊಲೀಸರು ಬಂಧಿಸಿದ್ದಾರೆ. ಈ ಸಂಬಂಧ ಮಾನ್ವಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



# ಮತ್ತೆ ನಾಡದ್ರೋಹಿ ಕೆಲಸಕ್ಕೆ ಕೈ ಹಾಕಿದ ಎಂಇಎಸ್

**ಬೆಳಗಾವಿ:** ಎಂಇಎಸ್ ಮುಖಂಡರು ಮತ್ತೆ ನಾಡದ್ರೋಹಿ ಕೆಲಸಕ್ಕೆ ಕೈಹಾಕಿದ್ದು, ಮಹಾರಾಷ್ಟ್ರ ಸಚಿವರನ್ನು ಭೇಟಿಯಾಗಿ ವಿವಿಧ ಬೇಡಿಕೆಗಳ ಈಡೇರಿಸುವಂತೆ ಮನವಿ ಮಾಡಿದ್ದಾರೆ. ಆರೋಗ್ಯ ವಿಮೆ ಮರು ಜಾರಿ, ಮರಾಠಿ ಭಾಷೆ ಬಳಕೆ ಅವಕಾಶ ಸೇರಿದಂತೆ ಏಳು ಬೇಡಿಕೆಗಳನ್ನು ಈಡೇರಿಸುವಂತೆ ಎಂಇಎಸ್ ರಮಾಕಾಂತ ಕೊಂಡೊಸ್ಕರ್ ಮತ್ತಿತರರು ಮಹಾರಾಷ್ಟ್ರ ಗಡಿ ಉಸ್ತುವಾರಿ ಸಚಿವ ಶುಂಭುರಾಜೆ ದೇಸಾಯಿ ಅವರನ್ನು ಭೇಟಿಯಾಗಿ ಮನವಿ ಸಲ್ಲಿಸಿದ್ದಾರೆ.

ಬೆಳಗಾವಿ ಗಡಿ ಭಾಗದಲ್ಲಿ ಮರಾಠಿ ಭಾಷೆ ಬಳಕೆ ಅವಕಾಶ ಕಲ್ಪಿಸಬೇಕು, ಗಡಿ ಭಾಗದ ಜನರಿಗೆ ಮರಾಠಿಯಲ್ಲಿ ದಾಖಲೆ ಪತ್ರ ಒದಗಿಸಬೇಕು. ಈ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹಸಚಿವ ಅಮಿತ್ ಶಾ ಮಧ್ಯೆ ಪ್ರವೇಶಿಸುವಂತೆ ಮಾಡಬೇಕು, ಮಹಾರಾಷ್ಟ್ರದ ಆರೋಗ್ಯ ವಿಮೆಗೆ ಮತ್ತೆ ಚಾಲನೆ ನೀಡುವುದು. ಈ ಬಗ್ಗೆ ಬೆಳಗಾವಿ ಜಿಲ್ಲಾಧಿಕಾರಿ ಜೊತೆ ಮಹಾರಾಷ್ಟ್ರ ಸರ್ಕಾರ ಚರ್ಚೆ ನಡೆಸಬೇಕು.

ಬೆಳಗಾವಿ ನಗರದ ಪಕ್ಕದ ಶಿನ್ನೊಳ್ಳಿಯಲ್ಲಿ ತಹಶೀಲ್ದಾರ್ ಮಟ್ಟದ ಅಧಿಕಾರಿ ಕಚೇರಿ ಆರಂಭಿಸಬೇಕು, ಮರಾಠಿಗರಿಗೆ ಆಗುತ್ತಿರುವ ಸಮಸ್ಯೆ ಇತ್ಯರ್ಥಕ್ಕೆ ಸಹಕಾರಿಯಾಗಬೇಕು, ಕರ್ನಾಟಕದಲ್ಲಿ ಮಹಾರಾ?ದ ಆರೋಗ್ಯ ವಿಮೆಗೆ ಮತ್ತೆ ಚಾಲನೆ ನೀಡಬೇಕು ಎಂದು ಒತ್ತಾಯಿಸಲಾಗಿದೆ. ಎಂಇಎಸ್ ನಡೆಯನ್ನು ಕನ್ನಡ ಪರಸಂಘಟನೆಗಳು ಖಂಡಿಸಿವೆ.



# ಹಿರಿಯ ನಾಯಕನನ್ನು ಕಣಕ್ಕಿಳಿಸಲು ಚಿಂತನೆ

**ಉತ್ತರ ಕನ್ನಡ:** ಲೋಕಸಭೆ ಚುನಾವಣೆಗೆ 2-3 ತಿಂಗಳು ಬಾಕಿ ಉಳಿದಿವೆ. ಈಗಾಗಲೆ ರಾಜ್ಯದಲ್ಲಿ ಟಿಕೆಟ್‌ಗಾಗಿ ಲಾಬಿ ಜೋರಾಗಿಯೇ ನಡೆಯುತ್ತಿದೆ. ರಾಜ್ಯ ಕಾಂಗ್ರೆಸ್ ಘಟಕ ಹಾಲಿ ಶಾಸಕರು ಅಥವಾ ಸಚಿವರನ್ನು ಕಣಕ್ಕೆ ಇಳಿಸಲು ಚಿಂತನೆ ನಡೆಸಿದೆ. ಈ ಮೂಲಕ ಲೋಕಸಭೆ ಚುನಾವಣೆಯಲ್ಲಿ ಸುಲಭವಾಗಿ ಗೆಲ್ಲಲು ಮುಂದಾಗಿದೆ. ಜಾರಿಯಾಗಿರುವ ಐದು ಗ್ಯಾರೆಂಟಿ ಮತ್ತು ಸ್ಥಳೀಯ ನಾಯಕರ ಪ್ರಭಾವ ಎರಡನ್ನೂ ಒಟ್ಟುಗೂಡಿಸಿ ಚುನಾವಣೆಯನ್ನು ಎದುರಿಸಲು ಸಜ್ಜಾಗಿದೆ. ಇದಕ್ಕಾಗಿ ಎಲ್ಲ ಕ್ಷೇತ್ರಗಳಲ್ಲಿ ಪ್ರಬಲ ನಾಯಕರನ್ನೇ ಕಣಕ್ಕೆ ಇಳಿಸಲು ಕಾಂಗ್ರೆಸ್ ತಯಾರಿ ನಡೆಸಿದೆ ಎಂದು ರಾಜಕೀಯ ಪಡಸಾಲೆಯಲ್ಲಿ ಚರ್ಚೆಯಾಗುತ್ತಿದೆ. ಅದರಂತೆ ಇದೀಗ ಉತ್ತರ ಕನ್ನಡ ಲೋಕಸಭಾ ಕ್ಷೇತ್ರದಲ್ಲಿ ಹಿರಿಯ ನಾಯಕನನ್ನು ಕಣಕ್ಕಿಳಿಸಲು ಕಾಂಗ್ರೆಸ್ ಪ್ಲಾನ್ ಮಾಡಿದೆ.

ಪುಟ 2

**ನಾಲ್ವರು ಸಾವು, 250ಕ್ಕೂ ಹೆಚ್ಚು ಮಂದಿಗೆ ಗಾಯ**

**ಕರ್ಫ್ಯೂ ಜಾರಿ, ಶಾಲೆಗಳು ಬಂದ್**



## ಉತ್ತರಾಖಂಡದಲ್ಲಿ
# ಹಿಂಸಾಚಾರ

**ಹಲ್ದ್ವಾನಿ:** ಉತ್ತರಾಖಂಡದ ಹಲ್ದ್ವಾನಿಯಲ್ಲಿ ಅಕ್ರಮ ಮದರಸಾ ಮತ್ತು ಪಕ್ಕದ ಮಸೀದಿ ಧ್ವಂಸಗೊಳಿಸಿದ ನಂತರ ನಡೆದ ಹಿಂಸಾಚಾರದಲ್ಲಿ ನಾಲ್ವರು ಸಾವನ್ನಪ್ಪಿದ್ದಾರೆ ಮತ್ತು 250ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಗುರುವಾರ ಮದರಸಾವನ್ನು ಕೆಡವಿದ ನಂತರ ಸ್ಥಳೀಯರು ಕಲ್ಲು ತೂರಾಟ ನಡೆಸಿದ್ದು, ವಾಹನಗಳಿಗೂ ಬೆಂಕಿ ಹಚ್ಚಿದ್ದಾರೆ. ಹೀಗಾಗಿ ಪೊಲೀಸರು ಅಶ್ರುವಾಯು ಪ್ರಯೋಗಿಸಿದ್ದಾರೆ. ನಗರದಲ್ಲಿ ಕರ್ಫ್ಯೂ ಜಾರಿ ಮಾಡಲಾಗಿದ್ದು, ಗಲಭೆಕೋರರ ವಿರುದ್ಧ ಶೂಟ್-ಆಟ್-ಸೈಟ್ ಆದೇಶ ಹೊರಡಿಸಲಾಗಿದೆ ಮತ್ತು ಇಂಟರ್ನೆಟ್ ಸೇವೆಗಳನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಲಾಗಿದೆ. ಅಧಿಕಾರಿಗಳ ಪ್ರಕಾರ, ನೈನಿತಾಲ್ ಜಿಲ್ಲಾಡಳಿತ ಮತ್ತು ಸ್ಥಳೀಯ ನಗರ ಪಾಲಿಕೆ ಅಧಿಕಾರಿಗಳ ಜಂಟಿ ತಂಡವು ನಜುಲ್ ಭೂಮಿಯಲ್ಲಿದ್ದ ಮದರಸಾವನ್ನು ನೆಲಸಮ ಮಾಡಿದೆ. ಇದರಿಂದ ಕೋಪಗೊಂಡ ಸ್ಥಳೀಯರು ಹಿಂಸಾತ್ಮಕವಾಗಿ ಪ್ರತಿಕ್ರಿಯಿಸಿದ್ದಾರೆ. ಇದರಿಂದಾಗಿ ಪರಿಸ್ಥಿತಿ ವೇಗವಾಗಿ ಹದಗೆಟ್ಟಿದ್ದು ಸ್ಥಳೀಯರು ನಡೆಸಿದ ಕಲ್ಲು ತೂರಾಟದಲ್ಲಿ 50ಕ್ಕೂ ಹೆಚ್ಚು ಪೊಲೀಸರು ಮತ್ತು ಜಿಲ್ಲಾಡಳಿತದ ಅಧಿಕಾರಿಗಳು ಗಾಯಗೊಂಡಿದ್ದಾರೆ. ಪೊಲೀಸ್ ಠಾಣೆಯ ಹೊರಗೆ ಇದ್ದ ವಾಹನಗಳಿಗೆ ಬೆಂಕಿ ಹಚ್ಚಿದ್ದರಿಂದ ಹಿಂಸಾಚಾರ ಮತ್ತಷ್ಟು ಉಲ್ಬಣಗೊಂಡಿದ್ದು, ಕಾನೂನು ಸುವ್ಯವಸ್ಥೆ ಮತ್ತಷ್ಟು ಹದಗೆಟ್ಟಿದೆ.

# ಜಿ.ಎಂ.ಸಿದ್ದೇಶ್ವರ್ ವಿರುದ್ಧ ರೆಬಲ್ ಆದ ಮಾಜಿ ಸಚಿವ ರೇಣುಕಾಚಾರ್ಯ!

**ದಾವಣಗೆರೆ:** ಲೋಕಸಭಾ ಚುನಾವಣೆ ಸಮೀಪಿಸುತ್ತಿದ್ದಂತೆಯೇ ರಾಜಕೀಯ ಪಕ್ಷಗಳ ಚಟುವಟಿಕೆ ಗರಿಗೆದರಿವೆ. ಸಂಸದ ಜಿ.ಎಂ ಸಿದ್ದೇಶ್ವರ್ ವಿರುದ್ಧ ಮಾಜಿ ಸಚಿವ ಎಂ.ಪಿ ರೇಣುಕಾಚಾರ್ಯ ರೆಬಲ್ ಆಗಿದ್ದಾರೆ. ದಾವಣಗೆರೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕರು, ಯಡಿಯೂರಪ್ಪ ಹಾಗೂ ಈಶ್ವರಪ್ಪ ಜೋಡೆತ್ತುಗಳು, ಬಿಜೆಪಿ ಕಟ್ಟಿ ಬೆಳೆಸಿದವರು. ದಾವಣಗೆರೆ ಲೋಕಸಭಾ ಬಿಜೆಪಿ ಅಭ್ಯರ್ಥಿ ಗೆಲ್ಲಿಸಲು ಸೂಚಿಸಿದ್ದಾರೆ. ಅಭ್ಯರ್ಥಿಯ ಹೆಸರು ಇನ್ನೂ ಘೋಷಣೆ ಆಗಿಲ್ಲ. ಯಡಿಯೂರಪ್ಪ ಮನೆಯಲ್ಲಿ ಚರ್ಚೆ ಮಾಡಿ ಸಾಮಾನ್ಯ ಕಾರ್ಯಕರ್ತರ ಅಭಿಪ್ರಾಯದಂತೆ ಸೂಕ್ತ ಪಾರದರ್ಶಕ ಅಭ್ಯರ್ಥಿಗೆ ಟಿಕೆಟ್ ನೀಡಬೇಕು ಅಂತಾ ಕೇಳಿದ್ದೇವೆ ಎಂದರು. ಈ ಜಿಲ್ಲೆಯಲ್ಲಿ ಬಿಜೆಪಿ ಕಟ್ಟಿ ಬೆಳೆಸಿದ್ದು ಎಸ್.ಎ.ರವೀಂದ್ರನಾಥ್. ಚಿತ್ರದುರ್ಗ ಜಿಲ್ಲೆಗೆ ದಾವಣಗೆರೆ ಸೇರಿದಾಗ ಅಖಂಡ ಜಿಲ್ಲೆಗೆ ಜಿಲ್ಲಾಧ್ಯಕ್ಷರಾಗಿ ಎಸ್.ಎ ರವೀಂದ್ರನಾಥ್ ಪಟ್ಟ ಕಟ್ಟಿ ಬೆಳೆಸಿದ್ದಾರೆ.



### ರೆಬಲ್ ಆಗಲು ಕಾರಣವೇನು..?:

ಗುರುವಾರ ಜಿಲ್ಲಾಧ್ಯಕ್ಷರ ಹಾಗೂ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮದಲ್ಲಿ ಯಡಿಯೂರಪ್ಪ ಮಾತನಾಡುತ್ತಾ, ಸಿದ್ದೇಶ್ವರ್ ಕೊಡುಗೆ ಅಪಾರ ಇದೆ ಎಂದಿದ್ದರು. ವೇದಿಕೆ ಮೇಲೆ ಬಿಎಸ್‌ವೈ ಹೊಗಳಿದ್ದರಿಂದ ಜಿಎಂ ಸಿದ್ದೇಶ್ವರ್ ಅವರಿಗೆ ಈ ಬಾರಿ ಟಿಕೆಟ್ ಕನ್ಫರ್ಮ್ ಅಂತಾ ಕಾರ್ಯಕರ್ತರು ಅಂದುಕೊಂಡಿದ್ದಾರೆ. ಈ ಹಿನ್ನೆಲೆಯಲ್ಲಿ ಇಮದು ರೇಣುಕಾಚರ್ಯ ಟಾಂಗ್ ನೀಡಿದ್ದಾರೆ.

## ಕಟೀಲ್ ಮನೆಗೆ ಮುತ್ತಿಗೆ ಹಾಕಲು ಯತ್ನ; ಎನ್‌ಎಸ್‌ಯುಐ ಕಾರ್ಯಕರ್ತರ ಬಂಧನ

**ಮಂಗಳೂರು:** ಸಂಸದ ನಳಿನ್ ಕುಮಾರ್ ಕಟೀಲ್ ಮನೆಗೆ ಮುತ್ತಿಗೆ ಹಾಕಲು ಯತ್ನಿಸಿದ ಎನ್‌ಎಸ್‌ಯುಐ ಕಾರ್ಯಕರ್ತರನ್ನು ಪೊಲೀಸರು ಬಂಧಿಸಿದ್ದಾರೆ. ಕೇಂದ್ರದಿಂದ ರಾಜ್ಯಕ್ಕೆ ಅನುದಾನ ತಾರತಮ್ಯ ಹಿನ್ನೆಲೆಯಲ್ಲಿ ಭಾರತದ ರಾಷ್ಟ್ರೀಯ ವಿದ್ಯಾರ್ಥಿ ಒಕ್ಕೂಟ ಕಾರ್ಯಕರ್ತರು ನಳಿನ್ ಕುಮಾರ್ ಕಟೀಲ್ ಮನೆಗೆ ನುಗ್ಗಲು ಯತ್ನಿಸಿದ್ದಾರೆ. ಕೇಂದ್ರ ಸರ್ಕಾರ ಹಾಗೂ ನಳಿನ್ ಕುಮಾರ್ ಕಟೀಲ್ ವಿರುದ್ಧ ಘೋಷಣೆ ಕೂಗಿದ ಎನ್‌ಎಸ್‌ಯುಐ ಕಾರ್ಯಕರ್ತರು ಕಟೀಲ್ ಮನೆ ಮುಂದೆ ಭಾರೀ ಹೈಡ್ರಾಮಾ ಮಾಡಿದರು.ಪ್ರಜಾಪ್ರಭುತ್ವ ಅಪಾಯದಲ್ಲಿದೆ, ಬಿಜೆಪಿ ಸರ್ಕಾರ ಇಲ್ಲದ ರಾಜ್ಯಕ್ಕೆ ಅನುದಾನ ಇಲ್ಲ: ಖರ್ಗೆಯಿಂದ ಕಪ್ಪು ಪತ್ರ ಬಿಡುಗಡೆ ಬಿಗಿ ಪೊಲೀಸ್ ಬಂದೋಬಸ್ತ್ ನಡುವೆಯೂ ಕಟೀಲ್ ಮನೆಗೆ ನುಗ್ಗಲು ಕಾರ್ಯಕರ್ತರು ಯತ್ನಿಸಿದ್ದಾರೆ. ಈ ವೇಳೆ ಸ್ಥಳಕ್ಕೆ ದೌಡಾಯಿಸಿದ ಪೊಲೀಸರು ಎನ್‌ಎಸ್‌ಯುಐ ಕಾರ್ಯಕರ್ತರನ್ನು ತಡೆದು ಬಂಧಿಸಿದ್ದಾರೆ. ಮಂಗಳೂರಿನ ಉರ್ವದಲ್ಲಿರುವ ಅಶೋಕಾ ಅಪಾರ್ಟ್ ಮೆಂಟ್ ಸುತ್ತ ಬಿಗಿ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದೆ.

## ಮಂಗಳೂರಿಗೆ ಸಿಜಿಎಚ್‌ಎಸ್ ವೆಲ್‌ನೆಸ್ ಸೆಂಟರ್ ಮಂಜೂರು

ಮಂಗಳೂರು: ಕೇಂದ್ರ ಸರ್ಕಾರದ ನಿವೃತ್ತ ನೌಕರರ ಬಹುದಿನ ಬೇಡಿಕೆಯಾದ ಸೆಂಟ್ರಲ್ ಗವರ್ನ್ ಮೆಂಟ್ ಹೆಲ್ತ್ ಸ್ಕೀಮ್ ವೆಲ್ ನೆಸ್ ಸೆಂಟರ್ ಅನ್ನು ಮಂಗಳೂರಿನಲ್ಲಿ ತೆರೆಯಲು ಪ್ರಧಾನಿ ನರೇಂದ್ರ ಮೋದಿಜಿ ನೇತೃತ್ವದ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ. ಸಂಸದ ನಳಿನ್ ಕುಮಾರ್ ಪ್ರಯತ್ನದಿಂದ ಬಹುದಿನದ ಬೇಡಿಕೆ ಈಡೇರಿದ್ದು, ಕಳೆದ ಬಾರಿ ಕೇಂದ್ರ ಆರೋಗ್ಯ ಸಚಿವರಿಗೆ ಭೇಟಿಯಾಗಿ ಮಂಗಳೂರಿನಲ್ಲಿ ಅಲಉಊಖ ವೆಲ್ ನೆಸ್ ಸೆಂಟರ್‌ನ್ನು ತೆರೆಯುವಂತೆ ಮನವಿ ಮಾಡಿದ್ದರು. ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ಡಾ. ಮನ್ ಸುಖ್ ಮಾಂಡವೀಯ ಅವರು ನಳಿನ್ ಕುಮಾರ್ ರವರಿಗೆ ಪತ್ರ ಬರೆದು ಮಂಗಳೂರು ಸೇರಿದಂತೆ ದೇಶದ 20 ನಗರಗಳಲ್ಲಿ ಸಿಜಿಎಚ್‌ಎಸ್ ವೆಲ್‌ನೆಸ್ ಸೆಂಟರ್ ಗಳನ್ನು ತೆರೆಯುತ್ತಿರುವುದಾಗಿ ತಿಳಿಸಿದ್ದಾರೆ. ದಕ್ಷಿಣ ಕನ್ನಡ ಹಾಗೂ ನೆರೆಯ ಜಿಲ್ಲೆಗಳ 50ಕ್ಕೂ ಅಧಿಕ ಕೇಂದ್ರ ಸರ್ಕಾರದ ಇಲಾಖೆಗಳ ಸುಮಾರು 5,500 ಉದ್ಯೋಗಿಗಳಿದ್ದು, 29,000 ಕ್ಕೂ ಅಧಿಕ ನಿವೃತ್ತ ಕೇಂದ್ರ ಸರ್ಕಾರದ ಉದ್ಯೋಗಿಗಳಿದ್ದಾರೆ. ಮಂಗಳೂರಿನಲ್ಲಿ ಈ ಕೇಂದ್ರ ಪ್ರಾರಂಭವಾಗುವುದರಿಂದ ಅವರು ನಿಯಮಾನುಸಾರ ವೈದ್ಯಕೀಯ ಚಿಕಿತ್ಸೆ ಪಡೆಯಲು ಅನುಕೂಲವಾಗುತ್ತದೆ. ತಮ್ಮ ಮನವಿಯನ್ನು ಪುರಸ್ಕರಿಸಿ ಮಂಗಳೂರಿಗೆ ಸಿಜಿಎಚ್‌ಎಸ್ ವೆಲ್‌ನೆಸ್ ಸೆಂಟರ್ ಅನ್ನು ಮಂಜೂರು ಮಾಡಿದ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾಥ ಡಾ. ಮನ್ ಸುಖ್ ಮಾಂಡವೀಯರವರಿಗೆ ಸಂಸದರು ಕೃತಜ್ಞತೆ ಸಲ್ಲಿಸಿದ್ದಾರೆ.

ಏನಿದು ಸಿಜಿಎಚ್‌ಎಸ್ ಸ್ಕೀಮ್?, ಫಲಾನುಭವಿಗಳು ಯಾರು?: ಈ ಯೋಜನೆಯು ಕೇಂದ್ರ ಸರ್ಕಾರಿ ನೌಕರರು, ಪಿಂಚಣಿದಾರರು ಹಾಗೂ ಅವರ ಅವಲಂಬಿತರಿಗೆ ಇರುವ ಆರೋಗ್ಯ ವಿಮಾ ಸೇವೆಯಾಗಿದೆ. ಸ್ವಾತಂತ್ರ್ಯ ಹೋರಾಟಗಾರರು, ಮಾಜಿ ರಾಜ್ಯಪಾಲರು, ಮಾಜಿ ಲೆಫ್ಟಿನೆಂಟ್ ಗವರ್ನರ್‌ಗಳು, ಹೈಕೋರ್ಟ್ ನಿವೃತ್ತ ನ್ಯಾಯಾಧೀಶರು, ರೈಲ್ವೆ ಬೋರ್ಡ್ ಉದ್ಯೋಗಿಗಳು, ಮಾಜಿ ಮತ್ತು ಹಾಲಿ ಸಂಸದರು, ಪೋಸ್ಟಲ್ ಮತ್ತು ಟೆಲಿಗ್ರಾಫ್ ಇಲಾಖೆಯ ಉದ್ಯೋಗಿಗಳು ಕೂಡ ಈ ಯೋಜನೆಗೆ ಫಲಾನುಭವಿಗಳಾಗಿರುತ್ತಾರೆ.

20 ಸಾವಿರ ಜನ ಭಾಗಿ, 11,000 ಅರ್ಜಿ ಸಲ್ಲಿಕೆ

# ರಾಜ್ಯಮಟ್ಟದ ಜನಸ್ಪಂದನ ಯಶಸ್ವಿ

**ಬೆಂಗಳೂರು:** ವಿಧಾನಸೌಧದಲ್ಲಿ ಗುರುವಾರ ನಡೆದ 'ಜನಸ್ಪಂದನ' ಕಾರ್ಯಕ್ರಮ ಅಭೂತಪೂರ್ವ ಯಶಸ್ಸು ಕಂಡಿದೆ. ಸುಮಾರು 11 ಸಾವಿರ ಅರ್ಜಿಗಳು ಸ್ವೀಕಾರವಾಗಿದ್ದು, ಒಂದೇ ತಿಂಗಳಲ್ಲಿ ಜನರಿಗೆ ಪರಿಹಾರ ನೀಡುವಂತೆ ಸಿಎಂ ಸಿದ್ದರಾಮಯ್ಯ ಅಧಿಕಾರಿಗಳಿಗೆ ಡೆಡ್‌ಲೈನ್ ನೀಡಿದ್ದಾರೆ.

ಮೊಟ್ಟ ಮೊದಲ ಬಾರಿಗೆ ವಿಧಾನಸೌಧದಲ್ಲಿ ನಡೆದ ರಾಜ್ಯಮಟ್ಟದ ಜನಸ್ಪಂದನ ಕಾರ್ಯಕ್ರಮ ಯಶಸ್ವಿಯಾಗಿ ಜರುಗಿದೆ. ರಾಜ್ಯದ ಮೂಲೆ ಮೂಲೆಗಳಿಂದ ಬಂದಿದ್ದ ಸಾವಿರಾರು ಜನರ ಸಮಸ್ಯೆ ಆಲಿಸಿದ ಸಿಎಂ ಸ್ಥಳದಲ್ಲಿ ಪರಿಹಾರ ಕೊಟ್ಟರು. ಉಳಿದ ಅರ್ಜಿಗಳಿಗೆ ಒಂದು ತಿಂಗಳಲ್ಲಿ ಪರಿಹಾರ ಕೊಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಬೆಳಗ್ಗೆ 11:30 ಕ್ಕೆ ಪ್ರಾರಂಭವಾದ ಜನ ಸ್ಪಂದನ ಕಾರ್ಯಕ್ರಮ ಸಂಜೆ 4:30 ವರೆಗೆ ನಡೆಯಿತು. ಪ್ರತಿ ಇಲಾಖಾವಾರು ಕೌಂಟರ್‌ಗಳನ್ನ ಸಿದ್ದಪಡಿಸಲಾಗಿತ್ತು. ಇಲಾಖೆಗೆ ಸಂಬಂಧಿಸಿದ ಸಮಸ್ಯೆ ಹೊತ್ತು ಜನರು ಕೌಂಟರ್‌ಗಳಲ್ಲಿ ಕೂತಿದ್ದರು. ಖುದ್ದು ಜನರ ಬಳಿ ಸಿಎಂ ತೆರಳಿ ಅರ್ಜಿ ಸ್ವೀಕಾರ ಮಾಡಿದರು. ಸಮಚಿತ್ತದಿಂದ ಎಲ್ಲರ ಸಮಸ್ಯೆ ಆಲಿಸಿದರು. 150 ಕ್ಕೂ ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಪರಿಹಾರ ಕೊಟ್ಟರು. ಒಟ್ಟು 20 ಸಾವಿರಕ್ಕೂ ಹೆಚ್ಚು ಮಂದಿ ಜನಸ್ಪಂದನ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು. ಸುಮಾರು 11 ಸಾವಿರ ಅರ್ಜಿಗಳು ಸಮಸ್ಯೆ ಪರಿಹಾರಕ್ಕೆ ಸಲ್ಲಿಕೆಯಾದವು.

**ಯೋಧನಿಂದ ತ್ರಿಚಕ್ರ ವಾಹನಕ್ಕೆ ಬೇಡಿಕೆ:** ಮಗನಿಗೆ ಕೆಲಸಬೇಕು. ಮನೆ ಮಾಲೀಕ ಕಿರುಕುಳ ಕೊಡ್ತಿದ್ದಾನೆ. ಗೃಹಲಕ್ಷ್ಮಿ ಹಣ ಬಂದಿಲ್ಲ. ಯೋಧನಿಂದ ತ್ರಿಚಕ್ರ ವಾಹನಕ್ಕೆ ಡಿಮ್ಯಾಂಡ್. ನನ್ನ ಜಮೀನಿನ ದಾಖಲೆ ಬೇರೆಯವರಿಗೆ ಅಧಿಕಾರಿಗಳು ದಾಖಲಾತಿ ಮಾಡಿಕೊಟ್ಟಿದ್ದಾರೆ. ಹೀಗೆ ಹತ್ತು ಹಲವು ಸಮಸ್ಯೆ ಹೊತ್ತು ಸಾವಿರಾರು ಜನರು ಜನಸ್ಪಂದನ ಕಾರ್ಯಕ್ರಮಕ್ಕೆ ಬಂದಿದ್ದರು. ಕಂದಾಯ ಇಲಾಖೆ, ವಸತಿ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದ ದೂರುಗಳೇ ಜನಸ್ಪಂದನದಲ್ಲಿ ಹೆಚ್ಚಾಗಿ ಕಂಡು ಬಂದವು. ಖುದ್ದು ಸಿಎಂ ಸಿದ್ದರಾಮಯ್ಯ ಪ್ರತಿ ಕೌಂಟರ್‌ಗೆ ತೆರಳಿ ಅರ್ಜಿ ಸ್ವೀಕಾರ ಮಾಡಿದರು. ಸ್ಥಳದಲ್ಲಿ ಪರಿಹಾರ ಆಗುವ ಸಮಸ್ಯೆಗೆ ಪರಿಹಾರವನ್ನು ಘೋಷಣೆ ಮಾಡಿದರು. ಡಬಲ್ ಡಿಗ್ರಿ ಮುಗಿಸಿರುವ ಬೆಂಗಳೂರಿನ ನಿವಾಸಿ ವಿಶೇಷಚೇತನ ನವ್ಯಶ್ರೀ ಅವರು ತಾಯಿ ರಮಾಮಣಿ ಅವರ ಜತೆ ಬಂದು ಉದ್ಯೋಗಕ್ಕಾಗಿ ಅಬಗೆ ಮನವಿ ಮಾಡಿದರು. ಉದ್ಯೋಗ ಮೇಳದ ವೇಳೆ ಈ ಅರ್ಜಿಯನ್ನು ಪರಿಗಣಿಸುವಂತೆ ಮುಖ್ಯಮಂತ್ರಿಗಳು ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಸೂಚಿಸಿದರು. ವಿಶೇಷಚೇತನ ಸತ್ಯನಾರಾಯಣ ಅವರು ತಮ್ಮ ಡಯಾಲಿಸಿಸ್‌ಗೆ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ನೆರವು ಕೊಡಿಸುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಿದರು. ಅರ್ಜಿ ಪರಿಶೀಲಿಸಿ ಚಿಕಿತ್ಸೆಗೆ ನೆರವು ನೀಡುವಂತೆ ಸೂಚಿಸಿದರು. ಬೆಂಗಳೂರಿನ ಜೆ.ಜೆ ನಗರ ನಿವಾಸಿ ಎಂ.ಶ್ರೀಧರ್ ಅವರ ಎರಡೂ ಮೂತ್ರಪಿಂಡಗಳು ವಿಫಲವಾಗಿದ್ದು ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಆರ್ಥಿಕ ನೆರವು ಕೋರಿ ಮನವಿ ಸಲ್ಲಿಸಿದರು. ಮುಖ್ಯಮಂತ್ರಿಗಳು ಇವರ ಸಮಸ್ಯೆಗೆ ಕೂಡಲೇ ಸ್ಪಂದಿಸಿ ಪರಿಹಾರ ನೀಡುವ ಭರವಸೆ ನೀಡಿದರು. ರಾಯಚೂರಿನ ಮೂರು ವರ್ಷದ ಶುಶಾಂತ್, ಥಲಸ್ಸೆಮಿಯಾ ಕಾಯಿಲೆಗೆ ತುತ್ತಾಗಿದ್ದಾನೆ. ಈತನನ್ನು ಜನಸ್ಪಂದನ ಕಾರ್ಯಕ್ರಮಕ್ಕೆ ಕರೆತಂದ ತಾಯಿ ಲಲಿತಾ ಅವರು ಆರ್ಥಿಕ ಸಹಾಯವನ್ನು ಕೋರಿ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು. ಮುಖ್ಯಮಂತ್ರಿಗಳು ಪರಿಹಾರ ನಿಧಿಯಿಂದ ನೆರವು ಒದಗಿಸಲಾಗುವುದು ಎಂದು ಅರ್ಜಿಯನ್ನು ಸ್ವೀಕರಿಸಿ ಭರವಸೆ ನೀಡಿದರು. ಕೋಲಾರ ಜಿಲ್ಲೆ ಮಾಲೂರು ತಾಲ್ಲೂಕಿನ ಬಂತಹಳ್ಳಿ ಗ್ರಾಮದ 50 ವ?ದ ನಾರಾಯಣಸ್ವಾಮಿ ಖಾತೆ ಬದಲಾವಣೆ ಮಾಡಲಾಗಿದ್ದು ಸರಿಪಡಿಸಿಕೊಡಿ ಎಂದು ಮುಖ್ಯಮಂತ್ರಿಗಳನ್ನು ಕೋರಿದರು. ಮನವಿ ಸ್ವೀಕರಿಸಿದ ಮುಖ್ಯಮಂತ್ರಿಗಳು ಪ್ರಕರಣದ ಕುರಿತು ಪರಿಶೀಲಿಸಲು ಅಧಿಕಾರಿಗಳಿಗೆ ಸೂಚಿಸಿದರು. ತುಮಕೂರಿನ ಮಾಡಗಶಿರಾ ಗ್ರಾಮದ ಶಾಂತಿಬಾಯಿ ಅವರ ಬುದ್ಧಿಮಾಂದ್ಯ ಮಗುವಿಗೆ ಚಿಕಿತ್ಸೆ ಮಾಡಿಸಲು ನೆರವು ಕೋರಿ ಮುಖ್ಯಮಂತ್ರಿಗಳಿಗೆ ಅರ್ಜಿ ಸಲ್ಲಿಸಿದ್ದರು. ಮಗುವಿನ ಪರಿಸ್ಥಿತಿಯನ್ನು ಕಣ್ಣಾರೆ ಕಂಡು ಮರುಗಿದ ಮುಖ್ಯಮಂತ್ರಿಗಳು ನೆರವು ನೀಡುವ ಅಭಯ ನೀಡಿದರು. ನೆಲಮಂಗಲದ ಕ್ಯಾನ್ಸರ್ ರೋಗಿ ಚೌಡೇಶ್ವರಿಗೆ ಶಸ್ತ್ರಚಿಕಿತ್ಸೆಗೆ ಆರ್ಥಿಕ ನೆರವಿನ ಅಗತ್ಯವಿದ್ದು, ಆರ್ಥಿಕ ನೆರವು ಕೋರಿ ಮನವಿ ಸಲ್ಲಿಸಿದರು. ತಾವು ಸ್ವೀಕರಿಸಿದ ಮನವಿಯನ್ನು ಮುಖ್ಯಮಂತ್ರಿಗಳು ಪರಿಹಾರ ನಿಧಿ ಶಾಖೆಯ ಅಧಿಕಾರಿಗಳಿಗೆ ಹಸ್ತಾಂತರಿಸಿದರು.



### ಜನಸ್ಪಂದನಕ್ಕೆ ಉತ್ತಮ ಪ್ರತಿಕ್ರಿಯೆ, 10 ಸಾವಿರ ಅಹವಾಲು

**ಮುಖ್ಯಮಂತ್ರಿಗಳ ಜನಸ್ಪಂದನಾ ಕಾರ್ಯಕ್ರಮಕ್ಕೆ ಜನರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ರಾಜ್ಯದ ವಿವಿಧ ಪ್ರದೇಶಗಳಿಂದ 10,000ಕ್ಕೂ ಹೆಚ್ಚು ಮಂದಿ ವಿಧಾನಸೌಧಕ್ಕೆ ಆಗಮಿಸಿ, ಮುಖ್ಯಮಂತ್ರಿಗಳಿಗೆ ಅಹವಾಲು ಸಲ್ಲಿಸಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಮುಖ್ಯಮಂತ್ರಿಗಳು, ಮೂರು ತಿಂಗಳೊಳಗೆ ಅರ್ಜಿಗಳು ಇತ್ಯರ್ಥವಾಗಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ. ಕಾನೂನು ರೀತಿ ಬಗೆಹರಿಸದಿದ್ದರೆ ಹಿಂಬರಹ ಕೊಡುವಂತೆ ಸ್ಪಷ್ಟ ನಿರ್ದೇಶನ ಕೊಟ್ಟಿದ್ದೇನೆ. ನಮ್ಮ ಅರ್ಜಿಗೆ ಪರಿಹಾರ ಸಿಗಲಿಲ್ಲ ಎಂಬ ಭಾವನೆ ಯಾರಿಗೂ ಬೇಡ. ಎಲ್ಲ ಅರ್ಜಿಗಳನ್ನು ವಿಲೇವಾರಿ ಮಾಡುವ ಕೆಲಸ ಮಾಡುತ್ತೇವೆ ಎಂದು ಭರವಸೆ ನೀಡಿದ್ದಾರೆ. ಇದು ರಾಜ್ಯ ಮಟ್ಟದ ಜನಸ್ಪಂದನ ಕಾರ್ಯಕ್ರಮವಾಗಿದೆ. ಕಳೆದ ಕಾರ್ಯಕ್ರಮದಲ್ಲಿ ಸುಮಾರು 5 ಸಾವಿರ ಅರ್ಜಿಗಳು ಬಂದಿದ್ದವು. ಅದರಲ್ಲಿ ಶೇಕಡಾ 89ರಷ್ಟು ಅರ್ಜಿಗಳಿಗೆ ಸ್ಪಂದಿಸುವ ಕೆಲಸ ಆಗಿದೆ. ನವಂಬರ್ 27ರಂದು ಸಲ್ಲಿಸಲಾಗಿದ್ದ ಅರ್ಜಿಗಳಿಗೆ ಬಹುತೇಕ ಪರಿಹಾರ ಸಿಕ್ಕಿದೆ ಎಂದು ಸಿಎಂ ಹೇಳಿದ್ದಾರೆ.**

# 40% ಕಮಿಷನ್ ಕಾಂಗ್ರೆಸ್ ಸರ್ಕಾರದಲ್ಲೂ ಮುಂದುವರಿದಿದೆ

**ಬೆಂಗಳೂರು:** 40% ಕಮಿಷನ್ ಕಾಂಗ್ರೆಸ್ ಸರ್ಕಾರದಲ್ಲಿಯೂ ಮುಂದುವರಿದಿದೆ ಎಂದು ಗುತ್ತಿಗೆದಾರರ ಸಂಘದ ಅಧ್ಯಕ್ಷ ಕೆಂಪಣ್ಣ ಆರೋಪ ಮಾಡಿದ್ದಾರೆ.



ಚಾಮರಾಜಪೇಟೆಯ ಗುತ್ತಿಗೆದಾರರ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ವಿವಿಧ ಇಲಾಖೆಗಳಲ್ಲಿ ಕರೆದಿರೋ ಪ್ಯಾಕೇಜ್ ಟೆಂಡರ್ ಅನ್ನು ರದ್ದುಗೊಳಿಸುವಂತೆ ಆಗ್ರಹಿಸಿದರು. ಜೊತೆಗೆ ಪ್ರತಿಯೊಂದು ಕಾಮಗಾರಿಗೂ ಪ್ರತ್ಯೇಕ ಟೆಂಡರ್ ಕರೆಯಬೇಕು ಎಂದು ಇದೇ ವೇಳೆ ಒತ್ತಾಯ ಮಾಡಿದರು.

ತಕ್ಷಣ ಪ್ಯಾಕೇಜ್ ಸಿಸ್ಟಮ್ ಸ್ಟಾಪ್ ಮಾಡಿ ಪ್ರತ್ಯೇಕ ಟೆಂಡರ್ ಕರೆಯಬೇಕು. ಕೋಲಾರದಲ್ಲಿ ಪ್ಯಾಕೇಜ್ ಟೆಂಡರ್ ಕರೆದಿದ್ದಾರೆ ಬೇರೆ ಜಿಲ್ಲೆಗಳಲ್ಲೂ ಕರೆದಿದ್ದಾರೆ. ಅಧಿಕಾರಿಗಳಿಂದಲೇ ಭ್ರಷ್ಟಾಚಾರ ಶುರುವಾಗಿದೆ. ಅಧಿಕಾರಿಗಳು ದುಡ್ಡು ಕಲೆಕ್ಟ್ ಮಾಡಿ ರಾಜಕಾರಣಿಗಳಿಗೆ ಕೊಡುತ್ತಿದ್ದಾರೆ. ಈ ಹಿಂದೆ ರಾಜಕಾರಣಿಗಳು ನೇರವಾಗಿ ಕಮಿಷನ್ ತೆಗೆದುಕೊಳ್ಳುತ್ತಿದ್ದರು. ಈಗ ಅಧಿಕಾರಿಗಳು ಕಮಿ?ನ್ ತೆಗೆದುಕೊಳ್ಳುತ್ತಿದ್ದಾರೆ. ಒಟ್ಟಿನಲ್ಲಿ 40% ಕಮಿಷನ್ ಈಗಲೂ ಮುಂದುವರಿದಿದೆ ಎಂದು ದೂರಿದ್ದಾರೆ.

ಅರ್ಹ ಗುತ್ತಿಗೆದಾರರಿಗೆ ಅನ್ಯಾಯ: ವಿವಿಧ ಇಲಾಖೆಯಲ್ಲಿ ನಡೆಯುತ್ತಿರುವ ಅನಾವಶ್ಯಕ ಪ್ಯಾಕೇಜ್ ಟೆಂಡರ್‌ಗಳನ್ನು ಕೂಡಲೇ ಸರ್ಕಾರ ರದ್ದುಗೊಳಿಸಬೇಕು. ಈಗಾಗಲೇ ಹಲವು ಬಾರಿ ಸಿಎಂ ಅವರನ್ನ ಭೇಟಿ ಮಾಡಿದ್ದೇವೆ. ಪ್ಯಾಕೇಜ್ ಟೆಂಡರ್ ರದ್ದುಮಾಡುವಂತೆ ಮನವಿ ಮಾಡಿದ್ದೇವೆ. ಹತ್ತಾರು ಪತ್ರ ಬರೆದು ಸಿಎಂಗೆ ಮನವಿ ಮಾಡಿದ್ದೇವೆ. ಮುಖ್ಯ ಎಂಜಿನಿಯರ್ ಅವರನ್ನ ಪ್ರಶ್ನೆ ಮಾಡಿದ್ರೆ ಮೇಲಾಧಿಕಾರಿಗಳ ಕಡೆ ತೋರಿಸುತ್ತಾರೆ. ಅವರನ್ನ ಕೇಳಿದ್ರೆ ಸಚಿವರು, ಶಾಸಕರ ಕಡೆ ಬೊಟ್ಟು ಮಾಡಿ ತೋರಿಸುತ್ತಾರೆ ಎಂದರು.

ಪೊಲೀಸ್ ವಸತಿ ಗೃಹ ಅಭಿವೃದ್ಧಿ ನಿಗಮ, ಬೆಂಗಳೂರು ಮಹಾನಗರ ಪಾಲಿಕೆ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಹಲವು ಇಲಾಖೆಗಳಲ್ಲಿ ಪ್ಯಾಕೇಜ್ ಟೆಂಡರ್ ಆಹ್ವಾನ ಬಂದಿದೆ. ಇದರಿಂದ ಸ್ಥಳೀಯ ಗುತ್ತಿಗೆದಾರರಿಗೆ ಮೋಸಗಳಾಗುತ್ತಿದೆ. ನೆರೆ ರಾಜ್ಯದ ಗುತ್ತಿಗೆ ಅನಕೂಲ ಮಾಡಿಕೊಡಲು ಪ್ಯಾಕೇಜ್ ಟೆಂಡರ್ ಮಾಡುತ್ತಿದ್ದಾರೆ. ಪ್ಯಾಕೇಜ್ ಟೆಂಡರ್ ಪದ್ಧತಿ ಭ್ರ?ಚಾರಕ್ಕೆ ಆಸ್ಪದವಾಗಿದೆ. ತಮ್ಮ ಅಪ್ತರಾದ ಗುತ್ತಿಗೆ ಕಾಮಗಾರಿ ನೀಡಲು ಮುಂದಾಗಿದ್ದಾರೆ. ಇದರಿಂದ ಅರ್ಹ ಗುತ್ತಿಗೆದಾರರಿಗೆ ಅನ್ಯಾಯವಾಗುತ್ತಿದೆ. ಎಲ್ಲಾ ರೀತಿಯ ಕಾಮಗಾರಿಗಳ ಟೆಂಡರ್ ಮೂಲಕ ಹಂಚಿಕೆ ಮಾಡಿದ್ರೆ ನ್ಯಾಯ ಸಿಗುತ್ತೆ ಎಂದಿದ್ದಾರೆ.

ಸಮಯ ನೋಡಿ ದೂರು: ಪ್ಯಾಕೇಜ್ ಟೆಂಡರ್ ರದ್ದು ಮಾಡದೇ ಇದ್ರೆ ಹೋರಾಟ ಮಾಡಲು ಕರೆ ಕೊಡುತ್ತೇವೆ. ಒಂದು ವಾರದಲ್ಲಿ ಬಿಬಿಎಂಪಿಯಲ್ಲಿ 300 ಕೋಟಿ ಪ್ಯಾಕೇಜ್ ಟೆಂಡರನ್ನ ಆಹ್ವಾನಿಸಲಾಗಿದೆ. ಈ ಪ್ಯಾಕೇಜ್ ಟೆಂಡರ್ ಮೇಲೆ ಹಲವು ಅನುಮಾನ ಮೂಡಿದೆ. ನಿಮಗೆ ಕೆಲಸ ಬೇಕು ಅಂದ್ರೆ ಅಧಿಕಾರಿಗಳೇ ಹಣ ಕೇಳುತ್ತಿದ್ದಾರೆ. ಕಾಮಗಾರಿ ಪೂರ್ಣಗೊಳಿಸಿ ಎರಡು ವ?ರ್ ಆದ್ರೂ ಹಣ ಬಿಡುಗಡೆ ಆಗಿಲ್ಲ. 40% ಕಮಿಷನ್ ಮುಂದುವರಿದಿರೋ ಬಗ್ಗೆ ಸಮಯ ನೋಡಿ ದೂರು ಕೊಡುತ್ತೇವೆ. ಯಾರಿಗೂ ಹೆದರಬೇಕಿಲ್ಲ ಎಂದರು.

ಬಿಬಿಎಂಪಿಯಲ್ಲಿ 15 ಚೀಫ್ ಎಂಜಿನಿಯರ್ಸ್ ಇದ್ದಾರೆ. ಅವರು ಪ್ರತಿಯೊಂದು ಟೆಂಡರ್‌ನಲ್ಲಿ ಹಣ ಕೇಳುತ್ತಾರೆ. ಅವರ ಹೆಸರು ಸದ್ಯಕ್ಕೆ ಹೇಳಲ್ಲ. 9 ಸಾವಿರಾರು ಪೇಜ್‌ಗಳ ಮೂಲಕ ದೂರು ಕೊಟ್ಟಿದ್ದೇವೆ. ನಾಗಮೋಹನ್ ದಾಸ್ ಕಮಿಟಿಗೂ ಪ್ರತೀ ಭ್ರಷ್ಟ ಅಧಿಕಾರಿಗಳ ಮಾಹಿತಿ ನೀಡಿದ್ದೇವೆ. ಅದರಲ್ಲಿ ಪ್ರತಿಯೊಂದು ಇಲಾಖೆಯ ಅಧಿಕಾರಿಗಳ ಹೆಸರು ನೀಡಿದ್ದೇವೆ ಎಂದು ತಿಳಿಸಿದರು.

ಇದೇ ವೇಳೆ ನೀವು ಸುಮ್ನೆ ಗಾಳಿಯಲ್ಲಿ ಗುಂಡು ಹೊಡೆಯುತ್ತೀರಿ, ದಾಖಲಾತಿ ಕೊಡಲ್ಲ ಎಂಬ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಕೆಂಪಣ್ಣ, ನಾವು 800 ಪುಟಗಳ ದಾಖಲಾತಿ ಕೊಟ್ಟಿದ್ದೇವೆ. ಕೋರ್ಟ್ ಅಲ್ಲಿ ಕೊಡುತ್ತೇವೆ ಎಂದರು.

## ಪರಶುರಾಮ ಥೀಮ್ ಪಾರ್ಕ್ ಕಾಮಗಾರಿ ಸಿಐಡಿ ತನಿಖೆಗೆ

**ಬೆಂಗಳೂರು:** ಬಿಜೆಪಿ ಸರ್ಕಾರದ ಅವಧಿಯಲ್ಲಿ ನಿರ್ಮಾಣಗೊಂಡಿದ್ದ ಪರಶುರಾಮ ಥೀಮ್ ಪಾರ್ಕ್ ಕಳಪೆ ಕಾಮಗಾರಿ ಹಾಗೂ ಅವ್ಯವಹಾರದ ಪ್ರಕರಣದ ತನಿಖೆಯನ್ನು ಸರ್ಕಾರ ಸಿಐಡಿಗೆ ಒಪ್ಪಿಸಿದೆ. ಉಡುಪಿ ಜಿಲ್ಲೆ ಕಾರ್ಕಳ ತಾಲ್ಲೂಕಿನ ಎರ್ಲಪಾಡಿ ಗ್ರಾಮದ ಬೈಲೂರಿನಲ್ಲಿ ಮಾಜಿ ಸಚಿವ, ಹಾಲಿ ಶಾಸಕ ಸುನೀಲ್ ಕುಮಾರ್ ಪರಶುರಾಮ ಥೀಮ್ ಪಾರ್ಕ್ ನಿರ್ಮಿಸಿದ್ದರು. ಕಾಮಗಾರಿ ಪೂರ್ಣಗೊಳ್ಳದೇ ಈ ಥೀಮ್ ಪಾರ್ಕ್ ಉದ್ಘಾಟನೆ ಮಾಡಲಾಗಿದೆ ಎಂದು ಕಾಂಗ್ರೆಸ್ ಆರೋಪಿಸಿತ್ತು. ಈ ಸಂಬಂಧ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವರಾಗಿರುವ ಲಕ್ಷ್ಮೀ ಹೆಬ್ಬಾಳ್ಕರ್ ಅವರ ಶಿಫಾರಸ್ಸಿನಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೀಗ ಸಿಐಡಿ ತನಿಖೆಗೆ ಆದೇಶಿಸಿದ್ದಾರೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ನೂತನ ಥೀಂ ಪಾರ್ಕ್ ಲೋಕಾರ್ಪಣೆ ಮಾಡಿದ್ದರು. ವಿಧಾನ ಸಭಾ ಚುನಾವಣೆಗೆ ತಿಂಗಳು ಬಾಕಿ ಇರುವಾಗ ಥೀಂ ಪಾರ್ಕ್ ಉದ್ಘಾಟನೆ ಶಾಸಕರಿಗೆ ಭಾರೀ ಯಶಸ್ಸು ತಂದುಕೊಟ್ಟಿತ್ತು. ಉದ್ಘಾಟನೆಯಾದ ಬಳಿಕ ಸಿಡಿಲು ನಿರೋಧಕ ಅಳವಡಿಕೆ ಮತ್ತು ಇನ್ನಿತರ ಬಾಕಿ ಕಾಮಗಾರಿ ಪೂರ್ಣಗೊಳಿಸುವ ನಿಟ್ಟಿನಲ್ಲಿ ಥೀಂ ಪಾರ್ಕ್ ಬಂದ್ ಮಾಡಿರುವ ವಿಚಾರವಾಗಿ, ಸ್ಥಳೀಯರು ಅನುಮಾನ ವ್ಯಕ್ತಪಡಿಸಿದ್ದರು. ಪರಶುರಾಮನ ಮೂರ್ತಿ ನಕಲಿ ಎನ್ನುವ ಮೂಲಕ ಹೊಸ ವಿವಾದ ಆರಂಭವಾಗಿತ್ತು. ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಪರಿಶೀಲನೆ ಮಾಡಿದ್ದರು. ಅಧಿಕಾರಿಗಳು ಸ್ಪ?ವಾದ ಮಾಹಿತಿ ನೀಡದ ಹಿನ್ನಲೆಯಲ್ಲಿ ತನಿಖೆಗೆ ಆದೇಶ ನೀಡಿದ್ದರು.

## ಗರಿಗೆದರಿದ ರಾಜಕೀಯ

ಮುಂದಿನ ದಿನಗಳಲ್ಲಿ ಪ್ರಚಾರ ಕಾರ್ಯದಲ್ಲೂ ಈ ಭೇಟಿ ನೆರವಾಗುವ ನಿರೀಕ್ಷೆ ಇದ್ದು, ಒಕ್ಕಲಿಗ ಮತ ಬ್ಯಾಂಕ್ ಧ್ರುವಿಕರಣಕ್ಕೆ ಅಮಿತ್ ಶಾ ದೊಡ್ಡ ಗೌಡರ ಕುಟುಂಬದ ಭೇಟಿ ಸಹಾಯವಾಗಲಿದೆ ಎಂಬ ಲೆಕ್ಕಾಚಾರ ಹೊಂದಲಾಗಿದೆ. ಇತ್ತೀಚೆಗೆ ದೆಹಲಿಯಲ್ಲಿ ಅಮಿತ್ ಶಾ ಅವರನ್ನು ಕುಮಾರಸ್ವಾಮಿ ಭೇಟಿಯಾಗಿದ್ದರು. ಈ ವೇಳೆ ಲೋಕಸಭೆ ಚುನಾವಣೆಗೆ ಕರ್ನಾಟಕದಲ್ಲಿ ಎನ್‌ಡಿಎ ಮೈತ್ರಿಕೂಟದ ನೇತೃತ್ವ ವಹಿಸುವಂತೆ ಕುಮಾರಸ್ವಾಮಿ ಅವರಲ್ಲಿ ಅಮಿತ್ ಶಾ ಕೋರಿದ್ದರು. ಲೋಕಸಭೆ ಚುನಾವಣೆ ದೃಷ್ಟಿಯಿಂದ ಬಿಜೆಪಿ ನಾಯಕರ ಜತೆ ಸಮನ್ವಯ ಸಾಧಿಸಲು ಕುಮಾರಸ್ವಾಮಿ ನೇತೃತ್ವ ವಹಿಸಲಿ ಎಂಬ ಅಭಿಪ್ರಾಯವನ್ನು ಅಮಿತ್ ಶಾ ವ್ಯಕ್ತಪಡಿಸಿದ್ದಾರೆ. ಕರ್ನಾಟಕದಲ್ಲಿ ಬಿಜೆಪಿ, ಜೆಡಿಎಸ್ ಕ್ಷೇತ್ರ ಹಂಚಿಕೆಯ ಬಗ್ಗೆಯೂ ಉಭಯ ನಾಯಕರು ಚರ್ಚೆ ನಡೆಸಿದ್ದಾರೆ. ಜೆಡಿಎಸ್ ಗೆಲ್ಲಲು ಅವಕಾಶ ಇರುವ ಮೂರು ಕ್ಷೇತ್ರಗಳನ್ನು ಕುಮಾರಸ್ವಾಮಿ ಕೇಳಿದ್ದಾರೆ. ಇದರ ಜೊತೆಗೆ ರಾಜ್ಯಸಭಾ ಸ್ಥಾನ ಅಥವಾ ಮಂತ್ರಿಸ್ಥಾನ ನೀಡುವ ಭರವಸೆಯನ್ನೂ ಕುಮಾರಸ್ವಾಮಿ ಅವರಿಗೆ ಅಮಿತ್ ಶಾ ನೀಡಿದ್ದಾರೆ ಎನ್ನಲಾಗಿದೆ. ಆದರೆ, ರಾಜ್ಯದಲ್ಲಿ ಬಿಜೆಪಿ, ಜೆಡಿಎಸ್ ಹೆಚ್ಚು ಸ್ಥಾನ ಗೆಲ್ಲಿಸುವ ಕೆಲಸ ಮಾಡುತ್ತೇವೆ. ಸದ್ಯಕ್ಕೆ ಕೇಂದ್ರ ಮಂತ್ರಿ ಸ್ಥಾನ ಬೇಡ ಎಂದು ಕುಮಾರಸ್ವಾಮಿ ಹೇಳಿರುವುದಾಗಿ ಮೂಲಗಳು ತಿಳಿಸಿದ್ದವು.

## ಕೆರಗೋಡು ಬಂದ್‌ಗೆ

ಮೊದಲ ಪುಟದಿಂದ...

## ಉತ್ತಮ ಪ್ರತಿಕ್ರಿಯೆ

ಮಂಡ್ಯದಲ್ಲಿ ಬಂದ್ ಬಿಸಿ ತಟ್ಟಿಲ್ಲ. ಜನ ಜೀವನ ಎಂದಿನಂತೆ ಸಾಗುತ್ತಿದೆ. ಹನುಮಧ್ವಜ ತೆರವು ಮಾಡುವಲ್ಲಿ ಶಾಸಕರ ಪಾತ್ರ ಇದೆ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಮಂಡ್ಯ ಕಾಂಗ್ರೆಸ್ ಶಾಸಕ ಗಣಿಗ ರವಿಕುಮಾರ್ ಮನೆಗೆ ಪೊಲೀಸ್ ಭದ್ರತೆ ಹೆಚ್ಚಿಸಲಾಗಿದೆ.

ಶಾಸಕ ರವಿಕುಮಾರ್ ಫ್ಲೆಕ್ಸ್ ಹರಿದು ಕೆರಗೋಡು ಗ್ರಾಮಸ್ಥರು ಕಿಡಿಕಾರಿದ್ದರು. ಹೀಗಾಗಿ ಮಂಡ್ಯದ ಬಂದೀಗೌಡ ಬಡಾವಣೆಯಲ್ಲಿರುವ ರವಿಕುಮಾರ್ ನಿವಾಸಕ್ಕೆ 10 ಪೊಲೀಸರನ್ನು ನಿಯೋಜನೆ ಮಾಡಲಾಗಿದೆ.

## ಜಿ.ಎಂ.ಸಿದೇಶರ್ ವಿರುದ ರೆಬಲ್ ಆದ ಮಾಜಿ ಸಚಿವ ರೇಣುಕಾಚಾರ್ಯ!

ದಾವಣಗೆರೆ ಜಿಲ್ಲೆಗೆ ಕಾರ್ಯಕರ್ತರ ಮುಖಂಡರ ಅಭಿಪ್ರಾಯದಂತೆ ಟಿಕೆಟ್ ಘೋಷಣೆ ಮಾಡಬೇಕು. ಏಕಮುಖವಾಗಿ ಟಿಕೆಟ್ ಘೋಷಣೆ ಮಾಡಿದ್ರೆ ನಾವು ಒಪ್ಪಲ್ಲ ಎಂದು ತಿಳಿಸಿದರು. ಮುಖಂಡರ ಮತದಾರರ ಅಭಿಪ್ರಾಯದಂತೆ ಘೋಷಣೆ ಮಾಡುತ್ತೇವೆ ಎಂದಿದ್ದಾರೆ. ನಾನು ಪ್ರಬಲ ಆಕಾಂಕ್ಷಿ, ಜಿಲ್ಲೆಯಲ್ಲಿ ಕೋವಿಡ್ ಸಮಯದಲ್ಲಿ ಒಳ್ಳೆಯ ಕೆಲಸ ಮಾಡಿದ್ದೇವೆ, ನಾವು ಸಮರ್ಥರಿದ್ದೇವೆ. ಕಾರ್ಯಕರ್ತರ ಮುಖಂಡರ ಅಭಿಪ್ರಾಯ ಸಂಗ್ರಹಿಸಿ ಟಿಕೆಟ್ ನೀಡಲಿ. ಜೊತೆಗೆ ಹೊಸಬರಿಗೆ ಟಿಕೆಟ್ ನೀಡುವಂತೆ ಇದೇ ವೇಳೆ ಎಂಪಿ ರೇಣುಕಾಚಾರ್ಯ ಒತ್ತಾಯ ಮಾಡಿದರು.

## ಹಿರಿಯ ನಾಯಕನನ್ನು ಕಣಕ್ಕಿಳಿಸಲು ಚಿಂತನೆ

ಹೌದು ಹಲಿಯಾಳ-ದಾಂಡೇಲಿ-ಜೋಯಿಡಾ ವಿಧಾನಸಭಾ ಕ್ಷೇತ್ರದ ಶಾಸಕ, ಮಾಜಿ ಸಚಿವ ಆರ್.ವಿ.ದೇಶಪಾಂಡೆ ಅವರಿಗೆ ಟಿಕೆಟ್ ನೀಡಲು ಕಾಂಗ್ರೆಸ್ ಯೋಚಿಸಿದೆ. ಇನ್ನು ಆರ್‌ವಿ ದೇಶಪಾಂಡೆ ಅವರಿಗೆ ಟಿಕೆಟ್ ಕೊಡುವ ಹಿಂದೆ ಕೈ ನಾಯಕರು ಸಾಕಷ್ಟು ಲೆಕ್ಕಾಚಾರ ನಡೆಸಿದ್ದಾರೆ. ಉತ್ತರ ಕನ್ನಡ ಜಿಲ್ಲೆಯ ಪ್ರತಿ ಕ್ಷೇತ್ರದಲ್ಲೂ ಆರ್‌ವಿ ದೇಶಪಾಂಡೆ ತನ್ನ ಹಿಡಿತವನ್ನು ಸಾಧಿಸಿದ್ದಾರೆ. ಅಲ್ಲದೆ ಒಂಬತ್ತು ಬಾರಿ ಹಲಿಯಾಳ ಕ್ಷೇತ್ರದಿಂದ ಗೆಲುವು ಸಾಧಿಸಿದ್ದಾರೆ. ಇನ್ನು ಉತ್ತರ ಕನ್ನಡ ಜಿಲ್ಲೆ ಉಸ್ತುವರಿ ಸಚಿವರಿದ್ದಾಗ ತಮ್ಮ ಕಾರ್ಯಶೈಲಿ ಮೂಲಕ ಅನೇಕ ಕಾಂಗ್ರೆಸ್ ನಾಯಕರ ಮನಸ್ಸು ಗೆದ್ದಿದ್ದಾರೆ. ಆರ್‌ವಿ ದೇಶಪಾಂಡೆ ಆರ್ಥಿಕವಾಗಿಯೂ ಬಲಿಷ್ಠರಾಗಿದ್ದಾರೆ. ಇವರು ಜಿಲ್ಲೆಯಲ್ಲಿ ತಮ್ಮದೆ ಆದ ಮತ ಬ್ಯಾಂಕ್ ಹೊಂದಿದ್ದಾರೆ. ಈಗಿನ ಬಿಜೆಪಿ ಸಂಸದ ಅನಂತ ಕುಮಾರ ಹೆಗಡೆ ಅವರಿಗೆ ಟಕ್ಕರ್ ಕೊಡಬಹುದಾದ ನಾಯಕರಾಗಿದ್ದಾರೆ. ಹೀಗಾಗಿ ಆರ್‌ವಿ ದೇಶಪಾಂಡೆ ಅವರನ್ನು ಕಣಕ್ಕಿಳಿಸಲು ಕಾಂಗ್ರೆಸ್ ಚಿಂತಿಸಿದೆ. ಒಂದು ವೇಳೆ ಆರ್‌ವಿ ದೇಶಪಾಂಡೆ ಗೆಲುವು ಸಾಧಿಸಿದರೆ, ಹಲಿಯಾಳ ವಿಧಾನಸಭಾ ಕ್ಷೇತ್ರ ಖಾಲಿಯಾಗಲಿದ್ದು, ಪುತ್ರ ಪ್ರಶಾಂತ ದೇಶಾಂಡೆಯನ್ನು ಕಣಕ್ಕಿಳಿಸುವ ಸಾಧ್ಯತೆ ಇದೆ.

# ಮಂಡ್ಯದಲ್ಲಿ ಜೆಡಿಎಸ್‌ಗೆ ನಾಯಕರಿಲ್ಲಾ?

**ಮಂಡ್ಯ:** ಈ ಬಾರಿ ಮಂಡ್ಯ ಲೋಕಸಭಾ ಕ್ಷೇತ್ರದಿಂದ ನಿಖಿಲ್ ಕುಮಾರಸ್ವಾಮಿ ಸ್ಪರ್ಧೆಯ ಕುರಿತು ಕಾಂಗ್ರೆಸ್ ಶಾಸಕ ಕದಲೂರು ಉದಯ್ ಪ್ರತಿಕ್ರಿಯಿಸಿದ್ದಾರೆ. ನಮ್ಮ ಜಿಲ್ಲೆಯಲ್ಲಿ ಯಾರು ಗಂಡಸರಿಲ್ವಾ ಎಂದು ಪ್ರಶ್ನೆ ಮಾಡಿರುವ ಶಾಸಕರು, ಲೀಡರ್ ಮಕ್ಕಳೇ ಇಲ್ಲಿ ಚುನಾವಣೆಗೆ ನಿಲ್ಲಬೇಕಾ? ಮಂಡ್ಯ, ಮದ್ದೂರಿನಲ್ಲಿ ಗಂಡಸರು ಇಲ್ವಾ? ಬೇರೆ ಜಿಲ್ಲೆಯವರು ಯಾಕೆ ಬರಬೇಕು? ಜಿಲ್ಲೆಯ ಜೆಡಿಎಸ್‌ನಲ್ಲಿ ಸಮರ್ಥರಿಲ್ವಾ ಎಂದು ಪ್ರಶ್ನೆ ಮಾಡಿದರು. ಅವರ ಕುಟುಂಬದವರೇ ಜಿಲ್ಲೆಗೆ ಬರಬೇಕಾ? ಯಾರು ಬಂದರೂ ಎದುರಿಸಲು ನಮ್ಮ ಕಾಂಗ್ರೆಸ್‌ನಲ್ಲಿ ಸಿದ್ಧರಿದ್ದೇವೆ ಎಂದು ದಳಪತಿಗಳ ವಿರುದ್ಧ ಕಿಡಿಕಾರಿದರು.

ಜಿಲ್ಲೆಯಲ್ಲಿ ಬಹಳಷ್ಟು ಜನರು ಕಾಂಗ್ರೆಸ್ ಸೇರಲು ಸಿದ್ಧರಿದ್ದಾರೆ. ಪಕ್ಷದ ಸಿದ್ಧಾಂತಗಳನ್ನು ಒಪ್ಪಿ ಕಾಂಗ್ರೆಸ್‌ಗೆ ಬರುತ್ತಿದ್ದಾರೆ. ಚುನಾವಣೆ ಸಮಯದಲ್ಲಿ ಬಂದ್ರೆ ಜನರು ಒಪ್ಪಲ್ಲ. ಮಂಡ್ಯ ಜಿಲ್ಲೆಯಲ್ಲಿ ಜೆಡಿಎಸ್‌ಗೆ ನಾಯಕರು ಮತ್ತು ಕಾರ್ಯಕರ್ತರು ಯಾರೂ ಇಲ್ಲವೇ ಎಂದು ಪ್ರಶ್ನೆ ಕೇಳಿದರು.

ಐದು ವರ್ಷದಿಂದ ಎಲ್ಲಿ ಹೋಗಿದ್ರು? ಜನರ ಸೇವೆ ಮಾಡೋರು ಕ್ಷೇತ್ರದಲ್ಲಿ ನಿರಂತರವಾಗಿ ಇರಬೇಕು. ಐದು ವರ್ಷದಿಂದ ಎಲ್ಲಿ ಹೋಗಿದ್ರು? ಇದನ್ನ ಹೋಟೆಲ್ ಮಾಡಿಕೊಂಡಿದ್ದೀರಾ? ಕಳೆದ ಬಾರಿ ಚುನಾವಣೆಯಲ್ಲಿಯೇ ಅವರಿಗೆ ಕ್ಷೇತ್ರದ ಜನರು ಉತ್ತರ ನೀಡಿದ್ದಾರೆ. ಯಾರನ್ನೇ ತಂದು ಇಲ್ಲಿ ನಿಲ್ಲಿಸಿದ್ರೂ, ಜನರು ಕಾಂಗ್ರೆಸ್ ಅಭ್ಯರ್ಥಿಯ ಕೈ ಹಿಡಿಯಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.




### 2019ರಲ್ಲಿ ಸುಮಲತಾ ವಿರುದ ಸೋಲು

**ಕಳೆದ ಲೋಕಸಭಾ ಚುನಾವಣೆಯಲ್ಲಿ ಜೆಡಿಎಸ್ -ಕಾಂಗ್ರೆಸ್ ಮೈತ್ರಿ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ನಿಖಿಲ್ ಕುಮಾರಸ್ವಾಮಿ, ಪಕ್ಷೇತರ ಅಭ್ಯರ್ಥಿ ಸುಮಲತಾ ಅಂಬರೀಶ್ ವಿರುದ್ಧ ಸೋತಿದ್ದರು. ಈ ಬಾರಿ ರಾಜ್ಯದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಚುನಾವಣಾ ಪೂರ್ವ ಮೈತ್ರಿ ಮಾಡಿಕೊಂಡಿವೆ. ಇಂದು ಮಂಡ್ಯವನ್ನು ಬಿಜೆಪಿ ಜೆಡಿಎಸ್‌ಗೆ ಬಿಟ್ಟು ಕೊಟ್ರೆ ನಿಖಿಲ್ ಕುಮಾರಸ್ವಾಮಿ ಸ್ಪರ್ಧೆ ಖಚಿತ ಎಂದು ಹೇಳಲಾಗುತ್ತಿದೆ.**

### ನಿಖಿಲ್ ಪ್ರವಾಸ

**ಮಂಡ್ಯದಲ್ಲಿ ರಾಜಕೀಯ ಚಟುವಟಿಕೆ ಗರಿಗೆದರಿದೆ. ಮತ್ತೆ ಮಂಡ್ಯ ಅಖಾಡಕ್ಕೆ ನಿಖಿಲ್ ಎಂಟ್ರಿ ಕೊಡಲಿದ್ದು, ಮೈತ್ರಿ ಅಭ್ಯರ್ಥಿ ಆಗಿ ನಿಖಿಲ್ ಬಹುತೇಕ ಫಿಕ್ಸ್ ಎನ್ನಲಾಗುತ್ತಿದೆ. ಸೋತಲ್ಲೆ ಗೆಲ್ಲಲು ರಣತಂತ್ರ ರೂಪಿಸಿದ್ದು, ಮಂಡ್ಯ ಜೆಡಿಎಸ್ ಪಾಳಯದಲ್ಲಿ ಸಿದ್ಧತೆ ನಡೆಯುತ್ತಿವೆ. ಈ ತಿಂಗಳ ಅಂತ್ಯಕ್ಕೆ ಜಿಲ್ಲೆಯಾದ್ಯಂತ ನಿಖಿಲ್ ಪ್ರವಾಸ ಕೈಗೊಳ್ಳಲಿದ್ದಾರೆ.**

# ಮಂಡಿಬೆಲೆ ಗ್ರಾಮದ ಡೇರಿಯ ಚುನಾವಣೆ



**ವಿಜಯಪುರ:** ಹೋಬಳಿಯ ಮಂಡಿಬೆಲೆ ಗ್ರಾಮದ ಡೇರಿಯ 2024 ನೇ ಸಾಲಿನಿಂದ ಮುಂದಿನ 5 ವರ್ಷಗಳ ಅವಧಿಯ ಆಡಳಿತ ಮಂಡಳಿ ನಿರ್ದೇಶಕರ 12 ಸ್ಥಾನಗಳಿಗೆ ಗುರುವಾರ ಚುನಾವಣೆ ನಡೆಯಿತು. ಚುನಾಯಿತರಾದ ನೂತನ ನಿರ್ದೇಶಕರನ್ನು ಚುನಾವಣಾಧಿಕಾರಿ ಎನ್.ಎಸ್.ಮುರಳೀಕೃಷ್ಣ ಘೋಷಣೆ ಮಾಡಿದರು. ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಮಂಡಿಬೆಲೆ ರಾಜಣ್ಣ ಇದ್ದರು.

ಚುನಾಯಿತರಾದವರು: ಸಾಮಾನ್ಯ ಕ್ಷೇತ್ರದಿಂದ ಕೇಶವಮೂರ್ತಿ, ವಸಂತಕುಮಾರ್.ವಿ, ಗೋಪಾಲ.ಕೆ, ನಾರಾಯಣರೆಡ್ಡಿ.ಆರ್, ಮುನೇಗೌಡ.ಎಂ, ನಾಗೇಶ್.ಸಿ. ಮಹಿಳಾ ಮೀಸಲು ಕ್ಷೇತ್ರದಿಂದ ಸರಿತಾ.ಎಂ.ವಿ, ಗೌರಮ್ಮ, ಪರಿಶಿಷ್ಟ ಜಾತಿ ಕ್ಷೇತ್ರದಿಂದ ನವೀನ್ ಕುಮಾರ್.ಎನ್, ಪರಿಶಿಷ್ಟ ಪಂಗಡ ಕ್ಷೇತ್ರದಿಂದ ಮುನಿರಾಜು.ಸಿ, ಹಿಂದುಳಿದ ವರ್ಗ 'ಎ' ಮೀಸಲು ಕ್ಷೇತ್ರದಿಂದ ಸರಸ್ವತಮ್ಮ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಹಿಂದುಳಿದ ವರ್ಗ 'ಬಿ' ಮೀಸಲು ಕ್ಷೇತ್ರದಿಂದ ಶಿವಕುಮಾರ್.ಕೆ. ಅವರು ಚುನಾಯಿತರಾಗಿದ್ದಾರೆ. ಒಂದು ಸ್ಥಾನ ಸರ್ಕಾರಿ ನಾಮಿನಿ ಸದಸ್ಯರಿರುತ್ತಾರೆ ಎಂದು ಘೋಷಣೆ ಮಾಡಿದರು.

ನೂತನ ನಿರ್ದೇಶಕರನ್ನು, ಗ್ರಾಮದ ಮುಖಂಡರು, ಯುವಕರು, ಹೂವಿನ ಮಾಲೆಗಳನ್ನು ಹಾಕಿ, ಪಟಾಕಿಗಳು ಸಿಡಿಸಿ, ಸಿಹಿ ಹಂಚಿಕೆ ಮಾಡಿ, ಅಭಿನಂದಿಸಿದರು.

ತಾಲ್ಲೂಕು ಕೃಷಿಕ ಸಮಾಜದ ಉಪಾಧ್ಯಕ್ಷ ಎಂ.ದೇವರಾಜಪ್ಪ ಮಾತನಾಡಿ, ಸಹಕಾರಿ ಸಂಘವನ್ನು ಅಭಿವೃದ್ಧಿಯತ್ತ ಕೊಂಡೊಯ್ಯುವುದರ ಜೊತೆಗೆ, ಹಾಲು ಉತ್ಪಾದನೆ ಮಾಡುವ ಉತ್ಪಾದಕರ ಹಿತ ಕಾಯುವುದು ಬಹಳ ಪ್ರಾಮುಖ್ಯವಾಗಿದೆ. ಗ್ರಾಮ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಆರ್.ಕೇಶವ ಅವರ ನೇತೃತ್ವದಲ್ಲಿ 8ಸ್ಥಾನಗಳನ್ನು ಪಡೆದಿರುವ ನಾವು, ಡೇರಿಯನ್ನು ಅಭಿವೃದ್ಧಿಯತ್ತಕೊಂಡೊಯ್ಯುವ ಕಡೆಗೆ ಚಿಂತನೆ ನಡೆಸುತ್ತೇವೆ. ಪಕ್ಷಾತೀತವಾಗಿ ತಾರತಮ್ಯವಿಲ್ಲದೆ ಸಂಘವನ್ನು ಲಾಭದಾಯಕವಾಗಿ ಮುನ್ನಡೆಸಲು ಶ್ರಮಿಸಬೇಕಾಗಿದೆ ಎಂದರು. ಗ್ರಾಮ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಆರ್.ಕೇಶವ, ತಾಲ್ಲೂಕು ಕೃಷಿಕ ಸಮಾಜದ ಉಪಾಧ್ಯಕ್ಷ ಎಂ.ದೇವರಾಜಪ್ಪ, ಗಡ್ಡದನಾಯಕನಹಳ್ಳಿ ರಾಮಚಂದ್ರಪ್ಪ, ವೆಂಕಟೇಶ್, ಬಿ.ನಾರಾಯಣಸ್ವಾಮಿ, ಕೆಂಚಣ್ಣ, ಎಂ.ಮಂಜುನಾಥ್, ಸುಬ್ರಮಣಿ, ರಘು, ಮಹೇಶ್, ಗಿರಿರಾಜ್, ನಾರಾಯಣಪ್ಪ, ತತ್ತಮಮಂಗಲ ನಾಗರಾಜ್, ಕೆ.ಎಂ.ಮುನಿರಾಜು, ಅಂಬರೀಶ್, ಪ್ರಕಾಶ್, ಮುನೇಗೌಡ, ಬಿ.ಮಂಜುನಾಥ್, ಎಂ.ವಿಜಯಕುಮಾರ್, ಹಾಲು ಉತ್ಪಾದಕ ಸಹಕಾರ ಸಂಘದ ಹಾಲು ಪರೀಕ್ಷಕರಾದ ಡಿ ರಾಮಕೃಷ್ಣಪ್ಪ, ಸಹಾಯಕರುಗಳಾದ ಎನ್ ರಾಜಣ್ಣ, ಕೆ,ಕೇಶವ ರವರುಗಳು ಉಪಸ್ಥಿತರಿದ್ದರು.

## ದ್ವಿತೀಯ ಪಿ.ಯು ವಿದ್ಯಾರ್ಥಿಗಳ ಅಂತರ ಕಾಲೇಜು ರಸಪ್ರಶ್ನೆ

**ಹುಳಿಯಾರು:** ಹುಳಿಯಾರು-ಕೆಂಕೆರೆ ಬಿ.ಎಂ.ಎಸ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಐ.ಕ್ಯೂ.ಎ.ಸಿ ವತಿಯಿಂದ ಗುರುವಾರ ದ್ವಿತೀಯ ಪಿಯು ವಿದ್ಯಾರ್ಥಿಗಳ ಅಂತರ ಕಾಲೇಜು ರಸಪ್ರಶ್ನೆ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಹುಳಿಯಾರು, ಬೋರನಕಣಿವೆ, ಹಂದನಕೆರೆ, ಶ್ರೀರಾಂಪುರ ಪಿ.ಯು ಕಾಲೇಜುಗಳ 147 ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ದ್ವಿತೀಯ ಪಿ.ಯು ಪಠ್ಯಕ್ರಮ ಹಾಗೂ ಸಾಮಾನ್ಯ ಜ್ಞಾನ ಮತ್ತು ಪ್ರಚಲಿತ ಘಟನೆಗಳನ್ನಾಧರಿಸಿದ 50 ಪ್ರಶ್ನೆಗಳಿದ್ದ ಪತ್ರಿಕೆಯನ್ನು ಉತ್ತರಿಸಿದ ವಿದ್ಯಾರ್ಥಿಗಳಿಗೆ, ಪರೀಕ್ಷೆಯ ನಂತರ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಬಹುಮಾನ ವಿತರಿಸಲಾಯಿತು.

ಬೋರಣಕಣಿವೆ ಸ.ಪ.ಪೂ ಕಾಲೇಜು ವಿದ್ಯಾರ್ಥಿ ಯಶ್ವಂತ್.ಆರ್ 38 ಅಂಕ ಪಡೆದು ಪ್ರಥಮ ಸ್ಥಾನ ಪಡೆದ ರೂ.2000 ಬಹುಮಾನ ಗಳಿಸಿದರು. ಸ.ಪ.ಪೂ ಕಾಲೇಜು, ಕೆಂಕೆರೆ ಯ ವಿದ್ಯಾರ್ಥಿನಿ ಮಹಾಲಕ್ಷ್ಮಿ ಎಲ್.ಹೆಚ್ ದ್ವಿತೀಯ ಸ್ಥಾನ ಗಳಿಸುವ ಮೂಲಕ ರೂ.1500 ರೂ ಬಹುಮಾನ ಪಡೆದರು. ಸ.ಪ.ಪೂ ಕಾಲೇಜು ಶ್ರೀರಾಂಪುರದ ವಿದ್ಯಾರ್ಥಿ ರಂಗನಾಥ ಜಿ.ಎನ್ ತೃತೀಯ ಸ್ಥಾನ ಗಳಿಸಿ ರೂ 750 ಬಹುಮಾನ ಗಳಿಸಿದರು. ಉಳಿದಂತೆ ನಂತರದ ಹತ್ತು ಸ್ಥಾನ ಗಳಿಸಿದ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ತಲಾ ರೂ 200 ಬಹುಮಾನ ಪಡೆದರು. ರಸಪ್ರಶ್ನೆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಎಲ್ಲಾ ವಿದ್ಯಾರ್ಥಿಗಳಿಗೂ ಪ್ರಮಾಣ ಪತ್ರವನ್ನು ವಿತರಿಸಲಾಯಿತು.

ಹುಳಿಯಾರು-ಕೆಂಕೆರೆ ಸ.ಪ.ಪೂ. ಕಾಲೇಜು ಪ್ರಾಂಶುಪಾಲರಾದ ಕೃಷ್ಣಮೂರ್ತಿ, ಹುಳಿಯಾರು ಸ.ಬಾ.ಪ.ಪೂ ಕಾಲೇಜು ಪ್ರಾಂಶುಪಾಲರಾದ ಪರಮೇಶ್ವರಪ್ಪ.ಸಿ, ಬೋರನಕಣಿವೆ ಸ.ಪ.ಪೂ. ಕಾಲೇಜು ಪ್ರಾಂಶುಪಾಲರಾದ ರೇವಣ್ಣ ವಿ.ಹೆಚ್, ಹಂದನಕೆರೆ ಸ.ಪ.ಪೂ. ಕಾಲೇಜು ಪ್ರಾಂಶುಪಾಲರಾದ ಶಿವಣ್ಣ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.





# ಅದ್ದೂರಿಯಾಗಿ ಜರುಗಿದ ಸುತ್ತೂರು ರಥೋತ್ಸವ

**ಮೈಸೂರು:** ಮೈಸೂರು ಜಿಲ್ಲೆ ನಂಜನಗೂಡು ತಾಲ್ಲೂಕಿನ ಸುತ್ತೂರು ಜಾತ್ರಾ ಮಹೋತ್ಸವದ ಮೂರನೇ ದಿನದ ಕಾರ್ಯಕ್ರಮದಲ್ಲಿ ಶಿವರಾತ್ರೀಶ್ವರ ಶಿವಯೋಗಿಗಳ ಅವರ ರಥೋತ್ಸವ ಅದ್ದೂರಿಯಾಗಿ ಜರುಗಿತು. ಸುತ್ತೂರು ರಥೋತ್ಸವಕ್ಕೆ 11 ಗಂಟೆಗೆ ಸರಿಯಾಗಿ ಮಾಜಿ ಸಿ ಎಂ ಬಿ.ಎಸ್ ಯಡಿಯೂರಪ್ಪ ಚಾಲನೆ ಕೊಟ್ಟರು. ರಥೋತ್ಸವದಲ್ಲಿ ಸಹಸ್ರಾರು ಭಕ್ತರು ಭಾಗಿಯಾಗಿ ಜೈಕಾರದೊಂದಿಗೆ ರಥವನ್ನೆಳೆದರು.

ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ರಥೋತ್ಸವಕ್ಕೆ ಚಾಲನೆ ಕೊಟ್ಟ ಬಳಿಕ ಧಾರ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ದೇವಾಲಯ ಬಲಭಾಗದ ವೇದಿಕೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾಜಿ ಸಿಎಂ ಬಿ.ಎಸ್ .ಯಡಿಯೂರಪ್ಪ, ಸುತ್ತೂರು ಶ್ರೀಗಳು, ಮಾಜಿ ಸಚಿವರಾದ ಮುರುಗೇಶ್ ನಿರಾಣಿ, ಮಾಧುಸ್ವಾಮಿ, ಶಾಸಕ ಶ್ರೀವತ್ಸ, ಮಾಜಿ ಶಾಸಕ ಎಲ್ ನಾಗೇಂದ್ರ, ಸೇರಿದಂತೆ ಹಲವರು ಭಾಗಿಯಾಗಿದ್ದರು. ಕಾರ್ಯಕ್ರಮದಲ್ಲಿ ಜೈ ಶ್ರೀರಾಮ್ ಎಂದು ಭಾಷಣ ಆರಂಭಿಸಿದ ಬಿ.ಎಸ್.ಯಡಿಯೂರಪ್ಪ, ಪ್ರತಿವರ್ಷ ಹೊಸತನದೊಂದಿಗೆ ಜನಪ್ರಿಯತೆಯನ್ನು ಹೆಚ್ಚಿಸಿಕೊಂಡು ಬಂದಿರುವ ಸುತ್ತೂರು ಜಾತ್ರಾ ಮಹೋತ್ಸವದಲ್ಲಿ ಭಾಗಿಯಾಗಲು ನನಗೆ ಬಹಳ ಸಂತೋಷ ಆಗುತ್ತೆ. ಇದು ಕೇವಲ ಒಂದು ಧಾರ್ಮಿಕ ಉತ್ಸವ ಅಲ್ಲ. ಜನ ಸಾಮಾನ್ಯರಿಗೆ ಅನುಕೂಲವಾಗುವ ಎಲ್ಲಾ ವಿಚಾರಗಳನ್ನು ತಿಳಿದುಕೊಳ್ಳಬಹುದು.

ಸುತ್ತೂರು ಶ್ರೀಗಳು ದೇಶದ ಉದ್ದಗಲಕ್ಕೂ ಶಿಕ್ಷಣ ನೀಡುತ್ತಾ ಬಂದಿದ್ದಾರೆ. ಮಠ ಮಾನ್ಯಗಳು ಗ್ರಾಮೀಣ ಭಾಗದ ಜನರಿಗೆ ನೀಡುತ್ತಿರುವ ಶಿಕ್ಷಣ, ಅನ್ನ,ಆರೋಗ್ಯ ನೀಡುತ್ತ ಸರ್ಕಾರದ ಮೇಲಿನ ಜವಾಬ್ದಾರಿಯನ್ನ ಕಡಿಮೆ ಮಾಡುತ್ತಿವೆ. ನಾನು ಮುಖ್ಯಮಂತ್ರಿಯಾಗಿದ್ದಾಗ ಮಠ ಮಾನ್ಯಗಳಿಗೆ ಸಾಕಷ್ಟು ಅನುದಾನ ನೀಡಿದ್ದೆ. ಪ್ರಧಾನಿ ಮೋದಿ ಅವರು ಒಂದು ಮಹತ್ತರ ನಿರ್ಧಾರ ಮಾಡಿದ್ದಾರೆ. 1 ಕೆ.ಜಿ ಅಕ್ಕಿಗೆ 29 ರೂ ನಂತೆ ಜನ ಸಾಮಾನ್ಯರಿಗೆ ನೀಡಲು ಮುಂದಾಗಿದ್ದಾರೆ. ಇಂದು 1ಕೆಜಿ ಅಕ್ಕಿಗೆ 50 ರಿಂದ 60 ರೂ ಆಗಿದೆ. ಜನರಿಗೆ ಕಡಿಮೆ ಬೆಲೆಯಲ್ಲಿ ಭಾರತ್ ರೇಸ್ ಎಂಬ ಬ್ರಾಂಡ್ ಅಡಿ ನೀಡಲು ನಿರ್ಧಾರ ಮಾಡಿದ್ದಾರೆ ಇದು ಒಳ್ಳೆಯ ಯೋಜನೆ. ಈ ಮೂಲಕ ಪ್ರಧಾನಿ ಮೋದಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ಮಾಜಿ ಸಿ ಎಂ ಬಿಎಸ್ ಯಡಿಯೂರಪ್ಪ ತಿಳಿಸಿದರು.

# ಸಂಪೂರ್ಣ ಆರೋಗ್ಯಕ್ಕಾಗಿ ಸಕಾರಾತ್ಮಕ ಪರಿವರ್ತನೆ ಅವಶ್ಯ



**ಚಾಮರಾಜನಗರ:** ವರ್ತಮಾನದ ಮಹಿಳೆಯರು ಎಲ್ಲಾ ಕ್ಷೇತ್ರದಲ್ಲಿ ಪ್ರಗತಿಯನ್ನು ಸಾಧಿಸುತ್ತಿದ್ದು,ಅಷ್ಟೇ ಒತ್ತಡಕ್ಕೂ ಒಳಗಾಗುತ್ತಿದ್ದಾರೆ. ಅವರ ಸಂಪೂರ್ಣ ಆರೋಗ್ಯಕ್ಕಾಗಿ ಸಕಾರಾತ್ಮಕ ಪರಿವರ್ತನೆ ಅಷ್ಟೇ ಅವಶ್ಯಕ ಎಂದು ಸ್ವಾಮಿ ವಿವೇಕಾನಂದ ರಾಷ್ಟ್ರ ರಾಜ್ಯಸದ್ಭಾವನಾ ಪ್ರಶಸ್ತಿ ಪುರಸ್ಕೃತರಾದ ರಾಜಯೋಗಿನಿ ಬ್ರಹ್ಮಾಕುಮಾರಿ ದಾನೇಶ್ವರಿಜೀ ಅಭಿಪ್ರಾಯಪಟ್ಟರು.ಅವರು ಸುರಕ್ಷಾ ಮತ್ತುಸಮೃದ್ಧಿ ಫೌಂಡೇಷನ್ ಹಾಗೂ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ ಆರೋಗ್ಯ ಮತ್ತು ಕಾನೂನು ಮಾಹಿತಿ ಕಾರ್ಯಗಾರ, ಸುರಕ್ಷಾ ಮತ್ತು ಸಮೃದ್ಧಿ ಜೇನುತುಪ್ಪ ಉದ್ಘಾಟನಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು. ಮಹಿಳೆಯರೇ ವಿಶ್ವವನ್ನು ಕಲ್ಯಾಣ ಮಾಡುವಂತಹ ವರಾಗಿದ್ದಾರೆ. ಅದಕ್ಕಾಗಿಯೇ ಇಂದು ವಂದೇ ಮಾತರಂ ಗಾಯನವಿದೆಯೇ ಹೊರತು ವಂದೇ ಪಿತರಂ ಗಾಯನವಿಲ್ಲ ಎಂದರು. ಸಮೃದ್ಧ ಜೇನುತುಪ್ಪ ಘಟಕ ಸಮೃದ್ಧವಾಗಿ ಬೆಳೆಯಲಿ ಎಂದು ಆಶಿಸಿದರು. ಬಾಲನ್ಯಾಯ ಮಂಡಳಿಯ ಸದಸ್ಯರಾದ ಟಿಜೆ.ಸುರೇಶ್ ಮಾತನಾಡಿ ಮನುಷ್ಯ ಸಮಾಜಲ್ಲಿ ನೆಮ್ಮದಿ ಹಾಗೂ ಸ್ವಾಭಿಮಾನದಿಂದ ಜೀವಿಸಲು ಜ್ಞಾನದ ಜೊತೆಗೆ ಕನಿಷ್ಠ ಕಾನೂನುಗಳನ್ನು ಪಾಲನೆ ಮಾಡಬೇಕಿದೆ ಎಂದರು. ಜವಾಬ್ದಾರಿಯನ್ನು ಮರೆಯುತ್ತಿರುವ ಮಾನವರು ಕಾನೂನುಗಳು ಸಮಪಕರ್ವಾಗಿ ಪಾಲನೆ ಮಾಡದಿರುವುದರಿಂದ ಸಮಾಜದಲ್ಲಿ ಅಪರಾಧ, ಕಾನೂನು ವಿರೋಧಿ ಚಟುವಟಿಕೆಗಳು ಹೆಚ್ಚಾಗುತ್ತಿವೆ ಎಂದರು.. ಮಕ್ಕಳಿಗೆ ಚಿಕ್ಕ ವಯಸ್ಸಿಗೇ ಮದುವೆ ಮಾಡುವುದು ಅಪರಾಧವಾಗಿದ್ದು ಇದಕ್ಕೆ ಶಿಕ್ಷೆ ಇದೆ. ಚಿಕ್ಕ ಮಕ್ಕಳ ಮೇಲೆ ಲೈಗಿಂಕ ದೌರ್ಜನ್ಯ ಮಾಡಿದರೆ ಗಲ್ಲು ಶಿಕ್ಷೆಗೆ ಗುರಿಯಾಗಬೇಕಾಗುತ್ತದೆ.ಮಕ್ಕಳು ದಾರಿ ತಪ್ಪಲು ಒಂದು ವಿಧದಲ್ಲಿ ಪೋಷಕರು ಸಹ ಕಾರಣ ಎಂದರು .

ಬ್ಯಾಂಕ್ ಆಫ್ ಇಂಡಿಯಾದ ಮುಖ್ಯ ಹಿರಿಯ ವ್ಯವಸ್ಥಾಪಕರಾದ ಶ್ರೀನಿವಾಸ ಮಾತನಾಡಿ ಸ್ವಸಹಾಯ ಸಂಘಗಳ ಉಳಿತಾಯದ ಜೊತೆಗೆ ಆದಾಯ ಬರುವ ಚಟುವಟಿಕೆಗಳನ್ನು ಮಾಡಬೇಕು. ಮುಖ್ಯವಾಗಿ ಮಾರುಕಟ್ಟೆಯನ್ನು ಪ್ರವೇಶಿಸಲು ಬೇಕಾದ ತಯಾರಿ ಮಾಡಿಕೊಂಡು ತಾವು ವಸ್ತುಗಳನ್ನು ತಯಾರು ಮಾಡಬೇಕು. ಇಲ್ಲದಿದ್ದರೆ ನಷ್ಟವಾಗುವಾಗುತ್ತದೆ ಎಂದರು. ಮಹಿಳೆಯರು ಆರ್ಥಿಕವಾಗಿ ಮುಂದೆ ಬರುವ ಜೊತೆಗೆ ಸಾಮಾಜಿಕ ಸಹ ಮುಂದೆ ಬರಬೇಕು ಎಂದರು.

# ಅಂಕಕ್ಕೆ ಸೀಮಿತ: ಸಂಸ್ಕೃತಿ, ಮೌಲ್ಯ ಕುಸಿತ: ಶಾಸಕ ತನ್ವೀರ್ ಸೇಠ್

**ಮೈಸೂರು:** ನಾವಿಂದು ಹೆಚ್ಚಿನ ಅಂಕ ಗಳಿಕೆಯ ಶಿಕ್ಷಣಕ್ಕೆ ಮಾತ್ರವೇ ಸೀಮಿತವಾಗಿರುವುದರಿಂದ ನಮ್ಮ ಸಂಸ್ಕೃತಿ ಮತ್ತು ಮೌಲ್ಯ ಕುಸಿಯುತ್ತಿದೆ ಎಂದು ಶಾಸಕ ತನ್ವೀರ್ ಸೇಠ್ ವಿಷಾದ ವ್ಯಕ್ತಪಡಿಸಿದರು.

ಸುತ್ತೂರು ಜಾತ್ರಾ ಮಹೋತ್ಸವದ 3ನೇ ದಿನವಾದ ಗುರುವಾರ ಆಯೋಜಿಸಿದ್ದ 53ನೇ ದನಗಳ ಜಾತ್ರೆ, ಚಿತ್ರಕಲೆ ಹಾಗೂ ಗಾಳಿಪಟ ಸ್ಪರ್ಧೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪುಸ್ತಕದಲ್ಲಿರುವುದಷ್ಟೇ ಜೀವನ ಎಂದು ಭಾವಿಸಿದರೆ ಸಮಾಜಕ್ಕೆ ಲಾಭಕ್ಕಿಂತ ಹಾನಿಯೇ ಜಾಸ್ತಿಯಾಗುತ್ತದೆ. ನಮ್ಮ ಸಂಸ್ಕೃತಿಯನ್ನು ಬಿಡಬಾರದು. ಶಿಕ್ಷಕರು ಮಕ್ಕಳಿಗೆ ಸಾಂಸ್ಕೃತಿಕ ಬದುಕನ್ನು ಕಲಿಸಿಕೊಡಬೇಕು. ನಗರ ಪ್ರದೇಶದವರು ಇಂತಹ ಜಾತ್ರೆಗಳಲ್ಲಿ ಪಾಲ್ಗೊಳ್ಳುವುದರಿಂದ ಪರಂಪರೆ ತಿಳಿದುಕೊಳ್ಳಬಹುದಾಗಿದೆ ಎಂದು ಹೇಳಿದರು.

ಸುತ್ತೂರು ಮಠದೊಂದಿಗೆ ನಮ್ಮ ಕುಟುಂಬದ ನಂಟು ಹಿಂದಿನಿಂದಲೂ ಇದೆ. ನಮ್ಮ ಮುತ್ತಾತ ಕುದುರೆಸವಾರಿ ಮಾಡಿಕೊಂಡು ಕ್ಷೇತ್ರಕ್ಕೆ ಬರುತ್ತಿದ್ದರು. ಜನಪ್ರತಿನಿಧಿ ಎನ್ನುವುದಕ್ಕಿಂತಲೂ ಮಿಗಿಲಾಗಿ ಕ್ಷೇತ್ರದ ಮಗನಾಗಿ ಎಲ್ಲ ಕಾರ್ಯಕ್ರಮಗಳಲ್ಲೂ ಭಾಗವಹಿಸುತ್ತೇನೆ ಎಂದು ತಿಳಿಸಿದರು.

ಶ್ರೀಗಳ ಕೊಡುಗೆ: ಶಾಸಕ ಎ.ಆರ್. ಕೃಷ್ಣಮೂರ್ತಿ ಮಾತನಾಡಿ, ಈ ಭಾಗದಲ್ಲಿ ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ ಸುತ್ತೂರು ಶ್ರೀಗಳೇ ಕಾರಣ. ಇದರಿಂದ ನಮ್ಮ ಭಾಗದ ರೈತರಿಗೆ ಸಾಕಷ್ಟು ಅನುಕೂಲವಾಗಿದೆ. ರೈತರು ಮಕ್ಕಳು ಕೂಡ ಶಿಕ್ಷಣ ಪಡೆದು ಸ್ವಾವಲಂಬಿ ಜೀವನ ಕಂಡುಕೊಳ್ಳಲು ಶ್ರೀಮಠದ ಕೊಡುಗೆ ಅಪಾರವಾಗಿದೆ ಎಂದು ಶ್ಲಾಘಿಸಿದರು.

ನಾನು ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದಲ್ಲಿ ಒಂದು ಮತದ ಅಂತರದಿಂದ ಸೋತಾಗ, ಸುತ್ತೂರು ಶ್ರೀಗಳು ಮಠಕ್ಕೆ ಕರೆಸಿಕೊಂಡು ಧೈರ್ಯ ತುಂಬಿದವರು. ಅವರ ಆಶೀರ್ವಾದದಿಂದಾಗಿ 3ನೇ ಬಾರಿಗೆ ಶಾಸಕನಾಗಿದ್ದೇನೆ ಎಂದು ಸ್ಮರಿಸಿದರು.



### ವರುಣ ಬದಲಿಗೆ ಸುತ್ತೂರು ಆಗಬೇಕಿತ್ತು?

ಸುತ್ತೂರು ಶ್ರೀಮಠವು ವರುಣ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುತ್ತದೆ. ಆದ್ದರಿಂದ ವರುಣ ಬದಲಿಗೆ ಸುತ್ತೂರು ವಿಧಾನಸಭಾ ಕ್ಷೇತ್ರ ಎಂದಾಗಬೇಕಿತ್ತು. ಆಗ, ಇನ್ನೂ ಹೆಚ್ಚಿನ ಅಭಿವೃದ್ಧಿಗೆ ಅವಕಾಶ ಸಿಗುತ್ತಿತ್ತು ಎಂದು ಕೃಷ್ಣಮೂರ್ತಿ ಅಭಿಪ್ರಾಯ ವ್ಯಕ್ತಪಡಿಸಿದರು.

ನಿವೃತ್ತ ಜಿಲ್ಲಾಧಿಕಾರಿ ಜಿ.ಎನ್.ಶಿವಮೂರ್ತಿ ಮಾತನಾಡಿ, ಪ್ರಸ್ತುತ ಯುವಜನರು ದಿಕ್ಕೆಟ್ಟ ಪರಿಸ್ಥಿತಿಯಲ್ಲಿದ್ದಾರೆ. ಈ ಸಂದರ್ಭದಲ್ಲಿ ಅವರಿಗೆ ಜಾತ್ರೆಗಳ ಮೂಲಕ ಮೌಲ್ಯವನ್ನು ಪರಿಚಯಿಸಬೇಕಾಗಿದೆ. ನಾವು ಏನನ್ನು ಕಳೆದುಕೊಂಡಿದ್ದೇವೆ ಅಥವಾ ಪಡೆದುಕೊಂಡಿದ್ದೇವೆ ಎಂಬುದನ್ನು ಜಾತ್ರೆ ತಿಳಿಸಿಕೊಡುತ್ತದೆ ಎಂದರು.

ಯುವಜನರಿಗೆ ಪರಿಚಯಿಸಬೇಕು: ಕರ್ನಾಟಕ ಮಾಹಿತಿ ಆಯೋಗದ ಆಯುಕ್ತ ಎಸ್.ಬಿ. ಬೊಮ್ಮನಹಳ್ಳಿ ಮಾತನಾಡಿ, ಜಾತ್ರೆಗಳು ಪರಂಪರೆ, ಸಂಸ್ಕೃತಿ ಹಾಗೂ ಸಂಸ್ಕಾರದ ಅನುಭವ ನೀಡುತ್ತವೆ. ಆದ್ದರಿಂದ ಯುವಜನರಿಗೆ ಇಂತಹ ಕಾರ್ಯಕ್ರಮಗಳನ್ನು ಪರಿಚಯಿಸಬೇಕು ಎಂದು ಹೇಳಿದರು.

ಚಿತ್ರಕಲಾ ಸ್ಪರ್ಧೆಯನ್ನು ಕಾವ್ಯ?ಕುಂಚದ ಮೂಲಕ ಉದ್ಘಾಟಿಸಲಾಯಿತು. ವಿದ್ಯಾರ್ಥಿನಿ ಪ್ರತೀಕ್ಷಾ ಎಸ್.ಜೆ. ಚಿತ್ರ ಬಿಡಿಸಿದರೆ, ಸುತ್ತೂರು ಶಾಲೆಯ ಮಕ್ಕಳು ವಚನ ಗಾಯನ ಪ್ರಸ್ತುತಪಡಿಸಿದರು. ಇದೇ ವೇಳೆ ?ಆಯುರ್ವೇದ ಕೈಪಿಡಿ? ಬಿಡುಗಡೆ ಮಾಡಲಾಯಿತು.

ಗಾಳಿಪಟ ಸ್ಪರ್ಧೆಯಲ್ಲಿ ಶಿವರಾತ್ರೀಶ್ವರ ಶಿವಯೋಗಿ, ವಿವಿಧ ಪಕ್ಷಿಗಳು, ಅಯೋಧ್ಯೆಯ ಶ್ರೀರಾಮ ಮಂದಿರ ಬಿಂಬಿಸುವ ಪಟಗಳು ಗಮನಸೆಳೆದವು.

ದರ್ಶನ್ ಬಾರದಿದ್ದಕ್ಕೆ ಅಭಿಮಾನಿಗಳ ನಿರಾಸೆ

ಗುರುವಾರದ ಕಾರ್ಯಕ್ರಮದಲ್ಲಿ ಚಲನಚಿತ್ರ ನಟ ದರ್ಶನ್ ತೂಗುದೀಪ ಪಾಲ್ಗೊಳ್ಳಲಿದ್ದಾರೆ ಎಂದು ಆಹ್ವಾನ ಪತ್ರಿಕೆಯಲ್ಲಿ ಮುದ್ರಿಸಲಾಗಿತ್ತು. ಆದರೆ, ಅವರು ಫೆ.10ರಂದು ಬರಲಿದ್ದಾರೆ ಎಂದು ಸಂಘಟಕರು ಪ್ರಕಟಿಸುತ್ತಿದ್ದಂತೆಯೇ ಬಹುತೇಕರು ಅದರಲ್ಲೂ ಯುವಕರು ಯುವತಿಯರು ನಿರಾಸೆಯಿಂದ ಕಾರ್ಯಕ್ರಮದಿಂದ ಎದ್ದು ಹೋದರು. ಇದಕ್ಕೂ ಮುನ್ನ, ದರ್ಶನ್ ಆಗಮನದ ನಿರೀಕ್ಷೆಯಲ್ಲಿದ್ದ ಅಭಿಮಾನಿಗಳು ಬಾಸ್ ಬಾಸ್ ಡಿ ಬಾಸ್ ಎಂದು ಘೋಷಣೆ ಕೂಗುತ್ತಾ ಕಾಯುತ್ತಿದ್ದರು.

# ಪ್ರೇರಣ ವಿದ್ಯಾಸಂಸ್ಥೆಯಲ್ಲಿ ಶಾಲಾ ವಾರ್ಷಿಕೋತ್ಸವ

**ಚಾಮರಾಜನಗರ:** ಮನೋರಂಜನೆಗಳಿಂದ ಮಕ್ಕಳ ಮನಸನ್ನು ಗೆಲ್ಲಬಹುದು ಮಕ್ಕಳಿಗೆ ಪಠ್ಯ ಚಟುವಟಿಕೆಗಳ ಜೊತೆಯಲ್ಲಿ ಸಾಂಸ್ಕೃತಿಕವಾಗಿ ಬಿಂಬಿಸುವುದರಿಂದ ವಿದ್ಯಾರ್ಥಿಗಳಿಗೆ ಜ್ಞಾನವು ಹೆಚ್ಚುತ್ತದೆ ಎಂದು ಹರದನಹಳ್ಳಿ ಕೃಷಿ ವಿಜ್ಞಾನಕೇಂದ್ರದ ಸಸ್ಯರೋಗ ತಜ್ಞ ಡಾ.ಬಿ.ಪೊಂಪನಗೌಡ ತಿಳಿಸಿದರು.

ತಾಲ್ಲೂಕಿನ ಅಂಕನಶೆಟ್ಟಿ ಪುರದ ಸ್ಫೂರ್ತಿ ಟ್ರಸ್ಟ್ ಹಾಗೂ ಪ್ರೇರಣಾ ವಿದ್ಯಾಸಂಸ್ಥೆಯ ಶಾಲಾ ವಾರ್ಷಿಕ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಮಕ್ಕಳ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹ ನೀಡುವುದರಿಂದ ಅವರ ಜೀವನಕ್ಕೆ ದಾರಿ ಮಾಡಿಕೊಟ್ಟಂತೆಯಾಗುತ್ತದೆ. ಶಾಲೆಗಳಲ್ಲಿ ಚಿಕ್ಕ ಮಕ್ಕಳಿನಿಂದಲೇ ಕ್ರೀಡೆ, ಕಲಾ ಪ್ರದರ್ಶನ, ನೃತ್ಯ, ನಾಟಕಗಳಲ್ಲಿ ಭಾಗವಹಿಸುವ ಶಕ್ತಿಯನ್ನು ಶಿಕ್ಷಕರು ಮತ್ತು ಪೋಷಕರು ತುಂಬಬೇಕು. ಇದರಿಂದ ಮಕ್ಕಳ ಬುದ್ದಿ ಶಕ್ತಿ ಹೆಚ್ಚಾಗುತ್ತದೆ. ಜೊತೆಗೆ ವಿದ್ಯೆಯ ಕಡೆಯು ಗಮನ ಹೆಚ್ಚುವಂತೆ ಮಾಡಬೇಕು. ಮಕ್ಕಳು ಮೊಬೈಲ್ ಬಳಕೆಯಿಂದ ಶಿಕ್ಷಣ ಕುಂಟಿತವಗುತ್ತದೆ.



ಮುಂದೆ ಪಶ್ಚಾತಾಪ ಪಡೆಬೇಕಗುತ್ತದೆ. ಪುಸ್ತಕಗಳನ್ನು ಓದುವುದರಿಂದ ಜ್ಞಾನ ವೃದ್ಧಿಯಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರೇರಣ ವಿದ್ಯಾಸಂಸ್ಥೆಯ ಅಧ್ಯಕ್ಷ ಬಿ.ಪಿ.ಪ್ರಕಾಶ್ ಅಧ್ಯಕ್ಷತೆ ವಹಿಸಿ ಮಾತನಾಡಿ ನಮ್ಮ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಶಿಕ್ಷಣದ ಜೊತೆಗೆ ನಾಡಿನ ಸಂಸ್ಕೃತಿಯನ್ನು ಬಿಂಬಿಸುವ ಶಿಕ್ಷಣವನ್ನು ನೀಡಲಾಗುತ್ತಿದೆ. ಈ ಬಾರಿ ನಮ್ಮ ಸಾಲೆಯ ವಿದ್ಯಾರ್ಥಿಗಳು ಹೆಚ್ಚು ಅಂಕ ಪಡೆದು ಶಾಲೆಗೆ ಕೀರ್ತಿತಂದಿದ್ದಾರೆ. ಪ್ರತಿವರ್ಷದಂತೆ ಈಬಾರಿ ವಿದ್ಯಾರ್ಥಿಗಳನ್ನು ಗೌರವಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಎಂ.ಶೈಲಕುಮಾರ್ ಮಾತನಾಡಿ ವಿದ್ಯಾರ್ಥಿಗಳಿಗೆ ಅಂಗ್ಲ ಭಾಷೆಯ ಜೊತೆಯಲ್ಲಿ ಹೆಚ್ಚು ಕನ್ನಡ ಭಾಷೆಗೆ ಒತ್ತು ನೀಡಬೇಕು, ನಮ್ಮ ನಾಡು,ನುಡಿ, ಜಲದ ಬಗ್ಗೆ ವಿದ್ಯಾರ್ಥಿಗಳಲ್ಲಿ ಜ್ಞಾನ ಬೆಳಯಬೇಕು.ಎಂದು ಹೇಳಿದರು.

# ಉಷಾ ಕಿರಣ್ ಕಣ್ಣಿನ ಆಸ್ಪತ್ರೆಗೆ ಪ್ರಶಸ್ತಿ

**ಮೈಸೂರು:** ನಗರದಪ್ರಖ್ಯಾತಕಣ್ಣಿನಶಸ್ತ್ರಚಿಕಿತ್ಸಕಡಾ. ಕೆ. ವಿ. ರವಿಶಂಕರ್ ನೇತೃತ್ವದಉಷಾ ಕಿರಣ್ ಕಣ್ಣಿನ ಆಸ್ಪತ್ರೆ ಭಾರತೀಯ ಮೂಲದ ವೈದ್ಯರ ಕೊಡ ಮಾಡುವ ಪ್ರತಿಷ್ಠಿತ ಡಾ. ಪ್ರತಾಪ್ ಸಿ. ರೆಡ್ಡಿ ದತ್ತಿ ಪ್ರಶಸ್ತಿಗೆ ಆಯ್ಕೆಯಾಗಿದೆ. ಆಸ್ಪತ್ರೆಯ ಸಂಸ್ಥಾಪಕರಾದ ಡಾ. ಕೆ. ವಿ. ರವಿಶಂಕರ್ ಮತ್ತು ಡಾ. ಉಮಾ ರವಿಶಂಕರ್ ದಂಪತಿ ಅತ್ಯಾಧುನಿಕ ಕಣ್ಣಿನ ಆರೈಕೆ ಮತ್ತು ಹಣಕಾಸಿನ ಅಗತ್ಯವಿರುವ ರೋಗಿಗಳಿಗೆ, ವಿಶೇಷವಾಗಿ ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಹಿಂದುಳಿದ ವರ್ಗದ ಮಕ್ಕಳಿಗೆ ಉಚಿತ- ರಿಯಾಯತಿ ದರದಲ್ಲಿ ಒದಗಿಸುತ್ತಿರುವ ಗುಣಮಟ್ಟದ ಕಣ್ಣಿನ ಶಸ್ತ್ರಚಿಕಿತ್ಸೆ ಸೇವೆ, ಉಚಿತವಾಗಿ ಲಕ್ಷಾಂತರ ಮಕ್ಕಳ ಕಣ್ಣಿನ ಪರೀಕ್ಷೆ, ವಿದೇಶಗಳಲ್ಲೂ ಉಚಿತ ಕಣ್ಣಿನ ಶಸ್ತ್ರ ಚಿಕಿತ್ಸೆ ಹಾಗು ಸಾವಿರಾರು ಉಚಿತ ಆರೋಗ್ಯ ಶಿಬಿರಗಳನ್ನು ಸಂಘಟಿಸಿ, ಕಣ್ಣಿನ ಆರೋಗ್ಯದ ಬಗ್ಗೆ ಅವರು ಮೂಡಿಸುತ್ತಿರುವ ಜನಜಾಗೃತಿ ಹಾಗು ಅವರ ಸಮಾಜ ಸೇವೆಯನ್ನು ಪರಿಗಣಿಸಿ, ಈ ಪ್ರಶಸ್ತಿಗೆ ಉಷಾ ಕಿರಣ್ ಕಣ್ಣಿನ ಆಸ್ಪತ್ರೆಯನ್ನು ಆಯ್ಕೆಮಾಡಲಾಗಿದೆ.ಇದೇ ಮಾರ್ಚ್ 16ರಂದು ಸಂಜೆ ಉತ್ತರ ಪ್ರದೇಶದ ಲಕ್ನೋದಲ್ಲಿ ನಡೆಯಲಿರುವ ಜಿಎಪಿಐಓನ 14 ನೇ ವಾರ್ಷಿಕ ಸಮ್ಮೇಳನದಲ್ಲಿ ಈ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುವುದು. ಈ ಪ್ರಶಸ್ತಿಯು ರೂ. 1,00,000/- ನಗದು ಹಾಗೂ ಪ್ರಶಸ್ತಿ ಪತ್ರ ಹೊಂದಿದೆ.ಡಾ. ಕೆ. ವಿ. ರವಿಶಂಕರ್ ಮತ್ತು ಡಾ. ಉಮಾ ರವಿಶಂಕರ್ ದಂಪತಿ ಕಳೆದ ಮೂರು ದಶಕಗಳಿಂದ ತಪ್ಪಿಸಬಹುದಾದ ಕುರುಡುತನವನ್ನು ನಿರ್ಮೂಲನೆ ಮಾಡುವ ಗುರಿಯೊಂದಿಗೆ ಸಮಾಜಕ್ಕೆ ಸೇವೆ ಸಲ್ಲಿಸುತ್ತಿದ್ದಾರೆ. ಬ್ರಿಟನ್ ನಲ್ಲಿ ಎಫ್ಆರ್ಸಿಎಸ್ ಪದವಿ ಬಳಿಕ ಈ ದಂಪತಿಗೆ ವಿದೇಶಗಳಲ್ಲಿ ಕೈತುಂಬಾ ಸಂಬಳ ತಂದು ಕೊಡಬಲ್ಲ ಉದ್ಯೋಗದ ಅವಕಾಶಗಳು ಬಂದರೂ, ಅವರು ಅದನ್ನು ತಿರಸ್ಕರಿಸಿ ತಾಯಿ ನಾಡಿನಲ್ಲಿ ಸೇವೆಗಾಗಿ ಭಾರತಕ್ಕೆ ಹಿಂತಿರುಗಿದರು.

# ವೇತನ ಕಡಿತ: ಅಂಗನವಾಡಿ ನೌಕರರ ಪ್ರತಿಭಟನೆ



**ಚಾಮರಾಜನಗರ:** ಕೇಂದ್ರ ಸರ್ಕಾರ ಬಜೆಟ್‌ನಲ್ಲಿ ಅಂಗನವಾಡಿ ನೌಕರರ ವೇತನ ಕಡಿತ ಮಾಡಿದೆ ಎಂದು ಆರೋಪಿಸಿ ಹಾಗೂ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ ( ಸಿಐಟಿಯು) ತಾಲ್ಲೂಕು ಸಮಿತಿ ವತಿಯಿಂದ ನೌಕರರು ನಗರದಲ್ಲಿ ಪ್ರತಿಭಟನೆ ನಡೆಸಿದರು.

ಚಾಮರಾಜೇಶ್ವರ ದೇವಸ್ಥಾನದ ಆವರಣದಲ್ಲಿ ಸೇರಿದ ಪ್ರತಿಭಟನಕಾರರು ಭುವನೇಶ್ವರಿ ವೃತ್ತದವರೆಗೆ ಮೆರವಣಿಗೆಯಲ್ಲಿ ತೆರಳಿ, ಮಾನವ ಸರಪಳಿ ರಚಿಸಿ ವಾಹನಗಳ ಸಂಚಾರ ತಡೆದರು. ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು.

ಕೇಂದ್ರ ಸರ್ಕಾರದ ಭಿತ್ರಪತ್ರ ಸುಡಲು ಮುಂದಾದಾಗ ಪೋಲಿಸರು ತಡೆದರು. ಈ ಸಂದರ್ಭದಲ್ಲಿ ಪ್ರತಿಭಟನಾನಿರತರ ನಡುವೆ ತಳ್ಳಾಟ, ನೂಕಾಟ ಉಂಟಾಗಿ ಮಾತಿನ ಚಕಮಕಿ ನಡೆಯಿತು.

ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಾಗೂ ತಾಲ್ಲೂಕು ಅಧ್ಯಕ್ಷೆ ನಾಗಮಣಿ ಮಾತನಾಡಿ, ಕೇಂದ್ರದ ಬಜೆಟ್‌ನಲ್ಲಿ ಅಂಗನವಾಡಿ ನೌಕರಿಗೆ ಯಾವುದೇ ಪ್ರಯೋಜನ ವಾಗಿಲ್ಲ. ಈಗಾಗಲೇ ನೀಡುತ್ತಿರುವ ವೇತನವನ್ನು ಕಡಿತಗೊಳಿಸಿದೆ. ಇದು ಜನ ಹಾಗೂ ಬಡವರ ವಿರೋಧಿ ಸರ್ಕಾರವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಅಗತ್ಯವಸ್ತುಗಳ ಬೆಲೆ ಏರಿಕೆ, ದುಡಿಯುವ ಜನರ ಶೋಷಣೆ, ಉದ್ಯೋಗ ಸೃಷ್ಟಿ ಮಾಡುವಲ್ಲಿ ವಿಫಲವಾಗಿದೆ. ಇವೆಲ್ಲ ವಿಚಾರವನ್ನು ಮುಂದಿಟ್ಟುಕೊಂಡು ನಾವು ಪ್ರತಿಭಟನೆ ನಡೆಸುತ್ತಿದ್ದೇವೆ. ಸರ್ಕಾರ ಪೋಲಿಸರನ್ನು ಬಳಕೆ ಮಾಡಿಕೊಂಡು ನಮ್ಮ ಹೋರಾಟವನ್ನು ಹತ್ತಿಕ್ಕುವ ಕೆಲಸ ಮಾಡುತ್ತಿದೆ ಎಂದು ಆರೋಪಿಸಿದರು.

ಸಂಘದ ತಾಲ್ಲೂಕು ಕಾರ್ಯದರ್ಶಿ ಶಾಯಿದಾಬಾನು, ಕೊಳ್ಳೇಗಾಲ ತಾಲ್ಲೂಕು ಅಧ್ಯಕ್ಷೆ ಶಾಂತಮ್ಮ, ಗುಂಡ್ಲುಪೇಟೆ ತಾಲ್ಲೂಕು ಅಧ್ಯಕ್ಷೆ ಸುಜಿಯಾ, ಯಳಂದೂರು ತಾಲ್ಲೂಕು ಅಧ್ಯಕ್ಷೆ ಮೀನಾಕ್ಷಿ, ಪದಾಧಿಕಾರಿಗಳದಾ ಭಾಗ್ಯ, ಜಿ.ಕೆಂಪಮ್ಮ, ಮಂಜುಳ, ದೇವಮಣಿ, ನೀಲಾವತಿ, ಸಿಐಟಿಯು ರಾಜ್ಯ ಸದಸ್ಯ ಸುನೀಲ್ ಕುಮಾರ್ ಇತರರು ಇದ್ದರು.

# ಗಾಂಧಿ ಸದ್ಭಾವನ, ಆದಮ್ಯ ಚೇತನ ಪ್ರಶಸ್ತಿ ಪ್ರದಾನ

**ಮೈಸೂರು:** ವಿವಿಧ ಕ್ಷೇತ್ರದ ಸಾಧಕರಿಗೆ ಗಾಂಧಿ ಸದ್ಭಾವನ, ಅದಮ್ಯ ಚೇತನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ನಗರದ ಜಯಲಕ್ಷ್ಮಿಪುರಂನ ವಿವೇಕಾನಂದ ಪದವಿಪೂರ್ವ ಕಾಲೇಜಿನ ಆವರಣದಲ್ಲಿರುವ ಕುವೆಂಪು ರಂಗಮಂದಿರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಾಹಿತಿ ಜಿ.ಎಲ್. ತ್ರಿಪುರಾಂತಕ (ಅಂಕಣ ಸಾಹಿತ್ಯ ಕ್ಷೇತ್ರ), ಮಂಡ್ಯದ ಅನಿಕೇತನ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಕಾರ್ಯದರ್ಶಿ ಡಾ. ರಾಮಲಿಂಗಯ್ಯ (ಶಿಕ್ಷಣ ಕ್ಷೇತ್ರ), ಪುಣ್ಯಕೋಟಿ ಸೇವಾ ಟ್ರಸ್ಟ್ ಅಧ್ಯಕ್ಷ ಹನುಮಂತೇಶ್ (ಸಮಾಜ ಸೇವಾ ಕ್ಷೇತ್ರ) ಅವರಿಗೆ ?ಗಾಂ ಸದ್ಭಾವನ ಪ್ರಶಸ್ತಿಗೆ ಪುರಸ್ಕೃತರಾದರು.

ಪದವಿ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆಯ ಉತ್ತಮ ಸ್ವಯಂ ಸೇವಕ ವಿದ್ಯಾರ್ಥಿಗಳಾದ ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆಯ ಹೆಚ್.ಎಸ್.ಪ್ರನುಶ, ರಾಮನಗರ ಜಿಲ್ಲೆಯ ಆರ್.ಕಿರಣ್, ಮಂಡ್ಯ ಜಿಲ್ಲೆಯ ಸಂತೆಬಾಚಳ್ಳಿಯ ಎಸ್.ಎಂ. ಅನನ್ಯ ಅವರಿಗೆ ಅದಮ್ಯ ಚೇತನ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮಾಜಿ ಉಪನಿರ್ದೇಶಕ ಮ.ಗು. ಸದಾನಂದಯ್ಯ



ಮಾತನಾಡಿ, ನಾಟಕ ಕಲೆ ಜನ ಸಮುದಾಯವನ್ನು ಎಚ್ಚರಿಕೆಯ ಸ್ಥಿತಿಯೊಂದಿಗೆ ಸದಾ ಜಾಗೃತಗೊಳಿಸಲಿದೆ. ಹೀಗಾಗಿ ಜಗತ್ತಿಗೆ ಜೀವಂತಿಕೆ ತಂದುಕೊಡುವ ಶಕ್ತಿ ಇರುವುದು ರಂಗಭೂಮಿಗೆ ಮಾತ್ರ ಎಂದರು.

ನಾವೆಲ್ಲ ಇಂದು ಯಂತ್ರ ಮಾನವರಾಗಿದ್ದೇವೆ. ಕೆಲವರಲ್ಲಿ ಭಾವನೆಗಳು ಸತ್ತು ಹೋಗಿವೆ. ಮತ್ತೆ ಕೆಲವರಲ್ಲಿ ಭಾವನೆಗಳು ಜಡವಾಗಿವೆ. ಭಾವರಹಿತವಾಗಿ ಬದುಕುತ್ತಿರುವುದರಿಂದಾಗಿ ಸಂಬಂಧದ ಕೊಂಡಿಗಳು ಕಳಚುತ್ತಿವೆ ಎಂದು ಆತಂಕ ವ್ಯಕ್ತಪಡಿಸಿದರು. ಯುವ ಮನಸ್ಸುಗಳಲ್ಲಿ ಕ್ರೌರ್ಯದ ಭಾವನೆಗಳು ರೂಪುಗೊಳ್ಳುತ್ತಿವೆ. ಇದರಿಂದಾಗಿ ಸಮಾಜದಲ್ಲಿ ಅಪರಾಧ ಕೃತ್ಯಗಳೂ ಹೆಚ್ಚಾಗುತ್ತಿವೆ. ಆದ್ದರಿಂದ ಈ ಯುವ ಮನಸ್ಸುಗಳಲ್ಲಿ ಕಲೆ, ಸಾಹಿತ್ಯ, ಸಂಸ್ಕೃತಿಯ ಬೀಜಗಳನ್ನು ಬಿತ್ತಿ ಅಂಕುರಿಸಿ ಬೆಳೆಯುವ ಅವಕಾಶ ಕಲ್ಪಿಸಬೇಕಿದೆ ಎಂದರು. ಕಾರ್ಯಕ್ರಮ ಉದ್ಘಾಟಿಸಿದ ಕವಯತ್ರಿ ಡಾ. ಲತಾ ರಾಜಶೇಖರ್ ಮಾತನಾಡಿ, ಜಗತ್ತಿನ ಜನಸಂಖ್ಯೆ ಹೆಚ್ಚಿದಂತೆ, ಮಾನವನಲ್ಲಿ ಸ್ವಾರ್ಥ ಭಾವನೆ ಬೆಳೆದಂತೆ ಇಡೀ ಪರಿಸರ ಮಲಿನಗೊಂಡಿದೆ. ವಿಷಕಾರಿ ವಸ್ತುಗಳ ಸೇರ್ಪಡೆಯಿಂದ ಮಾಲಿನ್ಯ ಸಮಸ್ಯೆ ಜ್ವಲಂತವಾಗಿದೆ. ಇದರ ಪರಿಣಾಮವಾಗಿ ಜನರನ್ನು ಹಲವಾರು ಮಾರಣಾಂತಿಕ ರೋಗಗಳು ಕಾಡುತ್ತಿವೆ ಎಂದು ವಿಷಾದ ವ್ಯಕ್ತಪಡಿಸಿದರು.

# ಭಾರತ್ ಬ್ರ್ಯಾಂಡ್ ಗ್ಯಾರಂಟಿ ಯೋಜನೆಗೆ ಸಮ: ಬಿ.ಎಸ್.ವೈ.

**ಮೈಸೂರು:** ಕೇಂದ್ರ ಸರ್ಕಾರದ ಭಾರತ್ ಬ್ರ್ಯಾಂಡ್ ಯೋಜನೆಯು ಕಷ್ಟದಲ್ಲಿರುವ ಜನರಿಗೆ ನೀಡಿದ ನ್ಯಾಯವಾಗಿದ್ದು, ಇದು ಕಾಂಗ್ರೆಸ್‌ನ ಗ್ಯಾರಂಟಿ ಯೋಜನೆಗಳಿಗೆ ಸಮ ಎಂದು ಬಿಜೆಪಿಯ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್. ಯಡಿಯೂರಪ್ಪ ಪ್ರತಿಪಾದಿಸಿದರು. ನಗರದಲ್ಲಿ ಗುರುವಾರ ಬಿಜೆಪಿ ವಿಶೇಷ ಕಾರ್ಯಕಾರಿಣಿಯನ್ನು ಉದ್ಘಾಟಿಸಿ ಮಾತನಾಡಿ, ಸರ್ಕಾರವೇ ಭಾರತ್ ಬ್ರ್ಯಾಂಡ್ ಹೆಸರಿನಲ್ಲಿ 29ಕ್ಕೆ ಒಂದು ಕೆ.ಜಿ. ಅಕ್ಕಿ ಮಾರಾಟ ಮಾಡುತ್ತಿದ್ದು,



ಅದರಿಂದ ಬಡವರ ಮೇಲಿನ ಹೊರೆ ತಗ್ಗಲಿದೆ. ಸ್ವಾಭಿಮಾನದ ಬದುಕು ನಡೆಸಲು ಸಾಧ್ಯವಾಗಲಿದೆ. ಇಂತಹ ಯೋಜನೆಗಳ ಕುರಿತು ಪ್ರಚಾರ ಮಾಡಬೇಕು. ದೇಶದಲ್ಲಿ ನರೇಂದ್ರ ಮೋದಿ ಅವರನ್ನು ಮತ್ತೊಮ್ಮೆ ಪ್ರಧಾನಿ ಮಾಡಲು ಕಾರ್ಯಕರ್ತರು ಶ್ರಮಿಸಬೇಕು ಎಂದು ಕರೆ ನೀಡಿದರು. ಸುತ್ತೂರು ಜಾತ್ರೆಯಲ್ಲಿ ನಡೆದ ಧಾರ್ಮಿಕ ಸಭೆಯಲ್ಲೂ ವಿಷಯ ಪ್ರಸ್ತಾಪಿಸಿದ ಅವರು, ಕೇಂದ್ರವು ಈಗಾಗಲೇ 60ಕ್ಕೆ ಕೆ.ಜಿ. ಕಡಲೆಬೇಳೆ, 27.5ಕ್ಕೆ ಗೋದಿ, 93ಕ್ಕೆ ಹೆಸರುಬೇಳೆ ನೀಡುತ್ತಿದ್ದು, ಬಡವರ ಮೇಲಿನ ಆರ್ಥಿಕ ಹೊರೆ ಕಡಿಮೆಯಾಗಿದೆ ಎಂದರು. ಪಿ.ಎಂ ಕಿಸಾನ್ ಸಮ್ಮಾನ್ ಯೋಜನೆಯಡಿ ಪ್ರತಿ ರೈತರಿಗೆ ಕೇಂದ್ರ ಸರ್ಕಾರ 6 ಸಾವಿರ ನೀಡಿದರೆ, ರಾಜ್ಯದಲ್ಲಿ ಬಿಜೆಪಿ ಸರ್ಕಾರವಿದ್ದಾಗ 4 ಸಾವಿರ ಸೇರಿಸಿ ಒಟ್ಟು 10 ಸಾವಿರ ಕೊಡುತ್ತಿತ್ತು. ಇಂದಿನ ರಾಜ್ಯ ಸರ್ಕಾರ ಅದನ್ನು ನಿಲ್ಲಿಸಿದೆ. ಸಂಕಷ್ಟದ ಸಂದರ್ಭದಲ್ಲಿ ಪ್ರೋತ್ಸಾಹ ಧನ ನೀಡಬೇಕು ಎಂದು ಒತ್ತಾಯಿಸಿದರು. ರಾಜ್ಯದಲ್ಲಿ ಭೀಕರ ಬರಗಾಲವಿದೆ. ಮುಂದಿನ ದಿನಗಳಲ್ಲಿ ಕೆರೆ ಕಟ್ಟೆ ಬರಿದಾಗಿ ಕುಡಿಯುವ ನೀರಿಗೂ ಹಾಹಾಕಾರ ಎದುರಾಗಲಿದೆ. ರೈತ ಶೇ 25ರಷ್ಟು ಬೆಳೆಯನ್ನೂ ಬೆಳೆದಿಲ್ಲ. ಇಂತಹ ಸಂದರ್ಭದಲ್ಲಿ ಸಹಕಾರ ನೀಡಿ ಪರಿಹಾರದ ಕಡೆ ಯೋಚಿಸಬೇಕು ಎಂದರು.

# ವಿಶೇಷ ಕಾರ್ಯಕ್ರಮ

**ಮೈಸೂರು:** ನಗರದ ವರ್ತೂಲ ರಸ್ತೆಯದೇವೇಗೌಡ ವೃತ್ತದ ಬಳಿಯಿರುವ ಜೀನಿಯಸ್‌ಕಾಲೇಜಿನಲ್ಲಿದಶಕದ ಸಂಭ್ರಮದ ಹಿನ್ನೆಲೆಯಲ್ಲಿ 2023-24 ನೇ ಸಾಲಿನ ಅಂತಿಮವರ್ಷದಬಿ. ಕಾಂ ಮತ್ತು ಬಿ.ಬಿ.ಎ ವಿದ್ಯಾರ್ಥಿಗಳಿಗಾಗಿ ಮೈಸೂರು ವಿಶ್ವವಿದ್ಯಾಲಯ ನಿಯಮದಅನ್ವಯಇಂಟರ್ನ್‌ಶಿಪ್ ಕಾರ್ಯಕ್ರಮವನ್ನುಏರ್ಪಡಿಸಲಾಗಿದೆ. ನಗರದ ವಿವಿಧಕಾಲೇಜಿನ ಬಿ.ಕಾಂ ಮತ್ತು ಬಿ.ಬಿ.ಎ ಅಂತಿಮ ವರ್ಷದ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಅವಕಾಶವಿದೆ. ಈ ಕಾರ್ಯಕ್ರಮದಲ್ಲಿ ಪ್ರತಿಷ್ಠಿತವಿವಿಧ ಕಂಪನಿಗಳು ಉದ್ಯೋಗಆಯ್ಕೆಗೆಅವಕಾಶವನ್ನು ಕಲ್ಪಿಸಿಕೊಡಲಾಗಿದೆ.ಈ ಅವಕಾಶವನ್ನು ವಿದ್ಯಾರ್ಥಿಗಳು ಉಪಯೋಗಿಸಿಕೊಳ್ಳಬಹುದು.ಹೆಚ್ಚಿನ ಮಾಹಿತಿಗಾಗಿ -7337719139, 9449826220, 8105293719 ಸಂಪರ್ಕಿಸಬಹುದು.

# 12ರಂದು ಆಯವ್ಯಯ ಸಭೆ

**ರಾಮನಗರ:** ಚನ್ನಪಟ್ಟಣ ನಗರವನ್ನು ಸಮಗ್ರ ಅಭಿವೃದ್ದಿಪಡಿಸುವ ಉದ್ದೇಶದಿಂದ 2024-25ನೇ ಸಾಲಿನ ಆಯ-ವ್ಯಯವನ್ನು ತಯಾರಿಸುವ ಸಂಬಂಧ ಪಟ್ಟಣದ ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿದಂತೆ ಸೂಕ್ತ ಸಲಹೆ ಮತ್ತು ಸೂಚನೆಗಳನ್ನು ಸಂಗ್ರಹಿಸಲು ಫೆ. 12ರ ಸೋಮವಾರ ಸಂಜೆ 4 ಗಂಟೆಗೆ ಚನ್ನಪಟ್ಟಣ ನಗರಸಭಾ ಕಚೇರಿ ಸಭಾಂಗಣದಲ್ಲಿ ಆಯವ್ಯಯ ಪೂರ್ವಭಾವಿ ಸಭೆಯನ್ನು ಆಯೋಜಿಸಲಾಗಿದೆ. ನಗರಸಭೆಯ ಮಾಜಿ ಸದಸ್ಯರು, ನಾಮನಿರ್ದೇಶಿತ ಮಾಜಿ ಸದಸ್ಯರು, ನಗರಸಭಾ ಮಾಜಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು, ಸ್ಥಾಯಿಸಮಿತಿ ಮಾಜಿ ಅಧ್ಯಕ್ಷರು, ಸಾರ್ವಜನಿಕರು ಸಭೆಗೆ ಹಾಜರಾಗಿ ಸಲಹೆ ಮತ್ತು ನಿರ್ದೇಶನ ನೀಡುವಂತೆ ಚನ್ನಪಟ್ಟಣ ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂವಿಧಾನ ಜಾಗೃತಿ ಜಾಥಾ

**ರಾಮನಗರ:** ಮಾಗಡಿ ತಾಲೂಕಿನ ಬಿಟ್ಟಸಂದ್ರ, ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಸಂಚರಿಸುತ್ತಿರುವ ಸಂವಿಧಾನ ಜಾಗೃತಿ ಜಾಥವನ್ನು ಪೂರ್ಣ ಕುಂಭಕಳಸದೊಂದಿಗೆ ಹಾಗೂ ಕಲಾತಂಡದೊಂದಿಗೆ ಸ್ವಾಗತಿಸಲಾಯಿತು. ಸಂವಿಧಾನ ಜಾಗೃತಿ ಜಾಥ ಕಾರ್ಯಕ್ರಮದ ಅಂಗವಾಗಿ ಬೈಕ್ರ್ಯಾಲಿ ಆಯೋಜಿಸಲಾಗಿತ್ತು. ಸಂವಿಧಾನದ ಕುರಿತು ರಂಗಯ್ಯ ಅವರು ಉಪನ್ಯಾಸ ನೀಡದರು. ಜಿಲ್ಲಾ ಜಾಗೃತಿ ಸಮಿತಿಯ ಸದಸ್ಯರುಗಳು ಹಾಗೂ ಸಮುದಾಯದ ಮುಖಂಡರು, ಸಂಘ-ಸಂಸ್ಥೆಯ ಪದಾಧಿಕಾರಿಗಳಿದ್ದರು. ನಂತರ ಸಂವಿಧಾನ ಜಾಗೃತಿ ಜಾಥಾವು ಬಾಣವಾಡಿ, ಸೋಲೂರು ಗ್ರಾಮ ಪಂಚಾಯಿತಿಗಳಲ್ಲಿ ಸಂಚರಿಸಿ, ಜಾಗೃತಿ ಮೂಡಿಸಿತು.

# ಮಾರ್ಚ್ 9 ರಂದು ರಾಷ್ಟ್ರೀಯ ಲೋಕ್ ಅದಾಲತ್

**ಬೆಂಗಳೂರು:** ಕರ್ನಾಟಕ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ವತಿಯಿಂದ ರಾಷ್ಟ್ರೀಯ ಲೋಕ್ ಅದಾಲತ್‌ನ್ನು ಇದೇ ಮಾರ್ಚ್ 9 ರಂದು ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ. ಜನರು ನ್ಯಾಯಾಲಯದಲ್ಲಿ ಇತ್ಯರ್ಥವಾಗದೇ ಬಾಕಿ ಉಳಿದಿರುವ ವ್ಯಾಜ್ಯಗಳನ್ನು ಈ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಇತ್ಯರ್ಥಪಡಿಸಿಕೊಳ್ಳಬಹುದು. ಭೂ ಸ್ವಾಧೀನ, ಕಾರ್ಮಿಕ, ಕ್ರಿಮಿನಲ್, ವೈವಾಹಿಕ, ಪಿಂಚಣಿ, ಸೇರಿದಂತೆ ಇನ್ನಿತರ ಪ್ರಕರಣಗಳನ್ನು ಲೋಕ್ ಅದಾಲತ್‌ನಲ್ಲಿ ಇತ್ಯರ್ಥ ಪಡಿಸಿಕೊಳ್ಳಬಹುದೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# 9 ರಂದು ವಿವಿಧ ಜಯಂತಿಗಳ ಪೂರ್ವಭಾವಿ ಸಭೆ

**ಮೈಸೂರು:** ಫೆ.15 ರಂದು ಶ್ರೀ ಸಂತ ಸೇವಾಲಾಲ್ ಜಯಂತಿ, ಫೆ.16 ರಂದು ಸವಿತಾ ಮಹರ್ಷಿ ಜಯಂತಿ, ಫೆ.19 ರಂದು ಛತ್ರಪತಿ ಶಿವಾಜಿ ಜಯಂತಿ ಹಾಗೂ ಫೆ.20 ರಂದು ಸಂತ ಕವಿ ಸರ್ವಜ್ಞ ಜಯಂತಿಯ ಆಚರಣೆ ಸಂಬಂಧ, ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ವಿವಿಧ ಜಯಂತಿಗಳ ಪೂರ್ವಭಾವಿ ಸಭೆಯನ್ನು ಫೆ.9 ರಂದು ಸಿದ್ದಾರ್ಥನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಬೆಳಗ್ಗೆ 11.00 ಕ್ಕೆ ಶ್ರೀ ಸಂತ ಸೇವಾಲಾಲ್ ಜಯಂತಿ, 11.15 ಕ್ಕೆ ಸವಿತಾ ಮಹರ್ಷಿ ಜಯಂತಿ, 11.30 ಕ್ಕೆ ಛತ್ರಪತಿ ಶಿವಾಜಿ ಜಯಂತಿ, 11.45 ಕ್ಕೆ ಸಂತ ಕವಿ ಸರ್ವಜ್ಞ ಜಯಂತಿಯ ಪೂರ್ವಭಾವಿ ಸಭೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಎಂ.ಡಿ.ಸುದರ್ಶನ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೋರಗೆರೆ ಡೇರಿಗೆ 2 ಲಕ್ಷ ಸಹಾಯಧನ

**ಹುಳಿಯಾರು:** ಕೋರಗೆರೆ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಧರ್ಮಸ್ಥಳ ಯೋಜನೆಯ ಸಮುದಾಯ ಅಭಿವೃದ್ಧಿ ವಿಭಾಗದಿಂದ ಎರಡು ಲಕ್ಷ ರೂ ಸಹಾಯಧನದ ಮಂಜೂರಾತಿ ಪತ್ರವನ್ನು ತಾಲೂಕು ಯೋಜನಾಧಿಕಾರಿ ರಾಮಚಂದ್ರ ಮಂಗಳವಾರ ವಿತರಣೆ ಮಾಡಿದರು. ಈ ಸಂದರ್ಭದಲ್ಲಿ ಅವರು ಮಾತನಾಡಿ ಗ್ರಾಮೀಣ ಭಾಗದಲ್ಲಿನ ಹಳ್ಳಿಗಳಲ್ಲಿ ಕೃಷಿ ಚಟುವಟಿಕೆಗಳನ್ನು ಪ್ರೋತ್ಸಾಹಿಸುವ ಸಲುವಾಗಿ ಶ್ರೀ ಕ್ಷೇತ್ರವು ಹಲವಾರು ರೀತಿಯ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು ಅದರಲ್ಲಿ ಪಶುಸಂಗೋಪನೆಗೆ ಅತಿ ಹೆಚ್ಚು ಮಹತ್ವವನ್ನು ನೀಡುತ್ತಿದೆ. ಡಾ.ಡಿ.ವೀರೇಂದ್ರ ಹೆಗ್ಗಡೆ ಅವರು ಹಳ್ಳಿಗಾಡಿನ ರೈತರ ಸರ್ವತೋಮುಖ ಬೆಳವಣಿಗೆಗೆ ಇಂತಹ ಹಲವಾರು ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ ಎಂಬುದಾಗಿ ತಿಳಿಸಿದರು.



# ಪ್ರತಿಭಾ ಪುರಸ್ಕಾರಕ್ಕೆ ಆಹ್ವಾನ

**ಹುಳಿಯಾರು:** ಚಿಕ್ಕನಾಯಕನಹಳ್ಳಿ ತಾಲೂಕು ಗೋರ್ ಬಂಜಾರ ವಿದ್ಯಾರ್ಥಿಗಳಿಗೆ ಮತ್ತು ಅವರ ತಂದೆ ತಾಯಂದರಿಗೆ ಮಾರ್ಚ್ 3 ರಂದು ಹುಳಿಯಾರಿನಲ್ಲಿ ನಡೆಯಲಿರುವ ಸಂತ ಸೇವಾಲಾಲ್ ಜಯಂತೋತ್ಸವ ಕಾರ್ಯಕ್ರಮದಲ್ಲಿ ವಿಧಾನಸಭಾ ಉಪಸಭಾಪತಿ ರುದ್ರಪ್ಪ ಲಮಾಣಿ ಅವರಿಂದ ಪ್ರತಿಭಾ ಪುರಸ್ಕಾರ ನೀಡಲಾಗುವುದು. ಶೈಕ್ಷಣಿಕ ವರ್ಷ 2023 ರಲ್ಲಿ ಶೇ. 90 ಅಂಕಗಳಿಗಿಂತ ಹೆಚ್ಚಿನ ಅಂಕಗಳಿಸಿ ತೇರ್ಗಡೆಯಾದ ಎಸ್‌ಎಸ್‌ಎಲ್‌ಸಿ, ಪಿಯುಸಿ ಮತ್ತು ಐಟಿಐ ವಿದ್ಯಾರ್ಥಿಗಳಿಗೆ ಪುರಸ್ಕಾರ ನೀಡಲಾಗುವುದು.

ಚಿಕ್ಕನಾಯಕನಹಳ್ಳಿ ತಾಲೂಕಿನ ಅರ್ಹ ಲಂಬಾಣಿ ಸಮುದಾಯದ ವಿದ್ಯಾರ್ಥಿಗಳು ತಮ್ಮ ಭಾವಚಿತ್ರ, ಮಾರ್ಕ್ಸ್ ಕಾರ್ಡ್ ಮತ್ತು ಒಂದು ಆಧಾರ್ ಕಾರ್ಡ್ ಜೆರಾಕ್ಸ್‌ನೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಹುಳಿಯಾರು ಹೋಬಳಿ ಲಕ್ಷ್ಮೀಬಾಯಿ 9972749513, ಅಶ್ವಿನಿ 9686042104, ರಾಜ ನಾಯ್ಕ್ 9731192343, ಲೋಕೇಶ್ ನಾಯ್ಕ್ 9538762109, ಹಂದನಕೆರೆ ಹೋಬ ಹನುಮ ನಾಯ್ಕ್ 6363693272, ಗಂಗಾಧರ್ ನಾಯ್ಕ್ 7019783724, ಚಿಕ್ಕನಾಯಕನಹಳ್ಳಿ ಕಸಬಾ ಹೋಬಳಿ ಮೂರ್ತಿನಾಯ್ಕ್ 7259478725, ಲಕ್ಷ್ಮೀಶ್ 8095641273, ಕಂದಿಕೆರೆ ಹೋಬಳಿ ಲೋಕೇಶ್ ನಾಯ್ಕ್ 9611831869 ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಭೂಕಬಳಿಕೆ ಆರೋಪ ಪ್ರಕರಣ ಜೇಡ್ರಳ್ಳಿ ಕೃಷ್ಣಪ್ಪಗೆ ಜಾಮೀನು ಮಂಜೂರು!

**ಬೆಂಗಳೂರು:** ನಕಲಿ ದಾಖಲೆ ಸೃಷ್ಟಿಸಿ ಭೂಕಬಳಿಕೆ ಮಾಡಿದ್ದ ಆರೋಪದ ಮೇಲೆ ಬಂಧನಕ್ಕೊಳಗಾಗಿದ್ದ ಮಾಜಿ ಡಾನ್ ಜೇಡ್ರಳ್ಳಿ ಕೃಷ್ಣಪ್ಪ ಅವರಿಗೆ ಜಾಮೀನು ಮಂಜೂರು ಮಾಡಲಾಗಿದೆ. ಹೌದು. 16 ಎಕರೆ ಜಮೀನಿಗೆ ನಕಲಿ ದಾಖಲೆ ಸೃಷ್ಟಿಸಿ ಸೇಲ್ ಅಗ್ರಿಮೆಂಟ್ ಮಾಡಿಕೊಂಡಿದ್ದಾರೆ ಎಂಬ ಆರೋಪದ ಮೇಲೆ ಮಾಜಿ ಡಾನ್ ಜೇಡ್ರಳ್ಳಿ ಕೃಷ್ಣಪ್ಪರನ್ನ ಬ್ಯಾಡರಹಳ್ಳಿ ಪೊಲೀಸರು ಬಂಧಿಸಿದ್ದರು. ಹೆಚ್ಚಿನ ತನಿಖೆಗಾಗಿ 14 ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ನೀಡುವಂತೆ ಎಸಿಜೆಎಂ ಕೋರ್ಟ್‌ಗೆ ಪೊಲೀಸರು ಮನವಿ ಮಾಡಿದ್ದರು. ಕೃಷ್ಣಪ್ಪ ಪರ ಹಿರಿಯ ವಕೀಲ ಶ್ಯಾಮ್ ಸುಂದರ್ ಹಾಜರಾಗಿ ಬ್ಯಾಡರಹಳ್ಳಿ ಪೊಲೀಸರ ನಡೆಗೆ ಆಕ್ಷೇಪ ವ್ಯಕ್ತಪಡಿಸಿದರು. ಸಿವಿಲ್ ಕೇಸ್‌ನಲ್ಲಿ ಪೊಲೀಸರಿಗೇನು ಕೆಲಸ? ನಮ್ಮ ಕಕ್ಷಿದಾರ ರಿಜಿಸ್ಟರ್ಡ್ ಸೇಲ್ ಅಗ್ರಿಮೆಂಟ್ ಮಾಡಿಕೊಂಡಿದ್ದಾರೆ. ನರಸಿಂಹಯ್ಯ ಹಾಗೂ ಆತನ ಹೆಣ್ಣು ಮಕ್ಕಳು ರಿಜಿಸ್ಟರ್ ಆಫೀಸ್‌ಗೆ ಬಂದು ಸಹಿ ಮಾಡಿದ್ದಾರೆ. ಜಮೀನು ತಮ್ಮದಲ್ಲ ಅಂದ್ರೆ, ಯಾರಾದ್ರೂ ಬರೋದಕ್ಕೆ ಸಾಧ್ಯನಾ ಎಫ್‌ಐಆರ್‌ನಲ್ಲಿರುವ ಸೆಕ್ಷನ್‌ಗಳನ್ನ ದುರುದ್ದೇಶಪೂರ್ವಕವಾಗಿ ಹಾಕಿದ್ದಾರೆ ಎಂದು ವಾದಿಸಿದರು. ಅಲ್ಲದೇ 7 ವರ್ಷಗಳ ಶಿಕ್ಷೆ ಒಳಗಿನ ಕೇಸ್‌ಗಳಲ್ಲಿ ಅರೆಸ್ಟ್ ಮಾಡಬಾರದು ಅಂತಿದೆ. ಆದರೂ ಅರೆಸ್ಟ್ ಮಾಡಿ, ಹೈಕೋರ್ಟ್ ಹಾಗೂ ಸುಪ್ರೀಂ ಕೋರ್ಟ್ ನಿಯಮಗಳನ್ನ ಗಾಳಿಗೆ ತೂರಿದ್ದಾರೆ. ಬಿಟ್ರೆ ಇವರು ಬ್ಯಾಡರಹಳ್ಳಿ ಸ್ಟೇಷನ್ ಅನ್ನೇ ರಿಜಿಸ್ಟರ್ ಆಫೀಸ್ ಮಾಡ್ಕೊತಾರೆ. ಯಾರದ್ದು ಅಸಲಿ ನಕಲಿ ಅಂತ ತೀರ್ಮಾನ ಮಾಡಬೇಕಿರೋದು ತಹಶೀಲ್ದಾರ್. ಸಿವಿಲ್ ವ್ಯಾಜ್ಯದಲ್ಲಿ ಒಬ್ಬ ವ್ಯಕ್ತಿಯ ಪರವಾಗಿ ಪೊಲೀಸರು ಸಹಾಯ ಮಾಡಿದ್ದಾರೆ. ಅರೆಸ್ಟ್ ಮಾಡಿದ ಅಧಿಕಾರಿ ವಿರುದ್ಧ ನಿಂದನೆ ಹಾಕುವಂತೆ ಮನವಿ ಮಾಡಿದರು.

# ಸಂವಿಧಾನ ಜಾಗೃತಿ ಜಾಥಾ:ಅರ್ಥಪೂರ್ಣ ಕಾರ್ಯಕ್ರಮ ಆಯೋಜನೆ

**ಚಾಮರಾಜನಗರ:** ಸಂವಿಧಾನ ದಿನಾಚರಣೆ ಪ್ರಯುಕ್ತ ಚಾಮರಾಜನಗರ ತಾಲೂಕಿನಲ್ಲಿ ಆಯೋಜಿಸಿರುವ ಜಾಗೃತಿ ಜಾಥಾ ಹಿನ್ನೆಲೆಯಲ್ಲಿ ರಕ್ತದಾನ ಶಿಬಿರ, ಪುಸ್ತಕ ಜೋಳಿಗೆಯಂತಹ ವಿಶಿಷ್ಟ ಅರ್ಥಪೂರ್ಣ ಕಾರ್ಯಕ್ರಮಗಳು ಇಂದು ಗಮನ ಸೆಳೆದಿವೆ.

ವೆಂಕಟಯ್ಯನಛತ್ರ ಗ್ರಾಮದಲ್ಲಿ ಆಗಮಿಸಿದ ಸಂವಿಧಾನ ಜಾಗೃತಿ ಜಾಥಾಗೆ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಆರ್. ಲಾವಣ್ಯ, ಉಪಾಧ್ಯಕ್ಷರಾದ ಮಂಜುನಾಥ್, ಇತರೆ ಸದಸ್ಯರು, ಗಣ್ಯರು, ಪಂಚಾಯತ್ ಅಭಿವೃದ್ಧಿ ಅಧಿಕಾರಿ ರಾಜೇಂದ್ರ ಪ್ರಸಾದ್, ಪುಷ್ಪಾರ್ಚನೆ ನೆರವೇರಿಸುವ ಮೂಲಕ ಬರ ಮಾಡಿಕೊಂಡರು. ಕಳಶ ಹೊತ್ತ ಮಹಿಳೆಯರು, ಶಾಲಾ ವಿದ್ಯಾರ್ಥಿಗಳು, ಸಂಘ ಸಂಸ್ಥೆಗಳ ಮುಖಂಡರು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಜಾಗೃತಿ ಮೂಡಿಸಿದರು. ಗ್ರಾಮದಲ್ಲಿ ಆಯೋಜಿಸಿದ್ದ ವೇದಿಕೆ ಕಾರ್ಯಕ್ರಮವನ್ನು ಉದ್ದೇಶಿಸಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಲಾವಣ್ಯ ಅವರು ಮಾತನಾಡಿದರು. ವಿಚಾರವಾದಿ ಕೆ. ನಾಗರಾಜು, ನೋಡಲ್ ಅಧಿಕಾರಿ ವೆಂಕಟೇಶ್, ಸಹ ಶಿಕ್ಷಕರಾದ ಮಲ್ಲೇಶ್ ಉಪಸ್ಥಿತರಿದ್ದರು.

ಬಿಸಲವಾಡಿಯಲ್ಲಿ ಸಂವಿಧಾನ ಜಾಗೃತಿ ಅಂಗವಾಗಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ರಕ್ತದಾನ ಶಿಬಿರ ಆಯೋಜಿಸಿದ್ದು ವಿಶೇಷವಾಗಿತ್ತು. ಬಿಸಲವಾಡಿಯಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಜಿ. ರಮ್ಯ, ಉಪಾಧ್ಯಕ್ಷರಾದ ಬೇಬಿ ಈಶ್ವರ್ ಪುಷ್ಪಾರ್ಚನೆ ಮಾಡುವ ಮೂಲಕ ಅದ್ದೂರಿಯಾಗಿ ಸಂವಿಧಾನ ಜಾಗೃತಿ ಜಾಥಾವನ್ನು ಸ್ವಾಗತಿಸಿದರು.

ಗ್ರಾಮದಲ್ಲಿ ನಡೆದ ಮೆರವಣಿಗೆ ವೇಳೆ ವೀರಗಾಸೆ, ಡೊಳ್ಳುಕುಣಿತ, ಶಾಲಾ ಮಕ್ಕಳ ಬ್ಯಾಂಡ್ ವಾದನ ಮೆರಗು ನೀಡಿದವು. ಗ್ರಾಮಸ್ಥರು ಕೋಲಾಟದ ಮೂಲಕ ಉತ್ಸಾಹದಿಂದ ಪಾಲ್ಗೊಂಡರು. ಚಿಕ್ಕಮಕ್ಕಳು ಡಾ. ಬಿ.ಆರ್. ಅಂಬೇಡ್ಕರ್ ಅವರ ವೇಷ ಭೂಷಣ ಧರಿಸಿ ಗಮನಸೆಳೆದರು.

ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದ ಪ್ರಾಂಶುಪಾಲರಾದ ಪ್ರೊ. ದೇವರಾಜು ಅವರು ಡಾ. ಬಿ.ಆರ್. ಅಂಬೇಡ್ಕರ್ ಅವರ ಸಂವಿಧಾನದಲ್ಲಿ ಸರ್ವರಿಗೂ ಸಮಾನತೆ ಇದೆ. ಜನರ ಸರ್ವಾಂಗೀಣ ಅಭಿವೃದ್ದಿಗೆ ಪೂರಕವಾದ ಎಲ್ಲವನ್ನೂ ಸಂವಿಧಾನ ಒಳಗೊಂಡಿದೆ. ಇದರ ಆಶಯಗಳನ್ನು ಅರಿತು ಪ್ರತಿಯೊಬ್ಬರೂ ಪ್ರಜ್ಞಾವಂತಿಕೆಯಿಂದ ನಡೆದುಕೊಳ್ಳಬೇಕು ಎಂದರು. ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಚಿಕ್ಕಬಸವಯ್ಯ ಅವರು ಸಂವಿಧಾನ ಪೀಠಿಕೆ ಬೋಧಿಸಿದರು. ಕೋಡಿಉಗನೆ ಗ್ರಾಮದಲ್ಲಿಯೂ ವಿಶೇಷವಾಗಿ ಸಂವಿಧಾನ ಜಾಗೃತಿ ಜಾಥಾ ನಡೆಯಿತು. ಜನರು ಹುರುಪಿನಿಂದ ಭಾಗವಹಿಸಿದರು. ಅಟ್ಟುಗೂಳಿ ಪುರದಲ್ಲಿಯೂ ಸಂವಿಧಾನ ಜಾಗೃತಿ ಜಾಥಾಗೆ ಸಂಭ್ರಮದಿಂದ ಸ್ವಾಗತಿಸಲಾಯಿತು. ಸಿದ್ದಯ್ಯನಪುರದಲ್ಲಿಯೂ ಅದ್ದೂರಿಯಾಗಿ ಮೆರವಣಿಗೆ ನಡೆಯಿತು.





# ಜಿಲ್ಲೆಯಲ್ಲಿ ಪುಟ್‌ಬಾಲ್ ಆಟವನ್ನು ಮುಂಚೂಣಿಗೆ ತರಲು ಸಹಕಾರ ಅಗತ್ಯ

**ಚಾಮರಾಜನಗರ:** ಜಿಲ್ಲೆಯಲ್ಲಿ ಪುಟ್‌ಬಾಲ್ ಆಟಕ್ಕೆ ಹೆಚ್ಚಿನ ಪ್ರೋತ್ಸಾಹವನ್ನು ನೀಡುವ ನಿಟ್ಟಿನಲ್ಲಿ ಕ್ರೀಡಾಸಕ್ತರು ಹೆಚ್ಚಿನ ಸಹಕಾರ ನೀಡಬೇಕು ಎಂದು ಜಿಲ್ಲ ಪುಟ್‌ಬಾಲ್ ಸಂಸ್ಥೆಯ ಅಧ್ಯಕ್ಷ ಕೆಲ್ಲಂಬಳ್ಳಿ ಸೋಮಶೇಖರ್ ತಿಳಿಸಿದರು.

ನಗರದ ಜಿಲ್ಲಾ ಡಾ.ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಕರ್ನಾಟಕ ರಾಜ್ಯ ಪುಟ್ ಬಾಲ್ ಸಂಸ್ಥೆ ಹಾಗೂ ಜಿಲ್ಲಾ ಸಂಸ್ಥೆಯ ಸಹಯೋಗದಲ್ಲಿ ಆರಂಭವಾದ ಪುಟ್‌ಬಾಲ್ ಲೀಗ್ ಪಂದ್ಯಾವಾಳಿಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಪುಟ್‌ಬಾಲ್ ಆಟಗಾರರು ಹೆಚ್ಚಿನ ಸಂಖ್ಯೆಯಲ್ಲಿದ್ದು, ರಾಜ್ಯ ಹ ಹಾಗೂ ಅಂತರ ಜಿಲ್ಲಾ ಮಟ್ಟದಲ್ಲಿ ಪ್ರತಿನಿಧಿಸಿ ಜಿಲ್ಲೆಗ್ಗೆ ಕೀರ್ತಿ ತಂದಿದ್ದಾರೆ. ಇತ್ತಿಚಿನ ದಿನಗಳಲ್ಲಿ ಇತರೇ ಆಟಗಳಿಂದಾಗಿ ಪುಟ್‌ಬಾಲ್ ಆಟಗಾರರು ಕಡಿಮೆಯಾದರು. ಜೊತೆಗೆ ಯುವ ಆಟಗಾರರಿಗೆ ಪ್ರೋತ್ಸಾಹ ಕಡಿಮೆಯಾಗಿತ್ತು. ಈಗ ರಾಜ್ಯ ಪುಟ್‌ಬಾಲ್ ಸಮಿತಿಯ ನೇತೃತ್ವದಲ್ಲಿ ಜಿಲ್ಲಾ ಸಮಿತಿಯನ್ನು ರಚನೆಯ ಮಾಡಿಕೊಂಡು ಪ್ರಪ್ರಥಮ ಬಾರಿಗೆ ಜಿಲ್ಲೆಯಲ್ಲಿ ಲೀಗ್ ಹಂತ ಪುಟ್ ಬಾಲ್ ಪಂದ್ಯಾವಳಿಯನ್ನು ಆಯೋಜನೆ ಮಾಡಲಾಗಿದೆ. 10 ತಂಡಗಳು ಭಾಗವಹಿಸಲಿದ್ದು. ಪ್ರತಿ ಭಾನುವಾರ ಬೆಳಗಿನ ಅವಧಿಯಲ್ಲಿ ಪಂದ್ಯಗಳು ನಡೆಯಲಿದೆ. 10 ವಾರಗಳು ಸಹ ಸತತವಾಗಿ ಲೀಗ್ ಪಂದ್ಯಗಳು ನಡಯಲಿದ್ದು, ಚಾ.ನಗರ ವಿವಿಧ ತಾಲೂಕು ಗಳಲ್ಲದೇ ನರಸೀಪುರದ ತಂಡವು ಸಹ ಭಾಗವಹಿಸಲಿದೆ. ಯುವ ಆಟಗಾರರು ಪುಟ್‌ಬಾಲ್ ಬಗ್ಗೆ ಹೆಚ್ಚಿನ ಅಸಕ್ತಿಯನ್ನು ಹೊಂದಿ ತರಬೇತಿ ಪಡೆದು ಜಿಲ್ಲಾ ಹಾಗೂ ರಾಷ್ಟ್ರ ಮಟ್ಟವನ್ನು ಪ್ರತಿನಿಧಿಸುವಂತೆ ತಿಳಿಸಿದರು. ಖ್ಯಾತ ವೈದ್ಯರಾದ ಡಾ. ವಿಕಾಶ್‌ಹನುಸೋಗೆ ಅವರು ಪುಟ್‌ಬಾಲ್ ಪಂದ್ಯಾವಳಿಗೆ ಚಾಲನೆ ನೀಡಿ ಮಾತನಾಡಿ, ಚಾಮರಾಜನಗರದಲ್ಲಿ ಪುಟ್‌ಬಾಲ್ ಸಂಸ್ಥೆ ಇಲ್ಲ ಎಂಬ ಕೊರಕು ಹೋಗಿದೆ. ಜಿಲ್ಲಾ ಸಂಸ್ಥೆಯು ಉತ್ತಮವಾದ ಪಂದ್ಯಾವಳಿಯನ್ನು ಸಂಘಟನೆ ಮಾಡಿದೆ. ನಾನು ಸಹ ಒಂದು ತಂಡವನ್ನು ಪಡೆದುಕೊಂಡಿದ್ದು, ಯುವಕರು ಪುಟ್‌ಬಾಲ್ ಆಟಕ್ಕೆ ಹೆಚ್ಚಿನ ಒಲುವು ಹೊಂದಬೇಕು. ನಮ್ಮ ಸಂಸ್ಥೆಯ ಮುಖಾಂತರ ರಾಷ್ಟ್ರೀಯ ಮಟ್ಟದಲ್ಲಿ ಸ್ಥಾನವನ್ನು ಪಡೆದು ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಬೇಕೆಂದು ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ಚಾಮರಾಜನಗರ ಜಿಲ್ಲಾ ಪುಟ್ ಬಾಲ್ ಸಂಸ್ಥೆಯ ಕಾರ್ಯದರ್ಶಿ ಅಜಿತ್ ಎಂ.ಎಲ್, ಉಪಾಧ್ಯಕ್ಷ ಸಿ.ಟಿ. ಬೋಪಣ್ಣ, ಖಜಾಂಚಿ ಡಾ. ಗಿರೀಶ್‌ಕುಮಾರ್ ಕಿನಕಹಳ್ಳಿ, ತೀರ್ಪುಗಾರರಾದ ಸೆಂಥಿಲ್, ಗೋಪಾಲ್ ಅಜೇಶ್, ಸಂಕೇತ್ ಹಾಗೂ ಆಟಗಾರರು ಇದ್ದರು.

# ಇಡಿ ಅಧಿಕಾರಿಗಳ ವಿರುದ್ಧದ ಪ್ರಕರಣಕ್ಕೆ ಹೈಕೋರ್ಟ್ ತಡೆ

**ಬೆಂಗಳೂರು:** ಕಾಂಗ್ರೆಸ್ ಶಾಸಕ ನಂಜೇಗೌಡ ವಿರುದ್ಧ ಜಾರಿ ನಿರ್ದೇಶನಾಲಯ ಪ್ರಕರಣದಲ್ಲಿ ತನಿಖಾಧಿಕಾರಿ ವಿರುದ್ಧ ದಾಖಲಾಗಿದ್ದ ಎಫ್‌ಐಆರ್ ಗೆ ಹೈಕೋರ್ಟ್ ತಡೆ ನೀಡಿದೆ. ಕೋಚಿಮೂಲ್ ನೇಮಕಾತಿಯಲ್ಲಿ ಅಕ್ರಮ ನಡೆದಿದೆ ಎಂದು ನಿರ್ದೇಶಕ ಅಶ್ವಥ್ ನಾರಾಯಣ್ ಅವರನ್ನು ಇಡಿ ಅಧಿಕಾರಿಗಳು ವಿಚಾರಣೆಗೆ ಒಳಪಡಿಸಿದರು. ಅಶ್ವಥ್ ನಾರಾಯಣ್ ಮೇಲೆ 80 ಲಕ್ಷ ಹಣ ಪಡೆದ ಆರೋಪ ಇತ್ತು. ಹೀಗಾಗಿ ಇಡಿ ಅಧಿಕಾರಿಗಳು ವಿಚಾರಣೆ ನಡೆಸುತ್ತಾ ಇದ್ದರು. ಈ ಸಂದರ್ಭದಲ್ಲಿ ಇಡಿ ಅಧಿಕಾರಿಗಳು ಒತ್ತಡ ಹೇರಿದ್ರು, ತಮಗೆ ಬೇಕಾದ ಹೇಳಿಕೆ ನೀಡುವಂತೆ ಒತ್ತಡ ಹೇರುತ್ತಾ ಇದ್ದಾರೆ ಎಂದು ವಿಲ್ಸನ್ ಗಾರ್ಡ್ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ರು. ಈ ಪ್ರಕರಣಕ್ಕೆ ತಡೆಕೋರಿ ಹೈಕೋರ್ಟಿಗೆ ಇಡಿ ಅಧಿಕಾರಿಗಳು ಅರ್ಜಿ ಸಲ್ಲಿಕೆ ಮಾಡಿದರು. ಅರ್ಜಿ ವಿಚಾರಣೆ ನಡೆಸಿದ ನ್ಯಾ. ನಟರಾಜನ್ ಪೀಠ ಪ್ರಕರಣಕ್ಕೆ ಮಧ್ಯಂತರ ತಡೆ ನೀಡಿದೆ. ಈ ಮೂಲಕ ಇಡಿ ತನಿಖೆಗೆ ಬಲ ಸಿಕ್ಕಂತಾಗಿದೆ.

# ಡಿ.ವೈ.ಗೆರೆಯಲ್ಲಿ ಫೆ.28ರಂದು ಜಿಲ್ಲಾ ವೈಜ್ಞಾನಿಕ ಸಮ್ಮೇಳನ



ಹುಳಿಯಾರು ಸಮೀಪದ ಡಿ.ವೈ.ಗೆರೆಯಲ್ಲಿ ಜಿಲ್ಲಾ ವೈಜ್ಞಾನಿಕ ಸಮ್ಮೇಳನ ಆಯೋಜಿಸಿರುವ ಬಗ್ಗೆ ಹುಲಿಕಲ್ ನಟರಾಜ್ ಮಾಹಿತಿ ನೀಡಿದರು.

**ಹುಳಿಯಾರು:** ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು, ಸಾರ್ವಜನಿಕ ಶಿಕ್ಷಣ ಇಲಾಖೆ,

ಜ್ಞಾನ ಭಾರತಿ ವಿದ್ಯಾಸಂಸ್ಥೆ ಇವರ ಸಹಯೋಗದಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಅಂಗವಾಗಿ ಕಲ್ಪತರು ನಾಡು ಚಿಕ್ಕನಾಯಕನಹಳ್ಳಿ ತಾಲೂಕು ಹಂದನಕೆರೆ ಹೋಬಳಿ ದೊಡ್ಡಎಣ್ಣೆಗೆರೆ ಜ್ಞಾನ ಭಾರತಿ ವಿದ್ಯಾಸಂಸ್ಥೆ ಶಾಲಾ ಆವರಣದಲ್ಲಿ ಮೊಟ್ಟಮೊದಲ ಬಾರಿಗೆ ತುಮಕೂರು ಜಿಲ್ಲಾ ವೈಜ್ಞಾನಿಕ ಸಮ್ಮೇಳನವನ್ನು ಫೆಬ್ರವರಿ 28 ರಂದು ಹಮ್ಮಿಕೊಳ್ಳಲಾಗಿದೆ ಎಂದು ಹುಲಿಕಲ್ ನಟರಾಜ್ ತಿಳಿಸಿದ್ದಾರೆ.

ಈ ಸಂಬಂಧ ಮಂಗಳವಾರ ಸುದ್ದಿಗೋಷ್ಠಿ ನಡೆಸಿದ ಅವರು ಈ ಸಮ್ಮೇಳನದಲ್ಲಿ ಜನಪ್ರತಿನಿಧಿಗಳು, ವಿಜ್ಞಾನಿಗಳು, ಗಣ್ಯಚಿಂತಕರು, ಸಾಹಿತಿಗಳು, ಕಲಾವಿದರು, ಜನಸಾಮಾನ್ಯರು, ವಿದ್ಯಾರ್ಥಿಗಳು, ಶಿಕ್ಷಕರು, ಉಪನ್ಯಾಸಕರು, ಕೃಷಿಕರು ಸಾವಿರಾರು ಸಂಖ್ಯೆಯಲ್ಲಿ ಭಾಗವಹಿಸಲಿದ್ದು ಅರ್ಥಪೂರ್ಣವಾದ ವಿವಿಧ ಗೋಷ್ಠಿಗಳನ್ನು ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ತಿಳಿಸಿದ್ದಾರೆ.

ಜಿಲ್ಲಾಮಟ್ಟದ 'ವಿಶಿಷ್ಟ ಸೇವಾ ಪ್ರಶಸ್ತಿ-24' ಪ್ರಶಸ್ತಿಯನ್ನು ನೀಡಿ ಅನೇಕ ಸಾಧಕರನ್ನು ಸನ್ಮಾನಿಸಿ ಅಭಿನಂದಿಸಲಾಗುವುದು. ಕಾರ್ಯಕ್ರಮದಲ್ಲಿ, ವಿಜ್ಞಾನ ವಸ್ತು ಪ್ರದರ್ಶನ, ಪುಸ್ತಕ ಮೇಳ, ಆಹಾರಮೇಳ, ಆಕರ್ಷಕ ವಸ್ತು ಪ್ರದರ್ಶನ ಮತ್ತು ಮಾರಾಟ ಏರ್ಪಡಿಸಲಾಗಿದೆ. ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಎಲ್ಲಾ 5,6,7 ನೇ ತರಗತಿ ಮಕ್ಕಳಿಗೆ ಪರಿಸರ ಮಾಲಿನ್ಯ ತಡೆಗಟ್ಟುವಿಕೆ ಹೇಗೆ? ಮತ್ತು 8,9,10 ನೇ ತರಗತಿ ಮಕ್ಕಳಿಗೆ ಕೃತಕ ಉಪಗ್ರಹಗಳು ಮತ್ತು ಉಪಯೋಗ, ಮಾದರಿ ಮತ್ತು ಸಾಹಿತ್ಯ ರಚನೆ. ಪ್ರತೀಶಾಲೆಗಳಿಂದ ಎರಡೂ ವಿಭಾಗಗಳಿಗೆ ಮೂರು ಮಾದರಿಗಳನ್ನು ತಯಾರಿಸಿಕೊಂಡು ಪ್ರದರ್ಶನ ಮಾಡಲು ಅವಕಾಶ ಕಲ್ಪಿಸಲಾಗಿದ್ದು ಪ್ರತೀ ವಿಭಾಗಕ್ಕೂ ಪ್ರಥಮ, ದ್ವಿತೀಯ, ತೃತೀಯ ಹಾಗೂ ಸಮಾಧಾನಕರ ಬಹುಮಾನ ಪ್ರಧಾನ ಮಾಡಲಾಗುವುದು ಎಂದು ವಿವರಿಸಿದ್ದಾರೆ.

ಮಾಹಿತಿ ಮತ್ತು ವಿಜ್ಞಾನ ತಂತ್ರಜ್ಞಾನ ಇಲಾಖೆ, ಇಸ್ರೋ, ಬೆಂಗಳೂರು, ವಿಶ್ವೇಶ್ವರಯ್ಯ ಮ್ಯೂಸಿಯಂ, ಬೆಂಗಳೂರು ಮೊದಲಾದ ಇಲಾಖೆಗಳಿಂದ ವಿಜ್ಞಾನ ವಸ್ತು ಪ್ರದರ್ಶನ, ನಾಡಿನ ಹೆಸರಾಂತ ಚಿಂತಕರಿಂದ ವಿವಿಧ ವಿಷಯಗಳ ಮಂಡನೆ, ಸಂಜೆ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಿದ್ದು 28 ರಂದು ನಡೆಯುವ ಈ ಸಮ್ಮೇಳನದಲ್ಲಿ ಎಲ್ಲಾ ಸಾರ್ವಜನಿಕರು, ಪ್ರಮುಖವಾಗಿ ಶಾಲಾ ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿ, ಸಮ್ಮೇಳನ ಯಶಸ್ಸಿಗೆ ಸಹಕರಿಸಬೇಕೆಂದು ನಟರಾಜ್ ಮನವಿ ಮಾಡಿದ್ದಾರೆ.

ಜ್ಞಾನ ಭಾರತಿ ವಿದ್ಯಾಸಂಸ್ಥೆ ಸಂಸ್ಥಾಪಕ ಅಧ್ಯಕ್ಷರಾದ ಡಿ.ಎಸ್.ಪ್ರಶಾಂತ್, ನಿರ್ದೇಶಕರಾದ ಸಿದ್ಧಗಂಗಮ್ಮ, ಹೊಯಿಲ್‌ದೊರೆಯ ಶಾರದ ಸ್ಕೂಲ್ ರಂಗನಾಥ್, ಬಾಲಕೃಷ್ಣ ಮತ್ತಿತರರು ಇದ್ದರು.




ಹುಳಿಯಾರು ಹೋಬಳಿ ದೊಡ್ಡಬಿದರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಜಲ ಜೀವನ್ ಮಿಷನ್ ಎಎಒ ಯೋಜನೆಯಲ್ಲಿ ಅಂದಾಜು ಮೊತ್ತ 70.90 ಲಕ್ಷ ರೂ ವೆಚ್ಚದಲ್ಲಿ ಭೈರಾಪುರ ಗ್ರಾಮದ 297 ಮನೆಗಳಿಗೆ ಕುಡಿಯುವ ನೀರು ಕಾಮಗಾರಿಗೆ ಮಂಗಳವಾರ ಶಾಸಕ ಸಿ.ಬಿ.ಸುರೇಶ್‌ಬಾಬು ಗುದ್ದಲಿ ಪೂಜೆ ನೆರವೇರಿಸಿದರು.

# ಪದವಿ ಕಾಲೇಜಿನಲ್ಲಿ ವಿಶೇಷ ಉಪನ್ಯಾಸ

**ಹುಳಿಯಾರು:** ಹುಳಿಯಾರು-ಕೆಂಕೆರೆ ಬಿಎಂಎಸ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಅರ್ಥಶಾಸ್ತ್ರ ಹಾಗೂ ಐಕ್ಯೂಎಸ್‌ಸಿ ಸಹಯೋಗಸ್ಲ್ಲಿ ಬುಧವಾರ ವಿಶೇಷ ಉಪನ್ಯಾಸ ಹಮ್ಮಿಕೊಳ್ಳಲಾಗಿತ್ತು.

ಪ್ರೊ ಡಾ.ಜಿ.ತಿಪ್ಪೇಸ್ವಾಮಿ ಅವರು ಅರ್ಥಶಾಸ್ತ್ರ ಮಾನವನ ಬದುಕನ್ನು ಹೇಗೆ ರೂಪಿಸುತ್ತದೆ ಎಂಬುದಕ್ಕೆ ಸಂಬಂಧಿಸಿದಂತೆ ಉದಾಹರಣೆಗಳ ಮೂಲಕ ಮಾಹಿತಿ ನೀಡಿದರು. ಅರ್ಥಶಾಸ್ತ್ರದಿಂದ ಸರ್ಕಾರಿ ಯೋಜನೆಗಳ ಸಂಪೂರ್ಣ ಮಾಹಿತಿ ಲಭ್ಯವಾಗುತ್ತದೆ, ಸರ್ಕಾರ ಜನರ ಕಲ್ಯಾಣಕ್ಕಾಗಿ ಯೋಜನೆಗಳನ್ನು ಜಾರಿಗೆ ತರುತ್ತಿದೆ ಅದನ್ನು ಉಪಯೋಗ ಪಡೆಸಿಕೊಳ್ಳುವ ವಿಧಾನವನ್ನು ತಿಳಿಸಿಕೊಟ್ಟರು. ರಾಜ್ಯದಲ್ಲಿ ಕೇವಲ ಎರಡು ಪರ್ಸೆಂಟ್ ಜನರಿಗೆ ಮಾತ್ರ ಸರ್ಕಾರಿ ಉದ್ಯೋಗಗಳು ದೊರೆಯುತ್ತವೆ ಉಳಿದವರು ಬೇರೆ ಕ್ಷೇತ್ರಗಳ ಕಡೆ ತಮ್ಮ ಬದುಕನ್ನ ರೂಪಿಸಿಕೊಳ್ಳಬೇಕು ಆದ್ದರಿಂದ ಉದ್ಯಮಿಯಾಗುವದಕ್ಕೆ ಸಾಕಷ್ಟು ಅವಕಾಶಗಳಿವೆ. ಉದ್ಯಮಿಯಾದರೆ ಉದ್ಯೋಗಗಳನ್ನ ಸೃಷ್ಟಿಸುವುದಕ್ಕೆ ಸಹಕಾರಿಯಾಗುತ್ತದೆ, ಅಲ್ಲದೆ ವಿದ್ಯಾರ್ಥಿಗಳು ನೇರ ತೆರಿಗೆ ಕಟ್ಟುವ ಸಾಮರ್ಥ್ಯವನ್ನು ರೂಡಿಸಿಕೊಳ್ಳಿ ಎಂದು ತಿಳಿಸಿದರು.

ಪ್ರೊ.ಡಾ.ಜಿ.ಕೆ.ನಾಗರಾಜ್ ಸಂಪಾದನೆ ಎಷ್ಟು ಮುಖ್ಯವೋ ಉಳಿತಾಯ ಬಂಡವಾಳ ಹೂಡಿಕೆ ಸಹ ಅಷ್ಟೇ ಮಹತ್ವವನ್ನು ಪಡೆದಿರುತ್ತದೆ ಇವುಗಳಿಗೆ ಹೆಚ್ಚು ಆದ್ಯತೆ ಕೊಟ್ಟರೆ ಬದುಕು ಶ್ರೀಮಂತವಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಂಶುಪಾಲರಾದ ವೀರಣ್ಣ ವಹಿಸಿದ್ದರು. ಐಕ್ಯುಎಸಿ ಸಂಚಾಲಕರಾದ ಮಂಜುನಾಥ್, ಪ್ರೊ. ಯೋಗೀಶ್, ಪ್ರೊ.ಸುಷ್ಮಾ ಬಿರಾದರ, ಪ್ರೊ.ಮಲ್ಲಿಕಾರ್ಜುನ್, ಪ್ರೊ. ಮೋಹನ್ ಕುಮಾರ್, ಜಯಪ್ರಕಾಶ್, ಶಂಕರ್, ಕುಮಾರಸ್ವಾಮಿ ಮುಂತಾದವರು ಇದ್ದರು.



# ರಾಜ್ಯ ಕಾಂಗ್ರೆಸ್ ಸರ್ಕಾರ ವಿಸರ್ಜನೆಗೆ ಕೂಡ್ಲೂರು ಶ್ರೀಧರಮೂರ್ತಿ ಒತ್ತಾಯ



**ಚಾಮರಾಜನಗರ:** ಕಟ್ಟಡ ಕಾರ್ಮಿಕರಿಗೆ ಅನ್ಯಾಯ ಮಾಡುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ವಿಸರ್ಜನೆ ಮಾಡಬೇಕು ಎಂದು ಕೇಂದ್ರ ಸರ್ಕಾರ ವನ್ನು ಬಿಜೆಪಿ ಎಸ್ ಸಿ ಮೋರ್ಚಾದ ರಾಜ್ಯ ಕಾರ್ಯಕಾರಣಿ ಸದಸ್ಯ ಕೂಡ್ಲೂರು ಶ್ರೀಧರಮೂರ್ತಿ ಒತ್ತಾಯಿಸಿದರು. ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ರಾಜ್ಯ ಸರ್ಕಾರ 5 ಗ್ಯಾರೆಂಟಿ ಯೋಜನೆಗಳಿಗೆ ಹಣವನ್ನು ನೀಡುತ್ತೇವೆ ಎಂದು ಕಟ್ಟಡ ಕಾರ್ಮಿಕರ ಮಕ್ಕಳಿಗೆ ಶೈಕಣಿಕವಾಗಿ ನೀಡುತ್ತಿರುವ ವಿದ್ಯಾರ್ಥಿ ವೇತನ ಕಡಿತ ಮಾಡಿ ತೊಂದರೆ ನೀಡಿ ಆ ಬಡ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸ ಮಾಡಲು 1ನೇ ತರಗತಿಯಿಂದ 5ನೇ ತರಗತಿಯವರೆಗೆ ರೂ.5 ಸಾವಿರ ರೂ. ಬದಲು 1100 ರೂ.ಗಳನ್ನು ಮಾತ್ರ ನೀಡುತಿದ್ದಾರೆ. ಇದು ರಾಜ್ಯ ಸರ್ಕಾರ ಕಟ್ಟಡ ಕಾರ್ಮಿಕರಿಗೆ ಮಾಡುತ್ತಿರುವ ಅನ್ಯಾಯವಾಗಿದೆ ಎಂದು ತೀವ್ರವಾಗಿ ಖಂಡಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸರ್ಕಾರದ ಮಂತ್ರಿಗಳು ಕಾರ್ಯಕರ್ತರು, ಬಿಜೆಪಿ ಸರ್ಕಾರ ಹಾಗೂ ಕೇಂದ್ರ, ಸರ್ಕಾರದ ವಿರುದ್ಧ ಆರೋಪ ಮಾಡುತ್ತಿದ್ದಾರೆ. ಆದರೆ ಕಳೆದ ಸಾಲಿನಲ್ಲಿ ಬಿಜೆಪಿ ಸರ್ಕಾರದಲ್ಲಿ ಕಟ್ಟಡ ಕಾರ್ಮಿಕರ (ಕೂಲಿ) ಮಾಡುತ್ತಿರುವವರ ಮಕ್ಕಳಿಗೆ ಶಿಕ್ಷಣಕ್ಕೆ ಹೆಚ್ಚು ಅವಕಾಶ ಸಿಗಲೆಂದು ಎಲ್ಲಾ ಜಾತಿಯ ಕಟ್ಟಡ ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕವಾಗಿ ಸಹಾಯಧನವನ್ನು 1ನೇ ತರಗತಿಯಿಂದ 5ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ರೂ.5 ಸಾವಿರ ಸಹಾಯಧನವನ್ನು ನೀಡುತ್ತಿದ್ದರು. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಕಟ್ಟಡ ಕಾರ್ಮಿಕರ ಮಕ್ಕಳಿಗೆ ರೂ.5 ಸಾವಿರ ಬದಲು 1100 ರೂ.ಗಳನ್ನು ನೀಡುತ್ತಿದೆ ಎಂದು ದೂರಿದರು. ಕಟ್ಟಡ ಕಾರ್ಮಿಕರ ಕಲ್ಯಾಣಕ್ಕಾಗಿ ಕಳೆದ ಸರ್ಕಾರದಲ್ಲಿ ಸಿವಿಲ್ ಗುತ್ತಿಗೆದಾರರಿಂದ ಶೇ 1% ಹಣವನ್ನು ಕಟಾವು ಮಾಡುತ್ತಿದ್ದರು. ಈಗಿನ ಕಾಂಗ್ರೆಸ್ ಸರ್ಕಾರ ಶೇ 2% ಹಣವನ್ನು ಕಟಾವು ಮಾಡುತ್ತಿದೆ ಇದನ್ನು ಕಾರ್ಮಿಕ ಕಲ್ಯಾಣ ನಿಧಿಗೆ ನೀಡದೆ. ಇದರಿಂದ ಗುತ್ತಿಗೆದಾರರಿಗೂ ಅನಾನುಕೂಲವಾಗಿದೆ. ಗುತ್ತಿಗೆದಾರರಿಂದ ಕಳೆದ ಬಿಜೆಪಿ ಸರ್ಕಾರ 1% ಹಣವನ್ನು ಕಟಾವು ಮಾಡಿ ಕಟ್ಟಡ ಕಾರ್ಮಿಕರ ಕಲ್ಯಾಣನಿಧಿಗೆ ಹಾಕುತ್ತಿದ್ದರು. ಆದರೆ ಕಾಂಗ್ರೆಸ್ ಸರ್ಕಾರ ಬಂದ ನಂತರ ಗುತ್ತಿಗೆದ ಬದಲಾಗಿ 2% ನ್ನು ಕಟಾವು ಮಾಡಿ ಕಲ್ಯಾಣನಿಧಿಗೆ ಹಾಕದೇ ಗ್ಯಾರಂಟಿ ಯೋಜನೆಗಳಿಗೆ ಬಳಕೆ ಮಾಡಿಕೊಂಡಿದ್ದಾರೆ. ಕಟ್ಟಡ ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕವಾಗಿ ನೀಡುತ್ತಿರುವ ಹಣ ತುಂಬಾ ಕಡಿಮೆಯಾಗಿರುತ್ತದೆ .ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಎಸ್ ಇಪಿ, ಟಿಎಸ್ ಪಿ ಯೋಜನೆಗಳ 11 ಸಾವಿರ ಕೋಟಿಯನ್ನು ಗ್ಯಾರಂಟಿ ಯೋಜನೆಗೆ ಬಳಸಿಧದು, ದೀನ, ದಲಿತರ ಪರ ಎಂದು ಹೇಳಿಕೊಳ್ಳುವ ಕಾಂಗ್ರೆಸ್ ಕತ್ತುಹಿಸುಕು ಕೆಲಸ ಮಾಡಿದೆ ಈ ವಚನ ಭ್ರಷ್ಟ ಸರ್ಕಾರವನ್ನು ಕಿತ್ತೊಗೆಯಬೇಕು ಎಂದು ಕೂಡ್ಲೂರು ಶ್ರೀಧರಮೂರ್ತಿ ಆಗ್ರಹಿಸಿದರು.

# ಮೊಬೈಲ್ ಬಿಡಿ - ಪುಸ್ತಕ ಹಿಡಿಯಿರಿ



**ಚಾಮರಾಜನಗರ:** ಮೊಬೈಲ್ ಬಿಟ್ಟು ಪುಸ್ತಕ ಓದುವುದರಿಂದ ವಿದ್ಯಾರ್ಥಿಗಳಲ್ಲಿ ಆಲೋಚನಾ ಶಕ್ತಿ ಹೆಚ್ಚುತ್ತದೆ ಆದುದರಿಂದ ವಿದ್ಯಾರ್ಥಿಗಳು ಪುಸ್ತಕ ಓದುವ ಹವ್ಯಾಸ ಬೆಳೆಸಿಕೊಳ್ಳಿ ಎಂದು ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರಶಸ್ತಿ ಪುರಸ್ಕೃತ ರಂಗಕರ್ಮಿ, ಗಾಯಕ ಸಿ ಎಂ ನರಸಿಂಹ ಮೂರ್ತಿ ಹೇಳಿದರು.

ಅವರು ಇತ್ತೀಚೆಗೆ ಇಲ್ಲಿನ ಬಂಜಾರ ಇಂಡಿಯನ್ ಸ್ಕೂಲ್ ವತಿಯಿಂದ ಏರ್ಪಡಿಸಿದ್ದ ವಿದ್ಯಾರ್ಥಿ ಸಮಿತಿ ರಚನೆ ಮತ್ತು ಶಾಲಾ ವಾರ್ಷಿಕ ಕ್ರೀಡಾಕೂಟದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದರು.

ವಿದ್ಯಾರ್ಥಿಗಳು ಆಟದ ಜೊತೆ ಪಾಠ ಓದುವ ಹವ್ಯಾಸ ರೂಡಿಸಿಕೊಳ್ಳಬೇಕು. ಮಕ್ಕಳ ಬೆಳವಣಿಗೆಯಲ್ಲಿ ಪೋಷಕರ ಪಾತ್ರ ಬಹಳ ಮುಖ್ಯ ಪೋಷಕರು ಪುಸ್ತಕ ಓದುತ್ತಿದ್ದರೆ ಮಕ್ಕಳಲ್ಲಿ ಓದುವ ಆಸಕ್ತಿ ಮೂಡುತ್ತದೆ ಆದ್ದರಿಂದ ಮಕ್ಕಳಿಗೆ ಏನನ್ನಾದರೂ ಕಲಿಸಲು ಬಯಸಿದರೆ ಮೊದಲನೇಯದಾಗಿ ಪೋಷಕರು ಶುರು ಮಾಡಬೇಕು ಎಂದು ಕಿವಿ ಮಾತು ಹೇಳಿದರು. ಕಾರ್ಯಕ್ರಮ ಉದ್ಘಾಟಿಸಿದ ಸಶಸ್ತ್ರ ಮೀಸಲು ಪೊಲೀಸ್ ಇನ್ಸ್‌ಪೆಕ್ಟರ್ ರಂಗಸ್ವಾಮಿ ಮಾತನಾಡಿ, ಮಾನವನ ಬದುಕಿಗೆ ಪುಸ್ತಕಗಳು ಸಾಕಷ್ಟು ಮಾರ್ಗದರ್ಶನ ನೀಡುತ್ತವೆ. ಆದ್ದರಿಂದ ಪ್ರತಿಯೊಬ್ಬ ವಿದ್ಯಾರ್ಥಿ ಪುಸ್ತಕ ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು. ವಿದ್ಯಾರ್ಥಿ ಜೀವನವೆಂದರೆ ಆಟ ಪಾಠ ಮನೋರಂಜನೆ ನೆನಪಾಗುತ್ತದೆ. ಪಾಠದ ಜೊತೆಗೆ ಆಟವಿದ್ದರೆ ಮಾತ್ರ ಮಾನಸಿಕ ಮತ್ತು ದೈಹಿಕ ಬೆಳವಣಿಗೆ ಸಾಧ್ಯ ಎಂದು ಹೇಳಿದರು.

ಬಂಜಾರ ಇಂಡಿಯನ್ ಸ್ಕೂಲ್ ಮುಖ್ಯಸ್ಥೆ ಪದ್ಮಾವತಿ ಬಾಯಿ ವಿದ್ಯಾರ್ಥಿಗಳಿಗೆ ಪ್ರಮಾಣ ವಚನ ಬೋಧಿಸಿದರು. ಮುಖ್ಯ ಶಿಕ್ಷಕ ಎಂ ಪ್ರದೀಪ್ ಕುಮಾರ್ ಅಧ್ಯಕ್ಷತೆ ವಹಿಸಿದ್ದರು. ಆಟೋಟ ಸ್ಪರ್ಧೆಯಲ್ಲಿ ಭಾಗವಹಿಸಿದ್ದ ನೂರಾರಕ್ಕು ಹೆಚ್ಚು ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಮಾಡಲಾಯಿತು. ವಿದ್ಯಾರ್ಥಿಗಳು ಕನ್ನಡ ಶಿಕ್ಷಕ ಹಾಗೂ ಗಾಯಕರಾದ ಜೆ ಬಿ ಮಹೇಶ್ ಅವರ ಸಂಗೀತ ನಿರ್ದೇಶನದಲ್ಲಿ ಜನಪದ ಗೀತೆಗಳನ್ನು ಹಾಡಿ ರಂಜಿಸಿದರು. ಶಿಕ್ಷಕರಾದ ದೀಪ, ಎ.ಜೆ ಸಿದ್ದರಾಜು, ಸುನಂದ ಮೊದಲಾದವರು ಹಾಜರಿದ್ದರು.

# ಬಿಜೆಪಿಗೆ ಬಿಎಸ್‌ವೈ ಬಾಹುಬಲಿ ಇದ್ದಂತೆ: ರಘು ಕೌಟಿಲ್ಯ

**ಮೈಸೂರು:** ಬಿಜೆಪಿಗೆ ಬಿ.ಎಸ್.ಯಡಿಯೂರಪ್ಪ ಹಾಗೂ ಬಿ.ವೈ.ವಿಜಯೇಂದ್ರ ಬಾಹುಬಲಿ ಇದ್ದಂತೆ. ಅವರಿಂದ ಪಕ್ಷದ ಕಾರ್ಯಕರ್ತರಿಗೆ ರಣೋತ್ಸಾಹ ಬಂದಿದ್ದು, ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ರಾಜ್ಯದ 28 ಕ್ಷೇತ್ರಗಳಲ್ಲೂ ಎನ್‌ಡಿಎ ಒಕ್ಕೂಟ ಗೆಲ್ಲಲಿದೆ ಎಂದು ಪಕ್ಷದ ಹಿಂದುಳಿದ ವರ್ಗಗಳ ಮೋರ್ಚಾ ಅಧ್ಯಕ್ಷ ರಘು ಕೌಟಿಲ್ಯ ವಿಶ್ವಾಸ ವ್ಯಕ್ತಪಡಿಸಿದರು.

ನಗರದ ವಸ್ತುಪ್ರದರ್ಶನ ಪ್ರಾಧಿಕಾರದ ಆವರಣದಲ್ಲಿ ಗುರುವಾರ ಆಯೋಜಿಸಿದ್ದ ಬಿಜೆಪಿ ವಿಶೇಷ ಕಾರ್ಯಕಾರಿಣಿಯಲ್ಲಿ ಅವರು ಮಾತನಾಡಿದರು.

ದಕ್ಷಿಣ ಭಾರತದಲ್ಲಿ ಬಿಜೆಪಿಗೆ ಗೆಲುವಿನ ಬಾಗಿಲು ತೆರೆದ ಧೀಮಂತ ನಾಯಕ ಯಡಿಯೂರಪ್ಪ. ನಿಜವಾದ ಭಾರತೀಯ ಮನೋಭಾವದ ಕಾರ್ಯಕರ್ತರನ್ನು ಬೆಳೆಸಿದ ವಿಶ್ವದ ಅತಿ ದೊಡ್ಡ ರಾಜಕೀಯ ಪಕ್ಷ ಬಿಜೆಪಿ ಎಂದು ಬಣ್ಣಿಸಿದರು.

ಹಿಂದೂ ಧರ್ಮಕ್ಕೆ ಹಾನಿಯಾದಾಗಲೆಲ್ಲ ಅವತಾರ ಪುರುಷರು ಜನ್ಮ ಎತ್ತಿ ಬಂದ ಉದಾಹರಣೆ ಇದೆ. ಅಂತೆಯೇ ಮೋದಿ ಜನ್ಮವೆತ್ತಿ ಬಂದು ಅಯೋಧ್ಯೆ ರಾಮಮಂದಿರ ಮಾಡಿದ್ದಾರೆ. ದೇಶದ ಉದ್ದಗಲಕ್ಕೆ ರಾಮರಥ ಎಳೆದ ಅಡ್ವಾಣಿ ಅವರಿಗೆ ಭಾರತ ರತ್ನ ನೀಡಿ ರತ್ನಾಭಿಷೇಕ ಮಾಡಿದ್ದಾರೆ ಎಂದರು.

ಕಳೆದ ವಿಧಾನಸಭಾ ಚುನಾವಣೆಯ ಸೋಲಿನ ಕಹಿ ಮರೆತು ಈ ಚುನಾವಣೆಗೆ ಒಟ್ಟಾಗಿ ದುಡಿಯೋಣ. ಬಿಜೆಪಿ ಗೆಲುವಿನಿಂದ ಕಾಂಗ್ರೆಸ್ ಸಂಪೂರ್ಣ ನಾಶ ಆಗಲಿದೆ ಎಂದು ಹೇಳಿದರು.



ಪಕ್ಷದ ಜಿಲ್ಲಾ ಗ್ರಾಮಾಂತರ ಘಟಕದ ನಿಕಟಪೂರ್ವ ಅಧ್ಯಕ್ಷೆ ಮಂಗಳಾ ಸೋಮಶೇಖರ್, ಬಿಜೆಪಿ 400 ಸ್ಥಾನ ಗೆಲ್ಲುವುದಾಗಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸಂಸತ್ತಿನಲ್ಲೇ ಹೇಳಿದ್ದಾರೆ. ಹೀಗಾಗಿ ಬಿಜೆಪಿಗೆ ಸೋಲಿಲ್ಲ. ನಾವು ಇನ್ನಷ್ಟು ಸದೃಢವಾಗಿ ಪಕ್ಷ ಕಟ್ಟಬೇಕು. ನಮ್ಮ ಪಕ್ಷದ ಬೇರು ಗಟ್ಟಿಯಾಗಬೇಕು. ತಾರತಮ್ಯ ಮರೆತು ಕಾರ್ಯಕರ್ತರು ಒಟ್ಟಾಗಿ ದುಡಿಯಬೇಕು ಎಂದು ಕಿವಿಮಾತು ಹೇಳಿದರು.

**ಜನರ ಮುಂದೆ ಸತ್ಯ ತೆರೆದಿಡಿ:** ಪಕ್ಷದ ರಾಜ್ಯ ಉಪಾಧ್ಯಕ್ಷ ಎನ್. ಮಹೇಶ್ ಮಾತನಾಡಿ ರಾಜ್ಯಕ್ಕೆ ಕೇಂದ್ರವು ತೆರಿಗೆಯ ಪಾಲು ನೀಡದೇ ತಾರತಮ್ಯ ಮಾಡುತ್ತಿದೆ ಎಂದು ಕಾಂಗ್ರೆಸ್ ಸುಳ್ಳು ಹೇಳುತ್ತಿದೆ. ಆದರೆ ಯುಪಿಎ ಸರ್ಕಾರದ ಅವಧಿಯಲ್ಲಿ 10 ವರ್ಷದಲ್ಲಿ ಕರ್ನಾಟಕಕ್ಕೆ 81790 ಕೋಟಿ ಬಂದಿದ್ದು ವರ್ಷಕ್ಕೆ ಸರಾಸರಿ 8100 ಕೋಟಿ ಸಿಕ್ಕಿದೆ. ಕಳೆದ 10 ವರ್ಷದಲ್ಲಿ ಎನ್‌ಡಿಎ ಸರ್ಕಾರದ ಅವಧಿಯಲ್ಲಿ ರಾಜ್ಯಕ್ಕೆ 280832 ಕೋಟಿ ಬಂದಿದ್ದು ಪ್ರತಿ ವರ್ಷ ಸರಾಸರಿ 21 ಸಾವಿರ ಕೋಟಿ ಬಂದಿದೆ. ಗ್ರಾಮ ಚಲೋ ಅಭಿಯಾನದ ಮೂಲಕ ಕಾರ್ಯಕರ್ತರು ಈ ಎಲ್ಲ ಸತ್ಯವನ್ನು ಜನರ ಮುಂದೆ ತೆರೆದಿಡಬೇಕು ಎಂದು ಸಲಹೆ ನೀಡಿದರು.

**ಎರಡು ನಿರ್ಣಯ ಅಂಗೀಕಾರ:** ಅಯೋಧ್ಯೆಯಲ್ಲಿ ರಾಮಮಂದಿರ ನಿರ್ಮಾಣಕ್ಕೆ ಕಾರಣರಾದ ಪ್ರಧಾನಿ ಮೋದಿ ಅವರಿಗೆ ಪೋಸ್ಟ್ ಕಾರ್ಡ್ ಮೂಲಕ ಅಭಿನಂದನಾ ಪತ್ರ ಸಲ್ಲಿಸುವುದು. ರಾಜ್ಯ ಸರ್ಕಾರದ ದಲಿತ ಮತ್ತು ರೈತ ವಿರೋಧಿ ನೀತಿಯನ್ನು ಖಂಡಿಸುವ ನಿರ್ಣಯಗಳನ್ನು ಕಾರ್ಯಕಾರಿಣಿಯು ಅಂಗೀಕರಿಸಿತು.

ಪಕ್ಷದ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್. ಯಡಿಯೂರಪ್ಪ ಕಾರ್ಯಕ್ರಮವನ್ನು ಉದ್ಘಾಟಿಸಿ ಶುಭ ಕೋರಿ ನಿರ್ಗಮಿಸಿದರು. ಪಕ್ಷದ ಜಿಲ್ಲಾ ಗ್ರಾಮಾಂತರ ಘಟಕದ ಅಧ್ಯಕ್ಷ ಎಲ್.ಆರ್. ಮಹಾದೇವಸ್ವಾಮಿ ಅಧ್ಯಕ್ಷತೆ ವಹಿಸಿದ್ದರು. ನಗರ ಘಟಕದ ಅಧ್ಯಕ್ಷ ಎಲ್. ನಾಗೇಂದ್ರ, ಮುಖಂಡರಾದ ಎಂ. ರಾಜೇಂದ್ರ, ಎಂ. ಶಿವಣ್ಣ, ಹರ್ಷವರ್ಧನ್, ರಮೇಶ್, ಸಿ.ಎಚ್. ವಿಜಯಶಂಕರ್, ಈ.ಅಶ್ವತ್ಥನಾರಾಯಣ, ಎಸ್. ಮಹದೇವ, ಮಿರ್ಲೆ ಶ್ರೀನಿವಾಸ ಗೌಡ, ಪ್ರತಾಪ್ ದೇವನೂರು, ಸುರೇಶ್ ಬಾಬು, ಕೆ.ಟಿ. ಕುಮಾರಸ್ವಾಮಿ, ರೇವಣ್ಣ, ಮಹೇಶ್, ಬಾಲಕೃಷ್ಣ, ವಸಂತ ಕುಮಾರ್, ಅನಿಲ್ ಬಾಬು ವೇದಿಕೆಯಲ್ಲಿದ್ದರು.

# ವಿಧಾನಸಭೆಯ ಅಧಿವೇಶನದ ಕಾರ್ಯಕಲಾಪಗಳ ನೇರಪ್ರಸಾರಕ್ಕೆ ಕ್ರಮ

**ಬೆಂಗಳೂರು:** 16ನೇ ವಿಧಾನಸಭೆಯ 3 ನೇ ಅಧಿವೇಶನವು ಫೆಬ್ರವರಿ 12 ರಿಂದ 23 ರವರೆಗೆ ವಿಧಾನಸೌಧದ ಮೊದಲನೇ ಮಹಡಿಯಲ್ಲಿ ನಡೆಯಲಿರುವ ಕಾರ್ಯಕಲಾಪಗಳನ್ನು ಚಿತ್ರೀಕರಿಸಿ, ನೇರ ಪ್ರಸಾರ ಮಾಡಲು ಹಾಗೂ ಚಿತ್ರೀಕರಿಸಿದ ದೃಶ್ಯಗಳನ್ನು ಉಭಯ ಸದನಗಳ ಸಚಿವಾಲಯದ ಆಂತರಿಕ ದೂರದರ್ಶನ ಶಾಖೆ (ಸಿಸಿಟಿವಿ), ವೆಬ್‌ಕ್ಯಾಸ್ಟಿಂಗ್ ಮತ್ತು ಇತರೆ ಖಾಸಗಿ ಚಾನಲ್‌ಗಳಿಗೆ ಸೆಟಲೈಟ್ ಮೂಲಕ ಸಂಪರ್ಕ ಒದಗಿಸುವ ಕಾರ್ಯವನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯವರಿಗೆ ವಹಿಸಲಾಗಿರುತ್ತದೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಮೆ. ಕರ್ನಾಟಕ ಸ್ಟೇಟ್ ಮಾರ್ಕೆಟಿಂಗ್ ಕಮ್ಯೂನಿಕೇಷನ್ ಮತ್ತು ಅಡ್ವರ್ಟೈಸಿಂಗ್ ಲಿಮಿಟೆಡ್, ಬೆಂಗಳೂರು ಈ ಸಂಸ್ಥೆಗೆ ಕಾರ್ಯಾದೇಶ ನೀಡಲಾಗಿದ್ದು, ಸದರಿ ಸಂಸ್ಥೆಯವರು ಚಿತ್ರೀಕರಿಸಿದ ವಿಧಾನಸಭೆಯ ಕಾರ್ಯಕಲಾಪಗಳ ಔಟ್‌ಪುಟ್‌ನ್ನು ಇತರೆ ಖಾಸಗಿ ಸುದ್ದಿ ವಾಹಿನಿಯವರು http://youtube.com/@KarnatakaLASessions ಲಿಂಕ್ ಮೂಲಕ ಪಡೆಯಬಹುದಾಗಿದೆ. ಅಲ್ಲದೇ ಮುದ್ರಣ ಮಾಧ್ಯಮದವರು ಸದನದ ಕಾರ್ಯಕಲಾಪಗಳ ಭಾವಚಿತ್ರವನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಪಡೆಯಬಹುದಾಗಿದೆ.ಸದನದ ಕಾರ್ಯಕಲಾಪಗಳನ್ನು ವರದಿ ಮಾಡುವ ವರದಿಗಾರರಿಗೆ ವಿಧಾನಸಭೆಯ ಸಭಾಂಗಣದ ಎರಡನೇ ಮಹಡಿಯಲ್ಲಿರುವ ಪತ್ರಕರ್ತರ ಗ್ಯಾಲರಿಗೆ ಪ್ರವೇಶಿಸಲು ಅವಕಾಶವಿರುತ್ತದೆ. ಖಾಸಗಿ ಸುದ್ದಿವಾಹಿನಿಗಳ ಕ್ಯಾಮರಾಮೆನ್ ಹಾಗೂ ಮುದ್ರಣ ಮಾಧ್ಯಮದ ಛಾಯಾಗ್ರಾಹಕರುಗಳಿಗೆ ವಿಧಾನಸಭೆಯ ಸಭಾಂಗಣದೊಳಗೆ ಎರಡನೇ ಮಹಡಿಯ ಪತ್ರಕರ್ತರ ಗ್ಯಾಲರಿಗೆ ಪ್ರವೇಶಾವಕಾಶ ಇರುವುದಿಲ್ಲ. ವರದಿಗಾರರು ಸದನದ ಒಳಗೆ ಮೊಬೈಲ್ ದೂರವಾಣಿ, ಟ್ಯಾಬ್ ಇತ್ಯಾದಿಗಳನ್ನು ಕೊಂಡೊಯ್ಯುವಂತಿಲ್ಲ. ಎಲ್ಲಾ ಮುದ್ರಣ ಮಾಧ್ಯಮದವರು ಮತ್ತು ಸುದ್ದಿವಾಹಿನಿಯವರು ಸಹಕರಿಸುವಂತೆ ವಿಧಾನಸಭೆಯ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜನಸ್ಪಂದನದ ಜನಮಿಡಿತ

**ಬೆಂಗಳೂರು:** ವಿಧಾನಸೌಧದಲ್ಲಿಂದು ನಡೆದ ಮುಖ್ಯಮಂತ್ರಿಗಳ 2ನೇ ಜನಸ್ಪಂದನ ಕಾರ್ಯಕ್ರಮದಲಿ ಅಪಾರ ಸಂಖೆ?ಯಯಲ್ಲಿ ಸಾರ್ವಜನಿಕರು ಭಾಗವಹಿಸಿ ತಮ್ಮ ಅಹವಾಲುಗಳನ್ನು ಸಂಬಂಧಿಸಿದ ಇಲಾಖೆಗಳಿಗೆ ಸಲ್ಲಿಸುತ್ತಿರುವ ದೃಶ್ಯ ಕಂಡು ಬಂದಿತು.

ವಿವಿಧ ಇಲಾಖೆಗಳ ಉನ್ನತ ಮಟ್ಟದ ಅಧಿಕಾರಿಗಳು ಭಾಗವಹಿಸಿ ತಮ್ಮ ಇಲಾಖೆಗೆ ಸಂಬಂಧಿಸಿದ ಅರ್ಜಿಗಳನ್ನು ಸ್ಥಳದಲ್ಲಿಯೇ ಪರಿಶೀಲಿಸಿ ಪರಿಹಾರಕ್ಕೆ ಪ್ರಯತ್ನಿಸಿದರು. ಬೆಂಗಳೂರು, ಚಿಕ್ಕಬಳ್ಳಾಪುರ, ಹಾಸನ, ಶಿವಮೊಗ್ಗ, ಕಲಬುರಗಿ, ಯಾದಗಿರಿ, ಹೀಗೆ ವಿವಿಧ ಜಿಲ್ಲೆಗಳಿಂದ ಸಾರ್ವಜನಿಕರು ಶಕ್ತಿಕೇಂದ್ರವಾದ ವಿಧಾನಸೌಧಕ್ಕೆ ಆಗಮಿಸಿ ತಮ್ಮ ಸಮಸ್ಯೆ ಪರಿಹಾರವಾದೀತೆ? ಎಂಬ ಪ್ರಶ್ನೆಯ ಜೊತೆಗೆ ಆಶಾವಾದವನ್ನು ಸಹ ಹೊಂದಿದ್ದರು. ಸಿದ್ದರಾಜು ಎಂಬುವವರು ವರುಣ ಕ್ಷೇತ್ರದವರಾಗಿದ್ದು, ಸರ್ಕಾರ ಗಂಗಾ ಕಲ್ಯಾಣ ಯೋಜನೆಯಡಿ ಬೋರ್‌ವೆಲ್ ವ್ಯವಸ್ಥೆ ಪಡೆಯಲು ಅರ್ಜಿ ಸಲ್ಲಿಸಿದರು. ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲೂಕಿನ ಮಿಂಡಗಲ್‌ನ ರಾಮಕೃಷ್ಣ ಅವರು ಗುತ್ತಿಗೆ ಆಧಾರದ ಮೇಲೆ ನೌಕರಿಗಾಗಿ ಅರ್ಜಿ ಸಲ್ಲಿಸಿದರು.

ಕೊಪ್ಪಳ ಜಿಲ್ಲೆಯವರಾದ ನಾಗರಾಜು ಅವರು ಜಿಲ್ಲೆಯ ಮುನೀರಾಬಾದ್‌ನಲ್ಲಿರುವ ಜೂಜಾಟದ ಕ್ಲಬ್‌ನ್ನು ಮುಚ್ಚುವಂತೆ ಮನವಿ ಸಲ್ಲಿಸಲು ಬಂದಿದ್ದರು. ಶಿವಮೊಗ್ಗದ ಯಶೋಧ ಅವರು ಕಂದಾಯ ಇಲಾಖೆಯಲ್ಲಿ ಅವರ ಸಂಬಂಧಿಕರು ನಕಲಿ ವಂಶವೃಕ್ಷ ಸೃಷ್ಟಿಸಿ ತಮಗೆ ಅನ್ಯಾಯ ಮಾಡಿರುವ ಬಗ್ಗೆ ಅರ್ಜಿ ಸಲ್ಲಿಸಿದರು. ಕಲಬುರಗಿಯವರಾದ ಅರುಣ್‌ಕುಮಾರ್ ಅವರು ಸ್ವಾವಲಂಬಿ ಸಾರಥಿ ಯೋಜನೆಯಡಿ ಟ್ಯಾಕ್ಸಿ ನೀಡುವಂತೆ ಅರ್ಜಿ ಸಲ್ಲಿಸಿರುವುದಾಗಿ ತಿಳಿಸಿದರು. ಯಾದಗಿರಿ ಮಹಿಳೆಯೊಬ್ಬರು ತಮ್ಮ ಪತಿಯು ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುವಾಗ ಮೃತಪಟ್ಟಿದ್ದು, ಎರಡು ವರ್ಷ ಕಳೆದರೂ ಇನ್ನೂ ಪಿಂಚಣಿ ಮಂಜೂರಾಗಿಲ್ಲ ಎಂದು ಅರ್ಜಿ ಸಲ್ಲಿಸಿದರು. ವಿಕಲಚೇತನರಾದ ಧರಣೇಂದ್ರ ಕುಮಾರ್ ಅವರು ಕಾಲು ಜೋಡಣೆ ಶಸ್ತ್ರ ಚಿಕಿತ್ಸೆಗಾಗಿ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ 3 ಲಕ್ಷ ರೂಪಾಯಿ ನೀಡುವಂತೆ ಮನವಿ ಸಲ್ಲಿಸಿದರು.

## ಒಂದು ತಿಂಗಳೊಳಗೆ ಅರ್ಜಿ ಬಗೆಹರಿಸಿ

**ಬೆಂಗಳೂರು:** ಎರಡನೇ ಜನಸ್ಪಂದನದ ಬಳಿಕ ಮುಖ್ಯಮಂತ್ರಿಗಳು ವಿಧಾನಸೌಧದ ಆವರಣದಲ್ಲಿ ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿ, ಇಂದಿನ ಜನ ಸ್ಪಂದನೆಯಲ್ಲಿ 11 ಸಾವಿರ ಅರ್ಜಿಗಳು ಸ್ವೀಕೃತವಾಗಿವೆ. 20 ಸಾವಿರ ಮಂದಿ ಭಾಗಿ ಆಗಿದ್ದಾರೆ ಎಂದು ತಿಳಿಸಿದರು.ಆಯಾ ಜಿಲ್ಲೆಗೆ ಸಂಬಂಧಪಟ್ಟ ಅರ್ಜಿಗಳನ್ನು ಆಯಾ ಜಿಲ್ಲಾಧಿಕಾರಿಗಳು ಸಮಯ ಮಿತಿಯೊಳಗೆ ಬಗೆಹರಿಸಲಿದ್ದಾರೆ. ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಅವರ ವ್ಯಾಪ್ತಿಯ ಅರ್ಜಿಗಳನ್ನು ಆದಷ್ಟು ಬೇಗ ಪರಿಹರಿಸಲು ಸೂಚನೆ ನೀಡಲಾಗಿದೆ ಎಂದರು.

ಮೊದಲ ಜನ ಸ್ಪಂದನೆಯಲ್ಲಿ ಬಂದ ಅರ್ಜಿಗಳಲ್ಲಿ 98% ಪರಿಹಾರ ದೊರಕಿವೆ. ಈ ಬಾರಿಯೂ ಅಷ್ಟೇ ತ್ವರಿತವಾಗಿ ಪರಿಹಾರ ಒದಗಿಸಲು ನಾನು ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಅಧಿಕಾರಿಗಳು ಕೆಳ ಹಂತದಲ್ಲೇ ಸಮಸ್ಯೆ ಬಗೆಹರಿಸಿದರೆ ಬೆಂಗಳೂರಿಗೆ ಜನ ಬಂದು ಅರ್ಜಿ ಕೊಡುವ ಸಂದರ್ಭ ಉದ್ಭವಿಸುವುದಿಲ್ಲ. ಜಿಲ್ಲಾಧಿಕಾರಿ ಮತ್ತು ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ಮೇಲೆ ಈ ಜವಾಬ್ದಾರಿ ಹೆಚ್ಚು ಎಂದು ಮುಖ್ಯಮಂತ್ರಿಗಳು ಸೂಚಿಸಿದರು. ಆಡಳಿತ ಜಡತ್ವದಿಂದ ಕೂಡಿರಬಾರದು. ಈ ಬಗ್ಗೆ ಅಧಿಕಾರಿಗಳಿಗೆ ಎಚ್ಚರಿಕೆ ಕೊಡ್ತೇನೆ. ನಿಮ್ಮ ಹಂತದಲ್ಲೇ ಸಮಸ್ಯೆ ಬಗೆಹರಿಸಿ ಎನ್ನುವ ಎಚ್ಚರಿಕೆ ಕೊಡುತ್ತೇನೆ. ಜನರನ್ನು ಸರಿಯಾಗಿ ನಡೆಸಿಕೊಳ್ಳದಿದ್ದರೆ ಅಂಥವರ ಮೇಲೆ ಕ್ರಮ ಕೈಗೊಳ್ಳುತ್ತೇವೆ. ಒಂದು ತಿಂಗಳೊಳಗೆ ಹೆಚ್ಚು ಅರ್ಜಿ, ಅಹವಾಲು ಪರಿಹರಿಸಿ ಎಂದು ಜಿಲ್ಲಾಧಿಕಾರಿ ಮತ್ತು ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಮತ್ತು ಉಸ್ತುವಾರಿ ಕಾರ್ಯದರ್ಶಿಗಳಿಗೆ ಸೂಚಿಸಿದರು.

# ಸಮಸಮಾಜ ನಿರ್ಮಾಣಕ್ಕಾಗಿ ಜಾರಿಯಾದ ಗ್ಯಾರಂಟಿಗಳನ್ನು ನಿಲ್ಲಿಸುವ ಪ್ರಶ್ನೆಯೇ ಇಲ್ಲ

**ಬೆಂಗಳೂರು:** ಗೃಹ ಕಚೇರಿ ಕೃಷ್ಣದಲ್ಲಿ ನ.27 ರಂದು ನಡೆದ ಮೊದಲ ಜನಸ್ಪಂದನ ಕಾರ್ಯಕ್ರಮದಲ್ಲಿ ಸ್ವೀಕರಿಸಲಾದ 5 ಸಾವಿರ ಅರ್ಜಿಗಳ ಪೈಕಿ ಶೇ. 98 ರಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಿ, ಜನರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಪರಿಹಾರಗಳನ್ನು ಒದಗಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ವಿಧಾನಸೌಧದ ಆವರಣದಲ್ಲಿ ಬುಧವಾರ ನಡೆದ ರಾಜ್ಯಮಟ್ಟದ ಎರಡನೇ ಜನಸ್ಪಂದನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದ ಮುಖ್ಯಮಂತ್ರಿಗಳು, ಆಡಳಿತ ಜನರ ಬಳಿಗೆ ಹೋಗಬೇಕು, ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎನ್ನುವುದು ಸರಕಾರದ ಆಶಯವಾಗಿದೆ. ಜನರು ಸಣ್ಣಪುಟ್ಟ ಕೆಲಸಗಳಿಗಾಗಿ ಬೆಂಗಳೂರಿಗೆ ಬರುವಂತಾಗಬಾರದು. ಸ್ಥಳೀಯ ಮಟ್ಟದಲ್ಲಿಯೇ ಸಮಸ್ಯೆ ಬಗೆಹರಿಯಬೇಕು. ಈ ನಿಟ್ಟಿನಲ್ಲಿ ಎಲ್ಲ ಜಿಲ್ಲೆಗಳಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಈ ವರೆಗೆ ಒಟ್ಟು 108 ಜನಸ್ಪಂದನ ಕಾರ್ಯಕ್ರಮಗಳನ್ನು ನಡೆಸಿದ್ದಾರೆ ಎಂದು ಅವರು ವಿವರಿಸಿದರು.

ತಾಲ್ಲೂಕು, ಜಿಲ್ಲಾ ಮಟ್ಟದಲ್ಲಿಯೂ ಜನಸ್ಪಂದನ ಕಾರ್ಯಕ್ರಮ ನಡೆಸಲಾಗುತ್ತಿದ್ದು, ಇಲ್ಲಿ ಬಗೆಹರಿಯದ ಸಮಸ್ಯೆಗಳನ್ನು ರಾಜ್ಯಮಟ್ಟದ ಜನಸ್ಪಂದನ ಕಾರ್ಯಕ್ರಮದಲ್ಲಿ ಜನರು ಸಲ್ಲಿಸಬಹುದಾಗಿದೆ. ಕಾನೂನುಬದ್ಧವಾದ ಸಮಸ್ಯೆಗಳಿಗೆ ನಮ್ಮ ಸರ್ಕಾರ ಪರಿಹಾರ ಒದಗಿಸಲಿದೆ ಎಂದು ಮುಖ್ಯಮಂತ್ರಿಗಳು ಸ್ಪಷ್ಟಪಡಿಸಿದರು. ಸಮಸ್ಯೆ ಬಗೆಹರಿಸಲು ಕಾನೂನು ತೊಡಕು ಇದ್ದಲ್ಲಿ, ಈ ಕುರಿತು ಅರ್ಜಿದಾರರಿಗೆ ಕಾರಣ ಸಹಿತ ಹಿಂಬರಹ ನೀಡಲಾಗುವುದು ಎಂದು ತಿಳಿಸಿದರು.

ಜನಸ್ಪಂದನದಲ್ಲಿ ಸ್ವೀಕರಿಸಲಾದ ಅರ್ಜಿಗಳಿಗೆ ಮೂರು ತಿಂಗಳೊಳಗೆ ವಿಲೇವಾರಿ ಮಾಡಬೇಕು. ಜನರ ಸಮಸ್ಯೆಗಳಿಗೆ ಪರಿಹಾರ ಒದಗಿಸಬೇಕು ಎಂದು ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಲಾಗಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಆಡಳಿತ ವ್ಯವಸ್ಥೆ ಚುರುಕುಗೊಳ್ಳಬೇಕು.



ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎನ್ನುವ ಆಶಯದೊಂದಿಗೆ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸರ್ಕಾರ ರೂಪಿಸುವ ಜನೋಪಯೋಗಿ ಕಾರ್ಯಕ್ರಮಗಳು ನೇರವಾಗಿ ಫಲಾನುಭವಿಗಳಿಗೆ ತಲುಪಬೇಕು. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದು ಎಂಟು ತಿಂಗಳೊಳಗಾಗಿ ಎಲ್ಲ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ್ದೇವೆ ಎಂದು ಹೇಳಿದ ಅವರು ಪ್ರತಿಪಕ್ಷಗಳು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಲು ಸಾಧ್ಯವಿಲ್ಲ. ಜಾರಿಗೊಳಿಸಿದರೇ ಕರ್ನಾಟಕ ಆರ್ಥಿಕವಾಗಿ ದಿವಾಳಿಯಾಗುತ್ತದೆ ಎಂದು ಟೀಕಿಸಿದ್ದರು. ಯೋಜನೆ ಜಾರಿಗೊಳಿಸಿದಾಗ ವಿರೋಧ ಪಕ್ಷಗಳ ನಾಯಕರು ಈಗ ಯೋಜನೆ ಜಾರಿಗೊಳಿಸಿ ಆಮೇಲೆ ನಿಲ್ಲಿಸುತ್ತಾರೆ ಎಂಬುದು ಸೇರಿದಂತೆ ವಿವಿಧ ರೀತಿಯ ಅಪಪ್ರಚಾರಗಳನ್ನು ಮಾಡಿದ್ದು, ಅಂತಹ ಅಪಪ್ರಚಾರಗಳಿಗೆ ಮತ್ತು ಸುಳ್ಳು ವದಂತಿಗಳಿಗೆ ಜನರು ಕಿವಿಗೊಡಬಾರದು ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಗ್ಯಾರಂಟಿ ಯೋಜನೆಗಳು ಬಡವರ ಕಾರ್ಯಕ್ರಮ. ಅಸಮಾನತೆ ನಿವಾರಿಸುವ ಕಾರ್ಯಕ್ರಮ. ನಾವು ಸಂವಿಧಾನದಲ್ಲಿ, ಬಸವಾದಿ ಶರಣರಲ್ಲಿ ನಂಬಿಕೆ ಇಟ್ಟುಕೊಂಡಿರುವವರು. ಸಮಾಜದಲ್ಲಿ ಭ್ರಾತೃತ್ವ ಬೆಳೆಯಬೇಕು, ಸಮಾನತೆ ಮೂಡಬೇಕು. ಆಗ ಮಾತ್ರ ಸಮಾಜದಲ್ಲಿ ಶಾಂತಿ, ನೆಮ್ಮದಿ ಕಾಪಾಡಲು ಸಾಧ್ಯ. ಸಮ ಸಮಾಜ ನಿರ್ಮಿಸುವ ಮತ್ತು ಅಸಮಾನತೆ ಹೋಗಲಾಡಿಸುವ ಈ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವ ಪ್ರಶ್ನೆಯೇ ಇಲ್ಲ. ರಾಜ್ಯದಲ್ಲಿ ಸಾಮಾಜಿಕ ಆರ್ಥಿಕ ಬದಲಾವಣೆ ತರಲು ಜನಸ್ಪಂದನ ಅಗತ್ಯ ಎಂದು ಅವರು ಹೇಳಿದರು. ಮಾಧ್ಯಮದವರು ಸಹ ಗ್ಯಾರಂಟಿ ಕಾರ್ಯಕ್ರಮಗಳ ಮೌಲ್ಯಮಾಪನ ಮಾಡಿ ಎಂದು ಹೇಳಿದ ಅವರು ಗ್ಯಾರಂಟಿಗಳು ಸಹ ಅಭಿವೃದ್ಧಿ ಕಾರ್ಯಕ್ರಮಗಳೇ ಎಂದರು. ಈ ಸಂದರ್ಭದಲ್ಲಿ ಸಚಿವರಾದ ಪ್ರಿಯಾಂಕ್ ಖರ್ಗೆ, ಭೈರತಿ ಸುರೇಶ, ಶಿವರಾಜ ತಂಗಡಗಿ, ಶಾಸಕರುಗಳು, ಸರಕಾರದ ಮುಖ್ಯ ಕಾರ್ಯದರ್ಶಿ ರಜನೀಶ ಗೋಯಲ್ ಸೇರಿದಂತೆ ಹಿರಿಯ ಅಧಿಕಾರಿಗಳು ಇದ್ದರು. ನಂತರ ಮುಖ್ಯಮಂತ್ರಿಗಳು ಕೌಂಟರ್‌ಗಳಿಗೆ ತೆರಳಿ ಅರ್ಜಿದಾರರಿಂದ ಅಹವಾಲುಗಳನ್ನು ಸ್ವೀಕರಿಸಿದರು.

# ಹೊರಗುತ್ತಿಗೆಯ ಆಧಾರದಲಿ ಸೈಬರ್‌ಫೊರೆನಿಕ್ ಕನಲ್‌ಟೆಂಟ್ ಹುದ್ದೆಗೆ ಅರ್ಜಿ ಆಹ್ವಾನ

**ಬೆಂಗಳೂರು:** ಮಹಿಳಾ ಮತ್ತು ಮಕ್ಕಳ ವಿರುದ್ಧದ ಸೈಬರ್ ಕ್ರೈಂ ತಡೆಗಟ್ಟುವ ನಿಟ್ಟಿನಲ್ಲಿ (CCPWC under Nirbhaya Fund) Cyber Forensic Lab Cum Training Centre ಅನುಷ್ಠಾನಗೊಳಿಸಲು ಕ್ರಿಮಿನಲ್ ಇನ್‌ವೆಸ್ಟಿಗೇಶನ್ ಘಟಕವು ಹೊರ ಗುತ್ತಿಗೆಯ ಆಧಾರದ ಮೇಲೆ ಸೈಬರ್ ಫೊರೆನ್ಸಿಕ್ ಬಗ್ಗೆ, ಜ್ಞಾನವುಳ್ಳ ವೃತ್ತಿಪರ 01 ಹುದ್ದೆಗೆ ಜ್ಯೂನಿಯರ್ ಸೈಬರ್ ಫೊರೆನ್ಸಿಕ್ ಕನ್ಸಲ್‌ಟೆಂಟ್ ಅನ್ನು ಉತ್ತಮ ಸಂಭಾವನೆಯ ಮೇಲೆ ನೇಮಿಸಿಕೊಳ್ಳಲು ಅರ್ಜಿಗಳನ್ನು ಆಹ್ವಾನಿಸಿದೆ. ವಿದ್ಯಾರ್ಹತೆ ಮತ್ತು ಹುದ್ದೆಯ ವಿವರಗಳನ್ನು ವೆಬ್‌ಸೈಟ್‌ನಲ್ಲಿ ವೀಕ್ಷಿಸಬಹುದಾಗಿದ್ದು, ಸದರಿ ಹುದ್ದೆಗೆ ಅರ್ಜಿ ಸಲ್ಲಿಸಲು ಫೆಬ್ರವರಿ 20 ಸಂಜೆ 5 ಗಂಟೆಯೊಳಗೆ ಸಲ್ಲಿಸಬೇಕು. ಅರ್ಜಿಗಳನ್ನು ಮುಚ್ಚಿದ ಲಕೋಟೆಯಲ್ಲಿ ಪೊಲೀಸ್ ಅಧೀಕ್ಷಕರು, ಆಡಳಿತ, ನಂ. 01, ಕಾರ್ಲಟನ್ ಭವನ, ಅರಮನೆ ರಸ್ತೆ, ಬೆಂಗಳೂರು-560001 ರವರ ಕಛೇರಿಗೆ ಸಲ್ಲಿಸುವುದು. ನಿಗದಿತ ದಿನಾಂಕ ಮತ್ತು ಸಮಯವನ್ನು ಮೀರಿದ ನಂತರದ ಯಾವುದೇ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಯಾವುದೇ ತಿದ್ದುಪಡಿಗಳಿದ್ದಲ್ಲಿ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಹೆಚ್ಚಿನ ವಿವರಗಳಿಗೆ ಕರ್ನಾಟಕ ರಾಜ್ಯ ಪೊಲೀಸ್ ವೆಬ್ ಸೈಟ್ https://ksp.gov.in ಗೆ ಭೇಟಿ ನೀಡಬಹುದು ಹಾಗೂ ದೂರವಾಣಿ ಸಂಖ್ಯೆ:080-2209432 ಗೆ ಸಂಪರ್ಕಿಸಬಹುದು ಎಂದು ಪೊಲೀಸ್ ಮಹಾನಿರ್ದೇಶಕರು, ಮತ್ತು ಸಮಿತಿಯ ಅಧ್ಯಕ್ಷರು, ಸಿಐಡಿ, ವಿಶೇಷ ಘಟಕಗಳು ಮತ್ತು ಆರ್ಥಿಕ ಅಪರಾಧಗಳು, ಬೆಂಗಳೂರು ಅವರು ತಿಳಿಸಿದ್ದಾರೆ.

# ಪದವಿ ಪೂರ್ವ ವಿದ್ಯಾರ್ಥಿಗಳ ಅಧ್ಯಯನಕ್ಕಾಗಿ ಪ್ರಶ್ನೋತ್ತರ ಹೊತ್ತಿಗೆ ಬಿಡುಗಡೆ

**ಬೆಂಗಳೂರು:** ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು ವಿಜ್ಞಾನ ಪ್ರತಿಭಾನ್ವೇಷಣೆ ಕಾರ್ಯಕ್ರಮದಡಿ ಪ್ರಶೋತ್ತರ ಹೊತ್ತಿಗೆಯನ್ನು ಭೌತ ವಿಜ್ಞಾನ, ರಸಾಯನ ವಿಜ್ಞಾನ, ಗಣಿತ ಮತ್ತು ಜೀವ ವಿಜ್ಞಾನ ವಿಷಯಗಳ ಪ್ರಶೋತ್ತರ ಹೊತ್ತಿಗೆಯನ್ನು ಪದವಿ ಪೂರ್ವ ವಿದ್ಯಾರ್ಥಿಗಳು ಅಧ್ಯಯನಕ್ಕೆ ಪೂರಕವಾಗುವಂತೆ ಹೊರತರಲಾಗಿದೆ. ಪ್ರಶೋತ್ತರ ಹೊತ್ತಿಗೆಯನ್ನು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಜಾಲತಾಣ https://kstacademy.in/kn/sts-k ನಲ್ಲಿ ಡೌನ್ ಲೋಡ್ ಮಾಡಿಕೊಳ್ಳಬಹುದಾಗಿದೆ ಎಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ರಮೇಶ್ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

**ಕೋಲಾರ:** ಮಾಲೂರು ಪುರಸಭಾ ವ್ಯಾಪ್ತಿಯಲ್ಲಿ ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ ಮತ್ತು ಪಿ.ಎಂ ಸ್ವ-ನಿಧಿ ಯೋಜನೆಯಡಿ ನಗರ ಕಲಿಕಾ ಪ್ರಾಯೋಗಿಕ ತರಬೇತಿ ಕಾರ್ಯಕ್ರಮದಡಿ ಪದವಿ/ಸ್ನಾತಕೋತ್ತರ ಪದವಿ/ಡಿಪ್ಲೊಮೊ ವ್ಯಾಸಂಗ ಮಾಡುತ್ತಿರುವ ಹಾಗೂ ಪದವಿ ಪಡೆದಿರುವ 03 ಅಭ್ಯರ್ಥಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತಯುಳ್ಳ ಅಭ್ಯರ್ಥಿಗಳು ಅರ್ಜಿಗಳನ್ನು ಫೆಬ್ರವರಿ 19 ರೊಳಗೆ ಸಲ್ಲಿಸಬಹುದು. ತರಬೇತಿ ಕಾಲಾವಧಿಯು 03 ತಿಂಗಳುಗಳಾಗಿದ್ದು, ತರಬೇತಿ ಅವಧಿಯಲ್ಲಿ ಶಿಷ್ಯವೇತನ ನೀಡಲು ಅವಕಾಶವಿರುತ್ತದೆ. ತರಬೇತಿ ಪೂರ್ಣಗೊಂಡ ನಂತರ ಪುರಸಭೆಯಿಂದ ಪ್ರಮಾಣಪತ್ರ ನೀಡಲಾಗುವುದು. ತರಬೇತಿ ಅವಧಿಯಲ್ಲಿ ಮುಖ್ಯಾಧಿಕಾರಿಗಳು ಹಾಗೂ ಸಂಬಂಧಿಸಿದ ಅಧಿಕಾರಿ ಸಿಬ್ಬಂದಿವರ್ಗದವರು ಕಾಲ-ಕಾಲಕ್ಕೆ ನೀಡುವ ಸೂಚನೆಗಳನ್ನು ಪಾಲಿಸುವುದು.

# ವಿಶ್ವಗುರು ವಿಷ ಬೀಜ; ಮುಂದೆ ವಿಷ ವೃಕ್ಷವಾಗಲಿದೆ

**ಚಾಮರಾಜನಗರ:** ಭಾರತ ವಿಶ್ವ ಗುರುವಾಗುವುದಕ್ಕೆ ಈಗ ಬಿತ್ತಿರುವ ಬೀಜ ಮುಂದಿನ ದಿನಗಳಲ್ಲಿ ವಿಷವೃಕ್ಷವಾಗಲಿದೆ. ಇದರಲ್ಲಿ ಬಿಡುವ ಫಲಗಳನ್ನು ಮುಂದಿನ ಪೀಳಿಗೆಯವರು ತಿನ್ನಲಿದ್ದಾರೆ ಎಂದು ಸಾಹಿತಿ ಕೋಟಗಾನಹಳ್ಳಿ ರಾಮಯ್ಯ ಬುಧವಾರ ಹೇಳಿದರು.

ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಪತ್ನಿ ರಮಾಬಾಯಿ ಅಂಬೇಡ್ಕರ್ ಅವರ 125ನೇ ಜನ್ಮದಿನದ ಅಂಗವಾಗಿ ಬೆಂಗಳೂರು ಸಂಸ ಥಿಯೇಟರ್, ರಂಗಧರ್ಮ ಸಾಂಸ್ಕೃತಿ ಸಂಸ್ಥೆ (ರಿ), ನಗರದ ರಂಗವಾಹಿನಿಯ ಜಂಟಿ ಆಶ್ರಯದಲ್ಲಿ ನಗರದ ವರನಟ ಡಾ.ರಾಜ್‌ಕುಮಾರ್ ರಂಗಮಂದಿರದಲ್ಲಿ ಹಮ್ಮಿಕೊಂಡಿದ್ದ ರಮಾಬಾಯಿ 125 ಕಾರ್ಯದಲ್ಲಿ ಅವರು ಮಾತನಾಡಿದರು.

ನಮ್ಮಲ್ಲಿ ಸಹೋದರತೆ ಎಂಬುದು ಇದೆಯೇ 2024ರ ನಂತರ ಭಾರತ ಅತ್ಯಂತ ಭೀಕರ ಭಾರತ ಆಗುತ್ತದೆ. ವಸುದೈವ ಕುಟುಂಬಕಂ ಎಂಬುದು ಗಿಮಿಕ್ ಆಗಬಾರದು. ಸರ್ಕಾರ ಅದನ್ನು ಕಾರ್ಯಸೂಚಿಯನ್ನಾಗಿ ಮಾಡಬೇಕು. ಇಲ್ಲದಿದ್ದರೆ ರಾಷ್ಟ್ರೀಯತೆ ಎಂಬುದು ತಪ್ಪು ವ್ಯಾಖ್ಯಾನವಾಗುತ್ತದೆ ಎಂದು ಅವರು ಅಭಿಪ್ರಾಯಪಟ್ಟರು. ಇಂತಹ ಸಂದರ್ಭದಲ್ಲಿ




ಡಾ.ಬಿ.ಆರ್.ಅಂಬೇಡ್ಕರ್, ರಮಾಬಾಯಿ ಅಂಬೇಡ್ಕರ್, ಸಾವಿತ್ರಿ ಬಾಪುಲೆಯವರು ಮುಖ್ಯರಾಗುತ್ತಾರೆ. ಅವರು ಹುಟ್ಟುಹಾಕಿದ ಚರಿತ್ರೆಯನ್ನು ನಾವು ಉತ್ಖನನ ಮಾಡಬೇಕಾಗಿದೆ. ಅಂತಹ ಸಾಂಸ್ಕೃತಿಕ ಜವಾಬ್ದಾರಿ ನಮ್ಮ ಮೇಲಿದೆ ಎಂದು ಹೇಳಿದರು.

ನಮ್ಮ ಮಕ್ಕಳು ಸಂವಿಧಾನದಿಂದಾಗಿ ಅಕ್ಷರಗಳ ಸಮೀಪ ಹೋಗುತ್ತಿದ್ದಾರೆ. ಇದಕ್ಕೆ 75 ವರ್ಷಗಳಾಗಿದೆಯಷ್ಟೇ. ನಿಜವಾದ ಪ್ರಬುದ್ಧವಾದ ಭಾರತವನ್ನು ಕಟ್ಟಲು ಬೇಕಾಗಿದ್ದು ಇದುವೇ. ಸರ್ಕಾರ ರಮಾಬಾಯಿ, ಸಾವಿತ್ರಿ ಬಾಪುಲೆಯವರನ್ನು ನೋಡಿ ಕಲಿಯಲಿ. ಅವರ ಚರಿತ್ರೆ ಭಾರತದ ನಿಜವಾದ ಚರಿತ್ರೆ. ದೇಶವನ್ನು ಅಗ್ನಿಕುಂಡಕ್ಕೆ ದೂಡುವ ಕೆಲಸವನ್ನು ಮಾಡಬಾರದು ಎಂದು ರಾಮಯ್ಯ ಪ್ರತಿಪಾದಿಸಿದರು.

ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ರಾಮಚಂದ್ರರಾಜೇ ಅರಸ್, ಚಾಮರಾಜನಗರ ವಿವಿ ಕುಲಸಚಿವ ಪ್ರೊ.ಪಿ.ಮಾದೇಶ್ ಮಾತನಾಡಿದರು. ರಂಗವಾಹಿನಿ ಅಧ್ಯಕ್ಷ ಸಿ.ಎಂ.ನರಸಿಂಹಮೂರ್ತಿ ಪ್ರಸ್ತಾವಿಕವಾಗಿ ಮಾತನಾಡಿದರು. ಭಾರತೀಯ ಬೌದ್ಧ ಮಹಾಸಭಾ ಜಿಲ್ಲಾಧ್ಯಕ್ಷ ಆರ್.ಬಸವರಾಜು, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಹದೇವಸ್ವಾಮಿ, ಬೆಂಗಳೂರಿನ ಸಂಸ ಥಿಯೇಟರ್‌ನ ಸಿ.ಎಂ.ಸುರೇಶ್ ಇದ್ದರು.

ವಿಚಾರಗೋಷ್ಠಿ, ನಾಟಕ: ಕಾರ್ಯಕ್ರಮದಲ್ಲಿ ?ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರ ಜೀವನದಲ್ಲಿ ರಮಾಬಾಯಿ ಅವರ ಪಾತ್ರ ಮತ್ತು 'ರಂಗಭೂಮಿಯಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ರಮಾಬಾಯಿ ಅವರ ಪಾತ್ರಗಳ ಅವಲೋಕನ? ಎಂಬ ವಿಷಯದ ಬಗ್ಗೆ ವಿಚಾರಗೋಷ್ಠಿಗಳು ನಡೆದವು. ಸಂಜೆ 5 ಗಂಟೆಗೆ ನಡೆಯಲಿರುವ ಸಮಾರೋಪ ಸಮಾರಂಭ ಜರುಗಿತು. ಬಳಿಕ ಮಿಸಸ್ ಅಂಬೇಡ್ಕರ್ ನಾಟಕ ಪ್ರದರ್ಶನ ಗಮನಸೆಳೆಯಿತು.

**ದೇಶದ ಭವಿಷ್ಯ ಕರಾಳ:** ರೈತ ನಾಯಕಿ ಚುಕ್ಕಿ ನಂಜುಂಡಸ್ವಾಮಿ ಮಾತನಾಡಿ ದೇಶದ ಮುಂದಿನ ಭವಿಷ್ಯ ಕರಾಳವಾಗಿದೆ. ಹೊಸ ತಲೆಮಾರುಗಳಿಗೆ ನಮ್ಮ ಇತಿಹಾಸವನ್ನು ತಿಳಿಸಲಾಗದಂತಹ ವ್ಯವಸ್ಥೆ ಇದೆ. ಬ್ರಿಟಿಷರಿಂದ ನಮಗೆ ಸ್ವಾತಂತ್ರ್ಯ ಸಿಕ್ಕಿರಬಹುದು. ಆದರೆ ಜಾತಿ ವರ್ಗ ಧರ್ಮ ಲಿಂಗದ ಆಧಾರದಲ್ಲಿ ಸಮಾಜ ಗುಂಪು ಗುಂಪಾಗಿ ಒಡೆದಿದೆ. ಹಿಂಸೆಯ ಸ್ವರೂಪ ಬದಲಾಗಿದೆ. ಹಿಂಸಾ ಪ್ರವೃತ್ತಿ ಹೆಚ್ಚುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು.

# ಸ್ಫೂರ್ತಿಯ ಸಂಕೇತ ರಮಾಬಾಯಿ ಅಂಬೇಡ್ಕರ್

**ಚಾಮರಾಜನಗರ:** ಸಂವಿಧಾನ ದಿನಾಚರಣೆ ಅಂಗವಾಗಿ ಚಾಮರಾಜನಗರ ತಾಲೂಕಿನ ಪುಣಜನೂರು, ಹರದನಹಳ್ಳಿ, ಅಮಚವಾಡಿ ಸೇರಿದಂತೆ ಇತರೆ ಗ್ರಾಮಗಳಿಗೆ ಆಗಮಿಸಿದ ಸಂವಿಧಾನ ಜಾಗೃತಿ ಜಾಥಾವನ್ನು ಸಂಭ್ರಮದಿಂದ ಬರಮಾಡಿಕೊಳ್ಳಲಾಯಿತು.

ಪುಣಜನೂರಿನಲ್ಲಿ ಡೊಳ್ಳು ಕುಣಿತ ಕಲಾವಿದರು, ಮಕ್ಕಳು, ಕಳಶ ಹೊತ್ತ ಮಹಿಳೆಯರು ಜಾಥಾವನ್ನು ಸ್ವಾಗತಿಸಿದರು. ಆಶಾ, ಅಂಗನವಾಡಿ ಕಾರ್ಯಕರ್ತೆಯರು ಹೆಚ್ಚು ಸಂಖ್ಯೆಯಲ್ಲಿ ಉತ್ಸಾಹದಿಂದ ಮೆರವಣಿಗೆಯಲ್ಲಿ ಪಾಲ್ಗೊಂಡರು. ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶಿವಿಬಾಯಿ ಗಣೇಶನಾಯ್ಕ, ಉಪಾಧ್ಯಕ್ಷರಾದ ರಾಚಯ್ಯ, ನೋಡಲ್ ಅಧಿಕಾರಿ ಕೆ.ಪಿ. ಮಹದೇವಸ್ವಾಮಿ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸಿದ್ದರಾಜು, ಮತ್ತಿತ್ತರ ಗಣ್ಯರು ಭಾಗವಹಿಸಿದ್ದರು. ಶಿಕ್ಷಕರಾದ ವಸಂತ ಅವರು ಸಂವಿಧಾನ ಪ್ರಾಮುಖ್ಯತೆ ಹಾಗೂ ಆಶಯಗಳ ಕುರಿತು ಉಪನ್ಯಾಸ ನೀಡಿದರು. ಕೋಳಿಪಾಳ್ಯ, ದೊಡ್ಡ ಮೂಡಹಳ್ಳಿ ಗ್ರಾಮಗಳಲ್ಲಿಯೂ ಸಂವಿಧಾನ ಜಾಗೃತಿ ಜಾಥಾ ಅದ್ದೂರಿಯಾಗಿ ನಡೆಯಿತು. ಹರದನಹಳ್ಳಿಗೆ ಆಗಮಿಸಿದ ಸಂವಿಧಾನ ಜಾಗೃತಿ ಜಾಥಾಗೆ ಬೃಹತ್ ಸಂಖ್ಯೆಯಲ್ಲಿ ಸೇರಿದ್ದ ಶಾಲಾ ವಿದ್ಯಾರ್ಥಿಗಳು ಅದ್ದೂರಿ ಸ್ವಾಗತ ಕೋರಿದರು. ಆಶಾ, ಅಂಗನವಾಡಿ ಕಾರ್ಯಕರ್ತೆಯರು, ಕಳಶ ಹಿಡಿದು ಬರಮಾಡಿಕೊಂಡರು. ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ವೇಷ ಭೂಷಣ ತೊಟ್ಟ ಮಕ್ಕಳು ಜಾಗೃತಿ ಮೆರವಣಿಗೆಯಲ್ಲಿ ಗಮನ ಸೆಳೆದರು. ಹುಲಿವೇಷ ಕುಣಿತದ ಕಲಾವಿದರ ನೃತ್ಯ ಆಕರ್ಷಕವಾಗಿತ್ತು. ಕಾರ್ಯಕ್ರಮ




ಉದ್ಘಾಟಿಸಿದ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಮಂಜುನಾಥ್ ಮಾತನಾಡಿ ಡಾ. ಬಿ.ಆರ್. ಅಂಬೇಡ್ಕರ್ ಅವರು ರಚಿಸಿರುವ ಸಂವಿಧಾನ ಅಭಿವೃದ್ದಿಯ ಪ್ರತೀಕವಾಗಿದೆ. ಎಲ್ಲ ವರ್ಗದವರ ಅಭಿವೃದ್ಧಿ ಸಮಾನತೆ ಆಶಯ ಹೊಂದಿರುವ ನಮ್ಮ ಸಂವಿಧಾನ ಶ್ರೇಷ್ಠವಾದದ್ದು ಎಂದರು. ವಿಶ್ವಕ್ಕೆ ಮಾದರಿಯಾದ ನಮ್ಮ ಲಿಖಿತ ಸಂವಿಧಾನದ ಬಗ್ಗೆ ಪ್ರತಿಯೊಬ್ಬರೂ ತಿಳಿದುಕೊಳ್ಳಬೇಕು. ಹಕ್ಕುಗಳೊಮದಿಗೆ ಕರ್ತವ್ಯವನ್ನು ಅರಿಯಬೇಕು ಎಂದು ಮಂಜುನಾಥ್ ಸಲಹೆ ಮಾಡಿದರು. ಗ್ರಾಮ ಪಂಚಾಯಿತಿ ಉಪಾಧ್ಯಕ್ಷರಾದ ಯಶೋಧಮ್ಮ, ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಚಿಕ್ಕಬಸವಯ್ಯ, ಗ್ರಾಮ ಪಂಚಾಯಿತಿ ಸದಸ್ಯರಾದ ರಮೇಶ್, ಪುಟ್ಟರಾಜು, ಮಹೇಶ್ವರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ರಾಜೇಶ್ವರಿ, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಅಮಚವಾಡಿ ಗ್ರಾಮದಲ್ಲಿಯೂ ಅದ್ದೂರಿಯಾಗಿ ಸಂವಿಧಾನ ಜಾಗೃತಿ ಸ್ತಬ್ಧ ಚಿತ್ರದ ಮೆರವಣಿಗೆ ನಡೆಯಿತು. ಗ್ರಾಮದ ಮುಖ್ಯ ದ್ವಾರದಲ್ಲಿ ಸ್ವಾಗತ ಕೋರಿ ಬಳಿಕ ನಡೆದ ಸಮಾರಭದಲ್ಲಿ ಮಾತನಾಡಿದ ಗ್ರಾಮ ಪಂಚಾಯಿತಿ ಅಧ್ಯಕ್ಷರಾಧ ತೇಜಸ್ವಿನಿ ಅವರು ವಿಶ್ವಜ್ಞಾನಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ಮಹಿಳೆಯರು ಶೋಷಿತ ಸಮುದಾಯಗಳಿಗೆ ನ್ಯಾಯ ಕಲ್ಪಿಸಿಕೊಟ್ಟ ಧೀಮಂತ ನಾಯಕ ಎಂದರು. ದೇಶ ಅಭಿವೃದ್ಧಿ ಪಥದತ್ತ ಸಾಗಲು ಸಂವಿಧಾನ ಪ್ರಮುಖ ಕಾರಣವಾಗಿದೆ. ಸಂವಿಧಾನ ಜಾಗೃತಿಗಾಗಿ ರಾಜ್ಯಾದ್ಯಂತ ನಡೆಯುತ್ತಿರುವ ಕಾರ್ಯಕ್ರಮ ಹೆಮ್ಮೆಯ ಸಂಗತಿಯಾಗಿದೆ. ಸಂವಿಧಾನ ಆಶಯಗಳಿಗೆ ತಕ್ಕಂತೆ ಎಲ್ಲರು ನಡೆದುಕೊಳ್ಳೋಣ ಎಂದರು. ಗ್ರಾಮ ಪಂಚಾಯಿತಿ ಉಪಾಧ್ಯಕ್ಷರಾದ ಕುಮಾರ್, ಸದಸ್ಯರಾದಶಿವಣ್ಣ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಶ್ರೀನಿವಾಸ್ ಇತರರು ಉಪಸ್ಥಿತರಿದ್ದರು.

# ಸಾರನಾಥ ಬೌದ್ಧ ವಿಹಾರದಲ್ಲಿ ಜನ್ಮದಿನ



**ಚಾಮರಾಜನಗರ:** ರಮಾಬಾಯಿ ಅಂಬೇಡ್ಕರ್ ಅವರು ಬಾಲ್ಯದಿಂದಲ್ಲೂ ಕಷ್ಟಗಳನ್ನು ಎದುರಿಸಿ ಪತಿಗೆ ಪ್ರೋತ್ಸಾಹ ನೀಡಿದ ಮಹಾತ್ಯಾಗಿ, ಸ್ಫೂರ್ತಿ ಸಂಕೇತವಾಗಿದ್ದಾರೆ ಎಂದು ನಂಜನಗೂಡು ತಾಲೂಕಿನ ಕೃಷ್ಣರಾಜಪುರದ ಶಿಕ್ಷಕಿ ಪಿ.ಚಂದ್ರಕಲಾ ಹೇಳಿದರು. ನಗರದ ಸಾರಾನಾಥ ಬೌದ್ಧ ವಿಹಾರದಲ್ಲಿ ಮಾತಾ ರಮಾಬಾಯಿ ಫೌಂಡೇಷನ್ ವತಿಯಿಂದ ನಡೆದ ಮಾತಾ ರಮಾಬಾಯಿ ಅವರ 126 ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯಭಾಷಣಕಾರರಾಗಿ ಭಾಗವಹಿಸಿ ಮಾತನಾಡಿದರು.

ಮಹಾರಾಷ್ಟ್ರದ ಧಾಭೋಳ ಬಳಿಯ ವಣಂದಗಾಂವದ ಮಂಕು ಧೋತ್ರೆ ಮತ್ತು ರುಕ್ಮಿಣಿ ಬಾಯಿ ಅವರ ಉದರದಲ್ಲಿ ರಮಾಬಾಯಿ ಅವರು ಜನಿಸಿದರು. ರಮಾಬಾಯಿ ಅವರು ಸಾಮಾನ್ಯರಾಗಿರಲಿಲ್ಲ. ಪತಿಯ ಹೋರಾಟಕ್ಕೆ ಬೆನ್ನೆಲುಬಾಗಿ ನಿಂತಿದ್ದರು ಎಂದು ಹೇಳಿದರು. ಆದರ್ಶ ವಿದ್ಯಾಲಯ ಪ್ರಾಂಶುಪಾಲ ಲಿಂಗರಾಜು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಅಂಬೇಡ್ಕರ್‌ರವರ ಜೀವನದಲ್ಲಿ ರಮಾಬಾಯಿ ಅಂಬೇಡ್ಕರ್ ಅವರು ತಮ್ಮ ಜೀವನವನ್ನು ಅಂಬೇಡ್ಕರ್ ಕೀರ್ತಿಗೆ ಮುಡಿಪಾಗಿಟ್ಟರು. ತಮ್ಮ, ನೋವು, ಸಂಕಷ್ಟಗಳನ್ನು ನುಂಗಿಕೊಂಡು ಅಂಬೇಡ್ಕರರ ಓದಿಗೆ ಸಹಕರಿಸಿದ್ದರಿಂದ ಇಂದು ಜಗತ್ತಿನಲ್ಲಿ ಅಂಬೇಡ್ಕರ್ ಅವರನ್ನು ಮರೆಯಲು ಸಾಧ್ಯವಾಗುತ್ತಿಲ್ಲ. ಇಂತಹ ತ್ಯಾಗಮಯಿ ರಮಾಬಾಯಿ ಅಂಬೇಡ್ಕರ್ ಅವರು ಎಲ್ಲರಿಗೆ ಆದರ್ಶರಾಗಿದ್ದಾರೆ ಎಂದರು.

**ರಮಾಬಾಯಿ ಮಹಾನಾಯಕನ ಬೆನ್ನ ಹಿಂದಿನ ಬೆಳಕು:** ಅಧ್ಯಕ್ಷತೆ ವಹಿಸಿದ್ದ ರಮಾಬಾಯಿ ಫೌಂಡೇಶನ್ ಅಧ್ಯಕ್ಷೆ ಸಿ.ಎಸ್.ಪುಷ್ಪಮರಿಸ್ವಾಮಿ ಮಾತನಾಡಿ,ಅಂಬೇಡ್ಕರ್ ಅವರ ಪತ್ನಿ ರಮಾಬಾಯಿ ಸಾಮಾನ್ಯ ಹೆಣ್ಣು ಮಗಳಾಗಿರಲಿಲ್ಲ. ತನ್ನೆಲ್ಲ. ಸುಖ, ನೆಮ್ಮದಿ ಬದಿಗೊತ್ತಿ ಪತಿಯ ಹೋರಾಟದ ದಾರಿಗೆ ಹೆಗಲಿಗೆ ಹೆಗಲು ನೀಡಿ ನಿಂತ ಮಹಾಸಾಧ್ವಿಮಣಿ. ಜೀವನದ ಕೊನೆಯುಸಿರಿನವರೆಗೂ ಬದುಕಿನಲ್ಲಿ ಎದುರಾದ ಕಷ್ಟಗಳನ್ನು ನುಂಗಿ ಪತಿಗೆ ಪ್ರೋತ್ಸಾಹ ನೀಡಿದ್ದರು. ಅವರನ್ನು ಸ್ಮರಿಸಿಕೊಳ್ಳುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದರು. ನಿವೃತ್ತ ಶಿಕ್ಷಕಿನ ಪಿ.ಯಶೋಧರ ಹಾಗೂ ಆದರ್ಶ ವಿದ್ಯಾಲಯ ಪ್ರಾಂಶುಪಾಲ ಲಿಂಗರಾಜು ಅವರನ್ನು ಸನ್ಮಾನಿಸಲಾಯಿತು.

# ಸಂಜೆ ಟಿಪ್ಸ್



## ರಾಗಿಕಣದಲ್ಲಿ ವನ್ಯ ಛಾಯಾಗ್ರಹಣ ಕಾರ್ಯಾಗಾರ

ಕೇವಲ ಹತ್ತು ವರ್ಷದ ವೀಹಾನ್ ತಾಳ್ಯ ವಿಕಾಸ್ ನ ಸಾಧನೆ ನಿಜಕ್ಕೂ ಬೆರಗು ಮೂಡಿಸುತ್ತದೆ. ತನ್ನ ಆರನೇ ವಯಸ್ಸಿನಲ್ಲೇ ವನ್ಯ ಪ್ರಪಂಚದ ಆಳವಾದ ಆಸಕ್ತಿ, ವೀಕ್ಷಣೆ, ಮತ್ತು ಉತ್ಸಾಹಗಳು ಕ್ರಮೇಣ ಕ್ಯಾಮೆರಾ ಹವ್ಯಾಸಕ್ಕೆ ಒಯ್ದು ಇಂದು ಒಬ್ಬ ಖ್ಯಾತ ವನ್ಯಜೀವಿ ಛಾಯಾಗ್ರಾಹಿಯಾಗಿದ್ದಾನೆ. ಹೆಸರಾಂತ ಬರಹಗಾರ ಮತ್ತು ಪಶುವೈದ್ಯ ಅಜ್ಜ ಹೇಳುವ ಕಥೆಗಳು, ಪದೇ ಪದೇ ಅಪ್ಪನ ಜೊತೆ ಮಾಡುವ ನಿಸರ್ಗ ಚಾರಣಗಳು ವೀಹಾನ್ ಗೆ ಅತ್ಯಂತ ಪ್ರಭಾವ ಬೀರುವ ಕಾರಣಗಳು. ಎಲ್ಲರಿಗೂ ಕಾಣದ ಜೇಡರ ಬಲೆಯಿರಲಿ, ಪೊಟರೆಗಳಲ್ಲಿ ಬದುಕುವ, ಆಕಾಶದಲ್ಲಿ ಮೆರೆದಾಡುವ ಪಕ್ಷಿ ಪ್ರಪಂಚವಾಗಲಿ, ಕಾಡು ಬಂಡೆಗಳಲ್ಲಿ ಅಡಗಿ ಬದುಕುವ ಕ್ರಿಮಿಕೀಟಗಳಿರಲಿ ವೀಹಾನ್ ನ ಕ್ಯಾಮೆರಾದ ಹದ್ದಿನ ಕಣ್ಣು ಉತ್ಕೃಷ್ಟವಾಗಿ ಸೆರೆಹಿಡಿಯುತ್ತದೆ. 2023 ರಲ್ಲಿ ಲಂಡನ್ ನ ಪ್ರತಿಷ್ಠಿತ ನ್ಯಾಚುರಲ್ ಹಿಸ್ಟರಿ ಮ್ಯೂಸಿಯಂ ಆಯೋಜಿಸಿದ್ದ10 ವರ್ಷದ ಸರಣಿಯ 39;ವರ್ಷದ ಶ್ರೇಷ್ಠ ವನ್ಯ ಛಾಯಾಗ್ರಾಹಕ39; ಪ್ರಶಸ್ತಿ ವಿಜೇತ ನಮ್ಮ ವೀಹಾನ್. ವನ್ಯ ಪ್ರಪಂಚದ ಕುತೂಹಲಗಳನ್ನು ಸೆರೆಹಿಡಿಯಲು ಹೊರಟಿರುವ ಈ ಪುಟ್ಟ ಹುಡುಗ ನಿಂದ ಕಲಿಯೋಣ ಹಾಗೂ ಹುರಿದುಂಬಿಸೋಣ ಇದೇ ಫೆಬ್ರುವರಿ 11 ರಂದು ವೀಹಾನ್ ವನ್ಯ ಛಾಯಾಗ್ರಹಣದ ಒಂದು ವಿಶೇಷ ಕಾರ್ಯಾಗಾರ ನಡೆಸಿಕೊಡಲಿದ್ದಾರೆ. https://www.nhm.ac.uk/wpy/gallery/2023-the-wall-of-wonder

## ಹಸಿ ಟೊಮೆಟೋ ಫ್ರೈ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ತೆಳ್ಳಗೆ ಹೆಚ್ಚಿಕೊಂಡ ಗ್ರೀನ್ ಟೊಮೆಟೋ - 1 ಕೆಜಿ, ಬೀಟ್ ಮಾಡಿದ ಮೊಟ್ಟೆ - 2, ಬ್ರೆಡ್ ಕ್ರಂಬ್ಸ್ - 2-3 ಕಪ್, ಉಪ್ಪು - 1 ಟೀಸ್ಪೂನ್, ಮೆಣಸಿನ ಪುಡಿ - ಸ್ವಾದಕ್ಕನುಸಾರ, ಎಣ್ಣೆ - ಹುರಿಯಲು ಬೇಕಾಗುವಷ್ಟು

### ಮಾಡುವ ವಿಧಾನ

ಮೊದಲಿಗೆ ಒಂದು ಬೌಲ್ನಲ್ಲಿ ಒಡೆದು ಬೀಟ್ ಮಾಡಿದ ಮೊಟ್ಟೆಯನ್ನು ಹಾಕಿಕೊಳ್ಳಿ. ಮತ್ತೊಂದು ಬಟ್ಟಲಿನಲ್ಲಿ ಉಪ್ಪು, ಮೆಣಸಿನ ಪುಡಿ ಹಾಗೂ ಬ್ರೆಡ್ ಕ್ರಂಬ್ಸ್ ಹಾಕಿ ಮಿಶ್ರಣ ಮಾಡಿ ಇಡಿ. ಒಂದು ಪ್ಯಾನ್ಗೆ ಎಣ್ಣೆ ಸವರಿ, ಮಧ್ಯಮ ಶಾಖದ ಮೇಲೆ ಬಿಸಿ ಮಾಡಿ ಟೊಮೆಟೋ ಸ್ಲೈಸ್ಗಳನ್ನು ಮೊದಲು ಮೊಟ್ಟೆಯ ಮಿಶ್ರಣದಲ್ಲಿ ಅದ್ದಿ, ನಂತರ ಬ್ರೆಡ್ ಕ್ರಂಬ್ಸ್ ಮಿಶ್ರಣದಲ್ಲಿ ಉರುಳಿಸಿ, ಪ್ಯಾನ್ಗೆ ಹಾಕಿ, ಟೊಮೆಟೋಗಳ ಮೇಲೆ ಸ್ವಲ್ಪ ಎಣ್ಣೆ ಸಿಂಪಡಿಸಿ, 2 ನಿಮಿಷ ಕಾಯಿಸಿದ ಬಳಿಕ ತಿರುವಿ ಹಾಕಿ. ಟೊಮೆಟೋಗಳ ಎರಡೂ ಬದಿ ಗೋಲ್ಡನ್ ಬ್ರೌನ್ ಬಣ್ಣ ಬಂದ ಬಳಿಕ ಪ್ಯಾನ್ನಿಂದ ತೆಗೆದು ಟಿಶ್ಯೂ ಪೇಪರ್ ಮೇಲೆ ಹರಡಿಕೊಂಡರೆ ರುಚಿಯಾದ ಹಸಿ ಟೊಮೆಟೋ ಫ್ರೈ ಸವಿಯಲು ಸಿದ್ಧ.

# ಏರೋಪ್ಲೇನ್ ಚಿಟ್ಟೆಯಂತ ಬಟ್ಟೆಯಲ್ಲಿ ಕಂಗೊಳಿಸಿದ ಅನನ್ಯಾ



ಪ್ಯಾರಿಸ್ನಲ್ಲಿ ನಡೆದ ಫ್ಯಾಷನ್ ಶೋನಲ್ಲಿ ರ್ಯಾಂಪ್ ವಾಕ್ ಮಾಡಿದ ಅನನ್ಯಾ ಪಾಂಡೆ ವಿಚಿತ್ರ ದಿರಿಸಿನಲ್ಲಿ ಕಾಣಿಸಿಕೊಂಡಿದ್ದಾರೆ. ಫ್ಯಾಷನ್ ಡಿಸೈನರ್ ರಾಹುಲ್ ಮಿಶ್ರಾ ವಿನ್ಯಾಸ ಮಾಡಿದ ಏರೋಪ್ಲೇನ್ ಚಿಟ್ಟೆಯಂತಹ ಬಟ್ಟೆ ಧರಿಸಿ ಕೀಟಗಳ ಬಗೆಗಿನ ಕಾಳಜಿಯನ್ನು ಪ್ರದರ್ಶಿಸಿದ್ದಾರೆ.

'ನಮ್ಮೊಂದಿಗೆ ಪರಿಸರದಲ್ಲಿ ವಾಸಿಸುವ ಹಲವು ಜಾತಿಯ ಕೀಟಗಳು ಮತ್ತು ಸರೀಸೃಪಗಳೊಂದಿಗೆ ಜೀವನವನ್ನು ಹಂಚಿಕೊಳ್ಳುವ ಸೂಕ್ಷ್ಮ ವ್ಯತ್ಯಾಸಗಳತ್ತ ಗಮನ ಸೆಳೆಯುವ ರಾಹುಲ್ ಮಿಶ್ರಾ ಅವರ 'ಸೂಪರ್ ಹೀರೋಸ್' ಸಂಗ್ರಹದ ಹಿಂದಿನ ಕಲ್ಪನೆಯು ಇಷ್ಟವಾಯಿತು. ಗ್ರಹದಲ್ಲಿ ನಮ್ಮ ಜೀವನವನ್ನು ನಿರ್ಮಿಸುವ ಅನ್ವೇಷಣೆಯಲ್ಲಿ, ನಾವು ಅವರ ಆವಾಸಸ್ಥಾನಗಳನ್ನು ಸ್ವಾಧೀನ ಮಾಡಿಸಿಕೊಂಡಿರಬಹುದು ಮತ್ತು ಅವುಗಳನ್ನು ಅಳಿವಿನಂಚಿಗೆ ತಳ್ಳಿರಬಹುದು' ಎಂದು ಅನನ್ಯಾ ಪೋಸ್ಟ್ ಮಾಡಿದ್ದಾರೆ. ಈ ಫೋಟೋಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಮೆಚ್ಚುಗೆ ಗಳಿಸಿದೆ. ಪಾಂಡೆ ಅವರು 30 ಅಕ್ಟೋಬರ್ 1998 3 ರಂದು ಮಹಾರಾಷ್ಟ್ರದ ಮುಂಬೈನಲ್ಲಿ ನಟ ಚಂಕಿ ಪಾಂಡೆ ಮತ್ತು ವಸ್ತ್ರವಿನ್ಯಾಸಕಿ ಭಾವನಾ ಪಾಂಡೆ ಅವರಿಗೆ ಜನಿಸಿದರು . ಆಕೆಗೆ ರೈಸಾ ಎಂಬ ತಂಗಿ ಇದ್ದಾಳೆ. ಆಕೆಯ ಅಜ್ಜ ಶರದ್ ಪಾಂಡೆ ಅವರು ಭಾರತೀಯ ಹೃದಯ ಶಸ್ತ್ರಚಿಕಿತ್ಸಕರಾಗಿದ್ದರು . ಆಕೆಯ ಚಿಕ್ಕಪ್ಪ ಚಿಕ್ಕಿ ಪಾಂಡೆ ಉದ್ಯಮಿ ಮತ್ತು ಆಕೆಯ ಚಿಕ್ಕಮ್ಮ ಡೀನ್ನೆ ಪಾಂಡೆ ಕ್ಷೇಮ ತರಬೇತುದಾರರಾಗಿದ್ದಾರೆ. ಅವರು ಧೀರೂಭಾಯಿ ಅಂಬಾನಿ ಇಂಟರ್ನ್ಯಾಶನಲ್ ಸ್ಕೂಲ್ನಲ್ಲಿ 2017 ರವರೆಗೆ ಅಧ್ಯಯನ ಮಾಡಿದರು . ಅವರು 2017 ರಲ್ಲಿ ಪ್ಯಾರಿಸ್ನಲ್ಲಿ ನಡೆದ ವ್ಯಾನಿಟಿ ಫೇರ್ನ ಲೆ ಬಾಲ್ ಡೆಸ್ ಡೆಬ್ಯುಟಂಟೆಸ್ ಈವೆಂಟ್ನಲ್ಲಿ ಭಾಗವಹಿಸಿದರು. ಪಾಂಡೆ ಅವರು 2019 ರಲ್ಲಿ ಪತಿ ಪತ್ನಿ ಔರ್ ವೋ ಚಿತ್ರದ ಪ್ರಚಾರ ಮಾಡುತ್ತಿದ್ದಾರೆ. ಪಾಂಡೆ ಅವರು 2019 ರಲ್ಲಿ ಹದಿಹರೆಯದ ಚಲನಚಿತ್ರ ಸ್ಟೂಡೆಂಟ್ ಆಫ್ ದಿ ಇಯರ್ 2 ನೊಂದಿಗೆ ತಮ್ಮ ನಟನೆಯನ್ನು ಪ್ರಾರಂಭಿಸಿದರು , ಟೈಗರ್ ಶ್ರಾಫ್ ಮತ್ತು ತಾರಾ ಸುತಾರಿಯಾ ಸಹ-ನಟಿಸಿದ್ದಾರೆ , ಇದನ್ನು ಧರ್ಮ ಪ್ರೊಡಕ್ಷನ್ಸ್ ನಿರ್ಮಿಸಿದೆ . ಲ್ಯಾಕ್ಮೆ ಮತ್ತು ಜಿಲೆಟ್ ವೀನಸ್ ಸೇರಿದಂತೆ ಹಲವಾರು ಬ್ರಾಂಡ್ಗಳಿಗೆ ಪಾಂಡೆ ಸೆಲೆಬ್ರಿಟಿ ಅನುಮೋದಕರಾಗಿದ್ದಾರೆ . ಅವರು ತರುವಾಯ ಟೈಮ್ಸ್ನ 50 ಅತ್ಯಂತ ಅಪೇಕ್ಷಣೀಯ ಮಹಿಳೆಯರ ಪಟ್ಟಿಯಲ್ಲಿ ಸ್ಥಾನ ಪಡೆದರು . ಅವರು 2019 ರಲ್ಲಿ 37 ನೇ ಸ್ಥಾನವನ್ನು ಮತ್ತು 2020 ರಲ್ಲಿ 31 ನೇ ಸ್ಥಾನವನ್ನು ಪಡೆದರು.

# ಕಿತ್ತಳೆ ಹಣ್ಣಿನ ಸೇವನೆ ಹೀಗಿರಲಿ



### ಹೆಲ್ತ್ ಟಿಪ್ಸ್

ಕಿತ್ತಳೆ ಹಣ್ಣಿನಲ್ಲಿ ವಿಟಮಿನ್ ಸಿ ಹೇರಳವಾಗಿದ್ದು, ತ್ವಚೆ ಸಂಬಂಧಿ ಸಮಸ್ಯೆಗಳಿಗೆ ಮಾತ್ರವಲ್ಲ ಹೊಟ್ಟೆ, ಹೃದಯ ಆರೋಗ್ಯ ಕಾಪಾಡಲು ಇದು ಸಹಕಾರಿ ಎಂಬುದು ನಿಮಗೆಲ್ಲಾ ತಿಳಿದೇ ಇದೆ. ಆದರೆ ಈ ಕೆಲವು ಸಮಸ್ಯೆಗಳು ಇರುವವರು ಇದರಿಂದ ದೂರವಿರುವುದು ಒಳ್ಳೆಯದು. ಅಸ್ತಮಾ ಅಥವಾ ಪದೇ ಪದೇ ಶೀತವಾಗುವ ಸಮಸ್ಯೆ ಇರುವವರು ಕಿತ್ತಳೆ ಹಣ್ಣಿನಿಂದ ದೂರವಿರುವುದು ಒಳ್ಳೆಯದು. ಅಸ್ತಮಾದೊಂದಿಗೆ ಮಧುಮೇಹ ಇರುವವರಂತೂ ಇದನ್ನು ತಿನ್ನುವುದು ಬೇಡವೇ ಬೇಡ. ಜೀರ್ಣಕ್ಕೆ ಸಂಬಂಧಿಸಿದ ಸಮಸ್ಯೆ ಇರುವವರು ಕಿತ್ತಳೆ ಹಣ್ಣನ್ನು ಸೇವಿಸದಿರಿ. ಇದರಲ್ಲಿ ಅಧಿಕ ನಾರಿನಂಶವಿದ್ದು ಹೆಚ್ಚು ಸೇವಿಸಿದರೆ ಜೀರ್ಣಕ್ರಿಯೆಗೆ ತೊಂದರೆಯಾಗಬಹುದು. ಇದರಿಂದ ಅಜೀರ್ಣ ಸಮಸ್ಯೆಯೂ ಉಂಟಾಗಬಹುದು. ಕಿತ್ತಳೆ ಹಣ್ಣಿನಲ್ಲಿ ಅತಿಯಾದ ಆಮ್ಲೀಯ ಗುಣವಿದ್ದು ಇವು ಹಲ್ಲುಗಳ ಎನಾಮಲ್ ನಲ್ಲಿರುವ ಕ್ಯಾಲ್ಸಿಯಂ ಅನ್ನು ಹಾಳು ಮಾಡಬಹುದು. ಬ್ಯಾಕ್ಟೀರಿಯಾ ಸೋಂಕು ತಗುಲಬಹುದು. ಹಲ್ಲುಗಳಲ್ಲಿ ಕುಳಿಯ ಸಮಸ್ಯೆಯೂ ಉಂಟಾಗಬಹುದು. ಅಸಿಡಿಟಿ ಸಮಸ್ಯೆ ಹೆಚ್ಚಳಕ್ಕೂ ಇದು ಕಾರಣವಾಗಬಹುದು. ಪೊಟಾಶಿಯಂ ಸಮೃದ್ಧವಾಗಿರುವ ಕಿತ್ತಳೆ ಹಣ್ಣು ಕಿಡ್ನಿಗೆ ಹಾನಿಕಾರಕ. ಹಾಗಾಗಿ ಕಿಡ್ನಿ ಸಂಬಂಧಿ ಸಮಸ್ಯೆ ಇರುವವರು ಇದರಿಂದ ದೂರವಿರುವುದು ಒಳ್ಳೆಯದು.

# ಚಾಕೊಲೇಟ್ ದಿನ




ಭಾರತದಲ್ಲಿ ವ್ಯಾಲೆಂಟೈನ್ಸ್ ವೀಕ್ ಆಚರಣೆಯ ಭಾಗವಾಗಿ ಪ್ರತಿ ವರ್ಷ ಫೆಬ್ರವರಿ 9 ರಂದು ಚಾಕೊಲೇಟ್ ದಿನವನ್ನು ಆಚರಿಸಲಾಗುತ್ತದೆ. ಈ ದಿನ, ಪ್ರೀತಿಪಾತ್ರರು ಪರಸ್ಪರ ಚಾಕೊಲೇಟ್ಗಳನ್ನು ಉಡುಗೊರೆಯಾಗಿ ನೀಡುತ್ತಾರೆ ಮತ್ತು ಅವರ ಸಂಬಂಧವು ಯಾವಾಗಲೂ ಸಿಹಿಯಾಗಿ ಉಳಿಯುತ್ತದೆ ಎಂದು ಭಾವಿಸುತ್ತೇವೆ. ಚಾಕೊಲೇಟ್ಗಳು ಅತ್ಯಂತ ಪ್ರಿಯವಾದ ಕೆಲವು ಭಕ್ಷ್ಯಗಳಾಗಿವೆ. ಇದು ಅಚಲವಾದ ಜನಪ್ರಿಯತೆಯನ್ನು ಗಳಿಸಿದೆ. ಚಾಕೊಲೇಟ್ಗಳನ್ನು ಪಾನೀಯವಾಗಿ, ತಿನ್ನಬಹುದಾದ ಬಾರ್ನಂತೆ, ಸಿಹಿತಿಂಡಿಗಳಲ್ಲಿ ಅಥವಾ ಸುವಾಸನೆಯಾಗಿಯೂ ಸೇವಿಸಬಹುದು. ಚಾಕೊಲೇಟ್ಗಳು ಮಕ್ಕಳಿಂದ ಹಿಡಿದು ದೊಡ್ಡವರಿಗೂ ಇಷ್ಟ. ಚಾಕೊಲೇಟ್ ದಿನವನ್ನು ವರ್ಷವಿಡೀ ಕೆಲವು ರೂಪದಲ್ಲಿ ಅಥವಾ ಇನ್ನೊಂದರಲ್ಲಿ ಆಚರಿಸಲಾಗುತ್ತದೆ ಆದರೆ ಈ ದಿನವನ್ನು ಪ್ರೇಮಿಗಳ ನಡುವೆ ಉಡುಗೊರೆಯಾಗಿ ಬಳಸಲಾಗುವ ಚಾಕೊಲೇಟ್ಗಳ ಆಚರಣೆಯಾಗಿದೆ.

ಚಾಕೊಲೇಟ್ ಸೇವನೆಯ ಇತಿಹಾಸವು ಸುಮಾರು 2,500 ವರ್ಷಗಳ ಹಿಂದಿನದು. ಅಜ್ಟೆಕ್ಗಳು ಇತ್ತೀಚೆಗೆ ದ್ರವ ಚಾಕೊಲೇಟ್ ಅನ್ನು ಕಂಡುಹಿಡಿದರು ಮತ್ತು ಬುದ್ಧಿವಂತಿಕೆಯ ದೇವರು ಕ್ವೆಟ್ಜಾಲ್ಕೋಟ್ಲ್ ಅವರಿಗೆ ಆಶೀರ್ವದಿಸಿದ್ದಾನೆ ಎಂದು ನಂಬಿದ್ದರು. ಕೋಕೋ ಬೀಜಗಳನ್ನು ಎಷ್ಟು ಮೌಲ್ಯಯುತವೆಂದು ಪರಿಗಣಿಸಲಾಗಿದೆ ಎಂದರೆ ಅವುಗಳನ್ನು ಕರೆನ್ಸಿಯ ರೂಪವಾಗಿಯೂ ಬಳಸಲಾಗುತ್ತಿತ್ತು. ಆ ದಿನಗಳಲ್ಲಿ, ಚಾಕೊಲೇಟ್ನಲ್ಲಿ ಸುವಾಸನೆಗಳು ವಿರಳವಾಗಿದ್ದವು ಮತ್ತು ಅದನ್ನು ಕಹಿ ಪಾನೀಯವಾಗಿ ಸೇವಿಸಲಾಗುತ್ತಿತ್ತು. ಯುರೋಪಿಯನ್ನರು ಸಕ್ಕರೆಯನ್ನು ಸೇರಿಸಲು ಪ್ರಾರಂಭಿಸಿದಾಗ 16 ನೇ ಶತಮಾನದವರೆಗೂ ಚಾಕೊಲೇಟ್ಗಳು ಸಕ್ಕರೆ ಮುಕ್ತವಾಗಿರುತ್ತವೆ. ಇದು ಚಾಕೊಲೇಟ್ ಅನ್ನು ಹೆಚ್ಚು ರುಚಿಕರವಾಗಿಸಿತು ಮತ್ತು ಮಾರುಕಟ್ಟೆಗಳಲ್ಲಿ ತ್ವರಿತವಾಗಿ ಸೆಳೆಯಿತು. ಇದು ಅನೇಕ ಮನೆಗಳ ನೆಚ್ಚಿನ ಹಿಂಸಿಸಲು ಒಂದಾಗಿದೆ.

ಅನೇಕ ಜನಪ್ರಿಯ ಇಂದಿನ ಚಾಕೊಲೇಟ್ ಕಂಪನಿಗಳು 19 ನೇ ಮತ್ತು 20 ನೇ ಶತಮಾನದ ಆರಂಭದಲ್ಲಿ ತಮ್ಮ ಕಾರ್ಯಾಚರಣೆಯನ್ನು ಪ್ರಾರಂಭಿಸಿದವು. ಕ್ಯಾಡ್ಬರಿಯನ್ನು 1868 ರಲ್ಲಿ ಇಂಗ್ಲೆಂಡ್ನಲ್ಲಿ ಸ್ಥಾಪಿಸಲಾಯಿತು ಮತ್ತು ಇಂದು ಇದು ಪ್ರಮುಖ ಚಾಕೊಲೇಟ್ ಬ್ರಾಂಡ್ಗಳಲ್ಲಿ ಒಂದಾಗಿದೆ. 25 ವರ್ಷಗಳ ನಂತರ ಮಿಲ್ಟನ್ ಎಸ್ ಹರ್ಷೆ ಅವರು ಹರ್ಷೆಸ್ ಅನ್ನು ಪ್ರಾರಂಭಿಸಿದರು, ಇದು ಈಗ ವಿಶ್ವದ ಅತಿದೊಡ್ಡ ಮತ್ತು ಪ್ರಸಿದ್ಧವಾದ ಚಾಕೊಲೇಟ್ ಬ್ರ್ಯಾಂಡ್ಗಳಲ್ಲಿ ಒಂದಾಗಿದೆ. ನೆಸ್ಲೆ 1860 ರ ದಶಕದಲ್ಲಿ ತನ್ನ ಕಾರ್ಯಾಚರಣೆಯನ್ನು ಪ್ರಾರಂಭಿಸಿತು ಮತ್ತು ವಿಶ್ವದ ಅತಿದೊಡ್ಡ ಆಹಾರ ಸಂಘಟಿತ ಸಂಸ್ಥೆಗಳಲ್ಲಿ ಒಂದಾಗಿದೆ. ಪಾನೀಯವಾಗಿ ಪ್ರಾರಂಭವಾದದ್ದು ಕರೆನ್ಸಿಯಾಗಿ ರೂಪುಗೊಂಡಿತು ಮತ್ತು ಇಂದು ಪ್ರಪಂಚದಾದ್ಯಂತ ಲಕ್ಷಾಂತರ ಜನರಿಗೆ ಆದಾಯ ಮತ್ತು ಉದ್ಯೋಗಗಳನ್ನು ಉತ್ಪಾದಿಸುವ ದೊಡ್ಡ ಉದ್ಯಮಗಳಲ್ಲಿ ಒಂದಾಗಿದೆ ಆದರೆ ನಮ್ಮಲ್ಲಿ ಅನೇಕರು ಇಷ್ಟಪಡುವ ಆಹಾರ ಪದಾರ್ಥಗಳನ್ನು ಉತ್ಪಾದಿಸುತ್ತದೆ! ಚಾಕೊಲೇಟ್ ದಿನವು ಈ ಆಹಾರ ಪದಾರ್ಥದ ನಂಬಲಾಗದ ಬಹುಮುಖತೆಯನ್ನು ಆಚರಿಸುತ್ತದೆ.

# ಕಂಡೀಶನರ್ ಬಳಕೆ ಬಗ್ಗೆ ಎಚ್ಚರ..!

### ಬ್ಯೂಟಿ ಟಿಪ್ಸ್



ಕೂದಲಿನ ಹೊಳಪಿಗೆ ಮತ್ತು ನಯವಾಗಿಸಲು ಕಂಡಿಷನರ್ ಅಗತ್ಯ. ಆದರೆ ಕಂಡಿಷನರ್ ಬಳಸುವಾಗ ಕೆಲವೊಂದು ವಿಷ್ಯದ ಬಗ್ಗೆ ಗಮನ ನೀಡಬೇಕಾಗುತ್ತದೆ. ಕೂದಲಿಗೆ ಅನುಗುಣವಾಗಿ ಕಂಡಿಷನರ್ ಬಳಸಬೇಕು. ಕೂದಲು ತೆಳುವಾಗುತ್ತಿರುವವರು ಕಂಡಿಷನರ್ ಮಾಡುವಾಗ ವಿಶೇಷ ಕಾಳಜಿ ವಹಿಸಬೇಕು. ಏಕೆಂದರೆ ತೆಳ್ಳನೆಯ ಕೂದಲು ತುಂಡಾಗುವ ಸಾಧ್ಯತೆ ಹೆಚ್ಚು. ಬಾಚಣಿಗೆಯನ್ನು ಪದೇ ಪದೇ ಬಳಸಬೇಡಿ. ವಾರಕ್ಕೊಮ್ಮೆ ಕಂಡೀಶನರ್ ಬಳಸಿ ನಿಮ್ಮ ಕೂದಲನ್ನು ಸುಸ್ಥಿತಿಯಲ್ಲಿರಿಸಿಕೊಳ್ಳಬಹುದು. ಇದು ಕೂದಲನ್ನು ಹೆಚ್ಚು ನಯವಾಗಿಸುತ್ತದೆ. ಈ ಕಾರಣದಿಂದಾಗಿ ಕೂದಲು ಹೆಚ್ಚು ಗಂಟಾಗುವುದಿಲ್ಲ. ಕೂದಲು ಉದುರುವ ಸಾಧ್ಯತೆಯೂ ಕಡಿಮೆ.ನಿಮ್ಮ ಕೂದಲು ದಪ್ಪವಾಗಿದ್ದರೆ ಕಂಡಿಷನರ್ ಬಳಸೋದು ಒಳ್ಳೇದು. ದಪ್ಪ ಕೂದಲು ಆರೋಗ್ಯಕರವಾಗಿರುವುದರ ಸಂಕೇತ. ಆದರೆ ಕೂದಲನ್ನು ತೇವಾಂಶದಿಂದ ಕೂಡಿರುವಂತೆ ನೋಡಿಕೊಳ್ಳುವುದು ಅಗತ್ಯ. ಹಾಗಾಗಿ ಕಂಡಿಷನರ್ ಸಾಕಷ್ಟು ಉಪಯುಕ್ತವಾಗಿದೆ. ಪ್ರತಿದಿನ ಕೂದಲು ತೊಳೆಯಲು ಸಾಧ್ಯವಾಗದಿದ್ದರೂ ಸಹ, ವಾರಕ್ಕೊಮ್ಮೆಯಾದರೂ ನಿಮ್ಮ ಕೂದಲನ್ನು ಒದ್ದೆ ಮಾಡಿ ಮತ್ತು ಕಂಡಿಷನರ್ ಹಾಕಿ ಸ್ನಾನ ಮಾಡಿ.ಒಣ ಮತ್ತು ನಿರ್ಜೀವ ಕೂದಲಿಗೆ ಕಂಡಿಷನರ್ ಬೇಕು. ಕೆಲವೊಮ್ಮೆ ಬಿಸಿಲಿನ ಶಾಖ, ಮಾಲಿನ್ಯ, ಧೂಳು ಮತ್ತು ಹೇರ್ ಸ್ಟೈಲಿಂಗ್ ಉಪಕರಣಗಳು ಕೂದಲನ್ನು ಒಣಗಿಸುತ್ತವೆ. ಒಣ ಕೂದಲಿನಲ್ಲಿ ತೇವಾಂಶ ಇರುವುದಿಲ್ಲ. ಆದ್ದರಿಂದ ಕೂದಲಿನ ಆರೋಗ್ಯವನ್ನು ಸುಧಾರಿಸಿಕೊಳ್ಳಲು ಮಾಯಿಶ್ಚರೈಸಿಂಗ್ ಕಂಡಿಷನರ್ ಅಗತ್ಯವಿರುತ್ತದೆ. ತೇವಾಂಶವನ್ನು ಮರಳಿ ಪಡೆಯಲು ನೀವು ಪ್ರತಿ ದಿನ ಕಂಡಿಷನರ್ ಬಳಸಬಹುದು. ಕೂದಲು ಶುಷ್ಕತೆಯನ್ನು ತಡೆಗಟ್ಟಲು, ನಿಮ್ಮ ಕೂದಲಿಗೆ ತಿಂಗಳಿಗೆ ಒಂದು ಅಥವಾ ಎರಡು ಬಾರಿ ಡೀಪ್ ಕಂಡಿಷನಿಂಗ್ ಮಾಡಿ.

# ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಉದ್ಯೋಗದಲ್ಲಿ ನಿರಾಸಕ್ತಿ, ಕೃಷಿಕರಿಗೆ ಅನಾನುಕೂಲ, ತಾಯಿಯಿಂದ ಸಹಾಯ ಕೇಳುವಿರಿ, ವಿದ್ಯಾಭ್ಯಾಸದಲ್ಲಿ ಮರೆವು

**ವೃಷಭ:** ದೂರ ಪ್ರಯಾಣ, ನೆರೆಹೊರೆಯವರಿಂದ ನೋವು, ಪತ್ರ ವ್ಯವಹಾರದಲ್ಲಿ ಯಶಸ್ಸು, ಅನಾರೋಗ್ಯ

**ಮಿಥುನ:** ಮಾತಿನಿಂದ ಕಲಹ, ನಿಧಾನದ ಆರ್ಥಿಕ ಚೇತರಿಕೆ, ಷೇರು ಮಾರುಕಟ್ಟೆಯಲ್ಲಿ ನಷ್ಟ, ವಾಹನ ಚಾಲನೆಯಲ್ಲಿ ಜಾಗ್ರತೆ

**ಕಟಕ:** ದಾಂಪತ್ಯದಲ್ಲಿ ಮೂರನೆಯವರ ಮಧ್ಯಪ್ರವೇಶ, ವ್ಯಾಪಾರ-ವ್ಯವಹಾರದಲ್ಲಿ ಏಳೆದಾಟ, ಸ್ವಾಭಿಮಾನಕ್ಕೆ ಧಕ್ಕೆ, ಮಾನಸಿಕ ತೊಳಲಾಟದಿಂದ ದೈಹಿಕ ಅಸಮರ್ಥತೆ

**ಸಿಂಹ:** ಸಾಲಗಾರರ ಚಿಂತೆ, ಮಾನಸಿಕ ಅಸಮತೋಲನ, ಅತಿನಿದ್ರೆ, ಅನಗತ್ಯ ಖರ್ಚುಗಳು, ಆಸ್ಪತ್ರೆ ಅಲೆದಾಟ

**ಕನ್ಯಾ:** ಮಕ್ಕಳಿಂದ ಸಹಾಯ, ಪ್ರೀತಿ-ಪ್ರೇಮದಲ್ಲಿ ಯಶಸ್ಸು, ಭಾವನಾತ್ಮಕ ಚಿಂತನೆಗಳು, ದುಶ್ಚಟಗಳಿಂದ ತೊಂದರೆ

**ತುಲಾ:** ವೃತ್ತಿ ಪ್ರವೃತ್ತಿಯಲ್ಲಿ ಹಿನ್ನಡೆ, ಅಧಿಕಾರ ವರ್ಗದವರಿಂದ ಸಮಸ್ಯೆ, ಗೌರವಕ್ಕೆ ಧಕ್ಕೆ, ಭವಿಷ್ಯದ ಚಿಂತೆಯಿಂದ ಬಳಲಿಕೆ

**ವೃಶ್ಚಿಕ:** ತಂದೆಯಿಂದ ಸಹಾಯ-ಸಹಕಾರ, ಜ್ಞಾನದ ನಿರೀಕ್ಷೆ, ಸಾಧಿಸುವ ಛಲ, ವಿದ್ಯಾಭ್ಯಾಸದಲ್ಲಿ ಆಸಕ್ತಿ

**ಧನಸ್ಸು:** ಆರ್ಥಿಕ ಚಿಂತೆಗಳು, ಕೋರ್ಟ್ ಕೇಸುಗಳ ಯೋಚನೆ, ಪತ್ರವ್ಯವಹಾರದಲ್ಲಿ ಹಿನ್ನಡೆ, ಅಪಘಾತಗಳು

**ಮಕರ:** ಮಾನಸಿಕ ಚಂಚಲತೆ, ದೈಹಿಕ ಅಸಮರ್ಥತೆ , ವ್ಯಾಪಾರ-ವ್ಯವಹಾರದಲ್ಲಿ ನಷ್ಟ, ಅನಾರೋಗ್ಯದ ಚಿಂತೆ

**ಕುಂಭ:** ದೀರ್ಘಕಾಲದ ವ್ಯಾಧಿಗಳು, ಬಾಡಿಗೆದಾರರಿಂದ ಸಮಸ್ಯೆ, ದೂರ ಪ್ರದೇಶಕ್ಕೆ ತೆರಳುವಿರಿ, ರಾಜಕೀಯ ವ್ಯಕ್ತಿಗಳಿಂದ ತೊಂದರೆ

**ಮೀನ:** ಮಕ್ಕಳಿಂದ ಅನುಕೂಲ, ಅಸಭ್ಯ ವರ್ತನೆಯಿಂದ ಮನಸ್ಸಿಗೆ ಬೇಸರ, ಹಿರಿಯರಿಂದ ಸಹಾಯ, ಏಕಾಗ್ರತೆಯ ಕೊರತೆ

# ಸುವರ್ಣ ಸೂಪರ್ ಸ್ಟಾರ್‌ಗೆ 1000 ಸಂಚಿಕೆ ಸಂಭ್ರಮ




ಕನ್ನಡ ಕಿರುತೆರೆಯ ಇತಿಹಾಸದಲ್ಲಿ 'ಸ್ಟಾರ್ ಸುವರ್ಣ'ವು ಹೊಸತನದ ಛಾಪನ್ನು ಮೂಡಿಸುತ್ತಲೇ ಬರುತ್ತಿದೆ. ಪ್ರಸ್ತುತ ನಾಡಿನ ನಾರಿಮಣಿಯರಿಗಾಗಿ ಮೂಡಿ ಬರುತ್ತಿರುವ ಸುವರ್ಣ ಸೂಪರ್ ಸ್ಟಾರ್ ಕಾರ್ಯಕ್ರಮವು ಇದೀಗ 1000 ಸಂಚಿಕೆಗಳನ್ನು ಯಶಸ್ವಿಯಾಗಿ ಪೂರೈಸಿ ಹೊಸ ಮೈಲಿಗಲ್ಲನ್ನು ಸೃಷ್ಟಿಸಿದೆ.

2020ರಲ್ಲಿ ಕರ್ನಾಟಕದ ಮಹಿಳೆಯರಿಗಾಗಿ, ಅವರಲ್ಲಿರುವ ಪ್ರತಿಭೆ, ಸಾಹಸ, ನಾವು ಯಾರಿಗೂ ಕಮ್ಮಿಯಿಲ್ಲ ಎಂಬ ಛಲ ಹಾಗು ನೊಂದವರಿಗಾಗಿ ಸ್ಫೂರ್ತಿ ನೀಡಲು ಸಜ್ಜಾದ ಮಹಾ ವೇದಿಕೆ 'ಸುವರ್ಣ ಸೂಪರ್ ಸ್ಟಾರ್'. ದಿನದಿಂದ ದಿನಕ್ಕೆ ನೋಡುಗರ ಮನಗೆದ್ದು 2ನೇ ಸೀಸನ್ ನೊಂದಿಗೆ ಮುನ್ನುಗ್ಗುತ್ತಿದೆ. ಈ ಮಹೋನ್ನತ ಕಾರ್ಯಕ್ರಮದ ನಿರೂಪಕಿ ಪ್ರೇಕ್ಷಕರ ನೆಚ್ಚಿನ ನಟಿ ಶಾಲಿನಿ. ಕರ್ನಾಟಕದ ಮೂಲೆ ಮೂಲೆಯಿಂದ ಬಂದ ಮಹಿಳೆಯರ ಜೊತೆ ತಾನು ಒಬ್ಬಳಂತಾಗಿ, ಅವರೊಂದಿಗೆ ಬೆರೆತು, ಬದುಕನ್ನು ಸಂಭ್ರಮಿಸುವುದರ ಜೊತೆ ಇಡೀ ಕರ್ನಾಟಕದ ಮನೆ ಮಂದಿಯ ಮನಸಿನಲ್ಲಿ ಜಾಗ ಪಡೆದು ಕೊಂಡಿದ್ದಾರೆ. ಇನ್ನು ಕಾರ್ಯಕ್ರಮದ ಮತ್ತೊಂದು ಆಕರ್ಷಣೆ ಅಂದ್ರೆ, ಪ್ರತಿ ದಿನವೂ ಶಾಲಿನಿ ಧರಿಸುವ ವಿಶಿಷ್ಟವಾಗಿ ವಿಭಿನ್ನವಾಗಿ ಡಿಸೈನ್ ಮಾಡಿದ ಬ್ಲೌಸ್ಗಳಿಗಂತನೇ ಒಂದಷ್ಟು ಅಭಿಮಾನಿ ವರ್ಗವಿದೆ. ಇಲ್ಲಿಯವರೆಗೆ 3 ಸಾವಿರಕ್ಕೂ ಹೆಚ್ಚು ಮಹಿಳೆಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದಾರೆ. ಸಾವಿರ ಸಂಚಿಕೆಗಳ ಸಂಭ್ರಮದ ಹಬ್ಬದಲ್ಲಿ ನಟಿಯರಾದ ಗಾನವಿ, ಮಾನ್ವಿತಾ ಕಾಮತ್ ಹಾಗು ಶ್ವೇತಾ ಶ್ರೀವಾಸ್ತವ್ ರವರು ಭಾಗಿಯಾಗಿದ್ದು ವೀಕ್ಷಕರಿಗಾಗಿ ಅದ್ಭುತ ಡಾನ್ಸ್ ಪರ್ಫಾರ್ಮೆನ್ಸ್ ನೀಡಲಿದ್ದಾರೆ.ತಪ್ಪದೇ ವೀಕ್ಷಿಸಿ ಮೂರು ಗಂಟೆಯ ಮಹಾ ಸಂಭ್ರಮ ಇದೇ ಶನಿವಾರ ಸಂಜೆ 4 ರಿಂದ ರಾತ್ರಿ 7 ಗಂಟೆಯವರೆಗೆ ನಿಮ್ಮ ನೆಚ್ಚಿನ ಸ್ಟಾರ್ ಸುವರ್ಣ ವಾಹಿನಿಯಲ್ಲಿ.

ಸಂಜೆ ಮುಗಿಲು
ಶುಕ್ರವಾರ
9.2.2024



# 200 ಮಕ್ಕಳನ್ನು ಬಲಿ ಪಡೆದ ಸ್ವಯಂ ಘೋಷಿತ ಪಾದ್ರಿ



**ಕೀನ್ಯಾ:** ಸುಮಾರು 200 ಮಕ್ಕಳನ್ನು ಕೊಂದಿರುವ ಆರೋಪದಲ್ಲಿ ಸ್ವಯಂ ಘೋಷಿತ ಪಾದ್ರಿಯೊಬ್ಬನನ್ನು ಕೀನ್ಯಾದ ಮಲಿಂಡಿಯಲ್ಲಿ ಬಂಧಿಸಲಾಗಿದೆ.

ಹಸಿವಿನಿಂದ ಆರಾಧನೆ ಎಂದು ಪ್ರತಿಪಾದಿಸುತ್ತಿದ್ದ ಸ್ವಯಂ ಘೋಷಿತ ಪಾದ್ರಿ, ಪಾದ್ರಿ ಪಾಲ್ ನಥೆಂಗೆ ಮೆಕೆಂಜಿ ಮತ್ತು ಆತನ ಸುಮಾರು 29 ಮಂದಿ ಸಹಚರರು ಹಿಂದೂ ಮಹಾಸಾಗರದ ಸಮೀಪವಿರುವ ಕಾಡಿನಲ್ಲಿ ಮೂರು ಶಿಶುಗಳು ಸೇರಿ ಸುಮಾರು 200 ಮಕ್ಕಳನ್ನುಕೊಂದಿರುವುದಾಗಿ ಕೀನ್ಯಾದ ನ್ಯಾಯಾಲಯ ಮಂಗಳವಾರ ಆರೋಪಿಸಿದೆ. ಪಾದ್ರಿ ಪಾಲ್ ವಿರುದ್ಧ ಭಯೋತ್ಪಾದನೆ, ನರಹತ್ಯೆ, ಮಕ್ಕಳ ಮೇಲೆ ಚಿತ್ರಹಿಂಸೆ ಮತ್ತು ಕ್ರೌರ್ಯದ ಆರೋಪ ಹೊರಿಸಲಾಗಿದೆ. ಯೇಸುವನ್ನು ಭೇಟಿಯಾಗಬಹುದು ಎಂದು ನಂಬಿಸಿ ನೂರಾರು ಮಕ್ಕಳನ್ನು ಹಸಿವಿನಿಂದ ಸಾಯುವಂತೆ ಮಾಡಿದ್ದಾನೆ ಎಂದು ಆರೋಪಿಸಲಾಗಿದೆ.

ಮೆಕೆಂಜಿ ಮತ್ತು ಇತರ 29 ಶಂಕಿತರು ಮೂರು ಶಿಶುಗಳು ಸೇರಿದಂತೆ 191 ಕೊಲೆ ಪ್ರಕರಣಗಳಲ್ಲಿ ನಾವು ತಪ್ಪಿತಸ್ಥರಲ್ಲ ಎಂದು ಮಂಗಳವಾರ ನ್ಯಾಯಾಲಯಕ್ಕೆ ಹೇಳಿದ್ದಾರೆ ಎನ್ನಲಾಗಿದೆ. 31ನೇ ಶಂಕಿತ ಆರೋಪಿಗೆ ಮಾನಸಿಕ ಸಾಮರ್ಥ್ಯದ ಕೊರತೆ ಇದ್ದ ಕಾರಣ ಒಂದು ತಿಂಗಳ ಅವಧಿಯಲ್ಲಿ ಮಾಲಿಂಡಿ ಹೈಕೋರ್ಟ್ಗೆ ಹಾಜರಾಗಲು ಆದೇಶಿಸಲಾಗಿದೆ. ಕಳೆದ ವರ್ಷ ಏಪ್ರಿಲ್ನಲ್ಲಿ ಶಕಹೊಲ ಅರಣ್ಯದಲ್ಲಿ ಶವಗಳು ಪತ್ತೆಯಾದ ಬಳಿಕ ನಂತರ ಮೆಕೆಂಜಿ ಮತ್ತು ಆತನ ಸಹಚರರನ್ನು ಬಂಧಿಸಲಾಯಿತು.

# ಹಿಮಪಾತದಲ್ಲಿ ಮಾಲೀಕನ ಶವ ಬಿಟ್ಟು ಕದಲದ ಶ್ವಾನ



**ಹಿಮಾಚಲ ಪ್ರದೇಶ:** ಹಿಮಾಚಲ ಪ್ರದೇಶದ ಬೀರ್ ಬಿಲ್ಲಿಂಗ್ ಪ್ರದೇಶದಲ್ಲಿ ಜರ್ಮನ್ ಶೆಫರ್ಡ್ ನಾಯಿಯೊಂದು ಸ್ವಾಮಿನಿಷ್ಠೆ ಮೆರೆದಿರುವ ಕರುಣಾಜನಕ ಘಟನೆ ನಡೆದಿದೆ.

ಹಿಮಾಚಲ ಪ್ರದೇಶಕ್ಕೆ ಇಬ್ಬರು ಟ್ರಕ್ಕಿಂಗ್ ಗೆ ಹೋಗಿದ್ದಾರೆ. ಬೀರ್ ಬಿಲ್ಲಿಂಗ್ ಪ್ರದೇಶದಲ್ಲಿ ಭಾರೀ ಹಿಮಪಾತ ಸಂಭವಿಸಿದ್ದು, ಇಬ್ಬರೂ ಸಾವನ್ನಪ್ಪಿದ್ದಾರೆ.

ಆಗ ಜೊತೆಗಿದ್ದ ಜರ್ಮನ್ ಶೆಫರ್ಡ್ ನಾಯಿ ತನ್ನ ಮಾಲೀಕರ ಶವದ ಜಾಗ ಬಿಟ್ಟು ಎಲ್ಲಿಯೂ ಹೋಗಿಲ್ಲ. ಎರಡು ದಿನದವರೆಗೂ ಬೇರೆಯವರು ಆ ಸ್ಥಳಕ್ಕೆ ಬರುವವರೆಗೂ ಅಲ್ಲಿಯೇ ನಿಂತು ಕಾದಿದೆ. ತೀವ್ರ ಚಳಿ, ಹಿಮಪಾತದ ಕಾರಣದಿಂದ ಟ್ರಕ್ಕಿಂಗ್ ಹೋಗಿದ್ದ ಇಬ್ಬರು ಪ್ರಾಣ ಬಿಟ್ಟಿದ್ದಾರೆ. ಆದರೆ ಟ್ರಕ್ಕಿಂಗ್ನಲ್ಲಿ ಜೊತೆಯಾಗಿ ಹೆಜ್ಜೆ ಹಾಕಿದ್ದ ಈ ನಾಯಿ ತನ್ನ ಮಾಲೀಕರ ಶವವನ್ನು ಬಿಟ್ಟು ಹೋಗಿಲ್ಲ. 2 ದಿನದ ಬಳಿಕ ಯಾರೋ ಈ ನಾಯಿಯ ಮೊರೆ ಕೇಳಿ ಬಂದು ನೋಡಿದ್ದಾರೆ.

ಸದ್ಯ ಜರ್ಮನ್ ಶೆಫರ್ಡ್ ಇದ್ದ ಜಾಗದಿಂದ ಮೃತದೇಹವನ್ನು ಸ್ಥಳಾಂತರ ಮಾಡಲಾಗಿದೆ. ತನ್ನ ಮಾಲೀಕ ಸಾವನ್ನಪ್ಪಿದ ದುಃಖದಿಂದ ಎರಡು ದಿನದ ಬಳಿಕ ಆಹಾರ ಕೊಟ್ಟರೂ ಜರ್ಮನ್ ಶೆಫರ್ಡ್ ನಾಯಿ ಸೇವಿಸುತ್ತಿಲ್ಲವಂತೆ. ಸೋಷಿಯಲ್ ಮೀಡಿಯಾದಲ್ಲಿ ಜರ್ಮನ್ ಶೆಫರ್ಡ್ ನಾಯಿ ಸ್ವಾಮಿನಿಷ್ಠೆ ತೋರಿರುವ ವಿಡಿಯೋ ವೈರಲ್ ಆಗಿದೆ.

## ಕೆನಡಾ: ಸುಲಿಗೆ ಪ್ರಯತ್ನ



**ಟೊರಂಟೊ:** ಭಾರತ ಮೂಲದ ಕೆನಡಿಯನ್ ಉದ್ಯಮಿಗಳನ್ನು ಬೆದರಿಸಿ ಸುಲಿಗೆ ಮಾಡುತ್ತಿರುವ ಪ್ರಕರಣಕ್ಕೆ ಸಂಬಂಧಿಸಿ ಗ್ರೇಟರ್ ಟೊರಂಟೊ ಪ್ರದೇಶದಲ್ಲಿ 5 ಆರೋಪಿಗಳನ್ನು ಬಂಧಿಸಿರುವುದಾಗಿ ಪೊಲೀಸರು ಹೇಳಿದ್ದಾರೆ. ಬ್ರಾಂಪ್ಟನ್ ನಗರದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಪೊಲೀಸ್ ಅಧಿಕಾರಿ, ಸುಲಿಗೆ ತನಿಖಾ ಕಾರ್ಯಪಡೆಯ ಮುಖ್ಯಸ್ಥ ಶೆಲ್ಲಿ ಥಾಮ್ಸನ್ 'ಈ ಪ್ರಕರಣದಲ್ಲಿ ಭಾರತಕ್ಕೆ ಸಂಪರ್ಕವಿದೆಯೇ ಎಂಬ ಬಗ್ಗೆ ವಿಸ್ತೃತ ತನಿಖೆಯ ಅಗತ್ಯವಿದೆ. ಇದುವರೆಗಿನ ಮಾಹಿತಿ ಪ್ರಕಾರ, ಯಾವುದೇ ಸಂಪರ್ಕವಿಲ್ಲ. ಸುಲಿಗೆ ಪ್ರಕರಣಕ್ಕೆ ಸಂಬಂಧಿಸಿ ನಮ್ಮ ಕಾರ್ಯಪಡೆ ತ್ವರಿತ ಕ್ರಮ ಕೈಗೊಂಡಿದ್ದು 5 ಮಂದಿಯನ್ನು ಬಂಧಿಸಿ ವಿಚಾರಣೆ ನಡೆಸಲಾಗುತ್ತಿದೆ. ಪ್ರಕರಣದ ಬಗ್ಗೆ ಮಾಹಿತಿಯಿದ್ದವರು ಕಾರ್ಯಪಡೆಯನ್ನು ಸಂಪರ್ಕಿಸಬೇಕು' ಎಂದು ಹೇಳಿದ್ದಾರೆ. ಬಂಧಿತರನ್ನು ಬ್ರಾಂಪ್ಟನ್ ನಿವಾಸಿಗಳಾದ ಗಗನ್ ಅಜಿತ್ ಸಿಂಗ್, ಹಷ್ಮೀತ್ ಕೌರ್ ಮತ್ತು ಲಿಮನ್ಜೋತ್ ಕೌರ್, ಮಿಸಿಸೌಗದ ನಿವಾಸಿ ಅನ್ಮೋಲ್ದೀಪ್ ಸಿಂಗ್, ಹಾಗೂ ಸ್ಪಷ್ಟ ವಿಳಾಸವಿಲ್ಲದ ಅರುಣ್ದೀಪ್ ಥಿಂಡ್ ಎಂದು ಗುರುತಿಸಲಾಗಿದೆ. ಗ್ರೇಟರ್ ಟೊರಂಟೊ ಪ್ರದೇಶ, ಎಡ್ಮಂಟನ್, ಬ್ರಿಟಿಷ್ ಕೊಲಂಬಿಯಾದ ಲೋವರ್ ಮೈನ್ಲ್ಯಾಂಡ್ ಪ್ರದೇಶದಲ್ಲಿ ಕಳೆದ ಅಕ್ಟೋಬರ್ನಿಂದ ಉದ್ಯಮಿಗಳ ಸರಣಿ ಅಪಹರಣ ಮತ್ತು ಸುಲಿಗೆ ಪ್ರಕರಣ ವರದಿಯಾಗಿದೆ. ಇವುಗಳಲ್ಲಿ ಕನಿಷ್ಟ 3 ಪ್ರಕರಣಗಳಲ್ಲಿ ಭಾರತ ಮೂಲದ ಸಂಘಟನೆಯ ಕೈವಾಡ, ಅದರಲ್ಲೂ ನಿರ್ದಿಷ್ಟವಾಗಿ ಲಾರೆನ್ಸ್ ಬಿಷ್ಣೋಯಿ ಗ್ಯಾಂಗ್ನ ಕೈವಾಡವನ್ನು ಪೊಲೀಸರು ಶಂಕಿಸಿದ್ದಾರೆ.

# ಭೂಮಿಯ ಪರಿಹಾರ ಹೆಚ್ಚಳಕ್ಕೆ ರೈತರ ಆಗ್ರಹ



**ನವದೆಹಲಿ:** ಮೂರು ವರ್ಷಗಳ ನಂತರ ದೇಶದಲ್ಲಿ ರೈತರ ಕೂಗು ಕೇಳಿಬರುತ್ತಿದ್ದು, ಭೂಮಿಯ ಪರಿಹಾರ ಹೆಚ್ಚಳಕ್ಕೆ ಬೇಡಿಕೆಯಿಟ್ಟು ಉತ್ತರ ಪ್ರದೇಶದ ನೋಯ್ಡಾದಿಂದ ಸಂಸತ್ ಭವನದ ಕಡೆಗೆ ಮೆರವಣಿಗೆ ಹೊರಟಿದ್ದಾರೆ. ಇದು ಸಂಚಾರ ದಟ್ಟಣೆಗೆ ಕಾರಣವಾಗಿದೆ.

ಪ್ರತಿಭಟನಾಕಾರರನ್ನು ತಡೆಯಲು ಬ್ಯಾರಿಕೇಡ್ ಅಳವಡಿಸಲಾಗಿದ್ದು, ನೋಯ್ಡಾ ಎಕ್ಸ್ಪ್ರೆಸ್ ವೇಗೆ ಪ್ರವೇಶಿಸುವ ಎಲ್ಲಾ ಮಾರ್ಗಗಳನ್ನೂ ಸಂಚಾರಿ ಪೊಲೀಸರು ತಡೆದಿದ್ದಾರೆ.

ಇದರಿಂದ ವಾಹನ ಸವಾರರಿಗೆ ತೊಂದರೆಯಾಗಿದೆ.

ನೋಯ್ಡಾದಿಂದ ಹೊರಟ ರೈತರು ದೆಹಲಿ ಪ್ರವೇಶಿಸದಂತೆ ದಿಲ್ಲಿ ಪೋಲೀಸರು ಬೃಹತ್ ಸಂಖ್ಯೆಯಲ್ಲಿ ಭದ್ರತಾ ಪಡೆ ಹಾಗು ಜಲ ಫಿರಂಗಿಗಳನ್ನು ನಿಯೋಜಿಸಿದ್ದಾರೆ. ಉತ್ತರ ಪ್ರದೇಶ ಹಾಗು ಹರ್ಯಾಣದ ಮತ್ತಷ್ಟು ರೈತರು ಸೇರ್ಪಡೆಗೊಳ್ಳುವ ಸಾಧ್ಯತೆಯಿರುವುರಿಂದ ಅವರನ್ನು ತಡೆಯಲು ಸೂಕ್ತ ತಯಾರಿ ಮಾಡಲಾಗುತ್ತಿದೆ.

ನೋಯ್ಡಾ ಮತ್ತು ಗ್ರೇಟರ್ ನೋಯ್ಡಾದಲ್ಲಿ ಮೂಲಸೌಕರ್ಯ ಹಾಗೂ ಇತರೆ ಅಭಿವೃದ್ಧಿ ಯೋಜನೆಗಳಿಗಾಗಿ ಸ್ವಾಧೀನಪಡಿಸಿಕೊಂಡ ಜಮೀನಿಗೆ ಹೆಚ್ಚುವರಿ ಪರಿಹಾರ ನೀಡುವಂತೆ ಆಗ್ರಹಿಸಿರುವ ರೈತರು, ಶೇ 10ರಷ್ಟು ಅಬಾದಿ ಜಮೀನು ನೀಡಬೇಕು ಎಂದು ಬೇಡಿಕೆ ಇಟ್ಟಿದ್ದಾರೆ.

ಜಮೀನು ಸ್ವಾಧೀನಪಡಿಸಿಕೊಂಡ ಕಾರಣ ಬಹುತೇಕರು ಭೂರಹಿತರಾಗಿದ್ದಾರೆ. ಅವರಿಗೆ ತಕ್ಕ ಪರಿಹಾರ ಸಿಗಬೇಕು. ಜೊತೆಗೆ, ಸ್ವಾಧೀನಪಡಿಸಿಕೊಂಡಾಗ ಜಮೀನಿಗೆ ಇದ್ದ ದರವನ್ನೇ ಕೊಡಬೇಕು ಎಂದು ಆಗ್ರಹಿಸಿದ್ದಾರೆ.

# ಲೋಕಸಭೆಯಲ್ಲಿ ಶ್ವೇತಪತ್ರ ಮಂಡಿಸಿದ ಕೇಂದ್ರ ಸಚಿವೆ



**ನವದೆಹಲಿ:** ದೇಶದ ಆರ್ಥಿಕ ಸ್ಥಿತಿಗತಿಯ ಬಗ್ಗೆ ಸಂಸತ್ತಿನ ಕಲಾಪದಲ್ಲಿಯೇ ಶ್ವೇತಪತ್ರ ಮಂಡಿಸೋದಾಗಿ ಕೇಂದ್ರ ಸರ್ಕಾರ ಘೋಷಿಸಿತ್ತು. ಅದಕ್ಕಾಗಿ ಒಂದು ದಿನ ಸಂಸತ್ ಕಲಾಪವನ್ನು ಮುಂದೂಡಿಕೆ ಮಾಡಲಾಗಿತ್ತು. ಅದರಂತೆ ಇದೀಗ ಲೋಕಸಭೆಯಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಶ್ವೇತಪತ್ರವನ್ನು ಮಂಡಿಸಿದ್ದಾರೆ. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಲೋಕಸಭೆಯಲ್ಲಿ 'ಭಾರತೀಯ ಆರ್ಥಿಕತೆ ಕುರಿತ ಶ್ವೇತಪತ್ರ'ವನ್ನು ಮಂಡಿಸಿದರು. ಈ ಮೂಲಕ ದೇಶದ ಆರ್ಥಿಕ ಸ್ಥಿತಿಯ ಬಗ್ಗೆ ಜನತೆಗೆ ಮನವರಿಕೆ ಮಾಡೋ ಪ್ರಯತ್ನಕ್ಕೆ ಕೇಂದ್ರ ಸರ್ಕಾರ ಇಳಿಸಿದೆ.

**ಶ್ವೇತಪತ್ರದ ಉದ್ದೇಶಗಳು:** ಮೊದಲನೆಯದಾಗಿ, 2014 ರಲ್ಲಿ ಅಧಿಕಾರ ವಹಿಸಿಕೊಂಡಾಗ ಈ ಸರ್ಕಾರಕ್ಕೆ ನೀಡಲಾದ ಆಡಳಿತದ ಸ್ವರೂಪ ಮತ್ತು ವ್ಯಾಪ್ತಿ, ಆರ್ಥಿಕ ಮತ್ತು ಹಣಕಾಸಿನ ಬಿಕ್ಕಟ್ಟುಗಳ ಬಗ್ಗೆ ಸಂಸತ್ತಿನ ಗೌರವಾನ್ವಿತ ಸದಸ್ಯರಿಗೆ ಮತ್ತು ಭಾರತದ ಜನರಿಗೆ ತಿಳಿಸಲು ಇದು ಪ್ರಯತ್ನಿಸುತ್ತದೆ.

ಎರಡನೆಯದಾಗಿ, ಆರ್ಥಿಕತೆಯ ಆರೋಗ್ಯವನ್ನು ಪುನಃಸ್ಥಾಪಿಸಲು ಮತ್ತು ವರ್ತಮಾನದಲ್ಲಿ ಮತ್ತು ಅಮೃತಕಾಲದಲ್ಲಿ ಜನರ ಬೆಳವಣಿಗೆಯ ಆಕಾಂಕ್ಷೆಗಳನ್ನು ಪೂರೈಸಲು ನಮ್ಮ ಸರ್ಕಾರ ಕೈಗೊಂಡ ನೀತಿಗಳು ಮತ್ತು ಕ್ರಮಗಳ ಬಗ್ಗೆ ಅದು ಸಂಸತ್ತಿನ ಗೌರವಾನ್ವಿತ ಸದಸ್ಯರಿಗೆ ಮತ್ತು ಸಾರ್ವಜನಿಕರಿಗೆ ತಿಳಿಸುತ್ತದೆ. ಮೂರನೆಯದಾಗಿ, ಹಾಗೆ ಮಾಡುವ ಮೂಲಕ, ರಾಜಕೀಯ ಅನುಕೂಲಕ್ಕಿಂತ ಆಡಳಿತದ ವಿಷಯಗಳಲ್ಲಿ ರಾಷ್ಟ್ರೀಯ ಹಿತಾಸಕ್ತಿಯ ಪರಮಾಧಿಕಾರ ಮತ್ತು ಹಣಕಾಸಿನ ಜವಾಬ್ದಾರಿಯ ಬಗ್ಗೆ ವಿಶಾಲವಾದ, ಹೆಚ್ಚು ತಿಳುವಳಿಕೆಯುಳ್ಳ ಚರ್ಚೆಯನ್ನು ಸೃಷ್ಟಿಸಲು ಅದು ಆಶಿಸುತ್ತದೆ.

# ಭಾರತ್ ರೈಸ್‌ಗೆ ಖರೀದಿಗೆ ಮುಗಿಬಿದ್ದ ಜನ





ದೆಹಲಿ: ಕಡಿಮೆ ದರದಲ್ಲಿ ಭಾರತ್ ರೈಸ್ ಮಾರಾಟವಾಗ್ತಿದ್ದು,ಕೆಜಿ ಅಕ್ಕಿಗೆ ರಿಯಾಯಿತಿ ದರದಲ್ಲಿ 29 ರೂಗೆ ಮಾರಾಟವಾಗ್ತಿದೆ.ಮೊಬೈಲ್ ವ್ಯಾನ್‌ಗಳ ಮೂಲಕ ಭಾರತ್ ಅಕ್ಕಿ ಮಾರಾಟ ಮಾಡಲಾಗಿದೆ. ಮಾರ್ಕೆಟ್ ಗೆ ಬರುತ್ತಿರುವ ಅಕ್ಕಿ ಅತೀವೇಗದಲ್ಲಿ ಖಾಲಿ ಖಾಲಿಯಾಗಿದೆ. 29 ರೂಪಾಯಿಗೆ ಒಂದು ಕೆಜಿ ಅಕ್ಕಿ ಸಿಗುತ್ತಿದೆ.ಕಡಿಮೆ ದರದಲ್ಲಿ ಸಿಗುತ್ತಿರುವ ಕಾರಣ ಜನ ತಾ ಮುಂದು ನಾ ಮುಂದು ಅಂತಾ ಜನ ಬರ್ತಿದ್ದಾರೆ.ನಾಫೆಡ್ಸ್ ನಿಂದ 29 ರೂಪಾಯಿ ಅಕ್ಕಿ ವಿತರಣೆ ಮಾಡಲಾಗುತ್ತೆ. ರೈತರಿಂದ ನೇರವಾಗಿ ಅಕ್ಕಿ ಖರೀದಿಸಿ ಕಡಿಮೆ ಬೆಲೆಗೆ ವಿತರಣೆ ಮಾಡಲಾಗಿದೆ.ಒಟ್ಟು 25 ಮೊಬೈಲ್ ವ್ಯಾನ್ ಗಳ ಮೂಲಕ ಅಕ್ಕಿ ವಿತರಣೆ ಮಾಡಿದೆ.ಬೆಂಗಳೂರಿನಲ್ಲಿ 5 ಕಡೆಗಳಲ್ಲಿ ಮೊಬೈಲ್ ವ್ಯಾನ್ಸ್ ಸೇವೆ ಮಾಡಲಾಗ್ತಿದೆ.ರಾಜ್ಯಾದ್ಯಂತ 20 ಮೊಬೈಲ್ ವಾನ್ ಗಳು ಸಂಚರಿಸುತ್ತಿದೆ.ಎಲ್ಲಾ ರಿಲಾಯನ್ಸ್ ಮಾರ್ಟ್ ಗಳಲ್ಲಿ ನಾಳೆ ಅಥವಾ ನಾಡಿದ್ದು ದಿನಗಳಲ್ಲಿ ಅಕ್ಕಿ ಸಿಗಲಿದೆ.ಆನ್ ಲೈನ್ ಹೋಂ ಡಿಲವರಿ ಆಯಪ್ ಗಳಲ್ಲೂ ಅಕ್ಕಿ ದೊರೆಯಲಿದೆ.

## ಮದರಸಾ ಧ್ವಂಸಗೊಳಿಸಿದ್ದಕ್ಕೆ ಪೊಲೀಸರ ಮೇಲೆ ಕಲ್ಲು ತೂರಾಟ- ಕಂಡಲ್ಲಿ ಗುಂಡು ಹಾರಿಸಲು ಆದೇಶ

**ಡೆಹ್ರಾಡೂನ್:** ಉತ್ತರಾಖಂಡದ ಹಲ್ದ್ವಾನಿಯಲ್ಲಿ ಅಕ್ರಮವಾಗಿ ನಿರ್ಮಿಸಲಾಗಿದ್ದ ಮದರಸಾವನ್ನು ಧ್ವಂಸಗೊಳಿಸಿದ ನಂತರ ಪರಿಸ್ಥಿತಿ ಉದ್ವಿಗ್ನಗೊಂಡಿದೆ. ದುಷ್ಕರ್ಮಿಗಳು ಪೊಲೀಸರ ಮೇಲೆ ಕಲ್ಲು ತೂರಾಟ ನಡೆಸಿ, ವಾಹನಗಳಿಗೆ ಬೆಂಕಿ ಹಚ್ಚಿದ್ದಾರೆ. ಪರಿಸ್ಥಿತಿ ಉದ್ವಿಗ್ನಗೊಳ್ಳುತ್ತಿದ್ದಂತೆ ಉತ್ತರಾಖಂಡ ಸಿಎಂ ಪುಷ್ಕರ್ ಸಿಂಗ್ ಧಾಮಿ (ಕಣ್ಣುಇಚಿಡಿ ಖಟಿರು ಆುಚಿಟ) ಅವರು ಹಲ್ದ್ವಾನಿಯ ಒಂಭುಲ್‌ಪುರದಲ್ಲಿ ಕಂಡಲ್ಲಿ ಗುಂಡು ಹಾರಿಸುವಂತೆ (ಶೂಟ್-ಅಟ್-ಸೈಟ್) ಆದೇಶ ಹೊರಡಿಸಿದ್ದಾರೆ. ಜೊತೆಗೆ ಹಲ್ದ್ವಾನಿಯ ಶಾಲೆಗಳಿಗೆ ಶುಕ್ರವಾರ (ಫೆ.9) ರಜೆ ಘೋಷಿಸಿದ್ದಾರೆ.

ಬಂಭುಲ್ಪುರ ಧಗ ಧಗ: ಹಲ್ದ್ವಾನಿಯ ಮುನ್ಸಿಪಲ್ ಕಾರ್ಪೊರೇಷನ್ ಅಧಿಕಾರಿಗಳು ಗುರುವಾರ (ಫೆ.8) ಬಂಭುಲ್ಪುರ ಪೊಲೀಸ್ ಠಾಣೆ ಬಳಿ ಅಕ್ರಮವಾಗಿ ನಿರ್ಮಿಸಿದ್ದ ಮದರಸಾವನ್ನು ಬುಲ್ಡೋಜರ್‌ನಿಂದ ಧ್ವಂಸಗೊಳಿಸಿದರು. ಇದರಿಂದ ರೊಚ್ಚಿಗೆದ್ದ ಸ್ಥಳೀಯರ ಗುಂಪೊಂದು ಪೊಲೀಸರ ಮೇಲೆ ಕಲ್ಲು ತೂರಾಟ ನಡೆಸಿ, ಪೊಲೀಸ್ ವಾಹನಗಳಿಗೆ ಬೆಂಕಿ ಹಚ್ಚಿದೆ. ವಿದ್ಯುತ್ ಟ್ರಾನ್ಸ್ಫಾರ್ಮರ್‌ಗಳಿಗೂ ಬೆಂಕಿ ಹಚ್ಚಿದೆ. ಈ ವೇಳೆ ಹಲವು ಪೊಲೀಸ್ ಅಧಿಕಾರಿಗಳು ಗಾಯಗೊಂಡರು. ಗಲಭೆಕೋರರ ಗುಂಪು ಬಂಭುಲ್‌ಪುರ ಪೊಲೀಸ್ ಠಾಣೆಯನ್ನು ಸುತ್ತುವರಿದಿದ್ದರಿಂದ ಹಲವಾರು ಪತ್ರಕರ್ತರು ಮತ್ತು ಆಡಳಿತ ಅಧಿಕಾರಿಗಳು ಪೊಲೀಸ್ ಠಾಣೆಯೊಳಗೆ ಸಿಲುಕಿದ್ದರು. ಇದರಿಂದಾಗಿ ಗಲಭೆಕೋರರನ್ನು ಹತ್ತಿಕ್ಕಲು ಸರ್ಕಾರ ಕಂಡಲ್ಲಿ ಗುಂಡು ಹಾರಿಸಲು ಆದೇಶ ಹೊರಡಿಸಿದೆ. ಸದ್ಯ ಹಲ್ದ್ವಾನಿಗೆ ಹೆಚ್ಚುವರಿ ಭದ್ರತಾ ಪಡೆಗಳನ್ನ ನಿಯೋಜಿಸಲಾಗಿದೆ. ಸಿಎಂ ಪುಷ್ಕರ್ ಸಿಂಗ್ ಧಾಮಿ ಅವರು ಮುಖ್ಯ ಕಾರ್ಯದರ್ಶಿ ಮತ್ತು ಪೊಲೀಸ್ ಮಹಾನಿರ್ದೇಶಕರೊಂದಿಗೆ ಸಭೆ ನಡೆಸಿದ ನಂತರ, ಬಂಭುಲ್‌ಪುರದಲ್ಲಿ ಕರ್ಫ್ಯೂ ವಿಧಿಸಿದ್ದು, ಕಂಡಲ್ಲಿ ಗುಂಡು ಹಾರಿಸುವಂತೆ ಆದೇಶ ಹೊರಡಿಸಿದ್ದಾರೆ.

## ಕಾಂಗ್ರೆಸ್ ತೊರೆದ ಮಾಜಿ ಸಚಿವ ಬಾಬಾ ಸಿದ್ದಿಕ್

**ಮುಂಬೈ:** ಮಹಾರಾಷ್ಟ್ರದ ಮಾಜಿ ಸಚಿವ ಬಾಬಾ ಸಿದ್ದಿಕ್ ಅವರು 48 ವರ್ಷಗಳ ಬಳಿಕ ಇದೀಗ ದಿಢೀರ್ ಆಗಿ ಕಾಂಗ್ರೆಸ್ ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡುವುದಾಗಿ ಘೋಷಿಸಿದ್ದಾರೆ. ಈ ಸಂಬಂಧ ತಮ್ಮ ಎಕ್ಸ್ ಪೋಸ್ಟ್‌ನಲ್ಲಿ ಬರೆದುಕೊಂಡ ಅವರು, ನಾನು ಹದಿಹರೆಯದವನಾಗಿದ್ದಾಗ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷಕ್ಕೆ ಸೇರಿದ್ದೇನೆ. ಇದು 48 ವರ್ಷಗಳ ನನ್ನ ಮಹತ್ವದ ಪ್ರಯಾಣವಾಗಿದೆ. ಇಂದು ನಾನು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡುತ್ತೇನೆ ಎಂದಿದ್ದಾರೆ ಬಾಬಾ ಸಿದ್ದಿಕ್ ಯಾರು: ಬಾಂದ್ರಾ ಪಶ್ಚಿಮ ಕ್ಷೇತ್ರದಿಂದ ಬಾಬಾ ಸಿದ್ದಿಕ್ ಮೂರು ಬಾರಿ ಶಾಸಕರಾಗಿದ್ದಾರೆ. ಆಹಾರ ಮತ್ತು ನಾಗರಿಕ ಸರಬರಾಜು ರಾಜ್ಯ ಸಚಿವರಾಗಿದ್ದರು ಮತ್ತು ಮಹಾರಾಷ್ಟ್ರ ವಸತಿ ಮತ್ತು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಮುಂಬೈ ವಿಭಾಗದ ಅಧ್ಯಕ್ಷರಾಗಿದ್ದರು. ವಿದ್ಯಾರ್ಥಿ ನಾಯಕರಾಗಿ ನಾಯಕತ್ವ ಪ್ರಾರಂಭಿಸಿದ ಅವರು, ಮೊದಲು ಬೃಹನ್ಮುಂಬೈ ಮುನ್ಸಿಪಲ್ ಕಾರ್ಪೊರೇಷನ್‌ಗೆ ಕಾರ್ಪೊರೇಟರ್ ಆಗಿ ಆಯ್ಕೆಯಾದರು. ನಂತರ 1999, 2004 ಮತ್ತು 2009 ರಲ್ಲಿ ಬಾಂದ್ರಾ ಪಶ್ಚಿಮ ಕ್ಷೇತ್ರದಿಂದ ಮಹಾರಾಷ್ಟ್ರ ವಿಧಾನಸಭೆಗೆ ಆಯ್ಕೆಯಾದರು. 2014ರ ವಿಧಾನಸಭಾ ಚುನಾವಣೆಯಲ್ಲಿ ಮುಂಬೈ ಬಿಜೆಪಿ ಅಧ್ಯಕ್ಷ ಆಶಿಶ್ ಶೆಲಾರ್ ವಿರುದ್ಧ ಬಾಬಾ ಸಿದ್ದಿಕ್ ಪರಾಭವಗೊಂಡಿದ್ದರು.

## ಸಮೀರ್ ಕಾಮತ್ ಗುಂಡು ಹಾರಿಸಿಕೊಂಡು ಆತ್ಮಹತ್ಯೆ



**ನ್ಯೂಯಾರ್ಕ್:** ಅಮೆರಿಕದ ಇಂಡಿಯಾನಾದಲ್ಲಿ 23 ವರ್ಷದ ಭಾರತೀಯ ಮೂಲದ ಸಮೀರ್ ಕಾಮತ್, ಫೆ.5ರಂದು ಅನುಮಾನಾಸ್ಪದ ರೀತಿಯಲ್ಲಿ ಮೃತ ಪಟ್ಟಿದ್ದರು. ಪ್ರಾಥಮಿಕ ತನಿಖೆ ನಡೆಸಿರುವ ಅಮೆರಿಕದ ಅಧಿಕಾರಿಗಳು, ಸಮೀರ್ ಕಾಮತ್ ತಾನೇ ತಲೆಗೆ ಗುಂಡು ಹಾರಿಸಿ ಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ತಿಳಿಸಿದ್ದಾರೆ. ಪರ್ಡ್ಯೂ ವಿಶ್ವವಿದ್ಯಾಲಯದ ಡಾಕ್ಟರೇಟ್ ವಿದ್ಯಾರ್ಥಿಯಾಗಿದ್ದ ಸಮೀರ್ ಕಾಮತ್ ಮೃತದೇಹ, ಇಂಡಿಯಾನಾದ ವಿಲಿಯಮ್ಸ್ಪೋರ್ಟ್ನ ಅರಣ್ಯ ಪ್ರದೇಶದಲ್ಲಿ ಫೆ.5ರಂದು ಸಂಜೆ 5 ಗಂಟೆ ಸುಮಾರಿಗೆ ಪತ್ತೆಯಾಗಿತ್ತು. ಫೆ.6ರಂದು ಮರಣೋತ್ತರ ಪರೀಕ್ಷೆ ಕೈಗೊಳ್ಳಲಾಗಿತ್ತು. ವರದಿ ಪ್ರಕಾರ, ಸಮೀರ್ ಅವರ ತಲೆಗೆ ಗುಂಡು ತಾಗಿದ್ದು, ಪ್ರಾಥಮಿಕ ತನಿಖೆಯ ಪ್ರಕಾರವೂ ಸ್ವತಃ ಗುಂಡು ಹಾರಿಸಿಕೊಂಡಿರುವುದು ಪತ್ತೆಯಾಗಿದೆ ಎಂದು ಪೊಲೀಸರು ಹೇಳಿದ್ದಾರೆ.

# ಆಂತರಿಕ ವ್ಯವಹಾರದಲ್ಲಿ ಅಮೆರಿಕ ಹಸ್ತಕ್ಷೇಪ: ಆರೋಪ



**ಬೀಜಿಂಗ್:** ಅಮೆರಿಕವು ಇತರ ದೇಶಗಳ ಆಂತರಿಕ ವ್ಯವಹಾರದಲ್ಲಿ ಹಸ್ತಕ್ಷೇಪ ನಡೆಸಿ ತನ್ನ ಬೇಳೆ ಬೇಯಿಸಿಕೊಳ್ಳುವ ಕಾರ್ಯನೀತಿಯನ್ನು ಅನುಸರಿಸುತ್ತಿದೆ ಎಂದು ರಶ್ಯ ಮತ್ತು ಚೀನಾಗಳು ಆರೋಪಿಸಿವೆ. ಗುರುವಾರ ರಶ್ಯದ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಮತ್ತು ಚೀನಾ ಅಧ್ಯಕ್ಷ ಕ್ಸಿಜಿಂಪಿಂಗ್ ನಡುವೆ ನಡೆದ ದೂರವಾಣಿ ಮಾತುಕತೆಯಲ್ಲಿ ಉಭಯ ಮುಖಂಡರು ಅಮೆರಿಕದ ಕಾರ್ಯನೀತಿಯನ್ನು ಖಂಡಿಸಿದರು ಎಂದು ರಶ್ಯ ಅಧ್ಯಕ್ಷರ ಕಚೇರಿಯ ಹೇಳಿಕೆ ತಿಳಿಸಿದೆ. ರಶ್ಯ ಮತ್ತು ಚೀನಾವನ್ನು ನಿಗ್ರಹಿಸುವ ಪ್ರಧಾನ ಉದ್ದೇಶವನ್ನು ಅಮೆರಿಕ ಹೊಂದಿರುವುದನ್ನು ಎರಡೂ ದೇಶಗಳು ಅರಿತುಕೊಂಡಿದೆ ಎಂದು ರಶ್ಯ ಅಧ್ಯಕ್ಷರ ಆಪ್ತ ಯೂರಿ ಉಷಕೋವ್ ಹೇಳಿದ್ದಾರೆ. ಉಕ್ರೇನ್ ವಿರುದ್ಧದ ಯುದ್ಧದ ಬಳಿಕ ಪಾಶ್ಚಿಮಾತ್ಯ ದೇಶಗಳು ರಶ್ಯದ ವಿರುದ್ಧ ಕಠಿಣ ನಿರ್ಬಂಧ ಜಾರಿಗೊಳಿಸಿದ ಹಿನ್ನೆಲೆಯಲ್ಲಿ ರಶ್ಯವು ಚೀನಾದ ಜತೆಗಿನ ಆರ್ಥಿಕ ವ್ಯವಹಾರ ಸಂಬಂಧವನ್ನು ಹೆಚ್ಚಿಸಿದೆ. ರಶ್ಯ ರಿಯಾಯಿತಿ ದರದಲ್ಲಿ ಒದಗಿಸುವ ತೈಲಗಳನ್ನು ಆಮದು ಮಾಡಿಕೊಳ್ಳುವ ಮೂಲಕ ಚೀನಾವೂ ಪ್ರಯೋಜನ ಪಡೆದಿದೆ. ಉಭಯ ದೇಶಗಳ ನಡುವಿನ ವ್ಯಾಪಾರ ಸಂಬಂಧ ಕಳೆದ 2 ವರ್ಷಗಳಲ್ಲಿ ದಾಖಲೆ ಮಟ್ಟ ತಲುಪಿದ್ದು 2023ರಲ್ಲಿ 240.1 ಶತಕೋಟಿ ಡಾಲರ್ ದಾಟಿದ್ದು ಇದು 2022ಕ್ಕೆ ಹೋಲಿಸಿದರೆ 26%ದಷ್ಟು ಏರಿಕೆಯಾಗಿದೆ ಎಂದು ಮೂಲಗಳು ಹೇಳಿವೆ.

# ಪುಟಿನ್ ಪ್ರತಿಸ್ಪರ್ಧಿಗೆ ನಿರ್ಬಂಧ



**ಮಾಸ್ಕೊ:** ಯುದ್ಧ ವಿರೋಧಿ ಮುಖಂಡ ಬೋರಿಸ್ ನದೆಝ್ದಿನ್ ಮುಂದಿನ ತಿಂಗಳು ನಡೆಯಲಿರುವ ರಶ್ಯದ ಅಧ್ಯಕ್ಷೀಯ ಚುನಾವಣೆಯಲ್ಲಿ ಸ್ಪರ್ಧಿಸುವುದನ್ನು ರಶ್ಯದ ಚುನಾವಣಾ ಆಯೋಗ ಗುರುವಾರ ತಿರಸ್ಕರಿಸಿದೆ. ಎರಡು ದಶಕಗಳಿಗೂ ಅಧಿಕ ಸಮಯದಿಂದ ಅಧಿಕಾರದಲ್ಲಿರುವ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರ ಬದ್ಧ ಪ್ರತಿಸ್ಪರ್ಧಿಯೆಂದು ಗುರುತಿಸಿಕೊಂಡಿದ್ದ ಬೋರಿಸ್ ಮಾರ್ಚ್ 15ರಿಂದ 17ರವರೆಗೆ ನಡೆಯಲಿರುವ ಅಧ್ಯಕ್ಷೀಯ ಚುನಾವಣೆಯಲ್ಲಿ ಪುಟಿನ್ರನ್ನು ಸೋಲಿಸುವ ವಿಶ್ವಾಸದಲ್ಲಿದ್ದರು. ಇದೀಗ ಬಹುತೇಕ ಎಲ್ಲಾ ವಿಪಕ್ಷ ಮುಖಂಡರ ಸ್ಪರ್ಧೆಯನ್ನು ನಿಷೇಧಿಸಿದಂತಾಗಿದ್ದು ಪುಟಿನ್ ಅವರನ್ನು ಬೆಂಬಲಿಸುವ ಮೂರು ಪಕ್ಷಗಳ ಅಭ್ಯರ್ಥಿಗಳು ಔಪಚಾರಿಕವಾಗಿ ಸ್ಪರ್ಧಿಸುತ್ತಿದ್ದು ಪುಟಿನ್ ಗೆಲುವು ಬಹುತೇಕ ಖಚಿತವಾಗಿದೆ. ಬೋರಿಸ್ ನದೆಝ್ದಿನ್ ಅವರ ನಾಮಪತ್ರವನ್ನು ಅನುಮೋದಿಸಿದ 1,05,000 ಜನರಲ್ಲಿ 9 ಸಾವಿರ ಜನರ ಹೆಸರು, ವಿಳಾಸ ಮತ್ತಿತರ ದಾಖಲೆಗಳಲ್ಲಿ ವ್ಯತ್ಯಾಸವಿದೆ. ನಿಯಮದ ಪ್ರಕಾರ ತಪ್ಪಿನ ಪ್ರಮಾಣ 5 ಶೇ. ವನ್ನು ಮೀರಿದ್ದರೆ ನಾಮಪತ್ರವನ್ನು ತಿರಸ್ಕರಿಸಬಹುದಾಗಿದೆ. ಆದ್ದರಿಂದ ಅಧ್ಯಕ್ಷೀಯ ಚುನಾವಣೆಯಲ್ಲಿ ಅಭ್ಯರ್ಥಿಯಾಗಿ ಬೋರಿಸ್ ನದೆಝ್ದಿನ್ ಹೆಸರು ನೋಂದಾವಣೆ ತಿರಸ್ಕರಿಸಲಾಗಿದೆ' ಎಂದು ಗುರುವಾರ ನಡೆದ ರಶ್ಯ ಕೇಂದ್ರ ಚುನಾವಣಾ ಆಯೋಗದ ಸಭೆಯ ಬಳಿಕ ಘೋಷಿಸಲಾಗಿದೆ.

# ಸಲ್ಮಾನ್ ಖುರ್ಷಿದ್ ಪತ್ನಿ ವಿರುದ್ಧ ವಾರಂಟ್



**ನವದೆಹಲಿ:** ಸರಕಾರಿ ನಿಧಿಗಳನ್ನು ದುರುಪಯೋಗಪಡಿಸಿದ ಆರೋಪದಲ್ಲಿ, ಉತ್ತರಪ್ರದೇಶದ ಬರೇಲಿಯಲ್ಲಿರುವ ಎಂಪಿ-ಎಮ್ಎಲ್ಎ ನ್ಯಾಯಾಲಯವೊಂದು ಹಿರಿಯ ಕಾಂಗ್ರೆಸ್ ನಾಯಕ ಸಲ್ಮಾನ್ ಖುರ್ಷಿದ್ರ ಪತ್ನಿ ಲೂಯಿಸ್ ಖುರ್ಷಿದ್ ಗೆ ಬುಧವಾರ ಬಂಧನ ವಾರಂಟ್ ಜಾರಿಗೊಳಿಸಿದೆ. ನ್ಯಾಯಾಲಯವು ಮುಂದಿನ ವಿಚಾರಣೆಯನ್ನು ಫೆಬ್ರವರಿ 16ಕ್ಕೆ ನಿಗದಿಪಡಿಸಿದೆ.

2009-10ರಲ್ಲಿ, ಖುರ್ಷಿದ್ ಮತ್ತು ಅವರ ಪತ್ನಿ ಲೂಯಿಸ್ ಖುರ್ಷಿದ್ ಅಧ್ಯಕ್ಷರಾಗಿರುವ ಟ್ರಸ್ಟ್ ಒಂದರ ಕೃತಕ ಕೈ-ಕಾಲುಗಳು ಮತ್ತು ಇತರ ಸಲಕರಣೆಗಳ ವಿತರಣೆ ಯೋಜನೆಯಲ್ಲಿ ಅವ್ಯವಹಾರ ನಡೆದಿದೆ ಎಂಬ ಆರೋಪಕ್ಕೆ ಸಂಬಂಧಿಸಿದ ಪ್ರಕರಣ ಇದಾಗಿದೆ. ಖುರ್ಷಿದ್ ಅವರ ಅಜ್ಜ ಹಾಗೂ ದೇಶದ ಮೂರನೇ ರಾಷ್ಟ್ರಪತಿಯ ಹೆಸರಿನಲ್ಲಿರುವ 'ಡಾ. ಝಾಕಿರ್ ಹುಸೇನ್ ಮೆಮೋರಿಯಲ್ ಟ್ರಸ್ಟ್' ಸರಕಾರದ 71 ಲಕ್ಷ ರೂ. ಅನುದಾನವನ್ನು ದುರುಪಯೋಗಪಡಿಸಿಕೊಂಡಿದೆ ಎಂದು ಆರೋಪಿಸಲಾಗಿದೆ.

# ಜೈಲಿನಿಂದಲೇ ಮತ ಚಲಾಯಿಸಿದ ಮಾಜಿ ಪ್ರಧಾನಿ ಇಮ್ರಾನ್ ಖಾನ್



**ಇಸ್ಲಾಮಾಬಾದ್:** ಪಾಕಿಸ್ತಾನದಲ್ಲಿ ಸಾರ್ವತ್ರಿಕ ಚುನಾವಣೆ ನಡೆಯುತ್ತಿದ್ದು ಈ ಹಿನ್ನೆಲೆಯಲ್ಲಿ ಸಾಕಷ್ಟು ಬಿಗಿ ಭದ್ರತೆ ನಿಯೋಜಿಸಲಾಗಿದೆ. ಸದ್ಯ ಪಾಕ್‌ನ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಸೇರಿದಂತೆ ಇತರ ಪ್ರಮುಖ ಬಂಧಿತ ರಾಜಕೀಯ ವ್ಯಕ್ತಿಗಳು ಅಂಚೆ ಮತಪತ್ರದ ಮೂಲಕ ಜೈಲಿನಿಂದಲೇ ಮತ ಚಲಾಯಿಸಿದ್ದಾರೆ ಎನ್ನಲಾಗುತ್ತಿದೆ.

ಮಾಜಿ ವಿದೇಶಾಂಗ ಸಚಿವ ಶಾ ಮಹಮ್ಮದ್ ಖುರೇಷಿ, ಪಂಜಾಬ್ ಮಾಜಿ ಮುಖ್ಯಮಂತ್ರಿ ಚೌಧರಿ ಪರ್ವೇಜ್ ಇಲಾಹಿ, ಅವಾಮಿ ಮುಸ್ಲಿಂ ಲೀಗ್ ಮುಖ್ಯಸ್ಥ ಶೇಖ್ ರಶೀದ್ ಮತ್ತು ಮಾಜಿ ಸಚಿವ ಫವಾದ್ ಚೌಧರಿ ಅಂತೆ ಮೂಲಕ ಮತ ಚಲಾಯಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಗಣಕೀಕೃತ ರಾಷ್ಟ್ರೀಯ ಗುರುತಿನ ಚೀಟಿ(ಸಿಎನ್‌ಐಸಿ) ಹೊಂದದೆ ಇರುವ ಕಾರಣ ಅಡಿಯಾಲಾ ಜೈಲಿನಲ್ಲಿರುವ 7 ಸಾವಿರ ಕೈದಿಗಳಲ್ಲಿ 100ಕ್ಕಿಂತಲೂ ಕಡಿಮೆ ಕೈದಿಗಳು ಮತ ಚಲಾಯಿಸಲು ಅರ್ಹತೆ ಪಡೆದಿದ್ದರು ಎಂದು ಜೈಲಿನ ಅಧಿಕಾರಿಗಳು ತಿಳಿಸಿದ್ದಾರೆ.

ಪಾಕಿಸ್ತಾನದಲ್ಲಿ ಒಟ್ಟು 90,675 ಮತಗಟ್ಟೆಗಳಿರುತ್ತವೆ. ಈ ಕೇಂದ್ರಗಳಲ್ಲಿ 2,76,402 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಪಾಕಿಸ್ತಾನದ ಚುನಾವಣಾ ಆಯೋಗದ ಪ್ರಕಾರ, 12.85 ಕೋಟಿಗೂ ಹೆಚ್ಚು ನೋಂದಾಯಿತ ಮತದಾರರು ಸಾರ್ವತ್ರಿಕ ಚುನಾವಣೆಯಲ್ಲಿ ತಮ್ಮ ಹಕ್ಕು ಚಲಾಯಿಸಲಿದ್ದಾರೆ. ರಾಷ್ಟ್ರೀಯ ಅಸೆಂಬ್ಲಿ ಸ್ಥಾನಗಳಿಗೆ 5121 ಅಭ್ಯರ್ಥಿಗಳಲ್ಲಿ ಒಟ್ಟು 12,85,85,760 ನೋಂದಾಯಿತ ಮತದಾರರು ಮತ ಚಲಾಯಿಸಲು ಅರ್ಹರಾಗಿದ್ದಾರೆ. ಇವರಲ್ಲಿ 4,807 ಪುರುಷರು, 312 ಮಹಿಳೆಯರು ಮತ್ತು ಇಬ್ಬರು ಟ್ರಾನ್ಸ್-ಜೆಂಡರ್ ಅಭ್ಯರ್ಥಿಗಳು ಸೇರಿದ್ದಾರೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054



# ಸಾರಾಂಶ

## ತೀರದಾಚೆ ಲಿರಿಕಲ್ ವೀಡಿಯೋ ಸಾಂಗ್!

ತೀರಾ ಅಪರೂಪವೆಂಬಂಥಾ ಭಾವವೊಂದನ್ನು ಕೇಳುಗರೆಲ್ಲರಲ್ಲಿ ಮೂಡಿಸುವ ನಿಟ್ಟಿನಲ್ಲಿ 'ಸಾರಾಂಶ' ಚಿತ್ರದ ಹಾಡುಗಳು ಈಗಾಗಲೇ ಗೆದ್ದಿವೆ. ಇಂಥಾ ಹಾಡಿನ ಮೂಲಕವೇ ಒಂದಿಡೀ ಸಿನಿಮಾದ ಆಂತರ್ಯದ ಬಗ್ಗೆ ಕುತೂಹಲವೂ ಮೂಡಿಕೊಂಡಿದೆ. ಮೆಲುವಾಗಿ ತೇಲಿ ಬಂದು ನಾನಾ ಭಾವನೆಗಳನ್ನು ಮೊಗೆದು ತಂದು ಮನಸಿಗೆ ತುಂಬುವ ಶೈಲಿಯಲ್ಲಿ ಸಂಗೀತ ನಿರ್ದೇಶಕ ಉದಿತ್ ಹರಿತಾಸ್ ಅಕ್ಷರಶಃ ಮೋಡಿ ಮಾಡಿದ್ದಾರೆ. ಇದೀಗ ನಿರ್ದೇಶಕ ಸೂರ್ಯ ವಸಿಷ್ಠ ಹಾಗೂ ಉದಿತ್ ಸಹಯೋಗದ ಮತ್ತೊಂದು ಮೆಲೋಡಿಯಸ್ ಹಾಡು ಬಿಡುಗಡೆಗೊಂಡಿದೆ. ತೀರದಾಚೆಗೆ ಹಾರಿ ಹೋಗುವಾಸೆ ಅಂತ ಶುರುವಾಗುವ ಈ ಹಾಡು ಸಾಹಿತ್ಯ ಸಂಗೀತದ ಹದವಾದ ಸಂಯೋಗದೊಂದಿಗೆ ಹೊಸಾ ಅನುಭೂತಿಯೊಂದನ್ನು ಪಸರಿಸುವಂತೆ ಮೂಡಿ ಬಂದಿದೆ. ನಿರ್ದೇಶಕ ಸೂರ್ಯ ವಸಿಷ್ಠ ಬರೆದಿರುವ ಸಾಹಿತ್ಯಕ್ಕೆ ಪಂಚಮ್ ಜೀವ ಧ್ವನಿಯಾಗಿದ್ದಾರೆ. ಇದೀಗ ಸಾರಾಂಶ ಚಿತ್ರದ ಕಥೆ ಏನೆಂಬುದರ ಸುತ್ತ ಪ್ರೇಕ್ಷಕ ವಲಯದಲ್ಲಿ ಚರ್ಚೆಗಳು ಆರಂಭವಾಗಿವೆ. ಅಲ್ಲೊಂದು ಚೆಂದದ ಪ್ರೇಮ ಕಥೆಯೂ ಇದೆ ಎಂಬುದರ ಸ್ಪಷ್ಟ ಸೂಚನೆ ಈ ಹಾಡಿನ ಮೂಲಕ ಸಿಕ್ಕಿದೆ.



ಇದುವರೆಗೂ ಧಾರಾವಾಹಿ, ಸಿನಿಮಾಗಳ ಮೂಲಕ ನಟರಾಗಿದ್ದ ಸೂರ್ಯ ವಸಿಷ್ಠ 'ಸಾರಾಂಶ'ದ ಮೂಲಕ ನಿರ್ದೇಶಕರಾಗಿರೋದು ಗೊತ್ತೇ ಇದೆ. ಆ ಪಾತ್ರದ ಬಗೆಗಿನ ಒಂದಷ್ಟು ಮಾಹಿತಿಗಳನ್ನೂ ಚಿತ್ರತಂಡ ಹಂಚಿಕೊಂಡಿದೆ. ಈಗ ಬಿಡುಗಡೆಯಾಗಿರುವ ಹಾಡಿನಲ್ಲಿ ಸೂರ್ಯ ನಿಭಾಯಿಸಿರುವ ಪಾತ್ರದ ಚಹರೆಗಳು ನಿಚ್ಚಳವಾಗಿ ಕಾಣಿಸಿವೆ. ಸೂರ್ಯ ವಸಿಷ್ಠ ಹಾಗೂ ಶೃತಿ ಹರಿಹರನ್ ಕಾಂಬಿನೇಷನ್ನಿನ ಸದರಿ ಹಾಡು ಸಾರಾಂಶದ ದೃಷ್ಯಗಳ ಅಸಲೀ ಮೋಡಿಯ ಪರಿಚಯವನ್ನೂ ಮಾಡಿಸಿದೆ. ಹೀಗೆ ಹಾಡುಗಳೂ ಸೇರಿದಂತೆ ನಾನಾ ಬಗೆಯಲ್ಲಿ ಸುದ್ದಿಯಲ್ಲಿರುವ ಸಾರಾಂಶ ಇದೇ ಫೆಬ್ರವರಿ 15ರಂದು ತೆರೆಗಾಣಲಿದೆ. ರವಿ ಕಶ್ಯಪ್ ಮತ್ತು ಆರ್.ಕೆ ನಲ್ಲಮ್ ವಿಭಾ ಕಶ್ಯಪ್ ಪ್ರೊಡಕ್ಷನ್ಸ್ ಮತ್ತು ಕ್ಲಾಪ್ ಬೋರ್ಡ್ ಪ್ರೊಡಕ್ಷನ್ ಮೂಲಕ ಈ ಸಿನಿಮಾವನ್ನು ನಿರ್ಮಾಣ ಮಾಡಿದ್ದಾರೆ. ಆಸಿಫ್ ಕ್ಷತ್ರಿಯಾ, ರವಿ ಭಟ್, ರಾಮ್ ಮಂಜುನಾಥ್, ಸತೀಶ್ ಕುಮಾರ್, ಪೃಥ್ವಿ ಬನವಾಸಿ ಮುಂತಾದವರ ತಾರಾಗಣ, ಉದಿತ್ ಹರಿತಾಸ್ ಸಂಗೀತ ನಿರ್ದೇಶನ, ಅಪರಾಜಿತ್ ಹಿನ್ನೆಲೆ ಸಂಗೀತ ಮತ್ತು ಪ್ರದೀಪ್ ನಾಯಕ್ ಸಂಕಲನ ಈ ಚಿತ್ರಕ್ಕಿದೆ. ಸಾರಾಂಶದ ಮೂಲಕ ಅನಂತ್ ಭಾರದ್ವಾಜ್ ಎಂಬ ಪ್ರತಿಭಾನ್ವಿತ ಛಾಯಾಗ್ರಾಹಕ ಪರಿಚಯವಾಗುತ್ತಿದ್ದಾರೆ. ಸಾರಾಂಶ ಇದೇ ತಿಂಗಳ 15ರಂದು ತೆರೆಗಾಣಲಿದೆ.




# ಶಭ್ಬಾಷ್ ಮೊದಲ ಹಂತದ ಚಿತ್ರೀಕರಣ ಮುಕ್ತಾಯ!

ಸಂಕ್ರಾಂತಿಯ ಶುಭ ಸಂದರ್ಭದಲ್ಲಿ ಮುಹೂರ್ತ ಕಂಡಿದ್ದ 'ಶಭ್ಬಾಷ್' ಚಿತ್ರ ಅತ್ಯಂತ ವೇಗವಾಗಿ ಮೊದಲ ಹಂತದ ಚಿತ್ರೀಕರಣ ಮುಗಿಸಿಕೊಂಡಿದೆ. ಈಗಾಗಲೇ ಸಾಕಷ್ಟು ವರ್ಷಗಳ ಕಾಲ ಚಿತ್ರರಂಗದಲ್ಲಿ ಕಾರ್ಯನಿರ್ವಹಿಸಿರುವ ರುದ್ರಶಿವ ನಿರ್ದೇಶನದಲ್ಲಿ ಮೂಡಿ ಬಂದಿರುವ ಈ ಚಿತ್ರ ಸಾಂಗವಾಗಿ ಮೊದಲ ಹಂತದ ಚಿತ್ರೀಕರಣ ಮುಗಿಸಿಕೊಂಡು, ಅದರ ಬಗೆಗಿನ ಒಂದಷ್ಟು ಕುತೂಹಲಕರ ವಿವರಗಳನ್ನು ಹಂಚಿಕೊಂಡಿದೆ. ರುದ್ರಶಿವ ಯೋಜನೆಯಂತೆ ಬೆಂಗಳೂರಿನ ಸುತ್ತಮುತ್ತಲ ಪ್ರದೇಶಗಳಲ್ಲಿ ಏಳು ದಿನಗಳ ಚಿತ್ರೀಕರಣ ಮುಗಿಸಿಕೊಂಡು, ಚನ್ನಗಿರಿಯ ಶಾಂತಿಸಾಗರದ ಪ್ರದೇಶದಲ್ಲಿ ಚಿತ್ರೀಕರಣ ನಡೆಸಿದ್ದಾರೆ. ಅಲ್ಲಿನ ಪೌರಾಣಿಕ, ಐತಿಹಾಸಿಕ ಸ್ಥಳಗಳಲ್ಲಿ ಸಾಂಗವಾಗಿ ಚಿತ್ರೀಕರಣ ನೆರವೇರಿದೆ. ಅಂದಹಾಗೆ, ಚನ್ನಗಿರಿಯ ಶಾಂತಿಸಾಗರ ಸೂಳೆಕೆರೆ ಅಂತಲೂ ಕರೆಸಿಕೊಳ್ಳುತ್ತದೆ. ಏಷ್ಯಾ ಖಂಡದಲ್ಲಿಯೇ ಎರಡನೇ ಅತೀ ದೊಡ್ಡ ಕೆರೆ ಎಂಬ ಹೆಗ್ಗಳಿಕೆಯೂ ಶಾಂತಿಸಾಗರಕ್ಕಿದೆ. ಈ ಕೆರೆಗೂ ಹನ್ನೆರಡನೇ ಶತಮಾನಕ್ಕೂ ಎಂದಿಗೂ ಸಡಿಲವಾಗದಂಥಾ ಕೊಂಡಿಗಳಿದ್ದಾವೆ. ಸ್ವರ್ಗಾವತಿ ಪಟ್ಟಣದ ದೊರೆ ವಿಕ್ರಮರಾಜನ ಸುಪುತ್ರಿ ಶಾಂತವ್ವ ತನಗಾದ ಅವಮಾನಕ್ಕೆ ಪ್ರತಿಭಟನೆಯ ಸ್ವರೂಪದಲ್ಲಿ ಈ ಬೃಹತ್ ಕೆರೆಯನ್ನು ಸೃಷ್ಟಿಸಿದಳೆಂಬ ಪ್ರತೀತಿ ಇದೆ.

ಇಲ್ಲಿಯೇ ಸರ್ ಎಂ ವಿಶ್ವೇಶ್ವರಯ್ಯ ಕಟ್ಟಿಸಿರುವ ಸೇತುವೆಯೊಂದು ಪ್ರಧಾನ ಆಕರ್ಷಣೆ. ಎರಡು ಬೆಟ್ಟಗಳನ್ನು ಸೇರಿಸಿ ಈ ಸೇತುವೆಯನ್ನು ಕಟ್ಟಿಸಲಾಗಿದೆ. ಈವತ್ತಿಗೂ ಅಚ್ಚರಿಯಾಗಿ ಕಾಣಿಸುವ ಈ ಸೇತುವೆಯ ಮೇಲೆ ಶಭ್ಬಾಷ್ ಚಿತ್ರೀಕರಣ ನಡೆಸಲಾಗಿದೆ. ಅಷ್ಟಕ್ಕೂ ಅತ್ಯಂತ ಎತ್ತರದ ಪ್ರದೇಶದಲ್ಲಿರುವ ಆ ಸೇತುವೆ ಮೇಲೆ ಚಿತ್ರೀಕರಣ ನಡೆಸುವುದೊಂದು ಸಾಹಸ. ಕೆಲವೇ ಕೆಲ ಕಲಾವಿದರು, ತಂತ್ರಜ್ಞರು ಮಾತ್ರವೇ ಅಲ್ಲಿಗೆ ತಲುಪಲು ಸಾಧ್ಯವಾಗಿತ್ತು. ಇದು ನಿರ್ದೇಶಕ ರುದ್ರಶಿವ ಸೇರಿದಂತೆ ಒಂದಿಡೀ ಚಿತ್ರತಂಡದ ಪಾಲಿಗೆ ಅಮೋಘ ಅನುಭವವನ್ನು ತುಂಬಿದೆ. ಛಾಯಾಗ್ರಾಹಕರು, ಕಲಾವಿದರು, ತಾಂತ್ರಿಕ ವರ್ಗ ದಣಿವು ಮರೆತು ಈ ಚಿತ್ರೀಕರಣದಲ್ಲಿ ಪಾಲ್ಗೊಂಡು ಸಂಭ್ರಮಿಸಿದ್ದಾರೆ. ಇದಲ್ಲದೇ ಈ ಭಾಗದಲ್ಲಿರುವ ಪ್ರಸಿದ್ಧ ದೇವಾಲಯ, ಹಳ್ಳಿಗಳಲ್ಲಿ ನಾಯಕ ನಾಯಕಿಯ ಪೋಷನ್ನಿನ ಚಿತ್ರೀಕರಣ ನಡೆಸಲಾಗಿದೆ. ಇಂಥಾದ್ದೊಂದು ಸುಂದರ ವಾತಾವರಣದಲ್ಲಿ ಅಚ್ಚುಕಟ್ಟಾಗಿ ಮೊದಲನೇ ಹಂತದ ಚಿತ್ರೀಕರಣವನ್ನು ಮುಗಿಸಿಕೊಳ್ಳಲಾಗಿದೆ. ಶಭ್ಬಾಷ್ ಆಕ್ಷನ್ ಡ್ರಾಮಾ ಜಾನರಿನ ಸಿನಿಮಾ. ಓಂ ಸಾಯಿ ಪ್ರಕಾಶ್ ಸೇರಿದಂತೆ ಘಟಾನುಘಟಿ ನಿರ್ದೇಶಕರ ಗರಡಿಯಲ್ಲಿ ಪಳಗಿಕೊಂಡಿರುವ ರುದ್ರಶಿವ ನಿರ್ದೇಶನದ ಮೊದಲ ಚಿತ್ರವಿದು. ಪವೀಂದ್ರ ಮುತ್ತಪ್ಪ ಈ ಚಿತ್ರವನ್ನು ಏಸ್ 22 ಬ್ಯಾನರಿನಡಿಯಲ್ಲಿ ನಿರ್ಮಾಣ ಮಾಡಿದ್ದಾರೆ. ಈಗಾಗಲೇ 'ಕ' ಮತ್ತು ಮಳೆಬಿಲ್ಲು ಸಿನಿಮಾಗಳಲ್ಲಿ ನಟಿಸಿರುವ ಶರತ್ ನಾಯಕನಾಗಿ ನಟಿಸಿದ್ದರೆ, ನಿಸರ್ಗ ನಾಯಕಿಯಾಗಿ ಸಾಥ್ ಕೊಟ್ಟಿದ್ದಾರೆ. ಇದೀಗ ಮೊದಲ ಹಂತದ ಚಿತ್ರೀಕರಣ ಮುಗಿಸಿಕೊಂಡು, ಅದಾಗಲೇ ಎರಡನೇ ಹಂತದ ಚಿತ್ರೀಕರಣಕ್ಕೆ ಚಿತ್ರತಂಡ ಸಜ್ಜಾಗುತ್ತಿದೆ. ಆ ಬಗೆಗಿನ ಒಂದಷ್ಟು ವಿವರಗಳು ಇಷ್ಟರಲ್ಲಿಯೇ ಜಾಹೀರಾಗಲಿವೆ.





# ಡಿವೋರ್ಸ್ ಬಗ್ಗೆ ಪ್ರಬುದ್ಧತೆಯಿಂದ ಮಾತನಾಡಬೇಕಿತ್ತು

ಬಿಗ್ ಬಾಸ್ ಮನೆಗೆ ಪತಿಯ ಜೊತೆ ತೆರಳಿದ್ದ ನಟಿ ಅಂಕಿತಾ ಲೋಖಂಡೆ, ಪದೇ ಪದೇ ಡಿವೋರ್ಸ್ ಬಗ್ಗೆ ಮಾತನಾಡಿದ್ದರು. ಪತಿಯ ಜೊತೆಯಲ್ಲೇ ಕೂತು, ಬ್ರೇಕ್ ಅಪ್ ಬಗ್ಗೆ ಹೇಳಿಕೊಂಡಿದ್ದರು. ಆದರೆ, ಮನೆಯಿಂದ ಆಚೆ ಬರುತ್ತಿದ್ದಂತೆಯೇ ಆ ಮಾತಿಗೆ ವಿಷಾದ ವ್ಯಕ್ತ ಪಡಿಸಿದ್ದಾರೆ. ನಾನು ಆ ರೀತಿಯಲ್ಲಿ ಮಾತನಾಡಬಾರದಿತ್ತು. ಪ್ರಬುದ್ಧತೆಯ ಕೊರತೆಯಿಂದಾಗಿ ನಾನು ಹಾಗೆ ಮಾತನಾಡಿದೆ. ನಮ್ಮ ಸಂಬಂಧ ಇನ್ನಷ್ಟು ಗಟ್ಟಿಯಾಗಿದೆ ಎಂದಿದ್ದಾರೆ ನಟಿ ಅಂಕಿತಾ.

ಬಿಗ್ ಬಾಸ್ ಮನೆಯಲ್ಲಿ ಸಾಕಷ್ಟು ಸುದ್ದಿ ಆಗಿದ್ದರು ಅಂಕಿತಾ ಲೋಖಂಡೆ ಹಾಗೂ ವಿಕ್ಕಿ ದಂಪತಿ. ತನ್ನ ಪತಿ ಬಿಗ್ ಬಾಸ್ ಸ್ಪರ್ಧಿ ಮನ್ನಾರಾ ಚೋಪ್ರಾ ಜೊತೆ ಕ್ಲೋಸ್ ಆಗುತ್ತಿದ್ದಾರೆ ಎನ್ನುವ ಕಾರಣಕ್ಕಾಗಿ ಪತಿ ವಿಕ್ಕಿ ಮೇಲೆ ಕೋಪಗೊಂಡಿದ್ದರು. ಆತನನ್ನು ಮದುವೆ ಆಗಿದ್ದಕ್ಕೆ ಕಣ್ಣೀರು ಇಟ್ಟಿದ್ದರು. ಜೊತೆಗೆ ವಿಷಾದವನ್ನೂ ವ್ಯಕ್ತ ಪಡಿಸಿದ್ದರು. ಆಕೆ ನಿನ್ನ ಜೀವನದಲ್ಲಿ ಬಂದಳು. ನೀನು ಇಷ್ಟ ಪಡ್ತಿದ್ದೀಯಾ ಎಂದು ಮಾತನಾಡಿದ್ದರು.

ಬಿಗ್ ಬಾಸ್ ಮನೆಯಲ್ಲಿ ವಿಕ್ಕಿ ಮತ್ತು ಅಂಕಿತಾ ನಡೆಯನ್ನೇ ಅರ್ಥ ಮಾಡಿಕೊಳ್ಳಲು ಸಾಧ್ಯವಾಗಿರಲಿಲ್ಲ. ಬಿಗ್ ಬಾಸ್ ಮನೆಯಲ್ಲಿ ಒಂದೇ ಬ್ಲ್ಯಾಂಕೆಟ್ ಹೊದ್ದುಕೊಂಡು ಈ ಜೋಡಿ ಮಲಗಿತ್ತು. ಅದು ರಾತ್ರಿ ವೇಳೆ ಸುಮ್ಮನೆ ಮಲಗಿಲ್ಲ, ಬ್ಲ್ಯಾಂಕೆಟ್ ಒಳಗೆ ಚಲಿಸಿದ್ದರು. ಬ್ಲ್ಯಾಂಕೆಟ್ ಅಸ್ತವ್ಯಸ್ತಗೊಂಡಿತ್ತು. ಇದು ಹಲವು ಅನುಮಾನಗಳಿಗೆ ಕಾರಣವಾಗಿತ್ತು. ಈ ವಿಡಿಯೋ ಸೋಷಿಯಲ್ ಮೀಡಿಯಾದಲ್ಲೂ ವೈರಲ್ ಆಗಿತ್ತು.

ಇದೇ ಜೋಡಿ ಬಿಗ್ ಬಾಸ್ ಮನೆಯಲ್ಲಿ ಡಿವೋರ್ಸ್ ಕುರಿತಂತೆ ಮಾತನಾಡಿದ್ದರು. ಈ ನಡೆಯೂ ಅಚ್ಚರಿಗೆ ಕಾರಣವಾಗಿತ್ತು. ಪ್ರೀತಿಸಿ ಮದುವೆ ಆಗಿರೋ ಈ ಜೋಡಿ ಬಿಗ್ ಬಾಸ್ ಮನೆಯಲ್ಲಿ ದಿನವೂ ಕಿತ್ತಾಡುತ್ತಲೇ ಇರುತ್ತಿದ್ದರು. ಟಾಸ್ಕ್ ವಿಚಾರದಲ್ಲಂತೂ ಗಂಡ ಹೆಂಡತಿ ಅನ್ನೋದನ್ನೂ ಮರೆಯುತ್ತಿದ್ದರು. ದಿನವೂ ಕಿರಿಕ್ ಮಾಡಿಕೊಂಡು ಜನರಿಗೆ ಮನರಂಜನೆ ನೀಡುತ್ತಿದ್ದರು. ಡಿವೋರ್ಸ್ ವಿಚಾರ ಮಾತನಾಡಿ ಶಾಕ್ ಮೂಡಿಸಿದ್ದರು. ಅಂಕಿತಾ ಲೋಖಂಡೆ ಈ ಹಿಂದೆ ಸುಶಾಂತ್ ಸಿಂಗ್ ರಜಪೂತ್ ಜೊತೆ ಡೇಟಿಂಗ್ ಮಾಡುತ್ತಿದ್ದರು. ಅದನ್ನು ಬ್ರೇಕ್ ಮಾಡಿಕೊಂಡು ವಿಕ್ಕಿ ಜೈನ್ ಜೊತೆ ಒಂದಾದರು. ಮದುವೆ ಮಾಡಿಕೊಂಡು ಬಿಗ್ ಬಾಸ್ ಮನೆಗೆ ಹೋಗಿದ್ದರು. ಅಲ್ಲಿಯೂ ಕಿತ್ತಾಡಿಕೊಂಡಿದ್ದರು. ವಿಚ್ಛೇದನ ಪಡೆದುಕೊಳ್ಳೋಣ ಎಂದು ಹೇಳುವ ಮೂಲಕ ಶಾಕ್ ನೀಡಿದ್ದರು ಅಂಕಿತಾ. ಈಗ ಎಲ್ಲದಕ್ಕೂ ವಿಷಾದ ವ್ಯಕ್ತ ಪಡಿಸಿದ್ದಾರೆ. ಜೊತೆಯಾಗಿ ಬಾಳುವ ಪ್ರಾಮಿಸ್ ಮಾಡಿದ್ದಾರೆ.

ಅಂಡರ್ 19 ವಿಶ್ವಕಪ್

# ಪಾಕ್ ವಿರುದ್ಧ ಗೆದ್ದ ಆಸ್ಟ್ರೇಲಿಯಾ, ಭಾರತ-ಆಸೀಸ್ ನಡುವೆ ಫೈನಲ್ ಹಣಾಹಣಿ!

**ಬಿನೋನಿ(ದಕ್ಷಿಣ ಆಫ್ರಿಕಾ):** ಅಂಡರ್ 19 ವಿಶ್ವಕಪ್ ಸೆಮಿಫೈನಲ್ ಪಂದ್ಯದಲ್ಲಿ ಪಾಕಿಸ್ತಾನ ವಿರುದ್ಧ ಆಸ್ಟ್ರೇಲಿಯಾ ಗೆಲುವು ಸಾಧಿಸಿದ್ದು ಈ ಮೂಲಕ ಫೈನಲ್ ಗೆ ಪ್ರವೇಶಿಸಿದೆ.

ದಕ್ಷಿಣ ಆಫ್ರಿಕಾದ ಬಿನೊನಿ ಕ್ರೀಡಾಂಗಣದಲ್ಲಿ ನಡೆದ ಸೆಮಿಫೈನಲ್ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಪಾಕಿಸ್ತಾನ ನಿಗದಿತ ಓವರ್ ನಲ್ಲಿ 179 ರನ್ ಗಳಿಗೆ ಆಲೌಟ್ ಆಯಿತು. ಪಾಕಿಸ್ತಾನ ಪರ ಶಾಮಿಲ್ ಹುಸೇನ್ 17, ಅಜಾನ್ ಅವೈಸ್ 52 ಮತ್ತು ಅರಾಫತ್ ಮಿನ್ಹಾಸ್ 52 ರನ್ ಸಿಡಿಸಿದ್ದರು. ಆಸ್ಟ್ರೇಲಿಯಾದ ಟಾಮ್ ಸ್ಟ್ರಾಕರ್ 6 ವಿಕೆಟ್ ಪಡೆದಿದ್ದಾರೆ.

ಪಾಕ್ ನೀಡಿದ 180 ರನ್ ಗಳ ಗುರಿ ಬೆನ್ನಟ್ಟಿದ ಆಸ್ಟ್ರೇಲಿಯಾ ಕೊನೆಯ ಓವರ್ ನಲ್ಲಿ 181 ರನ್ ಬಾರಿಸುವ ಮೂಲಕ 1 ವಿಕೆಟ್ ನಿಂದ ರೋಚಕ ಗೆಲುವು ಸಾಧಿಸಿದೆ. ಆಸ್ಟ್ರೇಲಿಯಾ ಪರ ಹ್ಯಾರಿ ಡಿಕ್ಸನ್ 50, ಆಲಿವರ್ ಪೀಕ್ 49, ಟಾಮ್ ಕ್ಯಾಂಪ್ಬೆಲ್ 25 ಮತ್ತು ರಾಫ್ ಮ್ಯಾಕ್‌ಮಿಲನ್ ಅಜೇಯ 19 ರನ್ ಬಾರಿಸಿದ್ದಾರೆ. ಪಾಕ್ ಪರ ಅಲಿ ರಾಜಾ 4 ಮತ್ತು ಅರಾಫತ್ ಮಿನ್ಹಾಸ್ 2 ವಿಕೆಟ್ ಪಡೆದಿದ್ದಾರೆ.

ಅಂಡರ್ 19 ವಿಶ್ವಕಪ್ ಟೂರ್ನಿಯಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಗೆಲುವು ಸಾಧಿಸಿದ್ದ ಭಾರತ ಸತತ ಐದನೇ ಬಾರಿಗೆ ಫೈನಲ್ ಗೆ ಪ್ರವೇಶಿಸಿದೆ. ಇನ್ನು ಆಸ್ಟ್ರೇಲಿಯಾ ಇದೀಗ ಫೈನಲ್ ಪ್ರವೇಶಿಸಿದ್ದು ಉಭಯ ತಂಡಗಳು ಫೆಬ್ರವರಿ 11ರಂದು ಫೈನಲ್ ನಲ್ಲಿ ಮುಖಾಮುಖಿಯಾಗಲಿವೆ.




# ಮತ್ತೆ ವಿಶ್ವಕಪ್‌ನಲ್ಲಿ ಭಾರತಕ್ಕೆ ಆಸೀಸ್ ಎದುರಾಳಿ; ಫೆ.11ರಂದು ಫೈನಲ್

**ಕ್ಯಾನ್ಬೆರಾ:** 2023ರ ಏಕದಿನ ವಿಶ್ವಕಪ್ ಫೈನಲ್ ರೋಚಕ ಹಣಾ-ಹಣಿಯಲ್ಲಿ ಆಸ್ಟ್ರೇಲಿಯಾ ತಂಡ ಭಾರತವನ್ನು ಮಣಿಸಿ ವಿಶ್ವಕಪ್ ಟ್ರೋಫಿ ಎತ್ತಿ ಹಿಡಿದಿತ್ತು. ಇದೀಗ ಅಂಡರ್-19 ವಿಶ್ವಕಪ್ ಟೂರ್ನಿಯಲ್ಲೂ ಮತ್ತೆ ಭಾರತಕ್ಕೆ ಆಸೀಸ್ ಎದುರಾಳಿಯಾಗಿದ್ದು, ವಿಶ್ವಕಪ್ ಕ್ಷಣಗಳನ್ನು ನೆನಪಿಸುವಂತೆ ಮಾಡಿದೆ.

ಇಲ್ಲಿನ ಬೆನೋನಿಯಲ್ಲಿರುವ ವಿಲೋಮೂರ್ ಪಾರ್ಕ್ ಕ್ರೀಡಾಂಗಣದಲ್ಲಿ ಗುರುವಾರ ನಡೆದ ಸೆಮಿಫೈನಲ್ ಪಂದ್ಯದಲ್ಲಿ ಆಸ್ಟ್ರೇಲಿಯಾ ತಂಡ ಒಂದು ವಿಕೆಟ್‌ಗಳಿಂದ ಪಾಕ್ ತಂಡವನ್ನು ಸೋಲಿಸಿ, ಫೈನಲ್ ಪ್ರವೇಶಿಸಿದೆ. ಭಾನುವಾರ (ಫೆ.11) ಮಧ್ಯಾಹ್ನ 1:30ರ ವೇಳೆಗೆ ಆಸ್ಟ್ರೇಲಿಯಾ ಸಹಾರಾ ಪಾರ್ಕ್ ವಿಲೋಮೂರ್ ಕ್ರಿಕೆಟ್ ಸ್ಟೇಡಿಯಂನಲ್ಲಿ ಫೈನಲ್ ಪಂದ್ಯ ನಡೆಯಲಿದ್ದು, ಭಾರತ - ಆಸೀಸ್ ಯುವಕರ ತಂಡ ಸೆಣಸಲಿವೆ.

ಆಸೀಸ್ ವಿರುದ್ಧ ಟಾಸ್ ಸೋತು ಮೊದಲು ಕ್ರೀಸ್‌ಗಿಳಿದ ಪಾಕಿಸ್ತಾನ ತಂಡ 48.5 ಓವರ್‌ಗಳಲ್ಲಿ ಕೇವಲ 179 ರನ್‌ಗಳಿಗೆ ಸರ್ವಪತನ ಕಂಡಿತು. 180 ರನ್‌ಗಳ ಗುರಿ ಬೆನ್ನತ್ತಿದ ಆಸ್ಟ್ರೇಲಿಯಾ ತಂಡ 49.1 ಓವರ್‌ಗಳಲ್ಲಿ 9 ವಿಕೆಟ್‌ನಷ್ಟಕ್ಕೆ 181 ರನ್ ಗಳಿಸಿ ರೋಚಕ ಜಯ ಸಾಧಿಸಿತು. ಪಾಕಿಸ್ತಾನ ಪರ ಅಜಾನ್ ಅವೈಸ್ 91 ಎಸೆತಗಳಲ್ಲಿ 52 ರನ್, ಅರಾಫತ್ ಮಿನ್ಹಾಸ್ 61 ಎಸೆತಗಳಲ್ಲಿ 51 ರನ್ ಗಳಿಸಿದ್ದು ಬಿಟ್ಟರೆ ಉಳಿದ ಆಟಗಾರರು ಹೆಚ್ಚುಹೊತ್ತು ಕ್ರೀಸ್‌ನಲ್ಲಿ ನೆಲೆಯೂರಲು ವಿಫಲರಾದ ಕಾರಣ ಪಾಕ್ ಅಲ್ಪಮೊತ್ತಕ್ಕೆ ಔಟಾಗಿ ಸೋಲನುಭವಿಸಿತು.



ಟಾಮ್ ಸ್ಟ್ರಾಕರ್‌ಗೆ 6 ವಿಕೆಟ್: ಟಾಸ್ ಗೆದ್ದು ಮೊದಲು ಫೀಲ್ಡಿಂಗ್ ಆಯ್ದುಕೊಂಡ ಆಸೀಸ್ ಆರಂಭದಿಂದಲೇ ಪಾಕ್ ಬ್ಯಾಟರ್‌ಗಳನ್ನ ಕಟ್ಟಿಹಾಕುವಲ್ಲಿ ಯಶಸ್ವಿಯಾಯಿತು. ಆಸೀಸ್ ಪರ 9.5 ಓವರ್‌ಗಳಲ್ಲಿ ಕೇವಲ 24 ರನ್ ಬಿಟ್ಟುಕೊಟ್ಟ ಟಾಮ್ ಸ್ಟ್ರಾಕರ್ 6 ವಿಕೆಟ್ ಪಡೆದು ಮಿಂಚಿದರು. ಇನ್ನುಳಿದಂತೆ ಮಾಹ್ಲಿ ಬಿಯರ್ಡ್‌ಮನ್, ಕ್ಯಾಲಮ್ ವಿಡ್ಲರ್, ರಾಫ್ ಮ್ಯಾಕ್‌ಮಿಲನ್, ಟಾಮ್ ಕ್ಯಾಂಪ್‌ಬೆಲ್ ತಲಾ ಒಂದೊಂದು ವಿಕೆಟ್ ಪಡೆದು ಮಿಂಚಿದರು.

ಇನ್ನೂ ಪಾಕಿಸ್ತಾನ ಪರ ಬೌಲಿಂಗ್‌ನಲ್ಲಿ ಅಲಿ ರಾಝಾ 10 ಓವರ್‌ಗಳಲ್ಲಿ 34 ರನ್ ಬಿಟ್ಟುಕೊಟ್ಟು ನಾಲ್ಕು ವಿಕೆಟ್ ಪಡೆದು ಆಸೀಸ್ ಪಡೆಯನ್ನ ಕಟ್ಟಿಹಾಕುವಲ್ಲಿ ಯಶಸ್ವಿಯಾಗಿದ್ದರು. ಆದ್ರೆ ಮೊಹಮ್ಮದ್ ಜೀಶಾನ್ ಅವರ ದುಬಾರಿ ಓವರ್ ನಿಂದಾಗಿ ಪಾಕ್ ವಿರೋಚಿತ ಸೋಲಿಗೆ ತುತ್ತಾಯಿತು. ಪಾಕ್ ಪರ ಅರಾಫತ್ ಮಿನ್ಹಾಸ್ 2 ವಿಕೆಟ್ ಕಿತ್ತರೆ, ಉಬೈದ್ ಶಾ, ನವೀದ್ ಅಹ್ಮದ್ ಖಾನ್ ತಲಾ ಒಂದೊಂದು ವಿಕೆಟ್‌ಗೆ ತೃಪ್ತಿಪಟ್ಟುಕೊಂಡರು.

ಡಿಕ್ಸನ್ ಜವಾಬ್ದಾರಿಯುತ ಅರ್ಧಶತಕ :

180 ರನ್‌ಗಳ ಗುರಿ ಬೆನ್ನತ್ತಿದ್ದ ಆಸೀಸ್ ಆರಂಭದಲ್ಲೇ ವಿಕೆಟ್ ಕಳೆದುಕೊಳ್ಳಲು ಶುರು ಮಾಡಿತು. ಈ ವೇಳೆ ಜವಾಬ್ದಾರಿಯುತ ಬ್ಯಾಟಿಂಗ್ ನಡೆಸಿದ ಹ್ಯಾರಿ ಡಿಕ್ಸನ್ 75 ಎಸೆತಗಳಲ್ಲಿ ಜವಾಬ್ದಾರಿಯುತ ಅರ್ಧಶತಕ ಗಳಿಸಿದರು. ಇದರೊಂದಿಗೆ ಮಧ್ಯಮ ಕ್ರಮಾಂಕದಲ್ಲಿ ಆಲಿವರ್ ಪೀಕ್ 49 ರನ್‌ಗಳ ಕೊಡುಗೆ ನೀಡುವ ಮೂಲಕ ತಂಡಕ್ಕೆ ಆಸರೆಯಾದರು.

# ರಾಜ್ಯಾದ್ಯಂತ ಹುಕ್ಕಾ ನಿಷೇಧಿಸಿ ಆದೇಶ

ಬೆಂಗಳೂರು: ರಾಜ್ಯಾದ್ಯಂತ ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಮತ್ತು ತಂಬಾಕು ರಹಿತ ಹುಕ್ಕಾ ಬಳಕೆ ಮತ್ತು ಮಾರಾಟ, ಸೇವನೆಯನ್ನ ತಕ್ಷಣದಿಂದ ಜಾರಿಗೆ ಬರುವಂತೆ ನಿಷೇಧಿಸಿ ಆರೋಗ್ಯ ಇಲಾಖೆ ಆದೇಶ ಹೊರಡಿಸಿದೆ. ಸಾರ್ವಜನಿಕರ ಆರೋಗ್ಯದ ವಿಷಯದಲ್ಲಿ ಕಳವಳ ವ್ಯಕ್ತಪಡಿಸುತ್ತಿದ್ದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಹುಕ್ಕಾ ನಿಷೇಧಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ತಂಬಾಕು ರಹಿತ ಎಂದು ಹೇಳಿಕೊಂಡು ನಡೆಯುತ್ತಿದ್ದ ಅನಾರೋಗ್ಯಕರ ಹುಕ್ಕಾ ಹಾವಳಿಗೆ ಕಡಿವಾಣ ಹಾಕಿದ್ದಾರೆ.



ಸಾರ್ವಜನಿಕರ ಆರೋಗ್ಯವನ್ನು ಕಾಪಾಡಲು ಮತ್ತು ತಂಬಾಕು ಸಂಬಂಧಿತ ರೋಗಗಳ ಹೆಚ್ಚಳವನ್ನು ತಡೆಯುವ ನಿಟ್ಟಿನಲ್ಲಿ ಹುಕ್ಕಾ ಉತ್ಪನ್ನಗಳ ಮಾರಾಟ, ಸೇವನೆಯನ್ನ ನಿ?ೇಧಿಸುತ್ತಿರುವುದಾಗಿ ಆರೋಗ್ಯ ಇಲಾಖೆ ತನ್ನ ಆದೇಶದಲ್ಲಿ ತಿಳಿಸಿದೆ. ವಿಶ್ವ ಆರೋಗ್ಯ, ಸಂಸ್ಥೆ ನಡೆಸಿರುವ ಗ್ಲೋಬಲ್ ಅಡಲ್ಟ್ ಟೊಬ್ಯಾಕೋ ಸರ್ವೇ 2016-17, ಅಧ್ಯಯನದ ಪ್ರಕಾರ, ಕರ್ನಾಟಕದಲ್ಲಿ 22.8% ವಯಸ್ಕರು ತಂಬಾಕು ಉತ್ಪನ್ನಗಳನ್ನು ಸೇವಿಸುತ್ತಿದ್ದಾರೆ. ಈ ಪೈಕಿ 8.8% ರ?ಟ್ಟು ಮಂದಿ ಧೂಮಪಾನಿಗಳಾಗಿದ್ದಾರೆ. ಕರ್ನಾಟಕದಲ್ಲಿ 23.9% ವಯಸ್ಕರು ಸಾರ್ವಜನಿಕ ಸ್ಥಳಗಳಲ್ಲಿ ಒಟ್ಟಾಗಿ ಧೂಮಪಾನ ಮಾಡುತ್ತಾರೆ. ಇದು ರಾಜ್ಯದಲ್ಲಿ ತಂಬಾಕು ಸೇವನೆಯ ವ್ಯಾಪಕ ಅಪಾಯವನ್ನು ತೆರೆದಿಟ್ಟಿದ್ದು, ಈ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಹುಕ್ಕಾ ಉತ್ಪನ್ನಗಳ ಮಾರಾಟವನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿಷೇಧಿಸಲಾಗಿದೆ.

ಯುವ ಜನತೆಯು ಇತ್ತೀಚಿನ ವರ್ಷಗಳಲ್ಲಿ ತಂಬಾಕು ಉತ್ಪನ್ನಗಳತ್ತ ಹೆಚ್ಚು ಆಕರ್ಷಿತರಾಗುತ್ತಿರುವುದು ಘಅಔ ಗ್ಲೋಬಲ್ ಯೂತ್ ಟೊಬ್ಯಾಕೋ ಸರ್ವೇ (2019)ಯಲ್ಲಿ ದೃಢಪಟ್ಟಿದೆ. 13 ರಿಂದ15 ವರ್ಷ ವಯಸ್ಸಿನ ಸುಮಾರು ಐದನೇ ಒಂದು ಭಾಗದ?ಟ್ಟು ವಿದ್ಯಾರ್ಥಿಗಳು ಹಲವು ಬಗೆಯ ತಂಬಾಕು ಸೇವಿಸುತ್ತಿದ್ದಾರೆ. ತಂಬಾಕು ಒಳಗೊಂಡ ಶಿಶಾ ಮತ್ತು ''ಹರ್ಬಲ್'' ಶಿಶಾ ಇವೆಲ್ಲವೂ ವಿಷಕಾರಿ ಹೊಗೆಯನ್ನು ಹೊರಸೂಸುವುದರಿಂದ ಕ್ಯಾನ್ಸರ್, ಹೃದ್ರೋಗ ಹಾಗೂ ಶ್ವಾಸಕೋಶದ ಕಾಯಿಲೆಗಳಿಗೆ ಕಾರಣವಾಗುತ್ತದೆ ಎಂಬ ಮಹತ್ವದ ಅಂಶ ಸಂಶೋಧನೆಯಿಂದ ತಿಳಿದುಬಂದಿದೆ.

ತಂಬಾಕಿನ ಅತಿಯಾದ ಬಳಕೆಯಿಂದಾಗಿ ರಾಜ್ಯ ಸರ್ಕಾರದ ಮೇಲೆ ಹೆಚ್ಚಿನ ಆರ್ಥಿಕ ಹೊರೆಯೂ ಬೀಳುತ್ತಿದೆ. 35 ರಿಂದ 69 ವರ್ಷ ವಯಸ್ಸಿನ ವ್ಯಕ್ತಿಗಳಲ್ಲಿನ ತಂಬಾಕು ಸಂಬಂಧಿತ ಕಾಯಿಲೆಗಳ ಚಿಕಿತ್ಸೆಗಾಗಿ ರಾಜ್ಯ ಸರ್ಕಾರವು 2011ರಲ್ಲಿ 983 ಕೋಟಿ ರೂಪಾಯಿಗಳನ್ನು ವ್ಯಯಿಸಿದೆ. ಇದು ತಂಬಾಕು ಉತ್ಪನ್ನಗಳ ಬಳಕೆಗೆ ತಡೆಯೊಡ್ಡುವ ಅನಿವಾರ್ಯತೆಯನ್ನು ಎತ್ತಿ ತೋರಿಸುತ್ತದೆ. ತಂಬಾಕು ಬಳಕೆಯ ಮೂಲಕ ಮಾದಕ ದ್ರವ್ಯ ವ್ಯಸನಕ್ಕೆ ಒಳಗಾಗುತ್ತಿರುವುದು ಸರ್ಕಾರ ಗಮನಿಸಿದೆ. ಒಪಿಯಾಡ್ ಬಳಕೆಯಲ್ಲಿ ಅತಿಯಾದ ಹೆಚ್ಚಳ ಮತ್ತು ತಂಬಾಕು ಸೇವನೆಯು ಮಾದಕ ವ್ಯಸನದೆಡೆಗಿನ ಮೊದಲ ಹೆಜ್ಜೆ ಎಂಬುದನ್ನು ವಿಶ್ವ ಡ್ರಗ್ಸ್ ವರದಿ-2022 ಯಲ್ಲಿ ಉಲ್ಲೇಖಿಸಲಾಗಿದೆ.

ಹುಕ್ಕಾ ಸೇವನೆಯ ಅಪಾಯಗಳು ಸಿಗರೇಟ್ ಸೇವನೆಗಿಂತ ಹಲವು ಪಟ್ಟು ಹೆಚ್ಚಾಗಿರುವುದು ಅಧ್ಯಯನಗಳಿಂದ ದೃಢಪಟ್ಟಿದೆ. ಹುಕ್ಕಾ ಹೊಗೆಯು ನಿಕೋಟಿನ್, ಟಾರ್ ಮತ್ತು ಭಾರವಾದ ಲೋಹ ಸೇರಿದಂತೆ ಅನೇಕ ಹಾನಿಕಾರಕ ಪದಾರ್ಥಗಳನ್ನು ಹೊಂದಿದೆ. ಹುಕ್ಕಾ ಸೇವಿಸುವವರು ವಿವಿಧ ರೀತಿಯ ಕ್ಯಾನ್ಸರ್ ಮತ್ತು ಹೃದ್ರೋಗ ಸೇರಿದಂತೆ ಹಲವು ಗಂಭೀರ ಕಾಯಿಲೆಗಳಿಗೆ ತುತ್ತಾಗುವ ಹೆಚ್ಚಿನ ಅಪಾಯವನ್ನು ಹೊಂದಿರುತ್ತಾರೆ. ಶಿಕ್ಷಣ ಸಂಸ್ಥೆಗಳಿಗೆ ಸಮೀಪದಲ್ಲಿರುವ ಅಕ್ರಮ ಹುಕ್ಕಾ ಬಾರ್‌ಗಳು ಸೇರಿದಂತೆ ಹುಕ್ಕಾ ಮೇಲಿನ ನಿಷೇಧದಿಂದಾಗಿ ರಾಜ್ಯದಲ್ಲಿ ಹುಕ್ಕಾ ಬಾರ್‌ಗಳ ಬಾಗಿಲುಗಳು ಬಂದ್ ಆಗಲಿವೆ. ವಿಶೇಷವಾಗಿ ರಾಜ್ಯ ಸರ್ಕಾರವು ಹೇರಿದ ನಿಷೇಧವು, ಕೋಟ್ಪಾ 2003 ಮತ್ತು ಬಾಲ ನ್ಯಾಯ ಕಾಯಿದೆ, 2015 ಸೇರಿದಂತೆ ಕಾನೂನು ನಿಬಂಧನೆಗಳಿಂದ ಬೆಂಬಲಿತವಾಗಿದೆ. ಈ ನಿಯಮಗಳೆಲ್ಲವನ್ನೂ ಮೀರಿ ಹುಕ್ಕಾ ಬಾರ್‌ಗಳು ಇದುವರೆಗೂ ಕಾರ್ಯಾಚರಿಸುತ್ತಿತ್ತು.

ರಾಜ್ಯದ ಜನತೆಯ ಆರೋಗ್ಯವನ್ನು ಸಂರಕ್ಷಿಸಲು ಮತ್ತು ಆರೋಗ್ಯದ ಮೇಲೆ ದು?ಪರಿಣಾಮ ಬೀರುವ ಅಪಾಯಕಾರಿ ಅಂಶಗಳ ವಿರುದ್ಧದ ದಿಟ್ಟ ಕ್ರಮ ಕೈಗೊಳ್ಳುವ ಜವಾಬ್ದಾರಿಯನ್ನು ಹುಕ್ಕಾ ಬ್ಯಾನ್ ಮೂಲಕ ಆರೋಗ್ಯ ಸಚಿವರು ಪುನರುಚ್ಚರಿಸಿದ್ದಾರೆ. ಹೋಟೆಲ್‌ಗಳು, ರೆಸ್ಟೋರೆಂಟ್‌ಗಳು, ಪಬ್‌ಗಳು, ಬಾರ್‌ಗಳು, ಲಾಂಜ್‌ಗಳು, ಕೆಫೆಗಳು, ಕ್ಲಬ್‌ಗಳು ಮತ್ತು ಇತರ ಸ್ಥಳಗಳಲ್ಲಿ ಹುಕ್ಕಾ ಬಳಕೆ, ಮಾರಾಟ ಮತ್ತು ಸೇವೆಯ ನಿಷೇಧವು ಯುವಜನರನ್ನು ಮಾದಕ ವ್ಯಸನದಿಂದ ಮತ್ತು ತಂಬಾಕಿನ ಹಾನಿಕಾರಕ ಪರಿಣಾಮಗಳಿಂದ ರಕ್ಷಿಸುವಲ್ಲಿ ನಿರ್ಣಾಯಕ ಹಂತವಾಗಿದೆ.

# ನಾನು ಪಾರ್ಲಿಮೆಂಟ್ ಸದಸ್ಯತ್ವ ಕೇಳಿದ್ದೀನಿ

**ಬೆಂಗಳೂರು:** ನಾನು ಪಾರ್ಲಿಮೆಂಟ್ ಸದಸ್ಯತ್ವ ಕೇಳಿದ್ದೇನೆ ಎಂದು ಮಾಜಿ ಸಚಿವ ವಿ ಸೋಮಣ್ಣ ಹೇಳಿದ್ದಾರೆ.

ತುಮಕೂರು ಲೋಕಸಭಾ ಕ್ಷೇತ್ರದ ಟಿಕೆಟ್ ಕೇಳಿದ್ದೀರಾ ಎಂಬ ಮಾಧ್ಯಮಗಳ ಪ್ರಶ್ನೆಗೆ, ನಾನು ತುಮಕೂರು ಕ್ಷೇತ್ರದ ಆಕಾಂಕ್ಷಿ ಎಂದು ಎಲ್ಲಿಯೂ ಹೇಳಿಲ್ಲ. ತುಮಕೂರು ಅಭಿವೃದ್ಧಿಗಾಗಿ ನಾನು ಶ್ರಮವಹಿಸಿದ್ದೇನೆ. ನಾನು ಯಾವುದೇ ಕ್ಷೇತ್ರವನ್ನು ಕೇಳಿಲ್ಲ ಎಂದು ಹೇಳಿದರು.

ಪ್ರಜಾಪ್ರಭುತ್ವ ಅಪಾಯದಲ್ಲಿದೆ, ಬಿಜೆಪಿ ಸರ್ಕಾರ ಇಲ್ಲದ ರಾಜ್ಯಕ್ಕೆ ಅನುದಾನ ಇಲ್ಲ: ಖರ್ಗೆಯಿಂದ ಕಪ್ಪು ಪತ್ರ ಬಿಡುಗಡೆ

ಕಳೆದ ಬಾರಿ ನನಗೆ ಸೋಲಾಗಿದೆ. ಆದರೆ ನನ್ನ ಕಾರ್ಯವೈಖರಿ ನೋಡಿ ಹೈಕಮಂಡ್ ಯಾವ ಕ್ಷೇತ್ರ ನೀಡಿದರೂ ನನಗೆ ತೊಂದರೆಯಿಲ್ಲ. ವರಿ?ರ ಆದೇಶವನ್ನು ನಾನು ಮೀರುವುದಿಲ್ಲ. ಆದರೆ ಪಾರ್ಲಿಮೆಂಟ್ ಸದಸ್ಯತ್ವ ಕೇಳಿದ್ದೇನೆ. ರಾಜೀವ್ ಚಂದ್ರಶೇಖರ್ ಅವರಿಗೆ ಪಾರ್ಲಿಮೆಂಟ್ ಸದಸ್ಯತ್ವ ಕೊಡದಿದ್ದರೆ ನನಗೆ ಕೊಡಿ ಎಂದಿದ್ದೇನೆ ಎಂದರು.

ನಾನು ತುಮಕೂರಿನಲ್ಲಿ ಕೆಲಸ ಮಾಡಿರುವುದನ್ನು ನೋಡಿ ನನ್ನ ಹೆಸರು ಕೇಳಿ ಬರುತ್ತಿದೆ. ತುಮಕೂರಿನಲ್ಲಿ ಜೆ.ಸಿ.ಮಾಧುಸ್ವಾಮಿ ಅವರು ಆಕಾಂಕ್ಷಿ ಎಂದು ಕೇಳಿಕೊಂಡಿದ್ದಾರೆ. ಅದಕ್ಕೆ ನನ್ನ ವಿರೋಧವಿಲ್ಲ ಎಂದು ಸೋಮಣ್ಣ ಹೇಳಿದರು.



Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com